ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 31 ಶುಕ್ರವಾರ 2023

ಸಂಪುಟ: 43 | ಸಂಚಿಕೆ: 40 | ಪುಟಗಳು: 10

₹4


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಕಾಂಗ್ರೆಸ್, ಬಿಜೆಪಿಗೆ ಸದಾ ಜೆಡಿಎಸ್ ಚಿಂತೆ; ಇವೇ ಎ ಟೀಮ್... ಬಿ ಟೀಮ್...!

■ ಈ ಎರಡೂ ಪಕ್ಷಗಳಿಂದ ಜೆಡಿಎಸ್ ವಿರುದ್ಧ ಷಡ್ಯಂತ್ರ ■ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ■ ಪದೇ ಪದೆ ಒಳ ಒಪ್ಪಂದ ಪ್ರಸ್ತಾಪಿಸುತ್ತಿರುವುದಕ್ಕೆ ಆಕ್ರೋಶ ■ ಇವೆರಡಕ್ಕೂ ಬಹುಮತಬರಲ್ಲ ಎಂಬುದು ಗೊತ್ತಿದೆ

ಬೆಂಗಳೂರು, ಮಾ.30(ಕೆಎಂಶಿ)– ಕಾಂಗ್ರೆಸ್, ಬಿಜೆಪಿ ಒಟ್ಟಾಗಿ ಜೆಡಿಎಸ್ ವಿರುದ್ಧ ಷಡ್ಯಂತ್ರ ರೂಪಿಸಿ, ಎ ಟೀಮ್, ಬಿ ಟೀಮ್‌ಗಳಂತೆ ಕೆಲಸ ಮಾಡುತ್ತಿವೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ನಮ್ಮ ವಿರುದ್ಧ ಒಳ ಒಪ್ಪಂದದ ಆರೋಪ ಮಾಡಿವೆ. ಎರಡೂ ಪಕ್ಷಗಳಿಗೆ ನಾಚಿಕೆ ಆಗಬೇಕು ಎಂದು ವಾಗ್ದಾಳಿ ನಡೆಸಿದರು. ಇನ್ನಾದರೂ ಈ ರಾಷ್ಟ್ರೀಯ ಪಕ್ಷಗಳು ಒಳ ಒಪ್ಪಂದ ಆರೋಪಕ್ಕೆ ಫುಲ್‌ಸ್ಟಾಪ್ ಇಡಬೇಕು. ಇವರಿಗೆ ಜೆಡಿಎಸ್ ಪಕ್ಷವನ್ನು ಟೀಕೆ ಮಾಡುವುದೇ ನಿತ್ಯ ಕಾಯಕವಾಗಿದೆ. ಎರಡೂ ಪಕ್ಷಗಳಿಗೆ ಜೆಡಿಎಸ್ ಭೀತಿ ಎಷ್ಟಿದೆ ಎನ್ನುವುದಕ್ಕೆ ಇದೇ ಸಾಕ್ಷಿ ಎಂದರು. ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಖ್ಯಮಂತ್ರಿಗಳು ಹೇಳುತ್ತಾರೆ, ಹೈದರಾಬಾದ್‌ನಲ್ಲಿ ಕಾಂಗ್ರೆಸ್ ನಾಯಕರ ಜತೆ ಮಾತುಕತೆ ಆಗಿದೆ ಎಂದು. ಮೈಸೂರಿನಲ್ಲಿ ಸಿದ್ದರಾಮಯ್ಯ ಹೇಳುತ್ತಾರೆ, ಬಿಜೆಪಿ ಜತೆ ಜೆಡಿಎಸ್ ಒಳ ಒಪ್ಪಂದ ಆಗಿದೆ ಎಂದು. ಈ ಇಬ್ಬರಿಗೆ ಇದು ಬಿಟ್ಟು ಬೇರೆ ವಿಚಾರವೇ ಇಲ್ಲವೇ. ವಿಷಯ ಇಲ್ಲ ಅಂದರೆ, ಬೇಕಾದರೆ ಮಾತನಾಡಲು ನಾನೇ ವಿಷಯ ಕೊಡುತ್ತೇನೆ ಎಂದು ಸಿದ್ದರಾಮಯ್ಯ ಹಾಗೂ ಬಸವರಾಜ್ ಬೊಮ್ಮಾಯಿ ಅವರಿಗೆ ಟಾಂಗ್ ಕೊಟ್ಟರು.



ಕಾಂಗ್ರೆಸ್, ಬಿಜೆಪಿಗೆ ಅಧಿಕಾರಕ್ಕೆ ಬರುವ ಯಾವ ಸ್ಪಷ್ಟ ಭರವಸೆಯೂ ಇಲ್ಲ. ಎರಡೂ ಪಕ್ಷಗಳಿಗೆ ಆತಂಕ ಶುರುವಾಗಿದೆ. ಜೆಡಿಎಸ್‌ನವರು ಎಲ್ಲಿ ಬಿಜೆಪಿ ಜತೆ ಹೋಗ್ತಾರೋ ಅಂತ ಕಾಂಗ್ರೆಸ್‌ನವರಿಗೆ, ಕಾಂಗ್ರೆಸ್ ಜತೆ ಎಲ್ಲಿ ಹೋಗ್ತಾರೋ ಅಂತ ಬಿಜೆಪಿಯವರಿಗೆ ಭಯವಿದೆ. ಹೀಗಾಗಿ ಪದೇ ಪದೆ ನಮ್ಮನ್ನು ಕೆಣಕುತ್ತಿದ್ದಾರೆ. ನಾನು ಈ ಬಾರಿ 123 ಕ್ಷೇತ್ರಗಳನ್ನು ಗುರಿ ಇಟ್ಟುಕೊಂಡು ಹೊರಟಿದ್ದೇವೆ. ಅದನ್ನು ಸಹಿಸುವುದು ಎರಡೂ ಪಕ್ಷಗಳಿಗೆ ಆಗುತ್ತಿಲ್ಲ. ಹೊಟ್ಟೆಕಿಚ್ಚಿನಿಂದ ಹೀಗೆ ಮಾತನಾಡುತ್ತವೆ ಎಂದು ಕಿಡಿಕಾರಿದರು. ಈಗಾಗಲೇ ನೂರಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಹಳ್ಳಿ ಹಳ್ಳಿಗೆ ತಲುಪಿದ್ದೇನೆ. ಜನತಾ ಪರ್ವ, ಜನತಾ ಸಂಗಮ, ಜನತಾ ಜಲಧಾರೆ, ಜನತಾಮಿತ್ರ, ಪಂಚರತ್ನ ಸಮಾರೋಪ ಸಮಾವೇಶಗಳು ಯಶಸ್ವಿಯಾಗಿವೆ. ಆ ಸಮಾವೇಶಗಳನ್ನು ನೋಡಿ ರಾಷ್ಟ್ರೀಯ ಪಕ್ಷಗಳು ಭಯಭೀತವಾಗಿವೆ ಎಂದು ಹೇಳಿದರು. ನಿನ್ನೆ ನೋಡಿದೆ, ನಾಲ್ಕೈದು ಸಮೀಕ್ಷೆ ವರದಿಗಳು ಬಂದಿವೆ. ನನಗೆ ಆ ಸಮೀಕ್ಷೆಗಳ ಬಗ್ಗೆ ಆತಂಕವಿಲ್ಲ. ಅದೇ ಸಿ ವೋಟರ್ ಹಿಂದೆ ಕಾಂಗ್ರೆಸ್ 120 ಅಂತ ಭವಿಷ್ಯ ಹೇಳಿತ್ತು, ಕಾಂಗ್ರೆಸ್ ಎಷ್ಟು ಸೀಟುಗಳಲ್ಲಿ ಗೆದ್ದಿತ್ತು ಎಂದು ಪ್ರಶ್ನಿಸಿದ ಅವರು, ರಾಷ್ಟ್ರೀಯ ಪಕ್ಷಗಳು ತಮ್ಮ ಕಾರ್ಯತಂತ್ರದ ಭಾಗವಾಗಿ ಯಾವುದೋ ಕಂಪನಿ ಹೆಸರಾಕಿ ಸರ್ವೆ ರಿಪೋರ್ಟ್ ಅಂತ ಬಿಡುಗಡೆ ಮಾಡುತ್ತಿವೆ. ನಾನು ಕೂಡ ನಾಳೆ ದುಡ್ಡು ಕೊಟ್ಟು ಈ ರೀತಿ ಮಾಡಿ ಅಂತ ಹೇಳಬಹುದು. ಅಂತ ಅಗತ್ಯ ನನಗೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಅವರು ನೇರ ಮಾತುಗಳಲ್ಲಿ ಹೇಳಿದರು. ಪದೇ ಪದೆ ಒಳ ಒಪ್ಪಂದ ಅಂತ ಹೇಳಿಕೆ ನೀಡಿ ಹಾಸ್ಯಾಸ್ಪದಕ್ಕೆ ಒಳಗಾಗಬೇಡಿ ಎಂದು ಕಾಂಗ್ರೆಸ್, ಬಿಜೆಪಿ ಪಕ್ಷಗಳಿಗೆ ಹೇಳಲು ಬಯಸುತ್ತೇನೆ. ನಾನೇನು ಸುಳ್ಳು ಹೇಳೋನಲ್ಲ, ಕೆಲವರು ನನ್ನನ್ನು ಸಂಪರ್ಕ ಮಾಡಿದ್ದಾರೆ. ಎರಡೂ ಪಕ್ಷಗಳಲ್ಲಿ ಹೇಗಪ್ಪ ಜೆಡಿಎಸ್ ಪಕ್ಷವನ್ನು ವಿಶ್ವಾಸಕ್ಕೆ ಪಡೆಯೋದು ಅಂತ ಸ್ಪರ್ಧೆ ಶುರುವಾಗಿದೆ. ನಾನೇನು ಸುಖಾಸುಮ್ಮನೆ ಹೇಳುತ್ತಿಲ್ಲ ಎಂದು ಖಡಕ್ಕಾಗಿ ಹೇಳಿದರು. ನಮ್ಮ ಪಕ್ಷದ ಬಗ್ಗೆ ಹೊರಗೆ ಸಣ್ಣತನದ ಹೇಳಿಕೆ ನೀಡುತ್ತಾ ಅವರೇ ಸಣ್ಣವರಾಗ್ತಾ ಇದ್ದಾರೆ. ಜನರಿಗೆ ಇವರ ▶ 8ನೇ ಪುಟಕ್ಕೆ

ಏ.4ಕ್ಕೆ ಬಿಜೆಪಿ 145 ಅಭ್ಯರ್ಥಿಗಳ ಮೊದಲ ಪಟ್ಟಿ ಪ್ರಕಟ

■ ಈ ಬಾರಿ ಸಂಘ ಪರಿವಾರದ ಒಡನಾಟ ಹೊಂದಿರುವವರಿಗೂ ಟಿಕೆಟ್
■ ಸಮಾಜದ ವಿವಿಧ ರಂಗದಲ್ಲಿ ಸೇವಾ ನಿರತರಿಗೂ ಸ್ಪರ್ಧೆಗೆ ಅವಕಾಶ ಅಚ್ಚರಿ

ಬೆಂಗಳೂರು, ಮಾ.30(ಕೆಎಂಶಿ)– ಸಂಘ ಪರಿವಾರದೊಂದಿಗೆ ನಿಕಟ ಒಡನಾಟ ಹೊಂದಿರುವ ಸಮಾಜದ ವಿವಿಧ ಸ್ತರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಒಂದಷ್ಟು ಮಂದಿಗೆ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಲು ಬಿಜೆಪಿ ಈ ಬಾರಿ ಅವಕಾಶ ಮಾಡಿಕೊಡುತ್ತಿದೆ.

ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಅಧ್ಯಕ್ಷತೆಯಲ್ಲಿ ಕೇಂದ್ರೀಯ ಚುನಾವಣಾ ಸಮಿತಿ ಏ.4ರಂದು ಸಭೆ ಸೇರಿ ಪಕ್ಷದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಿದ್ದು, ಅಂದೇ ಪಟ್ಟಿ ಪ್ರಕಟಿಸಲಾಗುತ್ತದೆ.

ಉನ್ನತ ಮೂಲಗಳ ಪ್ರಕಾರ ಅಚ್ಚರಿ ಮುಖಗಳನ್ನು ಒಳಗೊಂಡ 145 ಸದಸ್ಯರ ಮೊದಲ ಪಟ್ಟಿ ಅಂದು ಬಿಡುಗಡೆಗೊಳ್ಳಲಿದೆ. ರಾಜ್ಯ ವಿಧಾನಸಭೆಗೆ ಕೇಂದ್ರ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದ್ದು, ಏ.13ರಂದು ಅಧಿಸೂಚನೆ ಹೊರ ಬೀಳಲಿದೆ. ಅಂದಿನಿಂದಲೇ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಳ್ಳಲಿದೆ. ವೇಳಾಪಟ್ಟಿ ಪ್ರಕಟಗೊಳ್ಳುತ್ತಿದ್ದಂತೆ ಕೇಂದ್ರ ಸಂಸದೀಯ ಮಂಡಳಿ ಸಭೆ ಕರೆದಿರುವ ನಡ್ಡಾ, ಮೊದಲ ಹಂತದಲ್ಲಿ ವಿವಾದವಲ್ಲದ ಮತ್ತು ಬಿಜೆಪಿ ಭದ್ರವಾಗಿ ಬೇರೂರಿರುವ ಹಾಗೂ ಪಕ್ಷದ ಅಲೆ ಇರುವ ಕ್ಷೇತ್ರಗಳಿಗೆ ಮೊದಲ ಪಟ್ಟಿಯಲ್ಲೇ ಅಭ್ಯರ್ಥಿಗಳ ಹೆಸರು ಹೊರಬರಲಿದೆ ಬಿಜೆಪಿಯ ರಾಜ್ಯ ಘಟಕ ವಿವಿಧ ಹಂತಗಳಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕೇಂದ್ರದ ಸಂಸದೀಯ ಮಂಡಳಿಗೆ ಪಟ್ಟಿ ನೀಡಿದೆ.




ರಾಜ್ಯ ಘಟಕ ಹಾಗೂ ಇಲ್ಲಿನ ಕೋರ್ ಕಮಿಟಿ ಮಾಡುವ ಶಿಫಾರಸ್ಸಿಗೆ ವರಿಷ್ಠರು ಇದುವರೆಗೂ ಮನ್ನಣೆ ನೀಡಿಲ್ಲ. ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಸಂತೋಷ್ ಹಾಗೂ ಆರ್‌ಎಸ್‌ಎಸ್, ಅಭ್ಯರ್ಥಿಗಳ ಆಯ್ಕೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ಕೇಂದ್ರೀಯ ಬಿಜೆಪಿ ಘಟಕ ಅಂತಿಮ ಸುತ್ತಿನ ಚುನಾವಣಾ ಪೂರ್ವ ಸಮೀಕ್ಷೆ ಹಾಗೂ ಸಂಘ ಪರಿವಾರ ನೀಡಿರುವ ವರದಿಯನ್ನು ಆಧಾರವಾಗಿಟ್ಟುಕೊಂಡು ಸಂಸದೀಯ ಮಂಡಳಿ ಸಭೆಯಲ್ಲಿ ಅಭ್ಯರ್ಥಿಗಳ ಆಯ್ಕೆಯಾಗಲಿದೆ. ಸಂಘ ಪರಿವಾರ, ಸಂಘಟನಾ ಕಾರ್ಯದರ್ಶಿ ಸಂತೋಷ್ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಆಯ್ಕೆಯಲ್ಲಿ ಇವರು ತೆಗೆದುಕೊಳ್ಳುವ ನಿರ್ಧಾರವೇ ಅಂತಿಮವಾಗಲಿದೆ. ಯಾರಿಗೆ ಟಿಕೆಟ್ ನೀಡಬೇಕು, ನೀಡಬಾರದು ಎಂಬ ಬಗ್ಗೆ ಏ.3ರಂದು ದೆಹಲಿ ನಾಯಕರು ಮಾನದಂಡ ನೀಡಲಿದ್ದಾರೆ. ▶ 8ನೇ ಪುಟಕ್ಕೆ

ಬಿಜೆಪಿಗೆ ಸ್ಪಷ್ಟ ಬಹುಮತ ಖಚಿತ

ವರುಣಾದಿಂದ ವಿಜಯೇಂದ್ರ ಸ್ಪರ್ಧೆ ಬಗ್ಗೆ ಚರ್ಚೆ ನಡೆಯುತ್ತಿದೆ...



ಬೆಂಗಳೂರು: ಈ ಬಾರಿಯ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಬರುವುದು ಖಚಿತವಾಗಿದ್ದು, ಅದು ಅಧಿಕಾರಕ್ಕೆ ಬರುವುದು ಸೂರ್ಯ ಚಂದ್ರ ಇರುವಷ್ಟೇ ಸತ್ಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್.ಯಡಿಯೂರಪ್ಪ ಗುರುವಾರ ಹೇಳಿದ್ದಾರೆ.

ಬೆಂಗಳೂರಿನ ಮಲ್ಲೇಶ್ವರಂನ ಬಿಜೆಪಿ ರಾಜ್ಯ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಅವರು, ಈ ಬಾರಿ ಸ್ಪಷ್ಟ ಬಹುಮತದೊಂದಿಗೆ ನಾವು ಸರ್ಕಾರ ರಚಿಸುತ್ತೇವೆ. ರಾಜ್ಯದಲ್ಲಿ ನಾಲ್ಕು ತಂಡಗಳಾಗಿ ವಿಜಯ ಸಂಕಲ್ಪ ಯಾತ್ರೆ ಮಾಡಿದ್ದೇವೆ. ವಿಜಯ ಸಂಕಲ್ಪ ಯಾತ್ರೆಗೆ ಜನರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ರಾಜ್ಯದಲ್ಲಿ ನೂರಕ್ಕೆ ನೂರರಷ್ಟು ಬಿಜೆಪಿ

> “ವರುಣಾದಲ್ಲಿ ಸಿದ್ದರಾಮಯ್ಯ ವಿರುದ್ಧ ವಿಜಯೇಂದ್ರ ಸ್ಪರ್ಧೆ ವಿಚಾರಕ್ಕೆ ಸಂಬಂಧಿಸಿದಂತೆ ಚರ್ಚೆ ನಡೆಯುತ್ತಿದೆ. ಸಿದ್ದರಾಮಯ್ಯ ಗೆಲುವು ಸುಲಭವಿದೆ ಎಂದು ನನಗೆ ಅನಿಸುತ್ತಿಲ್ಲ. ವರುಣಾ ವಿಧಾನಸಭಾ ಕ್ಷೇತ್ರಕ್ಕೆ ಸೂಕ್ತ ಅಭ್ಯರ್ಥಿ ಹಾಕುತ್ತೇವೆ. ಟಿಕೆಟ್ ಬಗ್ಗೆ ತೀರ್ಮಾನ ಮಾಡೋದು ನಾನಲ್ಲ, ವರಿಷ್ಠರು. ಕಾಂಗ್ರೆಸ್ಸಿಗರು ಅಧಿಕಾರಕ್ಕೆ ಬರುತ್ತೇವೆಂದು ಕನಸು ಕಾಣುತ್ತಿದ್ದಾರೆಂದು.
> –ಯಡಿಯೂರಪ್ಪ

ಮತ್ತೆ ಅಧಿಕಾರಕ್ಕೆ ಬರಲಿದೆ. ಬಿಜೆಪಿ ಅಧಿಕಾರಕ್ಕೆ ಬರುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಮ್ಮ ಎಲ್ಲಾ ಸಂಸದರು, ರಾಜ್ಯಸಭಾ ಸದಸ್ಯರು ಚುನಾವಣೆ ಮುಗಿಯುವವರೆಗೂ ಅವರವರ ಜಿಲ್ಲೆಗಳಲ್ಲಿ ಇದ್ದು ಕೆಲಸ ಮಾಡಬೇಕಾಗುತ್ತದೆ. ಬೆಂಗಳೂರಿನಲ್ಲಿ ಅಮಿತ್ ಶಾ ನೇತೃತ್ವದಲ್ಲಿ ಎಲ್ಲಾ ಸಂಸದರ ಸಭೆ ಕರೆಯಲಾಗುತ್ತದೆ. ಸಿಎಂ ಮೀಸಲಾತಿ ಹೆಚ್ಚಳ ಮಾಡಿರುವುದು ಎಲ್ಲಾ ವರ್ಗದ ಜನರಿಗೆ ನ್ಯಾಯ ಒದಗಿಸುವ ಕೆಲಸವಾಗಿದೆ. ನಾನು ಜನರಿಗಾಗಿ ಹಲವು ಕಾರ್ಯಕ್ರಮ ಮಾಡಿದ್ದೇವೆ. ಸದ್ಯದಲ್ಲೇ ಅಭ್ಯರ್ಥಿಗಳನ್ನು ಹೈಕಮಾಂಡ್ ತೀರ್ಮಾನ ಮಾಡಲಿದ್ದಾರೆ. ನಂತರ ನಾನು, ಎಲ್ಲಾ ಮುಖಂಡರು, ಸಂಸದರು ಪ್ರವಾಸ ಮಾಡುತ್ತೇವೆ. ಹಿಂದೆ ನಾನು 25 ಸಂಸದರು ಗೆಲ್ಲುತ್ತೇವೆ ಎಂದು ಹೇಳಿದ್ದು ಸುಳ್ಳಾಗಲಿಲ್ಲ. ಶೀಘ್ರದಲ್ಲೇ ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ ಆಗಲಿದೆ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷಕ್ಕೆ ಯಾವುದೇ ನಾಯಕರಿಲ್ಲ. ಪ್ರಧಾನಮಂತ್ರಿ ನರೇಂದ್ರ ಮೋದಿ, ಅಮಿತ್ ಶಾ ಅವರಿಗೆ ಜನಬೆಂಬಲ ಸಿಗುತ್ತಿದೆ. ಶಿವಮೊಗ್ಗ ವಿಮಾನ ನಿಲ್ದಾಣ ಉದ್ಘಾಟನೆ ವೇಳೆ 2 ಲಕ್ಷಕ್ಕೂ ಹೆಚ್ಚು ಜನ ಭಾಗಿಯಾಗಿದ್ದರು. ಬಿಜೆಪಿಯ ಜನಬೆಂಬಲ ನೋಡಿ ಕಾಂಗ್ರೆಸ್‌ನವರು ದಿಗ್ಭ್ರಾಂತರಾಗಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಸಿಕ್ಕಿದಷ್ಟೇ ಬೆಂಬಲ ಈಗಲೂ ಸಿಗಲಿದೆ. ಪ್ರಧಾನಿ ಮೋದಿಗೆ ರಾಹುಲ್ ಗಾಂಧಿ ಸಮನಾಗಲು ಸಾಧ್ಯವಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಸಿಎಂ ಹುದ್ದೆಗಾಗಿ ಹಗಲುಗನಸು ಕಾಣುತ್ತಿದ್ದಾರೆ. ಅದು ಕೇವಲ ತಿರುಕನ ಕನಸಾಗಲಿದೆ. ಕಾಂಗ್ರೆಸ್ ಪಕ್ಷ 70ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲಲು ಸಾಧ್ಯವಿಲ್ಲ. ಮೋದಿ, ಅಮಿತ್ ಶಾ ಇನ್ನೂ 3–4 ಬಾರಿ ರಾಜ್ಯಕ್ಕೆ ▶ 8ನೇ ಪುಟಕ್ಕೆ

ತ್ರಿಪುರ ವಿಧಾನಸಭೆಯಲ್ಲಿ ಮೊಬೈಲ್‌ನಲ್ಲಿ ಅಶ್ಲೀಲ ಚಿತ್ರ ವೀಕ್ಷಿಸಿದ ಬಿಜೆಪಿ ಶಾಸಕ

ತ್ರಿಪುರ, ಮಾ.30– ವಿಧಾನಸಭೆಯಲ್ಲಿ ಬಿಜೆಪಿ ಶಾಸಕ ಮೊಬೈಲ್‌ನಲ್ಲಿ ಅಶ್ಲೀಲ ಚಿತ್ರ ವೀಕ್ಷಿಸಿದ್ದು, ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.



ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ತ್ರಿಪುರಾದಲ್ಲಿ ಭಾರತೀಯ ಜನತಾ ಪಕ್ಷ(ಬಿಜೆಪಿ) ಗೆಲುವಿನೊಂದಿಗೆ ಮತ್ತೆ ಅಧಿಕಾರಕ್ಕೆ ಬಂದಿದೆ. ಕಮ್ಯುನಿಸ್ಟ್ ಪಕ್ಷಗಳ ಭದ್ರಕೋಟೆಯಾಗಿರುವ ಈ ರಾಜ್ಯದಲ್ಲಿ ಸತತ ಎರಡನೇ ಬಾರಿಗೆ ಸರ್ಕಾರ ರಚಿಸಿರುವ ಬಿಜೆಪಿ ಶಾಸಕರೊಬ್ಬರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ವಿಧಾನಸಭೆ ಅಧಿವೇಶನದ ವೇಳೆ ಶಾಸಕರು ಸದನದಲ್ಲಿ ಕುಳಿತು ಮೊಬೈಲ್‌ನಲ್ಲಿ ಪೋರ್ನ್ ವೀಕ್ಷಿಸುತ್ತಿದ್ದರು ಎಂದು ಆರೋಪಿಸಲಾಗಿದೆ. ತ್ರಿಪುರಾದ ಬಾಗ್‌ಬಾಸಾ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ▶ 8ನೇ ಪುಟಕ್ಕೆ

ಇಂದಿನಿಂದ ಐಪಿಎಲ್ ಆರಂಭ

■ ಉದ್ಘಾಟನಾ ಪಂದ್ಯದಲ್ಲಿ ಚೆನ್ನೈ, ಗುಜರಾತ್ ಮುಖಾಮುಖಿ ■ 2 ತಿಂಗಳ ಕಾಲ 70 ಪಂದ್ಯ: ಕ್ರಿಕೆಟ್ ಪ್ರೇಮಿಗಳಿಗೆ ರಸದೌತಣ

ಅಹಮದಾಬಾದ್, ಮಾ.30– ಬಹು ನಿರೀಕ್ಷಿತ 2023ನೇ ಸಾಲಿನ 16ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್‌ಗೆ ಕ್ಷಣಗಣನೆ ಆರಂಭವಾಗಿದೆ.

ಶುಕ್ರವಾರ (ಮಾ.31) ಅಹಮದಾಬಾದ್‌ನ ನರೇಂದ್ರ ಮೋದಿ ಮೈದಾನದಲ್ಲಿ ವಿಶ್ವದ ಅತ್ಯಂತ ಶ್ರೀಮಂತ ಲೀಗ್‌ಗೆ ವರ್ಣರಂಜಿತ ಚಾಲನೆ ದೊರೆಯಲಿದ್ದು, ಮುಂದಿನ 2 ತಿಂಗಳ ಕಾಲ ಕ್ರಿಕೆಟ್ ಅಭಿಮಾನಿಗಳಿಗೆ ಭರಪೂರ ಮನರಂಜನೆ ಸಿಗಲಿದೆ. ಪಂದ್ಯಾವಳಿಯಲ್ಲಿ 18 ಡಬಲ್ ಹೆಡರ್ ಪಂದ್ಯಗಳೂ ಸೇರಿದಂತೆ 70 ಪಂದ್ಯಗಳು ನಡೆಯಲಿವೆ. ಅಹಮದಾಬಾದ್, ಲಖನೌ, ಮೊಹಾಲಿ, ಹೈದರಾಬಾದ್, ಬೆಂಗಳೂರು, ಕೋಲ್ಕತ್ತಾ, ಜೈಪುರ, ದೆಹಲಿ, ಚೆನ್ನೈ, ಗುವಾಹಟಿ, ಮುಂಬೈ ಹಾಗೂ ಧರ್ಮಶಾಲಾ ಕ್ರೀಡಾಂಗಣದಲ್ಲಿ ಪಂದ್ಯಗಳು ನಡೆಯಲಿವೆ.

ಪಂದ್ಯ: ಗುಜರಾತ್ ಟೈಟನ್ಸ್/ ಚೆನ್ನೈ ಸೂಪರ್ ಕಿಂಗ್ಸ್
ಸ್ಥಳ: ಅಹಮದಾಬಾದ್, ನರೇಂದ್ರ ಮೋದಿ ಕ್ರೀಡಾಂಗಣ
ಸಮಯ: ಸಂಜೆ 7.30 ಗಂಟೆಗೆ



ಅದ್ಧೂರಿ ಉದ್ಘಾಟನಾ ಸಮಾರಂಭ: 4 ವರ್ಷಗಳ ಬಳಿಕ ಈ ಬಾರಿ ಐಪಿಎಲ್‌ನಲ್ಲಿ ಅದ್ಧೂರಿ ಉದ್ಘಾಟನಾ ಸಮಾರಂಭ ನಡೆಯಲಿದೆ. ಶುಕ್ರವಾರ ಗುಜರಾತ್ ಟೈಟಾನ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ನಡುವಿನ ಉದ್ಘಾಟನಾ ಪಂದ್ಯಕ್ಕೂ ಮುನ್ನಾ ಒಂದು ಗಂಟೆ ಮೊದಲು ಅಹಮದಾಬಾದ್‌ನಲ್ಲಿ ಈ ಸಮಾರಂಭ ಕಳೆಗಟ್ಟಲಿದೆ. ಐಪಿಎಲ್ ತನ್ನ ▶ 8ನೇ ಪುಟಕ್ಕೆ

ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

● ಮೈಸೂರು ನಗರದ 45 ಸೇರಿದಂತೆ ಜಿಲ್ಲೆಯಾದ್ಯಂತ 148 ಸೆಂಟರ್‌ಗಳು ● 37,475 ವಿದ್ಯಾರ್ಥಿಗಳು ನೋಂದಣಿ



ಮರಿಮಲ್ಲಪ್ಪ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ನೋಂದಣಿ ಸಂಖ್ಯೆ ನಮೂದಿಸುತ್ತಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಮಾ.30(ಆರ್‌ಕೆ)– ಕರ್ನಾಟಕ ರಾಜ್ಯಾದ್ಯಂತ ನಾಳೆ (ಮಾ.31)ಯಿಂದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ಆರಂಭವಾಗಲಿವೆ.

ಮೈಸೂರು ಜಿಲ್ಲೆಯಾದ್ಯಂತ 1,297 ಪುನರಾವರ್ತಿತ ಸೇರಿ ಒಟ್ಟು 37,475 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ನೋಂದಣಿಯಾಗಿದ್ದು, ಮೈಸೂರು ನಗರದ 45 ಸೇರಿ ಜಿಲ್ಲೆಯಾದ್ಯಂತ ಒಟ್ಟು 148 ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಮೈಸೂರು ಜಿಲ್ಲಾ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್ ತಿಳಿಸಿದ್ದಾರೆ.

ಹೊಸಬರಿಗಾಗಿ 143 ಹಾಗೂ ಪುನರಾವರ್ತಿತ ವಿದ್ಯಾರ್ಥಿಗಳಿಗಾಗಿ 5 ಪರೀಕ್ಷಾ ಕೇಂದ್ರಗಳನ್ನು ಬಳಸಲಾಗುವುದು. ಈಗಾಗಲೇ ಆನ್‌ಲೈನ್‌ನಲ್ಲಿ ಪ್ರವೇಶ ಪತ್ರಗಳನ್ನು ಶಾಲಾ ಮುಖ್ಯೋಪಾಧ್ಯಾಯರು ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ವಿತರಿಸಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರ ತೋರಿಸಿ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪರೀಕ್ಷಾ ಕೇಂದ್ರಕ್ಕೆ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ಸರಬರಾಜು ಮಾಡಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಶುಕ್ರವಾರದಿಂದ ಬೆಳಗ್ಗೆ 10.30ರಿಂದ ಮಧ್ಯಾಹ್ನ 1.45 ಗಂಟೆಯವರೆಗೆ ನಡೆಯಲಿರುವ ▶ 8ನೇ ಪುಟಕ್ಕೆ

ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ

ಮಾ.31ರಿಂದ ಏಪ್ರಿಲ್ 15ರವರೆಗೆ ಮೈಸೂರು ನಗರದ 54 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ದಿನಗಳಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ 144 ಸಿಆರ್‌ಪಿಸಿ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ರಮೇಶ್ ಬಾನೊತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷೆಯ ಭಯದಿಂದ ನದಿಗೆ ಹಾರಿ 10ನೇ ತರಗತಿ ವಿದ್ಯಾರ್ಥಿ ಆತ್ಮಹತ್ಯೆ

ಮಂಗಳೂರು, ಮಾ.30– ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗುರುವಾರ ಹತ್ತನೇ ತರಗತಿಯ ವಿದ್ಯಾರ್ಥಿಯೊಬ್ಬ ನದಿಗೆ ಹಾರಿ ಪ್ರಾಣ ಕಳೆದುಕೊಂಡಿದ್ದಾನೆ. 10ನೇ ತರಗತಿಯ ಬೋರ್ಡ್ ಪರೀಕ್ಷೆಗಳು ಶುಕ್ರವಾರದಿಂದ (ಮಾ.31) ಪ್ರಾರಂಭವಾಗಲಿವೆ. ಪ್ರಾಥಮಿಕ ತನಿಖೆಯಲ್ಲಿ, 15 ವರ್ಷದ ಅದ್ವೈತ್ ಶೆಟ್ಟಿ ಪರೀಕ್ಷೆಯ ಒತ್ತಡದಿಂದಾಗಿ ನದಿಗೆ ಹಾರಿದ್ದಾನೆ ಎಂದು ತಿಳಿದುಬಂದಿದೆ. ಕಡಬ ತಾಲೂಕಿನ ಕೋಡಿಂಬಾಳ ಸಮೀಪದ ಗುಂಡಿಮಜಲು ಗ್ರಾಮದಲ್ಲಿ ಈ ಘಟನೆ ವರದಿಯಾಗಿದೆ. ಪೊಲೀಸರ ಪ್ರಕಾರ, ಎಸ್‌ಎಸ್‌ಎಲ್‌ಸಿ (10ನೇ ತರಗತಿ) ಪರೀಕ್ಷೆಗೆ ಹಾಜರಾಗಬೇಕಿದ್ದ ವಿದ್ಯಾರ್ಥಿಯು ಬುಧವಾರ ಸಂಜೆ ನಾಪತ್ತೆಯಾಗಿದ್ದ. ಪೋಷಕರು ಮತ್ತು ಸಂಬಂಧಿಕರು ರಾತ್ರಿಯಿಡೀ ಆತನಿಗಾಗಿ ಹುಡುಕಾಡಿದರು. ಆದರೆ, ಬಾಲಕ ಪತ್ತೆಯಾಗಿರಲಿಲ್ಲ. ಇಂದು ಬೆಳಗ್ಗೆ ನಾಕೂರು ಗಯಾ ಪ್ರದೇಶದ ಬಳಿ ಕುಮಾರಧಾರಾ ನದಿಯ ದಡದಲ್ಲಿ ವಿದ್ಯಾರ್ಥಿಯ ಶಾಲಾ ಬ್ಯಾಗ್ ಪತ್ತೆಯಾಗಿದೆ. ನಂತರ, ಅಗ್ನಿಶಾಮಕ ದಳ ಮತ್ತು ತುರ್ತು ಸಿಬ್ಬಂದಿ ನದಿಯಲ್ಲಿ ಆತನ ಶವಕ್ಕಾಗಿ ಹುಡುಕಾಟ ನಡೆಸಿ ಅದನ್ನು ಹೊರತೆಗೆದರು.

ನಾಳೆ, ನಾಡಿದ್ದು ನಾಟಕ ಪ್ರದರ್ಶನ; ರಂಗ ತರಬೇತಿ ಶಿಬಿರದ ಸಮಾರೋಪ

ಮೈಸೂರು,ಮಾ.30–ಅದಮ್ಯ ರಂಗ ಶಾಲೆಯ ವತಿಯಿಂದ ಏ.1 ಮತ್ತು 2ರಂದು ಸಂಜೆ 6 ಗಂಟೆಗೆ 'ಊರು ಸುಟ್ಟರೂ ಹನುಮಪ್ಪ ಹೊರಗ' ನಾಟಕ ಪ್ರದರ್ಶನ ಹಾಗೂ 30 ದಿನಗಳ ಕಾಲ ನಡೆದ 'ರಂಗ ತರಬೇತಿ ಶಿಬಿರ'ದ ಸಮಾರೋಪ ಸಮಾರಂಭವು ಜಯಲಕ್ಷ್ಮಿಪುರಂನ ವಿವೇಕಾನಂದ ಪದವಿಪೂರ್ವ ಕಾಲೇಜಿನ ಶ್ರೀ ಕುವೆಂಪು ರಂಗಮಂದಿರ ದಲ್ಲಿ ನಡೆಯಲಿದೆ ಎಂದು ರಂಗಶಾಲೆಯ ಕಾರ್ಯದರ್ಶಿ ಚಂದ್ರು ಮಂಡ್ಯ ತಿಳಿಸಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಹಾಗೂ ಲೇಖಕಿ ಡಾ.ವಿಜಯಕುಮಾರಿ ಎಸ್.ಕರಿಕಲ್ ನಾಟಕ ಪ್ರದರ್ಶನ ಉದ್ಘಾಟಿಸಲಿದ್ದು, ವಿಚಾರವಾದಿ ಹಾಗೂ ಮಹಾರಾಜ ಕಾಲೇಜಿನ ವಿಶ್ರಾಂತ ಪ್ರಾಂಶುಪಾಲರಾದ ಪ್ರೊ.ಕೆ.ಕಾಳಚನ್ನೇಗೌಡ ಅಧ್ಯಕ್ಷತೆ ವಹಿಸುವರು. ಅದಮ್ಯ ರಂಗಶಾಲೆಯ ಗೌರವ ಕಾರ್ಯದರ್ಶಿ ಟಿ.ಸತೀಶ್ ಜವರೇಗೌಡ ಪ್ರಾಸ್ತಾವಿಕ ನುಡಿಗಳನ್ನಾಡುವರು. ನಿವೃತ್ತ ಪೊಲೀಸ್ ಅಧಿಕಾರಿ ಹಾಗೂ ಅಂಕಣಕಾರ ಜೆ.ಬಿ.ರಂಗಸ್ವಾಮಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು. ಏ.2ರಂದು ಸಂಜೆ 6 ಗಂಟೆಗೆ ನಡೆಯಲಿರುವ ರಂಗ ತರಬೇತಿ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಖ್ಯಾತ ಸಾಹಿತಿ ಹಾಗೂ ವಾಗ್ಮಿ ಪ್ರೊ.ಕೆ.ಎಂ. ಕೃಷ್ಣೇಗೌಡ ವಹಿಸುವರು. ದೇವರಾಜ ಉಪವಿಭಾಗದ ಪೊಲೀಸ್ ಸಹಾಯಕ ಆಯುಕ್ತ ಶಾಂತ ಮಲ್ಲಪ್ಪ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡುವರು. ವಿಕೇರ್ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷೆ ಡಾ. ಕುಮುದಿನಿ ಅಚ್ಚಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು.

30 ದಿನಗಳ ಕಾಲ ನಡೆದ ರಂಗ ತರಬೇತಿ ಶಿಬಿರದಲ್ಲಿ ಪಾಲ್ಗೊಂಡಿದ್ದ ಹವ್ಯಾಸಿ ಕಲಾವಿದರು ಯುವ ಸಾಹಿತಿ ಹನುಮಂತು ಹಾಲಿಗೇರಿ ರಚನೆಯ 'ಊರು ಸುಟ್ಟರೂ ಹನುಮಪ್ಪ ಹೊರಗ' ನಾಟಕವನ್ನು ಅಭಿನಯಿಸುತ್ತಿದ್ದು, ಏ.1 ಮತ್ತು 2ರಂದು ಎರಡು ದಿನಗಳ ಕಾಲ ನಾಟಕದ ಪ್ರದರ್ಶನವಿದೆ. ನಾಟಕಕ್ಕೆ ವಿನೋದ ಸಿ. ಮೈಸೂರು ಅವರ ನಿರ್ದೇಶನವಿದೆ. ನಾಟಕದ ಪ್ರವೇಶ ಪ್ರೋತ್ಸಾಹ ಧನ 100 ರೂಪಾಯಿ ಇದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8660103141 ಸಂಪರ್ಕಿಸಬಹುದು.



ಮೈಸೂರಿನ ಚಾಮುಂಡಿಪುರಂನಲ್ಲಿರುವ ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಕಚೇರಿಯಲ್ಲಿ ನಡೆದ ವಿಶೇಷ ಮಹಾಸಭೆಯಲ್ಲಿ ಮುಂದಿನ 3 ವರ್ಷಗಳ ಅವಧಿಗೆ ಕಳೆದ ವರ್ಷವಿದ್ದ ನಿರ್ದೇಶಕರನ್ನೇ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಕಾರ್ಯಕಾರಿ ಸಮಿತಿ ಅಧ್ಯಕ್ಷರಾಗಿ ಎಂ.ವಿಶ್ವನಾಥಯ್ಯ, ಉಪಾಧ್ಯಕ್ಷರಾಗಿ ಎ.ಎಸ್.ರಂಗನಾಥನ್, ಕಾರ್ಯದರ್ಶಿಯಾಗಿ ಹೆಚ್.ಎಸ್.ಮಹೇಶ್, ಸಹ ಕಾರ್ಯದರ್ಶಿಯಾಗಿ ರಾವ್ ಸೋಮಶೇಖರ್, ಖಜಾಂಚಿಯಾಗಿ ಸುಧೀರ್‌ಕುಮಾರ್ ಆಯ್ಕೆಯಾಗಿದ್ದಾರೆ.



ಇತ್ತೀಚೆಗೆ ಸಿದ್ದಾರ್ಥ ಸ್ಪೋರ್ಟ್ಸ್ ಕ್ಲಬ್‌ಗೆ ನಡೆದ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಆಯ್ಕೆಯಾದ ಎಚ್‌ಎಸ್ ಪುಟ್ಟಸ್ವಾಮಿ ಅವರು ಸಿದ್ದಾರ್ಥನಗರ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷಮಹೇಶ್ (ಪಾಪು), ಮಧು ನಿವಾಸ್ ಹೋಟೆಲ್ ಮಾಲೀಕ ರಾಘವೇಂದ್ರ ಭಟ್ ಅವರನ್ನು ಅಭಿನಂದಿಸಿದರು. ಈ ವೇಳೆ ಕ್ಲಬ್‌ನ ನಿರ್ದೇಶಕರಾದ ಡಾ.ಪ್ರಕಾಶ್, ಕೆಂಪೇಗೌಡ ಉಪಸ್ಥಿತರಿದ್ದರು.



ಹುಲ್ಲಹಳ್ಳಿಯ ಮಹದೇವ ತಾತ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಲು ಆಗಮಿಸಿದ್ದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಶಾಮನೂರು ಶಿವಶಂಕರಪ್ಪ ಅವರನ್ನು ಮಹಾಸಭಾದ ಖಜಾಂಚಿ ವರುಣಾ ಮಹೇಶ, ಜಿಲ್ಲಾಧ್ಯಕ್ಷ ಶಿವಮೂರ್ತಿ, ಜಿಲ್ಲಾ ನಿರ್ದೇಶಕರಾದ ಹಡಜನ ಚಂದ್ರು, ಮಹೇಶ, ಮಹದೇವ ತಾತ ಗದ್ದುಗೆ ಟ್ರಸ್ಟ್‌ನ ಪದಾಧಿಕಾರಿಗಳಾದ ಶಿವರಾಜು, ನಂದೀಶ, ಸಂಗಣ್ಣ ಆತ್ಮೀಯವಾಗಿ ಅಭಿನಂದಿಸಿದರು.



ಮೈಸೂರು ಜಿಲ್ಲೆ ವರುಣಾ ಹೋಬಳಿಯ ಬಿದರಗೂಡು ಗ್ರಾಮ ಪಂಚಾಯತಿಯಲ್ಲಿ ಗುರುವಾರ ವನಸಿರಿ ಗ್ರಾಮೀಣಾಭಿವೃದ್ಧಿ ಟ್ರಸ್ಟ್, ಎಎಸ್‌ಜಿ ಕಣ್ಣಿನ ಆಸ್ಪತ್ರೆ, ಜೆಎಸ್‌ಎಸ್ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ವತಿಯಿಂದ ಉಚಿತ ಕಣ್ಣಿನ ತಪಾಸಣಾ ಶಿಬಿರ ಮತ್ತು ಉಚಿತ ಕನ್ನಡಕ ವಿತರಣಾ ಕಾರ್ಯಕ್ರಮ ನಡೆಯಿತು. ಶಿಬಿರದಲ್ಲಿ ಸುಮಾರು 150ರಿಂದ 175 ಫಲಾನುಭವಿಗಳಿಗೆ ಕಣ್ಣಿನ ತಪಾಸಣೆ ಮಾಡಲಾಯಿತು. ಅದರಲ್ಲಿ 50 ಮಂದಿಗೆ ಉಚಿತ ಕನ್ನಡಕವನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬರಡನಪುರ ಮಠದ ಶ್ರೀ ಪರಮಶಿವಮೂರ್ತಿ ಸ್ವಾಮೀಜಿ, ವನಸಿರಿ ಸಂಸ್ಥೆಯ ಸಂತೋಷ್, ಕಾರ್ಯದರ್ಶಿ, ಜೆಎಸ್‌ಎಸ್ ಕಾಲೇಜಿನ ಎನ್‌ಎಸ್‌ಎಸ್ ಶಿಬಿರಾಧಿಕಾರಿ ಡಾ.ಶಶಿ ಬಿಂದು, ಡಾ.ಪ್ರೀತಿ, ಬಿದರಗೂಡು ಗ್ರಾಪಂ ಸದಸ್ಯರು ಪಾಲ್ಗೊಂಡಿದ್ದರು.

ನಿಧನ



ಕೆ.ಎನ್.ಶಿವಮೂರ್ತಿ

ಮೈಸೂರು,ಮಾ.30–ನಂಜನಗೂಡು ತಾಲೂಕಿನ ನಗರ್ಲೆ ಸಮೀಪದ ಕಬ್ಬಳಗೆರೆಹುಂಡಿ ಗ್ರಾಮದ ಯುವ ಮುಖಂಡ ಕೆ.ಎನ್.ಶಿವಮೂರ್ತಿ (36) ಗುರುವಾರ ಬೆಳಗ್ಗೆ ನಿಧನರಾದರು. ಮೃತರು ತಂದೆ ನಾರಾಯಣ, ತಾಯಿ ಗೌರಮ್ಮ, ಪತ್ನಿ ಗಂಗಾ, ಪುತ್ರರಾದ ಚಂದನ್, ಜೀವನ್, ಅಣ್ಣಂದಿರು, ಅತ್ತಿಗೆಯರು ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನವೇ ಅವರ ಜಮೀನಿನಲ್ಲಿ ನೆರವೇರಿತು.

ದತ್ತೇಶ್ ಶೆಟ್ಟಿ



ಮೈಸೂರು, ಮಾ.30– ಮೈಸೂರಿನ ಚಾಮುಂಡಿಪುರಂ ನಿವಾಸಿ, ಕಂಟ್ರಾಕ್ಟರ್ ದತ್ತೇಶ್ ಶೆಟ್ಟಿ(62) ಮುಂಬೈನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಮೃತರು ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ(ಮಾ.31) ಬೆಳಗ್ಗೆ 11 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀ ರಾಮಾಭ್ಯುದಯ ಸಭಾ ಚಾರಿಟೆಬಲ್ ಟ್ರಸ್ಟ್‌ನ 133ನೇ ಸಂಗೀತೋತ್ಸವ ಆರಂಭ





ಮೈಸೂರು,ಮಾ.30(ಎಂಕೆ)– ಮೈಸೂರಿನ ಶಿವರಾಂಪೇಟೆ ರಸ್ತೆಯಲ್ಲಿರುವ ಶ್ರೀಮತಿ ಆಲಮ್ಮನವರ ಛತ್ರದ ಆವರಣದಲ್ಲಿ ಶ್ರೀ ರಾಮಾಭ್ಯುದಯ ಸಭಾ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿರುವ 133ನೇ ವರ್ಷದ ಸಂಗೀತೋತ್ಸವಕ್ಕೆ ಗುರುವಾರ ಚಾಲನೆ ದೊರೆಯಿತು.

ಖ್ಯಾತ ವೀಣಾ ವಿದುಷಿ ಜಯಂತಿ ಕುಮರೇಶ್ ಸಂಗೀತೋತ್ಸವಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಕರ್ನಾಟಕ ಶಾಸ್ತ್ರೀಯ ಸಂಗೀತ ಮೊದಲು ರಾಜರ ಆಶ್ರಯದಲ್ಲಿ, ನಂತರ ಭಕ್ತಿ ಚಳುವಳಿಯ ಸಂದರ್ಭದಲ್ಲಿ ಕುಂಭಮೇಳಗಳ ಮೂಲಕ ಸಾಗಿ ಸಾಂಸ್ಕೃತಿಕ ಸಭಾಗಳಿಂದ ಈಗ ಕಾರ್ಪೋರೇಟ್ ಸಂಘ–ಸಂಸ್ಥೆಗಳ ಆಶ್ರಯದಲ್ಲಿ ಬೆಳೆಯುತ್ತಿದೆ. ಕರ್ನಾಟಕ ಸಂಗೀತ ಉಳಿದು, ಬೆಳೆಯಬೇಕಾದರೆ ಕಲಾ ಪೋಷಕರ ಸಹಕಾರ, ಪ್ರೋತ್ಸಾಹ ಅತ್ಯಂತ ಅವಶ್ಯಕವಾಗಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಶಾಲಾ–ಕಾಲೇಜುಗಳಲ್ಲಿ ಸಂಗೀತ ಕಛೇರಿಗಳು ನಿರಂತರವಾಗಿ ನಡೆಯಬೇಕು. ಇದರಿಂದ ವಿದ್ಯಾರ್ಥಿಗಳಲ್ಲಿ ಸಂಗೀತಾಸಕ್ತಿ ಬೆಳೆಯುವುದರ ಜೊತೆಗೆ ಸುಸಂಸ್ಕೃತ ನಾಗರಿಕರಾಗುತ್ತಾರೆ. ಎಷ್ಟೋ ಕಲಾವಿದರಿಗೆ ಮೈಸೂರಿನಲ್ಲಿ ಕಾರ್ಯಕ್ರಮ ನೀಡುವುದೆಂದರೆ ಬಹಳ ಪ್ರೀತಿ. ವೃತ್ತಿಯಲ್ಲಿ ಬೇರೆಯಾಗಿದ್ದರೂ ಆಸಕ್ತಿಯಿಂದ ಕಲಿತ ಸಂಗೀತ, ಇನ್ನಿತರೆ ವಾದ್ಯ ಪರಿಕರಗಳನ್ನು ನುಡಿಸುವ ಕಲೆಯುಳ್ಳ ಕಲಾವಿದರ ಸಂಖ್ಯೆ ಹೆಚ್ಚಾಗಬೇಕು ಎಂದು ಆಶಿಸಿದರು.

ನರ್ಸರಿಯಿಂದಲೇ ಸಂಗೀತಾಭ್ಯಾಸ: ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಉದ್ಯಮಿ ಎಂ.ಜಗನ್ನಾಥ್ ಶೆಣೈ ಮಾತನಾಡಿ, ನರ್ಸರಿಯಿಂದಲೇ ಮಕ್ಕಳಿಗೆ ಸಂಗೀತಾಭ್ಯಾಸ ನೀಡಬೇಕು. ಮೊದಲು ಓದು, ನಂತರ ಸಂಗೀತ ವಿದ್ಯಾರ್ಥಿಗಳ ಹವ್ಯಾಸಗಳಾಗಿರಬೇಕು. ದಿನಕ್ಕೊಂದು ಗಂಟೆ ಸಂಗೀತಾಭ್ಯಾಸ ಮಾಡಿದರೆ ಸಾಕು, ಎಲ್ಲಾ ಬಗೆಯ ಒತ್ತಡಗಳಿಂದಲೂ ದೂರಾಗಬಹುದು ಎಂದು ತಿಳಿಸಿದರು.

ಸಾಮಾನ್ಯವಾಗಿ ಚಿಕ್ಕ ಮಕ್ಕಳಿಗೆ ಹಾಡಬೇಕು, ಕುಣಿಯಬೇಕು ಎಂಬ ಆಸಕ್ತಿ ಹೆಚ್ಚಾಗಿರುತ್ತದೆ. ಮಕ್ಕಳ ಆಸಕ್ತಿಗೆ ಅನುಗುಣವಾಗಿ ಪ್ರೋತ್ಸಾಹ ನೀಡಿದರೆ, ಬೆಳೆಯುತ್ತಾ ಸಂಗೀತ ವಿದ್ವಾಂಸರಾಗುತ್ತಾರೆ. ಸಂಗೀತ, ಭರತನಾಟ್ಯ ಸೇರಿದಂತೆ ಇನ್ನಿತರೆ ಸಾಂಸ್ಕೃತಿಕ ಕಲೆಗಳ ಅಭ್ಯಾಸಕ್ಕಾಗಿ ಬೇರೆ ಬೇರೆ ತರಬೇತಿ ಕೇಂದ್ರಗಳಿಗೆ ಕಳುಹಿಸುತ್ತೇವೆ. ಅದರ ಬದಲು ಶಾಲೆಯಲ್ಲೇ ಹೇಳಿಕೊಟ್ಟರೆ ಇನ್ನೂ ಒಳ್ಳೆಯದಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಬಳಿಕ ವಿದುಷಿ ಜಯಂತಿ ಕುಮರೇಶ್ ಅವರಿಂದ ವೀಣಾ ವಾದನ ಸಂಗೀತ ಕಾರ್ಯಕ್ರಮ ನಡೆಯಿತು. ಮೃದಂಗದಲ್ಲಿ ವಿದ್ವಾನ್ ಅನಂತ ಆರ್.ಕೃಷ್ಣ, ಕಂಜೀರ ವಾದನದಲ್ಲಿ ವಿದ್ವಾನ್ ಗುರು ಪ್ರಸನ್ನ ಉತ್ತಮ ಸಹಕಾರ ನೀಡಿದರು.

ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದಲ್ಲಿ ರಾಮನವಮಿ ಸಂಗೀತೋತ್ಸವಕ್ಕೆ ಚಾಲನೆ

ಮೈಸೂರು,ಮಾ.30(ಎಂಕೆ)– ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದಲ್ಲಿ 107ನೇ ರಾಮನವಮಿ ವಾರ್ಷಿಕ ಪರಂಪರೆಯ ಸಂಗೀತೋತ್ಸವಕ್ಕೆ ಉದ್ಯಮಿ ಹಾಗೂ ಮಂದಿರದ ಅಧ್ಯಕ್ಷ ಆರ್.ಗುರು ಗುರುವಾರ ಚಾಲನೆ ನೀಡಿದರು.



ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದಲ್ಲಿ 107ನೇ ರಾಮನವಮಿ ವಾರ್ಷಿಕ ಪರಂಪರೆಯ ಸಂಗೀತೋತ್ಸವಕ್ಕೆ ಉದ್ಯಮಿ ಹಾಗೂ ಮಂದಿರದ ಅಧ್ಯಕ್ಷ ಆರ್.ಗುರು ಗುರುವಾರ ಚಾಲನೆ ನೀಡಿದರು.



11 ದಿನಗಳ ಕಾಲ ನಡೆಯುವ ಸಂಗೀತೋತ್ಸವದ ಮೊದಲ ದಿನ ಮೈಸೂರಿನ ಸ್ಯಾಕ್ಸೊಫೋನ್ ವಾದಕ ವಿದ್ವಾನ್ ಹರೀಶ್ ಪಾಂಡವ್, ಕೇಳುಗರ ಮನಕ್ಕೆ ಸಂಗೀತ ಸುಧೆ ಹರಿಸಿದರು. ಕಲ್ಯಾಣಿ ರಾಗದೊಂದಿಗೆ ಆರಂಭಿಸಿ ಹತ್ತಾರು ಭಕ್ತಿನಾದಗಳ ನುಡಿಸಿ ಎಲ್ಲರ ಮೆಚ್ಚುಗೆ ಪಾತ್ರರಾದರು. ಅವರಿಗೆ ಪಿಟೀಲು ವಾದನದಲ್ಲಿ ವಿದ್ವಾನ್ ವೈಭವ್ ರಮಣಿ, ಮೃದಂಗದಲ್ಲಿ ವಿದ್ವಾನ್ ಸುನೀಲ್ ಸುಬ್ರಹ್ಮಣ್ಯ, ಘಟಂನಲ್ಲಿ ವಿದ್ವಾನ್ ಶರತ್ ಕೌಶಿಕ್ ಉತ್ತಮ ಸಾಥ್ ನೀಡಿದರು.

ಇದೇ ವೇಳೆ ಶ್ರೀ ಬಿಡಾರಂ ಕೃಷ್ಣಪ್ಪನವರ ಕುಟುಂಬ ಸಂಬಂಧಿಕರು, ದಾನಿಗಳನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರದ ಉಪಾಧ್ಯಕ್ಷ ಎಸ್.ಕೆ.ಲಕ್ಷ್ಮಿನಾರಾಯಣ (ಬಾಬು), ಕಾರ್ಯದರ್ಶಿ ರಘುನಂದನ್ ರಾವ್, ಜಂಟಿ ಕಾರ್ಯದರ್ಶಿ ಕೆ.ಎನ್.ದಿವಾಕರ್, ಖಜಾಂಚಿ ಎನ್.ಎಸ್.ಸತ್ಯನಾರಾಯಣ, ಸದಸ್ಯರಾದ ಅನಂತರಾಮು, ಪುರುಷೋತ್ತಮ್ ಶಾಸ್ತ್ರಿ ಮತ್ತಿತರರಿದ್ದರು.

ಬಿಎಂಶ್ರೀ ನಗರದ ಬಸ್ ತಂಗುದಾಣ ತೆರವು ಆರೋಪ

ಮೇಟಗಳ್ಳಿ ಠಾಣೆಗೆ ಕಾಂಗ್ರೆಸ್ ಕಾರ್ಯಕರ್ತರ ದೂರು



ಮೈಸೂರು,ಮಾ.30(ಆರ್‌ಕೆ)– ಮೈಸೂರಿನ ಬಿಎಂಶ್ರೀ ನಗರದ ರೈಲ್ವೇ ಗೇಟ್ ಪಕ್ಕದಲ್ಲಿದ್ದ ಬಸ್ ತಂಗುದಾಣವನ್ನು ಅನಧಿಕೃತ ವ್ಯಕ್ತಿಗಳು ತೆರವುಗೊಳಿಸಿದ್ದಾರೆ ಎಂದು ಕಾಂಗ್ರೆಸ್ ಕಾರ್ಯಕರ್ತರು ಮೇಟಗಳ್ಳಿ ಠಾಣೆಗೆ ದೂರು ನೀಡಿದ್ದಾರೆ.

ಈ ಹಿಂದೆ ಮೈಸೂರು ನಗರ ಪಾಲಿಕೆಯಿಂದ ನಿರ್ಮಿಸಲಾಗಿದ್ದ ಬಸ್ ಶೆಲ್ಟರ್ ಅನ್ನು ಇಂದು ಮುಂಜಾನೆ ನೆಲಸಮಗೊಳಿಸಿ ತೆರವುಗೊಳಿಸಲಾಗಿದೆ. ಜನರ ತೆರಿಗೆ ಹಣದಲ್ಲಿ ನಿರ್ಮಿಸಲಾದ ತಂಗುದಾಣವನ್ನು ಪಾಲಿಕೆ ಅನುಮತಿ ಇಲ್ಲದೇ ಅನಧಿಕೃತ ವ್ಯಕ್ತಿಗಳು ಕೆಡವಿದ್ದಾರೆ ಎಂದು ಕಾಂಗ್ರೆಸ್ ಮುಖಂಡರಾದ ಕೆ.ಹರೀಶ್‌ಗೌಡ, ಮಂಜುನಾಥ್ ಹಾಗೂ ಇತರರು ಆರೋಪಿಸಿದ್ದಾರೆ.

ಸ್ಥಳಕ್ಕೆ ತೆರಳಿದ ಹರೀಶ್‌ಗೌಡರಿಗೆ ಕೆಲ ಬಿಜೆಪಿ ಮುಖಂಡರೇ ನಿಂತು ನೆಲಸಮಗೊಳಿಸಿ ಕಬ್ಬಿಣದ ಪದಾರ್ಥಗಳನ್ನು ಆಟೋದಲ್ಲಿ ತುಂಬಿ ಕಳುಹಿಸಿದರು ಎಂದು ಮಾಹಿತಿ ನೀಡಿದರು. ನಂತರ ಮೇಟಗಳ್ಳಿ ಠಾಣೆಗೆ ತೆರಳಿ ದೂರು ನೀಡಿದ ಅವರು, ನೆಲಸಮಗೊಳಿಸಿರುವ ಬಗ್ಗೆ ಫೋಟೋ ಹಾಗೂ ಮಾಹಿತಿಯನ್ನು ನೀಡಿ ಬಸ್ ತಂಗುದಾಣ ತೆರವುಗೊಳಿಸಿದವರ ವಿರುದ್ಧ ಕಾನೂನು ರೀತಿ ಕ್ರಮ ವಹಿಸುವಂತೆ ಮನವಿ ಮಾಡಿದರು. ಆದರೆ ಪಾಲಿಕೆ ವಲಯ ಕಚೇರಿ ಅಧಿಕಾರಿಗಳು, ಇಂಜಿನಿಯರ್‌ಗಳಿಗೆ ಮಾಹಿತಿ ನೀಡಿದರೂ ಸ್ಥಳಕ್ಕೆ ಆಗಮಿಸಲಿಲ್ಲ. ದೂರು ಸ್ವೀಕರಿಸಿದ ಮೇಟಗಳ್ಳಿ ಠಾಣೆ ಇನ್‌ಸ್ಪೆಕ್ಟರ್ ವಿನಯ್ ಸಂಬಂಧಪಟ್ಟವರನ್ನು ಕರೆಸಿ ವಿಚಾರಣೆ ಮಾಡುತ್ತೇವೆಂದಷ್ಟೇ ಹೇಳಿದ್ದಾರೆ ಎಂದು ಮಂಜುನಾಥ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.


ಮೆಟ್ಟಿಲು ಬಾವಿ ಕುಸಿದು 13 ಮಂದಿ ಸಾವು

ಮಧ್ಯಪ್ರದೇಶ,ಮಾ.30–ಶ್ರೀ ರಾಮನವಮಿ ಆಚರಣೆ ವೇಳೆ ಮಧ್ಯಪ್ರದೇಶದ ಇಂದೋರ್‌ನ ಮಹಾದೇವ್ ಜುಲೇಲಾಲ್ ದೇವಸ್ಥಾನದ ಮೆಟ್ಟಿಲುಬಾವಿ ಕುಸಿದ ಪರಿಣಾಮ 13 ಮಂದಿ ಸಾವನ್ನಪ್ಪಿದ್ದಾರೆ. ರಾಮನವಮಿ ಅಂಗವಾಗಿ ಹೆಚ್ಚಿನ ಜನ ಸೇರಿದ್ದ ಹಿನ್ನೆಲೆಯಲ್ಲಿ ಬಾವಿಯ ಮೇಲ್ಭಾಗ ಕುಸಿದಿದೆ. ಈ ಭಾಗದಲ್ಲಿ ದೇವಾಲಯವಿತ್ತು. ಮಹಿಳೆಯರು, ಮಕ್ಕಳು ಸೇರಿದಂತೆ ಹಲವು ಮಂದಿ ಅವಶೇಷಗಳಡಿ ಸಿಲುಕಿರುವ ಸಾಧ್ಯತೆಗಳಿವೆ. 40 ಅಡಿ ಆಳದ ಬಾವಿ ಇದಾಗಿದ್ದು, ಮಾಹಿತಿ ಪ್ರಕಾರ, 18 ಮಂದಿ ಭಕ್ತಾದಿಗಳು ಬಾವಿಯ ಒಳಗೆ ಸಿಲುಕಿಕೊಂಡಿರುವ ಸಾಧ್ಯತೆಗಳಿವೆ. ಇದೊಂದು ದುರದೃಷ್ಟಕರ ಘಟನೆ. ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಜನರನ್ನು ರಕ್ಷಿಸುವ ಪ್ರಯತ್ನಗಳು ನಡೆಯುತ್ತಿವೆ.

ಸುತ್ತೂರಿನಲ್ಲಿ ಕಂಪ್ಯೂಟರ್ ತರಬೇತಿ

ಮೈಸೂರು,ಮಾ.30–ಸುತ್ತೂರು ಜೆಎಸ್‌ಎಸ್ ಸಂಸ್ಥೆಯಲ್ಲಿನ ಗಣಕಯಂತ್ರ ವಿಭಾಗದಲ್ಲಿ "ಬೇಸಿಕ್ಸ್ ಆಫ್ ಕಂಪ್ಯೂಟರ್ಸ್" ವಿಷಯವಾಗಿ ಗ್ರಾಮೀಣ ವಿದ್ಯಾವಂತ ಯುವಕ, ಯುವತಿಯರಿಗೆ ಒಂದು ತಿಂಗಳ ತರಬೇತಿಯನ್ನು ಏರ್ಪಡಿಸಲಾಗಿದೆ. ಈ ತರಬೇತಿ ಏ.17ರಿಂದ ಆರಂಭವಾಗಲಿದೆ. ಕನಿಷ್ಠ 8ನೆಯ ತರಗತಿ ವಿದ್ಯಾರ್ಹತೆ ಹೊಂದಿರುವ ಆಸಕ್ತರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ಮಾಹಿತಿಗಾಗಿ ದೂ.ಸಂಖ್ಯೆ: 08221–232040, 9886389574, 9740125720 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

31.3.2023 ಶುಕ್ರವಾರ, ಮಳೆ ನಕ್ಷತ್ರ: ಉತ್ತರಭಾದ್ರ, 18.03.2023 ರಿಂದ 30.03.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಪುಷ್ಯ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ದೇವರಾಜ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು :** ಕಾಡ್ನೂರು ಶಿವೇಗೌಡರ ಮೂರು ಕವನ ಸಂಕಲನ ಕೃತಿ ಬಿಡುಗಡೆ ಸಮಾರಂಭ, ಕೃತಿ ಬಿಡುಗಡೆ : ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ನಾಗಮಲ್ಲೇಶ್, ಕೃತಿ ಕುರಿತು ಮಾತನಾಡುವವರು : ಸಾಹಿತಿ ಬನ್ನೂರು ಕೆ. ರಾಜು, ಉಪಸ್ಥಿತರು : ಸಂವಹನ ಪ್ರಕಾಶಕರಾದ ಡಿ.ಎನ್. ಲೋಕಪ್ಪ, ರಾಜಗೋಪಾಲ್, ವಿಘ್ನೇಶ್ವರ ವಿ. ಭಟ್, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಕಾಡ್ನೂರು ಶಿವೇಗೌಡ, ಸ್ಥಳ: ದೇವರಾಜ ಕಾಲೇಜು, ಬೆಳಗ್ಗೆ 11.30ಕ್ಕೆ.

■ **ಮೈಸೂರು ಯೋಗ ಸಾಧಕರ ಬಳಗ :** ಭಾರತೀಯ ಸಂಸ್ಕೃತಿ ಕುರಿತು ಚಿಂತನಾ ಶಿಬಿರ ಹಾಗೂ ಯೋಗ ಸಾಧಕರ ಸಮಾವೇಶ, ಉದ್ಘಾಟನೆ : ಯೋಗ ಶಿಕ್ಷಕ ನಾಗಭೂಷಣ್, ಪ್ರಾಸ್ತಾವಿಕ ನುಡಿ : ಮೈಸೂರು ಯೋಗ ಅಸೋಸಿಯೇಷನ್ ಅಧ್ಯಕ್ಷ ಯೋಗಪ್ರಕಾಶ್, ಅಧ್ಯಕ್ಷತೆ : ಪರಮಹಂಸ ಯೋಗ ಮಹಾವಿದ್ಯಾಲಯ ಅಧ್ಯಕ್ಷ ಶಿವಪ್ರಕಾಶ್ ಗುರೂಜಿ, ಉಪಸ್ಥಿತರು: ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ಸಂತೋಷ್ ಎಸ್. ಗೌಡ, ಶ್ರೀಮತಿ ರತ್ನಾ ಹಾಲಪ್ಪಗೌಡ, ಎಂ.ಪಿ.ಪ್ರಭುಸ್ವಾಮಿ, ಎಂ.ಮುತ್ತುಸ್ವಾಮಿ, ಎ.ಸಿ.ರವಿಕುಮಾರ್, ಸ್ಥಳ: ನಮನ ಕಲಾ ಮಂಟಪ, ಕೃಷ್ಣಮೂರ್ತಿಪುರಂ, ಸಂಜೆ 5ಕ್ಕೆ.

■ **ಡಾಲ್ಫಿನ್:** ನೂತನ ಬೇಕರಿ ಮ್ಯಾನ್ಯೂಫ್ಯಾಕ್ಚರಿಂಗ್ ಯೂನಿಟ್ ಮತ್ತು ಬೇಕಿಂಗ್ ಇನ್ಸ್‌ಟಿಟ್ಯೂಟ್ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಶಾಸಕ ಜಿ.ಟಿ.ದೇವೇಗೌಡ, ಮುಖ್ಯ ಅತಿಥಿಗಳು: ಮುಡಾ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಸ್ಥಳ: ಇಲವಾಲ, ಸಂಜೆ 5ಕ್ಕೆ.

ನಗರದಲ್ಲಿ ವಿವಿಧೆಡೆ ಶ್ರೀರಾಮೋತ್ಸವ

■ **ಗಣಪತಿ ಸೇವಾ ಮಂಡಳಿ ಟ್ರಸ್ಟ್:** 4ನೇ ರಾಮೋತ್ಸವ, ಸಂಜೆ 6ರಿಂದ ಹೇಮಚಂದ್ರ ಅವರಿಂದ ಭಕ್ತಿ ಗೀತೆಗಳು, ಸಂಜೆ 6.30ರಿಂದ ಡಾ.ಅನಘ ಅವರಿಂದ ಪಿಟೀಲು ವಾದನ, ಸ್ಥಳ: ರಜತ್ ಸಭಾ ಮಂಟಪ, ಗಣಪತಿ ದೇವಸ್ಥಾನ, 'ಐ' ಬ್ಲಾಕ್, ರಾಮಕೃಷ್ಣನಗರ.



■ **ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟೆಬಲ್ ವಿಶ್ವಸ್ಥ ಮಂಡಳಿ :** ಶ್ರೀ ರಾಮೋತ್ಸವದ ಅಂಗವಾಗಿ ಸಂಗೀತ ಕಛೇರಿ, ಸಾಂಸ್ಕೃತಿಕ ಕಾರ್ಯಕ್ರಮಗಳು, ವೈಭವ ಶಯನೋತ್ಸವ, ಸ್ಥಳ: ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟಬಲ್ ವಿಶ್ವಸ್ಥ ಮಂಡಳಿ ಆವರಣ, ಯಾದವಗಿರಿ, ಸಂಜೆ 6 ಗಂಟೆಗೆ.

■ **ಶ್ರೀರಾಮ ಸೇನಾ ಮಂಡಳಿ ಚಾರಿಟೆಬಲ್ ಟ್ರಸ್ಟ್:** 29ನೇ ಶ್ರೀ ರಾಮನವಮಿ ಸಂಗೀ ತೋತ್ಸವ–2023, ಸಂಜೆ 5.15ರಿಂದ ವಿದುಷಿ ಎಸ್.ಚೈತ್ರಿಕಾ ಅವರಿಂದ ಗಾಯನ, ವಿದ್ವಾನ್ ಅಮೋಘ–ವಯೋಲಿನ್, ವಿದ್ವಾನ್ ನಂದನ್ ಕಶ್ಯಪ್–ಮೃದಂಗ, ಸಂಜೆ 6.15ರಿಂದ ವಿದ್ವಾನ್ ಕೆ.ಭರತ್ ಸುಂದರ್ ಅವರಿಂದ ಗಾಯನ, ಡಾ.ನಿಶಾಂತ್ ಚಂದ್ರನ್–ವಯೋಲಿನ್, ವಿದ್ವಾನ್ ಕೆ.ಯು.ಜಯಚಂದ್ರ ರಾವ್–ಮೃದಂಗ, ವಿದ್ವಾನ್ ಜಿ.ಎಸ್.ರಾಮಾನುಜನ್–ಘಟ, ಸ್ಥಳ: ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿ.ವಿ.ಮೊಹಲ್ಲಾ,

■ **ಶ್ರೀ ಕಾಶೀಮಠದ ಶ್ರೀರಾಮಮಂದಿರ :** ಶ್ರೀರಾಮನವಮಿ ಪ್ರಯುಕ್ತ ಆರ್ಶ ಜ್ಞಾನ ಕೇಂದ್ರದವರಿಂದ ಭಜನೆ ಕಾರ್ಯಕ್ರಮ, ಸ್ಥಳ: ಶ್ರೀ ಕಾಶೀಮಠದ ಶ್ರೀರಾಮಮಂದಿರ, ಶ್ರೀರಾಮಪೇಟೆ ಸಂಜೆ 6.15 ರಿಂದ.

■ **ಶ್ರೀ ರಾಮ ಸೇವಾ ಮಂಡಲಿ :** 70ನೇ ವರ್ಷದ ಶ್ರೀ ರಾಮೋತ್ಸವ, ಸಂಜೆ 6 ರಿಂದ ಶುಭಾಶರತ್ ಅವರಿಂದ ಶಾಸ್ತ್ರೀಯ ಗಾಯನ, ಕು. ಪೃಥ್ವಿಭಾಸ್ಕರ್–ಪಿಟೀಲು, ವಿದ್ವಾನ್ ಜಿ.ಟಿ. ಸ್ವಾಮಿ–ಮೃದಂಗ, ಸಂಜೆ 7.30ಕ್ಕೆ ಕು. ಹೆಚ್.ಸಿ. ಭಾರತಿ ಮತ್ತು ವೃಂದದವರಿಂದ ಶಾಸ್ತ್ರೀಯ ಗಾಯನ, ಸ್ಥಳ: ಶ್ರೀರಾಮ ಸೇವಾ ಮಂಡಲಿ, ವಿದ್ಯಾರಣ್ಯಪುರಂ.

■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್ :** ಸಂಗೀತೋತ್ಸವ, ವಿದ್ವಾನ್ ಪಾಲ್‌ಘಾಟ್ ಆರ್. ರಾಮಪ್ರಸಾದ್ ಅವರಿಂದ ಶಾಸ್ತ್ರೀಯ ಸಂಗೀತ, ವಿದ್ವಾನ್ ಹೆಚ್.ಎನ್. ಭಾಸ್ಕರ್–ಪಿಟೀಲು, ವಿದ್ವಾನ್ ಅನಂತ ಆರ್. ಕೃಷ್ಣ–ಮೃದಂಗ, ವಿದ್ವಾನ್ ಗಿರಿಧರ್ ಉಡುಪ–ಘಟಂ, ಸ್ಥಳ: ಶ್ರೀಮತಿ ಆಲಮ್ಮನವರ ಛತ್ರ, ಕುಂಚಿಟಿಗರ ಸಂಘ, ಶ್ರೀರಾಮಪೇಟೆ, ಸಂಜೆ 6.30 ರಿಂದ.

■ **ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರ :** 107ನೇ ರಾಮನವಮಿ ವಾರ್ಷಿಕ ಪರಂಪರೆಯ ಸಂಗೀತೋತ್ಸವ, ವಿದುಷಿ ಐಶ್ವರ್ಯ ವಿದ್ಯಾ ರಘುನಾಥ್ ಅವರಿಂದ ಶಾಸ್ತ್ರೀಯ ಗಾಯನ. ವಿದುಷಿ ಅದಿತಿ ಕೃಷ್ಣಪ್ರಕಾಶ್– ವಯೋಲಿನ್, ವಿದ್ವಾನ್ ಬಿ.ಎಸ್. ಪ್ರಶಾಂತ್– ಮೃದಂಗ, ವಿದ್ವಾನ್ ಎಸ್.ಮಂಜುನಾಥ್–ಘಟಂ, ಸ್ಥಳ: ಶ್ರೀ ಬಿಡಾರಂ ಕೃಷ್ಣಪ್ಪನವರ ಶ್ರೀ ಪ್ರಸನ್ನ ಸೀತಾರಾಮ ಮಂದಿರ, ಸಂಜೆ 6.15ಕ್ಕೆ.

■ **ಶ್ರೀರಾಮ ಮಂದಿರ:** ಶ್ರೀರಾಮನವಮಿ, ವಿದುಷಿ ಸುಧಾ ಮಂಜುನಾಥ್ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ಸ್ಥಳ: ಶ್ರೀರಾಮ ಮಂದಿರ, ಜಯನಗರ, ಸಂಜೆ 6.30 ರಿಂದ.

■ **ಶ್ರೀರಾಮ ಭಕ್ತವೃಂದ ಸೇವಾ ಟ್ರಸ್ಟ್ :** ಶ್ರೀರಾಮನವಮಿ, ಬೆಳಗ್ಗೆ 7.30ಕ್ಕೆ ಶ್ರೀ ಸೀತಾಕಲ್ಯಾಣ ಕಾರ್ಯಕ್ರಮಗಳು, ಶ್ರೀ ರಾಮದೇವರಿಗೆ ವರಪೂಜೆ, ಕಾಶೀಯಾತ್ರೆ, ಶ್ರೀ ಸೀತಾಮಾತೆಗೆ ಲಕ್ಷ್ಮೀಪೂಜೆ, ಸುವರ್ಣಧಾರಾ, ಮಾಂಗಲ್ಯ ಧಾರಣೆ, ನಾಗೋಲಿ, ಲಾಜಾಹೋಮ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸಂಜೆ 6.30 ರಿಂದ ಡಾ. ಜಿ.ವಿ. ಸುಬ್ಬಲಕ್ಷ್ಮಿ ಮತ್ತು ವೃಂದದವರಿಂದ ಸಾಂಸ್ಕೃತಿ ಕಾರ್ಯಕ್ರಮ, ಶ್ರೀ ಸುಮದ್ಯುತಿ ಸಂಗೀತ ಶಾಲಾ ಕಲಾವಿದರಿಂದ ಸಂಗೀತ, ರಾತ್ರಿ 8 ಗಂಟೆಗೆ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಟ್ರಸ್ಟ್ ಆವರಣ, ಜೆ.ಪಿ.ನಗರ.

■ **ಶ್ರೀರಾಮ ದೇವಸ್ಥಾನ :** ಶ್ರೀರಾಮ ದೇವರ ಹಾಗೂ ನವಗ್ರಹ ವಿಗ್ರಹಗಳ ಕಳಾಕರ್ಷಣೆ ನಿಮಿತ್ತ ಹೋಮ, ಕಳಾಕರ್ಷಣೆ, ಅಭಿಷೇಕ, ಪೂಜಾ ಕಾರ್ಯಕ್ರಮ, ಪ್ರಸಾದ ವಿತರಣೆ, ಸ್ಥಳ: ಶ್ರೀರಾಮ ದೇವಸ್ಥಾನ, ಅರಮನೆ ಉತ್ತರ ಕೋಟೆ ಬಾಗಿಲು, ಸಂಜೆ 6 ರಿಂದ.

■ **ಶ್ರೀ ಶಂಕರ ಜಯಂತಿ ಸಭಾ :** ಶ್ರೀ ರಾಮನವಮಿ ಕಾರ್ಯಕ್ರಮಗಳು, ಬೆಳಗ್ಗೆ ಶ್ರೀರಾಮ ಪಟ್ಟಾಭಿಷೇಕ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸಂಜೆ 5 ರಿಂದ ವಿದ್ವಾನ್ ಪ್ರಜ್ವಲ್ ರಂಗರಾಜನ್ ಅವರಿಂದ ವೀಣಾವಾದನ, ಸ್ಥಳ: ಸಮುದಾಯ ಭವನ, ತೆಂಗಿನತೋಪು, ಸರಸ್ವತಿಪುರಂ.

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಇಂಜಿನಿಯರಿಂಗ್ ವಿದ್ಯಾವಿಕಾಸ್, ಪ್ರಾಯೋಜಕರು– ವಿದ್ಯಾವಿಕಾಸ ಇಂಜಿನಿಯರಿಂಗ್ ಕಾಲೇಜ್, ಮೈಸೂರು, 6.40 ಅರಿವಿನ ಶಿಖರ, ಗಾಯನ– ಎಂ.ಡಿ.ಸುಮತಿ ಮುರಾರಿ, ನಿತಿನ್ ರಾಜಾರಾಂ ಶಾಸ್ತ್ರಿ, ವ್ಯಾಖ್ಯಾನ– ಕೆ.ಎಲ್.ಪದ್ಮಿನಿ, 7.15 ಪ್ರಾಯೋಜಿತ ಕಾರ್ಯಕ್ರಮ "ಸಮಗ್ರ ಶಿಕ್ಷಣ ಸಂಚಲನ", 9.00ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಆರೋಗ್ಯ ಕಾರ್ಯಕ್ರಮ, 9.30 ಗಾಂಧೀ ಸ್ಮೃತಿ, 10.00 ಸುರೇಂದ್ರ ಕೆ.ಎನ್. –ನಾಗಸ್ವರ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 12.45 ಕಾದಂಬರಿ ವಿಹಾರ–ಡಾ.ಎಸ್.ಎಲ್.ಭೈರಪ್ಪನವರ ದೂರ ಸರಿದರು ಕಾದಂಬರಿಯ ಬಾನುಲಿ ಓದು ಪ್ರಸ್ತುತಿ–ಉಮೇಶ್ ಎಸ್.ಎಸ್., 1.20 ಭಾವಗೀತೆ–ಜಯಶ್ರೀ ರಂಗನಾಥ್, 2.50 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ–ಜಿ.ಕೆ.ರವೀಂದ್ರಕುಮಾರ್, 3.00 ಮೌನ ದಾಟಿಯ ಬೆಳಕು–ಸದಾಶಿವ ಬ್ರಹ್ಮೇಂದ್ರರ ಜೀವನ ಹಾಗೂ ರಚನೆಗಳನ್ನಾಧರಿಸಿದ ವಿಶೇಷ ಕಾರ್ಯಕ್ರಮ ಸರಣಿ, 4.00 ಮಹಿಳಾರಂಗ–ಮನೆ ಸರಿದೂಗಿಸುವ ಸರಳ ಸೂತ್ರಗಳು ಕುರಿತು ಶ್ರೀಮತಿ ವಿಜಯಾ ಅವರೊಂದಿಗೆ ಸಂದರ್ಶನ, ಪ್ರಸ್ತುತಿ–ಎಂ.ಎಸ್. ಭಾರತಿ, 4.30 ವೃತ್ತಿ ಮಾರ್ಗದರ್ಶನ–ಔಷಧ ವಿಜ್ಞಾನ ಅಂದರೆ ಫಾರ್ಮಸಿ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಕೆ.ಹನುಮಂತಾಚಾರ್ ಜೋಷಿ ಅವರೊಂದಿಗೆ ಮಾತುಕತೆ, 6.50 ಕೃಷಿರಂಗ–ಕಿಸಾನ್‌ವಾಣಿ, ಬದನೆ ಹಾಗೂ ಕುಂಬಳ ಜಾತಿಯ ತರಕಾರಿ ಬೆಳೆಗಳಲ್ಲಿ ಸಮಗ್ರ ಕೀಟ ನಿರ್ವಹಣೆ ಕುರಿತು ಡಾ.ಜಿ.ಕೆ.ರಾಮೇಗೌಡ ಅವರೊಂದಿಗೆ ಸಂದರ್ಶನ, 9.15 ಜನಪದ ಸಂಗೀತ– ನಾಗಬಸಮ್ಮ ಮತ್ತು ತಂಡ, 10.00 ವಾದ್ಯವೃಂದ–ನಿಲಯದ ಕಲಾವಿದರಿಂದ, 10.30 ಸವಿನೆನಪು

ಮೈಸೂರು ಮಿತ್ರ ಶುಕ್ರವಾರ 31 ಮಾರ್ಚ್ 2023

ಅಂದಗೊಂಡು ಆಹ್ವಾನ ನೀಡುತ್ತಿರುವ ಮತಗಟ್ಟೆಗಳು...!

ಓ ಪ್ರಿಯ ಮತದಾರರೇ ಬನ್ನಿ, ನಿಮ್ಮ ಅಮೂಲ್ಯ ಹಕ್ಕು ಚಲಾಯಿಸಿ, ಭಾರತದ ಭವ್ಯ ಭವಿಷ್ಯ ಬರೆಯಿರಿ







● ಮೋಹನ್ ಕಾಯಕ

ಮೈಸೂರು, ಮಾ.30– ಪ್ರಿಯ ಮತದಾರರೇ...! ಇಲ್ಲಿ ಬನ್ನಿ... ದೇಶದ ಹಿತಕ್ಕಾಗಿ ನಿಮ್ಮ ಅಮೂಲ್ಯವಾದ ಮತ ಚಲಾಯಿಸಿ... ಎಂದು ಕಲಾತ್ಮಕವಾಗಿ ಶೃಂಗಾರಗೊಂಡಿರುವ ಮತಗಟ್ಟೆಗಳು ಮತದಾರರನ್ನು ಆಹ್ವಾನಿಸುತ್ತಿವೆ...!

ರಾಜ್ಯದಲ್ಲಿ ಚುನಾವಣೆ ಎಂಬ ಮತದಾರರ ಮಹಾಹಬ್ಬದ ಮೆರಗು ಹೆಚ್ಚುತ್ತಿದ್ದು, ಮೈಸೂರಿನಲ್ಲಿಯೂ ಹಬ್ಬದ ವಾತಾವರಣ ಕಳೆಕಟ್ಟುತ್ತಿದೆ. ಪ್ರಜಾಪ್ರಭುಗಳು ತಮ್ಮ ಏಳಿಗೆ, ರಾಜ್ಯ–ದೇಶದ ಅಭಿವೃದ್ಧಿ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕಾಗಿ ತಮ್ಮ ಹಕ್ಕು ಚಲಾಯಿಸುವ ಮತಗಟ್ಟೆಗಳು ಚಿತ್ರಕಲಾ ಕೇಂದ್ರಗಳಾಗಿ ಕಣ್ಮನ ಸೆಳೆಯುತ್ತಿವೆ.



ಜಿಲ್ಲಾಡಳಿತ, ನಗರಪಾಲಿಕೆ, ಜಿಲ್ಲಾ ಸ್ವೀಪ್ ಕಮಿಟಿ ವತಿಯಿಂದ ಮೈಸೂರು ನಗರ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳಲ್ಲಿರುವ ಮತಗಟ್ಟೆ ಕೇಂದ್ರದ ಕಟ್ಟಡಗಳ ಗೋಡೆ ಮತ್ತು ಕಂಬಗಳ ಮೇಲೆ ಮತದಾರರು ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡುವ ಅಂಶಗಳನ್ನೊಳಗೊಂಡ ಆತ್ಯಾಕರ್ಷಕ ಚಿತ್ರಕಲೆಗಳನ್ನು ಬಿಡಿಸುವ ಕಾರ್ಯ ನಡೆಯುತ್ತಿದೆ. ಈಗಾಗಲೇ ಐದಾರು ಪ್ರಮುಖ ಮತಗಟ್ಟೆಗಳಲ್ಲಿ ಚಿತ್ರಾಲಂಕಾರ ಪೂರ್ಣಗೊಂಡಿದ್ದು, ಮತದಾರರಿಗೆ ಆಹ್ವಾನ ನೀಡುತ್ತಿವೆ.

'ತಪ್ಪದೆ ಮತದಾನ ಮಾಡಿ', 'ನಿಮ್ಮ ಮತ ರಾಷ್ಟ್ರಕ್ಕೆ ಹಿತ', 'ಉತ್ತಮ ಭಾರತಕ್ಕಾಗಿ ಮತಹಾಕಿ', 'ವೋಟರ್ ಐಡಿ ಹೊಂದಿರುವುದು ನೀವು ಭಾರತೀಯನೆಂದು ತೋರಿಸುತ್ತದೆ. ಆದರೆ ಮತಹಾಕುವುದು ನೀವು ಒಬ್ಬ ಜವಾಬ್ದಾರಿ ಭಾರತೀಯನೆಂದು ತೋರಿಸುತ್ತದೆ', 'ಬನ್ನಿ ಮತಹಾಕಿ', 'ನನ್ನ ಮತ ನನ್ನ ಭವಿಷ್ಯ', 'ಪ್ರತಿ ಮತವು ಅತ್ಯಮೂಲ್ಯ', 'ಉತ್ತಮ ರಾಜ್ಯಕ್ಕಾಗಿ ಮತಹಾಕಿ', 'ಮತದಾನ ನಮ್ಮ ಪ್ರಥಮ ಕರ್ತವ್ಯ', 'ಉತ್ತಮ ನಾಳೆಗಾಗಿ ಇಂದು ಮತ ಚಲಾಯಿಸಿ', 'ಜಾಗೃತ ಮತದಾರ ರಾಷ್ಟ್ರದ ಭವಿಷ್ಯವನ್ನು ಬರೆಯುತ್ತಾನೆ' ಎಂಬಿತ್ಯಾದಿ ಅರ್ಥಪೂರ್ಣ ಸಂದೇಶಗಳೊಂದಿಗೆ



'ರಾಷ್ಟ್ರಧ್ವಜ', 'ಸೇನೆ ಮತ್ತು ಸೈನಿಕರು', 'ಪೊಲೀಸರು' ಸೇರಿದಂತೆ ಸಮಾಜದ ನಾನಾ ಚಿತ್ರಗಳು ಆಕರ್ಷಣೀಯವಾಗಿದ್ದು, ನೋಡುವ ಮತದಾರರ ಮನದಾಳಕ್ಕಿಳಿದು ಮತದಾನಕ್ಕೆ ಪ್ರೇರೇಪಿಸುವಂತಿವೆ.

ಈಗಾಗಲೇ ಪಡುವಾರಹಳ್ಳಿ (ವಿನಾಯಕನಗರ)7ನೇ ಮುಖ್ಯ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಜ್ಯೋತಿನಗರದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಟಿ.ಕೆ.ಬಡಾವಣೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬನ್ನಿಮಂಟಪದ ಹುಡ್ಕೋ ಬಡಾವಣೆಯಲ್ಲಿರುವ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಕೆಎಸ್‌ಆರ್‌ಪಿ ಪೊಲೀಸ್ ಕ್ವಾಟ್ರಸ್‌ನಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡ(ಹತ್ತು ಮತಗಟ್ಟೆ)ದಲ್ಲಿ ಚಿತ್ರಕಲೆಯ ಮೂಲಕ ಮತದಾರರಲ್ಲಿ ಮತದಾನದ ಅರಿವು ಮೂಡಿಸುವ ಕಾರ್ಯ ಪೂರ್ಣಗೊಂಡಿದ್ದು, ಇನ್ನೂ ಹಲವು ಮತಗಟ್ಟೆಗಳಲ್ಲಿ ನಡೆಯುತ್ತಿದೆ.

ನುರಿತ ಕಲಾವಿದರು: ಮತಗಟ್ಟೆಗಳ ಗೋಡೆ ಚಿತ್ರಗಳು ಹಾಗೂ ಜಾಗೃತಿ ಸಂದೇಶಗಳನ್ನು ನುರಿತ ಕಲಾವಿದರಿಂದ ಬರೆಸಲಾಗುತ್ತಿದೆ. 10ಕ್ಕೂ ಹೆಚ್ಚು ಕಲಾವಿದರು ತಮ್ಮ ಚಿತ್ರಕಲಾ ಕೌಶಲ್ಯತೆಯನ್ನು ಆಕರ್ಷಕ ಚಿತ್ರಗಳನ್ನು ಬಿಡಿಸುವ ಮೂಲಕ ಪ್ರಸ್ತುತಪಡಿಸುತ್ತಿದ್ದಾರೆ. ಕರ್ನಾಟಕ ಹಾಗೂ ಭಾರತದ ಭೂಪಟ, ರಾಷ್ಟ್ರೀಯ ಚಿಹ್ನೆಗಳು, ಸಮವಸ್ತ್ರದಲ್ಲಿ ಆರಕ್ಷಕರು, ಸೈನಿಕರು, ಪೊಲೀಸರ ರಕ್ಷಣೆಯಲ್ಲಿ ಮತದಾರ, ಸಾರ್ವಜನಿಕ ಸೇವಾ ಕೇಂದ್ರಗಳು ಸೇರಿದಂತೆ ಹತ್ತು–ಹಲವು ಪರಿಕಲ್ಪನೆಗಳ ಮೂಲಕ ಜಾಗೃತಿ ಸಂದೇಶಗಳನ್ನು ತಿಳಿಸುವ ಪ್ರಯತ್ನ ನಡೆಸಲಾಗುತ್ತಿದೆ.

ಮತದಾನದ ಪ್ರಮಾಣ ಹೆಚ್ಚಾಗಬೇಕು: ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ಮತದಾನದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಹಲವು ಬಗೆಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅವುಗಳಲ್ಲಿ ಮತಗಟ್ಟೆಗಳನ್ನು ಆಕರ್ಷಕವಾಗಿ ಕಾಣುವಂತೆ ಮಾಡುವುದು ಒಂದಾಗಿದೆ. ಮತದಾರರಲ್ಲಿ ಪ್ರಜಾಪ್ರಭುತ್ವದ ಮೇಲಿನ ನಂಬಿಕೆ ಗಟ್ಟಿಗೊಳಿಸುವುದು, ಮತದಾನದ ಪ್ರಾಮುಖ್ಯತೆ ತಿಳಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಒಟ್ಟಾರೆ ಮತದಾನದ ಪ್ರಮಾಣ ಹೆಚ್ಚಾಗಿಸಬೇಕು ಎಂದು ಜಿಲ್ಲಾ ಸ್ವೀಪ್ ಕಮಿಟಿ ನೋಡಲ್ ಅಧಿಕಾರಿ ರಂಜಿತ್ ಕುಮಾರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.



ಮೈಸೂರು ನಗರ ವ್ಯಾಪ್ತಿಯಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳು ಬರಲಿದ್ದು, ಒಂದೊಂದು ಕ್ಷೇತ್ರದಲ್ಲಿ ಪ್ರಾರಂಭದ ಹಂತವಾಗಿ ಕನಿಷ್ಠ 2 ಮತಗಟ್ಟೆ ಕೇಂದ್ರಗಳನ್ನು ಚಿತ್ರಕಲೆಯಿಂದ ಆಕರ್ಷಕವಾಗಿ ಕಾಣುವಂತೆ ಮಾಡಲಾಗುತ್ತಿದೆ. ಮತದಾನಕ್ಕೆ ಇನ್ನೂ ಒಂದು ತಿಂಗಳು ಬಾಕಿಯಿದ್ದು, ಅಷ್ಟರೊಳಗೆ ಸಾಧ್ಯವಾದಷ್ಟು ಮತದಾನ ಜಾಗೃತಿ ಮೂಡಿಸಲಾಗುವುದು. ಒಟ್ಟಿನಲ್ಲಿ ಪ್ರತಿಯೊಬ್ಬ ಮತದಾರರು ಮತಗಟ್ಟೆಗೆ ಬಂದು ತಮ್ಮ ಹಕ್ಕು ಚಲಾಯಿಸಬೇಕು.

-ರಂಜಿತ್ ಕುಮಾರ್, ಜಿಲ್ಲಾ ಸ್ವೀಪ್ ಕಮಿಟಿ ನೋಡಲ್ ಅಧಿಕಾರಿ

ಜೆಡಿಎಸ್ ಶಾಸಕ ಗೌರಿಶಂಕರ್‌ಗೆ ರಿಲೀಫ್: ಅನರ್ಹತೆ ತೀರ್ಪಿಗೆ ಮಧ್ಯಂತರ ತಡೆ!

ಬೆಂಗಳೂರು, ಮಾ.30– ತುಮಕೂರು ಗ್ರಾಮಾಂತರ ಕ್ಷೇತ್ರದ ಜೆಡಿಎಸ್ ಶಾಸಕ ಗೌರಿಶಂಕರ್ ಅವರನ್ನು ಹೈಕೋರ್ಟ್ ಏಕಸದಸ್ಯ ಪೀಠ ಅನರ್ಹಗೊಳಿಸಿ ಆದೇಶ ಹೊರಡಿಸಿತ್ತು. ಆದರೆ ಶಾಸಕ ಗೌರಿಶಂಕರ್ ಪರ ವಕೀಲರು ಒಂದು ತಿಂಗಳ ಕಾಲ ಆದೇಶಕ್ಕೆ ತಡೆ ನೀಡುವಂತೆ ಕೋರ್ಟ್‌ಗೆ ಮನವಿ ಮಾಡಿದರು. ಹೀಗಾಗಿ ಕೋರ್ಟ್ ಒಂದು ತಿಂಗಳ ಕಾಲ ಆದೇಶಕ್ಕೆ ತಡೆ ನೀಡಿದೆ.



ಹೈಕೋರ್ಟ್ ನೀಡಿದ ಒಂದು ತಿಂಗಳ ಅವಧಿಯಲ್ಲಿ ಗೌರಿಶಂಕರ್ ಅವರು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ, ಈಗ ಹೈಕೋರ್ಟ್ ನೀಡಿರುವ ತೀರ್ಪಿಗೆ ತಡೆಯಾಜ್ಞೆ ಪಡೆದರೆ ಮಾತ್ರ ಹಾಲಿ ಶಾಸಕರು ಸೇಫ್ ಆಗುತ್ತಾರೆ. ಇಲ್ಲವಾದರೆ ಅನರ್ಹ ಭೀತಿ ಎದುರಾಗುತ್ತದೆ.

2018ರ ಚುನಾವಣೆ ಸಂದರ್ಭ ಡಿ.ಸಿ ಗೌರಿಶಂಕರ್ ಅವರು 32 ಸಾವಿರ ವಯಸ್ಕರು ಹಾಗೂ 16 ಸಾವಿರ ಮಕ್ಕಳಿಗೆ ನಕಲಿ ವಿಮಾ ಪಾಲಿಸಿ ಬಾಂಡ್ ವಿತರಿಸಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಸಂಬಂಧ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದ ಬಿಜೆಪಿಯ ಪರಾಜಿತ ಅಭ್ಯರ್ಥಿ ಸುರೇಶ್ ಗೌಡ ಅವರು, ನಕಲಿ ಬಾಂಡ್ ಆಮಿಷ ಒಡ್ಡಿ ಗೌರಿಶಂಕರ್ ಅಕ್ರಮವಾಗಿ ಚುನಾವಣೆಯನ್ನು ಗೆದ್ದಿದ್ದಾರೆ. ಆದ್ದರಿಂದ ಅವರ ಶಾಸಕ ಸ್ಥಾನವನ್ನು ಅಸಿಂಧುಗೊಳಿಸುವಂತೆ ಮನವಿ ಮಾಡಿದ್ದರು.

ಅಗತ್ಯ ಔಷಧಗಳ ಬೆಲೆಯಲ್ಲಿ ಶೇ.12.12ರಷ್ಟು ಹೆಚ್ಚಳ: ಜನೌಷಧಿ ಕೇಂದ್ರಗಳ ಬಳಕೆ ಮಾಡುವಂತೆ ತಜ್ಞರ ಸಲಹೆ

ಬೆಂಗಳೂರು, ಮಾ.30– ಅಗತ್ಯ ಔಷಧಗಳ ಬೆಲೆಯನ್ನು ಶೇ.12.12ರಷ್ಟು ಏರಿಕೆ ಮಾಡಲು ರಾಷ್ಟ್ರೀಯ ಔಷಧೀಯ ಬೆಲೆ ಪ್ರಾಧಿಕಾರ ಸೋಮವಾರ ಅನುಮೋದನೆ ನೀಡಿದ್ದು, ಬೆಲೆ ಏರಿಕೆ ಹಿನ್ನೆಲೆಯಲ್ಲಿ ಜನೌಷಧಿ ಕೇಂದ್ರಗಳಲ್ಲಿ ಔಷಧಿಗಳ ಖರೀದಿ ಮಾಡುವಂತೆ ತಜ್ಞರು ಸಲಹೆ ನೀಡಿದ್ದಾರೆ.

ಖಾಸಗಿ ಮತ್ತು ಸರ್ಕಾರಿ ವ್ಯವಸ್ಥೆಗಳಲ್ಲಿ ಚಿಕಿತ್ಸಾ ವೆಚ್ಚವನ್ನು ಹೆಚ್ಚಳ ಮಾಡಿರುವುದರಿಂದ ಇದು ಗ್ರಾಹಕರ ಮೇಲೆ ಹೆಚ್ಚಿನ ಪರಿಣಾಮ ಬೀರಲಿದೆ ಎಂದು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ (ಪಿಸಿಐ) ನಿವೃತ್ತ ಉಪ ನಿರ್ದೇಶಕ ಪಿಎಸ್ ಭಗವಾನ್ ಅವರು ಹೇಳಿದ್ದಾರೆ.

ವಿಶೇಷವಾಗಿ ಬಡ ಹಾಗೂ ಮಧ್ಯಮ ಕುಟುಂಬಗಳ ಮೇಲೆ ಇದರ ಪರಿಣಾಮ ಹೆಚ್ಚಾಗಿ ಬೀರಲಿದ್ದು, ಇಂತಹವರು ಜನೌಷಧಿ ಕೇಂದ್ರಗಳಲ್ಲಿ ಔಷಧಿಗಳನ್ನು ಖರೀದಿ ಮಾಡಬೇಕು. ಜನೌಷಧಿ ಕೇಂದ್ರಗಳಲ್ಲಿನ ಔಷಧಿಯೂ ಬ್ರ್ಯಾಂಡೆಡ್ ಔಷಧಿಗಳಂತೆಯೇ ಉತ್ತಮವಾಗಿರುತ್ತದೆ ಮತ್ತು ಹೆಚ್ಚು ಅಗ್ಗವಾಗಿರುತ್ತದೆ ಎಂದು ತಜ್ಞರು ಹೇಳಿದ್ದಾರೆ.

ಆಸ್ಪತ್ರೆಗಳು ಔಷಧಿಗಳನ್ನು ದೊಡ್ಡ ಪ್ರಮಾಣದಲ್ಲಿ ಖರೀದಿ ಮಾಡುವುದರಿಂದ ಅವರಿಗೆ ರಿಯಾಯಿತಿ ದರದಲ್ಲಿ ಔಷಧಿಗಳನ್ನು ನೀಡಲಾಗುತ್ತದೆ. ಆದರೆ, ಇದರ ಬರೆ ಸಾಮಾನ್ಯ ಜನರ ಮೇಲೆ ಬೀಳುತ್ತದೆ ಎಂದು ಭಗವಾನ್ ಅವರು ತಿಳಿಸಿದ್ದಾರೆ.

ಸಗಟು ಬೆಲೆ ಸೂಚ್ಯಂಕ (ಡಬ್ಲ್ಯುಪಿಐ), ಅಂತಾರಾಷ್ಟ್ರೀಯ ಮಾರುಕಟ್ಟೆಯ ಮೂಲಕ ಔಷಧಗಳ ಲಭ್ಯತೆ/ಆಮದು ಮತ್ತು ಮಾರುಕಟ್ಟೆ ವೆಚ್ಚಗಳಿಂದಾಗಿ ಬ್ರಾಂಡೆಡ್ ಔಷಧಗಳ ಬೆಲೆಯಲ್ಲಿ ಏರಿಕೆಗಳು ಕಂಡು ಬಂದಿದೆ ಎಂದು ಭಗವಾನ್ ಅವರು ತಿಳಿಸಿದ್ದಾರೆ.

ಬೆಂಗಳೂರಿನ ಫೀಲ್ಡ್ ಆಫೀಸರ್ ಅನುಪಮ್ ಪಾಠಕ್ ಅವರು ಮಾತನಾಡಿ, ಜನೌಷಧಿ ಕೇಂದ್ರಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಹಲವು ಕೇಂದ್ರಗಳ ವಾರ್ಷಿಕ ಆದಾಯ 1 ಕೋಟಿಗೂ ಹೆಚ್ಚು ದಾಟಿವೆ ಎಂದು ತಿಳಿಸಿದ್ದಾರೆ.

ಕೈಗೆಟಕುವ ದರದಲ್ಲಿ ಗುಣಮಟ್ಟದ ಔಷಧಗಳನ್ನು ಪೂರೈಸುವುದು ಈ ಕೇಂದ್ರಗಳ ಉದ್ದೇಶವಾಗಿತ್ತು ಬೆಲೆ ಏರಿಕೆಯು ಕಡಿಮೆ ಆದಾಯವುಳ್ಳ, ಬಡವರ ಮೇಲೆ ಪರಿಣಾಮ ಬೀರಲಿದೆ. ಬಹುತೇಕ ಜನರು ತಾವು ಗಳಿಸುವ ಹಣವನ್ನು ದುಬಾರಿ ಔಷಧಿಗಳ ಖರೀದಿಗೆ ಖರ್ಚು ಮಾಡಬೇಕಾಗುತ್ತದೆ ಎಂದು ಹೇಳಿದ್ದಾರೆ.

ಆರ್ಥಿಕವಾಗಿ ಹಿಂದುಳಿದ ಜನರಿಗೆ ಅನುಕೂಲವಾಗುವಂತೆ ಇಂತಹ ಔಷಧಿ ಕೇಂದ್ರಗಳನ್ನು ದೇಶಾದ್ಯಂತ ವಿಸ್ತರಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಪ್ರಸ್ತುತ, ಕರ್ನಾಟಕದ 31 ಜಿಲ್ಲೆಗಳಲ್ಲಿ 1,050 ಕೇಂದ್ರಗಳಿದ್ದು, ಈ ಕೇಂದ್ರಗಳಲ್ಲಿ 1,076 ಔಷಧಿಗಳು ಮತ್ತು 145 ಶಸ್ತ್ರಚಿಕಿತ್ಸಾ ವಸ್ತುಗಳನ್ನು ಅಗ್ಗದ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

ಕತ್ತಲಾಗುವ ಮುನ್ನ' ಕೃತಿ ಬಿಡುಗಡೆ



ಮೈಸೂರು, ಮಾ.30(ಜಿಎ)–ಮೈಸೂರಿನ ಕಲಾಮಂದಿರದ ಆವರಣದಲ್ಲಿರುವ ಕಿರುರಂಗ ಮಂದಿರದಲ್ಲಿ ಆಯಾಮ ಅಕಾಡೆಮಿ ಆಫ್ ಫೈನ್ ಆರ್ಟ್ಸ್ ಸಂಸ್ಥೆಯಿಂದ ಗುರುವಾರ ಆಯೋಜಿಸಿದ್ದ 'ಆಯಾಮೋತ್ಸವ'ದಲ್ಲಿ ಲೇಖಕ ಸಾ.ವೆ.ರ.ಸ್ವಾಮಿ ಅವರ 'ಕತ್ತಲಾಗುವ ಮುನ್ನ' ಕೃತಿಯನ್ನು ಪ್ರೊ.ಜಯಪ್ರಕಾಶ್ ಗೌಡ, ರಾಜ್ಯ ಸಂಪನ್ಮೂಲ ಕೇಂದ್ರದ ನಿವೃತ್ತ ನಿರ್ದೇಶಕ ಡಾ.ಎಸ್.ತುಕಾರಾಂ ಮತ್ತು ಉಪನ್ಯಾಸಕ ಡಾ.ಪ್ರಭು ಅವರು ಬಿಡುಗಡೆಗೊಳಿಸಿದರು.

ನಂತರ ಉಪನ್ಯಾಸಕ ಡಾ.ಪ್ರಭು ಕೃತಿ ಕುರಿತು ಮಾತನಾಡಿ, ಸ್ವಾಮಿ ಅವರು ಒಬ್ಬ ಅಪರೂಪದ ಬರಹಗಾರರಾಗಿದ್ದು, ಈ ಹಿಂದೆ ಅವರು ಬರೆದ 'ಹುತ್ತಗಳು' ಮತ್ತು 'ಗುಡಿಗೇಕೆ ಬಾಗಿಲು' ಎಂಬ ಕೃತಿಗಳು ಬಹಳ ಅರ್ಥಪೂರ್ಣವಾಗಿದ್ದವು. 'ಕತ್ತಲಾಗುವ ಮುನ್ನ' ಮೂರನೇ ಕೃತಿಯು ಶೀರ್ಷಿಕೆ ಮೂಲಕವೇ ಸಾಕಷ್ಟು ಕಾಡುತ್ತಿವೆ. ಕೃತಿಯೂ ಸಮಾಜದಲ್ಲಿ ಬದುಕಿರುವ ಮನುಷ್ಯನ ಕರ್ತವ್ಯ ಮತ್ತು ಜವಾಬ್ದಾರಿಗಳೇನು ಎಂಬುದನ್ನು ನಮಗೆ ಎಚ್ಚರಿಸುವಂತಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರೊ.ಜಯಪ್ರಕಾಶ್‌ಗೌಡ, ರಾಜ್ಯ ಸಂಪನ್ಮೂಲ ಕೇಂದ್ರದ ನಿವೃತ್ತ ನಿರ್ದೇಶಕ ಡಾ.ಎಸ್.ತುಕಾರಾಂ, ಲೇಖಕ ಸಾ.ವೆ.ರ.ಸ್ವಾಮಿ, ಆಯಾಮ ಅಕಾಡೆಮಿ ನಿರ್ದೇಶಕಿ ವಿದುಷಿ ಡಾ.ಎಸ್.ವಿ.ಶಾಂಭವಿಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಬಿಜೆಪಿ ಸರ್ಕಾರ ಕಿತ್ತೊಗೆಯಲು ಜನ ತೀರ್ಮಾನ: ಡಿಕೆಶಿ

ಬೆಂಗಳೂರು, ಮಾ.30(ಕೆಎಂಶಿ)–ಕಾಂಗ್ರೆಸ್, ಜೆಡಿಎಸ್ ಶಾಸಕರನ್ನು ಸೆಳೆದು ಆಪರೇಷನ್ ಕಮಲದ ಮೂಲಕ ಅಧಿಕಾರಕ್ಕೆ ಬಂದಿರುವ ಬಿಜೆಪಿ ಸರ್ಕಾರವನ್ನು ಕಿತ್ತೊಗೆಯಲು ರಾಜ್ಯದ ಜನ ತೀರ್ಮಾನಿಸಿದ್ದಾರೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ಗುಬ್ಬಿ ಶಾಸಕ ಶ್ರೀನಿವಾಸ್ ಸೇರಿ ಹಲವರು ಕಾಂಗ್ರೆಸ್ ಸೇರ್ಪಡೆ



ಮಾಜಿ ಸಚಿವ ಗುಬ್ಬಿ ಶ್ರೀನಿವಾಸ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ನಾನು ಬಿಜೆಪಿ ಶಾಸಕರಿಗೆ ಕರೆ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ಬರುವಂತೆ ಆಹ್ವಾನ ನೀಡುತ್ತಿರುವುದಾಗಿ ಹೇಳಿದ್ದಾರೆ. ಕಳೆದ ಚುನಾವಣೆ ನಂತರ ಬಿಜೆಪಿಯವರು ಕಾಂಗ್ರೆಸ್ ಪಕ್ಷದ 13 ಶಾಸಕರು, ಜೆಡಿಎಸ್‌ನ 3 ಶಾಸಕರು ಹಾಗೂ ಇಬ್ಬರು ಪಕ್ಷೇತರರು ಸೇರಿದಂತೆ 18 ಶಾಸಕರ ಮನೆ ಬಾಗಿಲು ತಟ್ಟಿ ಅವರನ್ನು ಕರೆದುಕೊಂಡು ಹೋದರಲ್ಲಾ ಆಗ ಮುಖ್ಯಮಂತ್ರಿಗಳ ನೈತಿಕತೆ ಎಲ್ಲಿಗೆ ಹೋಗಿತ್ತು, ಏನಾಗಿತ್ತು ಎಂದು ಪ್ರಶ್ನಿಸಿದ್ದಾರೆ.

ಆಪರೇಷನ್ ಕಮಲದ ಮೂಲಕ ಬೇರೆ ಪಕ್ಷದಲ್ಲಿ ಆಯ್ಕೆಯಾಗಿದ್ದ ಶಾಸಕರನ್ನು ಕರೆದುಕೊಂಡು ಹೋಗಿ ನಾಲ್ಕು ವರ್ಷಗಳಿಂದ ಅಧಿಕಾರ ಅನುಭವಿಸಿದ್ದೀರಲ್ಲವೆ. ಈಗ ಮಾತನಾಡಲು ಮುಖ್ಯಮಂತ್ರಿಗೆ ಯಾವ ನೈತಿಕತೆ ಇದೆ. ನಿಮ್ಮ ಪಕ್ಷಕ್ಕೆ ಬಹುಮತ ಬಾರದೇ ಇದ್ದಾಗ ನೀವು ಅನೈತಿಕವಾಗಿ ದಳ, ಕಾಂಗ್ರೆಸ್ ಹಾಗೂ ಬಿಜೆಪಿ ಮೈತ್ರಿ ಸರ್ಕಾರ ರಚನೆ ಮಾಡಿದ್ದೀರಿ. ಇದು ರಾಜ್ಯಕ್ಕೆ ಶಾಪವಾಗಿ ಪರಿಣಮಿಸಿದೆ.

ಮೇ 10, ಕರ್ನಾಟಕವನ್ನು ಅಭಿವೃದ್ಧಿ ರಾಜ್ಯವನ್ನಾಗಿ ನಿರ್ಮಾಣ ಮಾಡುವ, ಭ್ರಷ್ಟಾಚಾರ ಬಡಿದೋಡಿಸುವಂತಹ ದಿನ. ರಾಜ್ಯಕ್ಕೆ ಉತ್ತಮವಾದ ಆಡಳಿತ ನೀಡುವ ದಿನ. ಈ ರಾಜ್ಯದ ಹಾಗೂ ಜನರ ಭವಿಷ್ಯವನ್ನು ಜನರೇ ತೀರ್ಮಾನಿಸುವ ದಿನ. ಈ ಪ್ರಜಾಪ್ರಭುತ್ವ ಹಬ್ಬಕ್ಕೆ ಎಲ್ಲರೂ ಕಾತರರಾಗಿದ್ದಾರೆ ಎಂದು ಹೇಳಿದರು.

ಮೋದಿ ಉಪನಾಮ ವಿವಾದ

ರಾಹುಲ್ ಗಾಂಧಿ ವಿರುದ್ಧ ದೂರು ದಾಖಲಿಸುವೆ ಎಂದ ಲಲಿತ್ ಮೋದಿ

ಲಂಡನ್, ಮಾ.30– 'ಮೋದಿ' ಉಪನಾಮ ವಿವಾದ ಕುರಿತಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಐಪಿಎಲ್ ಸಂಸ್ಥಾಪಕ ಲಲಿತ್ ಮೋದಿ ತೀವ್ರ ವಾಗ್ದಾಳಿ ನಡೆಸಿದ್ದು ಬ್ರಿಟನ್ ಕೋರ್ಟ್‌ನಲ್ಲಿ ದೂರು ದಾಖಲಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.



ರಾಹುಲ್ ಗಾಂಧಿ ಮೋದಿ ಉಪನಾಮದವರು ಪಲಾಯನವಾದಿಗಳು ಎಂದು ಕರೆದಿದ್ದಕ್ಕಾಗಿ ಬ್ರಿಟಿಷ್ ನ್ಯಾಯಾಲಯದಲ್ಲಿ ದೂರು ದಾಖಲಿಸುವುದಾಗಿ ಹೇಳಿದರು.

ಬಿಜೆಪಿ ಅಭ್ಯರ್ಥಿಗಳ ಆಯ್ಕೆ ಸಂಬಂಧ ಇಂದು ಮೈಸೂರಲ್ಲಿ ಅಭಿಪ್ರಾಯ ಸಂಗ್ರಹ


● ರಹಸ್ಯ ವಿಧಾನದಲ್ಲಿ ಮುಖಂಡರ ಅಭಿಪ್ರಾಯ ಸಂಗ್ರಹಿಸಲು ನಿರ್ಧಾರ
● ಛಲವಾದಿ ನಾರಾಯಣಸ್ವಾಮಿ, ತುಳಸಿ ಮುನಿರಾಜುಗೌಡ ನೇತೃತ್ವದಲ್ಲಿ ಸಭೆ

ಮೈಸೂರು, ಮಾ.30(ಎಸ್‌ಬಿಡಿ)– ವಿಧಾನಸಭಾ ಚುನಾವಣೆಗೆ ಮುಹೂರ್ತ ನಿಗದಿಯಾಗಿರುವ ಬೆನ್ನಲ್ಲೇ ಬಿಜೆಪಿ, ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಚುರುಕುಗೊಳಿಸಿದೆ. ಈ ನಿಟ್ಟಿನಲ್ಲಿ ಏಪ್ರಿಲ್ 2ರಂದು ಬೆಂಗಳೂರಿನಲ್ಲಿ ಪಕ್ಷದ ಜಿಲ್ಲಾ ಕೋರ್ ಕಮಿಟಿ ಮಹತ್ವದ ಸಭೆ ಕರೆಯಲಾಗಿದ್ದು, ಇದಕ್ಕೆ ಪೂರ್ವಭಾವಿಯಾಗಿ ನಾಳೆ (ಮಾ.31) ಮೈಸೂರಿನಲ್ಲಿ ಮುಖಂಡರಿಂದ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ.

ಬಿಜೆಪಿ ಚುನಾವಣಾ ಪ್ರಚಾರ ಸಮಿತಿ ಸದಸ್ಯರೂ ಆದ ಎಸ್ಸಿ ಮೋರ್ಚಾ ರಾಜ್ಯಾಧ್ಯಕ್ಷ ಛಲವಾದಿ ನಾರಾಯಣಸ್ವಾಮಿ ಹಾಗೂ ವಿಧಾನಪರಿಷತ್ ಸದಸ್ಯ ಪಿ.ಎಂ. ತುಳಸಿ ಮುನಿರಾಜುಗೌಡ ಮೈಸೂರು ಬಿಜೆಪಿ ಕಚೇರಿಯಲ್ಲಿ ಸಭೆ ನಡೆಸಲಿದ್ದಾರೆ. ಪಕ್ಷದ ನಗರಾಧ್ಯಕ್ಷ ಶ್ರೀವತ್ಸ ಅಧ್ಯಕ್ಷತೆ ಯಲ್ಲಿ ನಡೆಯಲಿರುವ ಸಭೆಗೆ ನಗರದ ಕೃಷ್ಣರಾಜ, ಚಾಮರಾಜ ಹಾಗೂ ನರಸಿಂಹರಾಜ ವಿಧಾನಸಭಾ ಕ್ಷೇತ್ರಗಳ ಎಲ್ಲಾ ವಾರ್ಡ್ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ನಗರ ಮಟ್ಟದ ಪದಾಧಿಕಾರಿಗಳು, ಕಾರ್ಪೊರೇಟರ್‌ಗಳನ್ನು ಆಹ್ವಾನಿಸಲಾಗಿದೆ.



ತುಳಸಿ ಮುನಿರಾಜುಗೌಡ



ಛಲವಾದಿ ನಾರಾಯಣಸ್ವಾಮಿ,

ಗೌಪ್ಯ ಅಭಿಪ್ರಾಯ: ಕ್ಷೇತ್ರವಾರು ಪ್ರತ್ಯೇಕ ಸಭೆ ನಡೆಸಲಿದ್ದು, ಅಭಿಪ್ರಾಯ ಸಂಗ್ರಹಕ್ಕೆ ಮತದಾನ ಮಾದರಿ ಅನುಸರಿಸಲಾಗುತ್ತದೆ ಎನ್ನಲಾಗಿದೆ. ಅಂದರೆ ಕ್ಷೇತ್ರದಲ್ಲಿರುವ ಸ್ಪರ್ಧಾಕಾಂಕ್ಷಿಗಳ ಹೆಸರು ಪ್ರಸ್ತಾಪಿಸಿ ಅವರ ಪರವಾಗಿ ಕೈ ಮೇಲೆತ್ತಿಸುವುದು ಅಥವಾ ಮೌಖಿಕ ಅಭಿಪ್ರಾಯ ಸಂಗ್ರಹಿಸುವ ಬದಲು ಮತದಾನ ಮಾದರಿಯಲ್ಲಿ ಗೌಪ್ಯವಾಗಿ ತಾವು ಯಾರನ್ನು ಬೆಂಬಲಿಸುತ್ತೇವೆ ಎನ್ನುವುದನ್ನು ತಿಳಿಸಬಹುದು. ಬಹಿರಂಗವಾಗಿ ಅಭಿಪ್ರಾಯ ಸಂಗ್ರಹಿಸುವುದರಿಂದ ಆಕಾಂಕ್ಷಿಗಳ ಬೆಂಬಲಿಗರಲ್ಲಿ ಸಹಜವಾಗಿ ಪರಸ್ಪರ ವೈಮನಸ್ಸು ಉಂಟಾಗಬಹುದು. ಅದು ಚುನಾವಣೆಯಲ್ಲಿ ಋಣಾತ್ಮಕ ಪರಿಣಾಮ ಬೀರಬಹುದು. ಅಂತಿಮವಾಗಿ ಚುನಾವಣಾ ಕಣಕ್ಕಿಳಿಯುವ ಅಭ್ಯರ್ಥಿ, ಅಭಿಪ್ರಾಯ ಸಂಗ್ರಹ ವೇಳೆ ತಮ್ಮನ್ನು ಬೆಂಬಲಿಸದ ಮುಖಂಡರನ್ನು ದೂರವಿಡಬಹುದು. ಚುನಾವಣಾ ಹೊಸ್ತಿಲಲ್ಲಿ ಈ ಎಲ್ಲಾ ಗೊಂದಲಗಳಿಗೆ ಎಡೆಮಾಡಿಕೊಡಬಾರದೆಂದು ಹೀಗೆ ಗೌಪ್ಯ ರೀತಿಯಲ್ಲಿ ಅಭಿಪ್ರಾಯ ಸಂಗ್ರಹಿಸಲು ಬಿಜೆಪಿ ಮುಂದಾಗಿದೆ.

ಏ.2ಕ್ಕೆ ಸಭೆ: ಬೆಂಗಳೂರಿನಲ್ಲಿ ಏಪ್ರಿಲ್ 2ಕ್ಕೆ ಬಿಜೆಪಿ, ಎಲ್ಲಾ ಜಿಲ್ಲಾ ಕೋರ್ ಕಮಿಟಿ ಸಭೆ ಕರೆದಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಶೋಭಾ ಕರಂದ್ಲಾಜೆ ಸೇರಿದಂತೆ ಅನೇಕ ನಾಯಕರು ಭಾಗವಹಿಸಲಿದ್ದಾರೆ. ಆ ಸಭೆಯಲ್ಲಿ ಜಿಲ್ಲಾ ಹಂತದಲ್ಲಿ ಗೌಪ್ಯವಾಗಿ ಸಂಗ್ರಹಿಸಲಾದ ಮುಖಂಡರ ಅಭಿಪ್ರಾಯದ ಆಧಾರದಲ್ಲಿ ಚರ್ಚೆ ನಡೆಸಲಿದ್ದಾರೆ. ಜೊತೆಗೆ ಪಕ್ಷದ ಆಂತರಿಕ ಸರ್ವೆ ಇನ್ನಿತರ ಅಂಶಗಳ ಆಧಾರದಲ್ಲಿ ಆಕಾಂಕ್ಷಿಗಳ ಪಟ್ಟಿ ಸಿದ್ಧಪಡಿಸಿ ಹೈಕಮಾಂಡ್‌ಗೆ ಕಳುಹಿಸುವ ಸಾಧ್ಯತೆ ಇದೆ.

ಕಾದು ನೋಡುವ ತಂತ್ರ: ಕಾಂಗ್ರೆಸ್, ಮೊದಲ ಪಟ್ಟಿಯಲ್ಲಿ ಮೈಸೂರು ನಗರದ ನರಸಿಂಹರಾಜ ಕ್ಷೇತ್ರ(ತನ್ವೀರ್ ಸೇಠ್) ಸೇರಿದಂತೆ 124 ಕ್ಷೇತ್ರದ ಅಭ್ಯರ್ಥಿಗಳ ಹೆಸರು ಘೋಷಿಸಿದ್ದು, ಇನ್ನೆರಡು ದಿನಗಳಲ್ಲಿ 2ನೇ ಪಟ್ಟಿ ಬಿಡುಗಡೆಗೊಳಿಸಲು ಸಿದ್ಧತೆ ಮಾಡಿ ಕೊಂಡಿದೆ. ಇದಕ್ಕೂ ಮುನ್ನವೇ ಜೆಡಿಎಸ್, ಚಾಮುಂಡೇಶ್ವರಿ ಕ್ಷೇತ್ರ (ಜಿ.ಟಿ.ದೇವೇಗೌಡ), ಕೃಷ್ಣರಾಜ (ಕೆ.ವಿ.ಮಲ್ಲೇಶ್) ಸೇರಿದಂತೆ 95 ಅಭ್ಯರ್ಥಿಗಳ ಪಟ್ಟಿಯನ್ನು ಬಿಡಗಡೆ ಮಾಡಿದ್ದು, ಈ ಅಭ್ಯರ್ಥಿಗಳೆಲ್ಲಾ ಈಗಾಗಲೇ ಕ್ಷೇತ್ರ ಪ್ರವಾಸದಲ್ಲಿದ್ದಾರೆ. ಆದರೆ ಬಿಜೆಪಿ ಕಾದು ನೋಡುವ ತಂತ್ರ ಅನುಸರಿಸಿದಂತಿದೆ. ಕಾಂಗ್ರೆಸ್ ಹಾಗೂ ಜೆಡಿಎಸ್ ಪಕ್ಷಗಳು ಎಲ್ಲಾ ಅಭ್ಯರ್ಥಿಗಳನ್ನು ಅಂತಿಮಗೊಳಿಸಿದ ಬಳಿಕ ಅವರ ವಿರುದ್ಧ ಸಮರ್ಥವಾಗಿ ಸೆಣಸಾಡಿ ಗೆಲ್ಲಬಹುದಾದ ಅಭ್ಯರ್ಥಿಗಳಲ್ಲೇ ಕಣಕ್ಕಿಳಿಸುವ ಚಿಂತನೆಯಲ್ಲಿದೆ ಎನ್ನಲಾಗಿದೆ. ಈ ನಿಟ್ಟಿನಲ್ಲಿ ವಾರ್ಡ್ ಮಟ್ಟದ ಪದಾಧಿಕಾರಿಗಳು, ಪ್ರಮುಖ ಕಾರ್ಯಕರ್ತರ ಅಭಿಪ್ರಾಯ ಮಹತ್ವಪೂರ್ಣ ಎಂದು ಅರಿತಿರುವ ಬಿಜೆಪಿ ನಾಯಕರು, ಗೌಪ್ಯ ರೀತಿಯಲ್ಲಿ ಅಭಿಪ್ರಾಯ ಸಂಗ್ರಹಿಸುತ್ತಿದ್ದಾರೆ ಎಲ್ಲಾ ಆಯಾಮಗಳನ್ನೂ ಪರಿಶೀಲಿಸಿ ಅಂತಿಮವಾಗಿ ಅಭ್ಯರ್ಥಿಗಳ ಅಂತಿಮಗೊಳಿಸಲಾಗುವುದು ಎಂದು ತಿಳಿದುಬಂದಿದೆ.

ಆಕಾಂಕ್ಷಿಗಳ ದೊಡ್ಡ ಪಟ್ಟಿ: ಕೆ.ಆರ್. ಕ್ಷೇತ್ರದಲ್ಲಿ ಹಾಲಿ ಶಾಸಕ ಎಸ್.ಎ. ರಾಮದಾಸ್ ಮತ್ತೆ ಚುನಾವಣಾ ಅಖಾಡಕ್ಕಿಳಿಯಲು ಸಜ್ಜಾಗಿದ್ದಾರೆ. ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಪ್ರಬಲ ಆಕಾಂಕ್ಷಿಯಾಗಿದ್ದಾರೆ. ಬಿಜೆಪಿ ನಗರಾಧ್ಯಕ್ಷ ಶ್ರೀವತ್ಸ ಅವರೂ ಸರದಿಯಲ್ಲಿದ್ದಾರೆ ಎನ್ನಲಾಗಿದೆಯಾದರೂ ಸ್ಪಷ್ಟತೆ ಇಲ್ಲ. ಚಾಮರಾಜ ಕ್ಷೇತ್ರದಲ್ಲಿ ಹಾಲಿ ಶಾಸಕ ಎಲ್.ನಾಗೇಂದ್ರ ಮತ್ತೆ ಸ್ಪರ್ಧಿಸಲು ಕಾತುರರಾಗಿದ್ದಾರೆ. ಇವರೊಂದಿಗೆ ಪಕ್ಷದ ಮುಖಂಡರಾದ ಡಾ.ಮಂಜುನಾಥ್, ನಂದೀಶ್ ಪ್ರೀತಂ, ಜಯಪ್ರಕಾಶ್(ಜೆಪಿ) ಮತ್ತಿತರರ ಆಕಾಂಕ್ಷಿಗಳಿದ್ದಾರೆ. ನರಸಿಂಹರಾಜ ಕ್ಷೇತ್ರದಲ್ಲಿ ಕಳೆದ ಬಾರಿ 44 ಸಾವಿರ ಮತಗಳೊಂದಿಗೆ ಪರಾಜಿತರಾದ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಕಾರ್ಪೊರೇಟರ್ ಸತೀಶ್, ಮುಖಂಡ ಗಿರಿಧರ್ ಮತ್ತಿತರರು ಆಕಾಂಕ್ಷಿಗಳ ಪಟ್ಟಿಯಲ್ಲಿದ್ದಾರೆ. ಇನ್ನು ಸ್ವಲ್ಪ ನಗರ ಪ್ರದೇಶವನ್ನೂ ಒಳಗೊಂಡ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಈ ಕ್ಷೇತ್ರದ ಮಾಜಿ ಅಧ್ಯಕ್ಷ ಅರುಣ್ ಕುಮಾರ್ ಗೌಡ, ಕಾಂಗ್ರೆಸ್ ಮಾಜಿ ಶಾಸಕ ವಾಸು ಅವರ ಪುತ್ರ ಕವೀಶ್ ಗೌಡ ಸೇರಿದಂತೆ ಹಲವರು ರೇಸ್‌ನಲ್ಲಿದ್ದಾರೆ. ಒಟ್ಟಾರೆ ಎಲ್ಲಾ ಕ್ಷೇತ್ರಗಳ ಆಕಾಂಕ್ಷಿಗಳಿಗೆ ಸ್ಥಳೀಯ ಮಟ್ಟದಲ್ಲಿ ಎಷ್ಟು ಬೆಂಬಲವಿದೆ ಎಂಬುದನ್ನು ಗೌಪ್ಯ ಅಭಿಪ್ರಾಯ ಸಂಗ್ರಹದ ಮೂಲಕ ತಿಳಿದುಕೊಳ್ಳಲಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗೆಳೆಯ : "ನಾನು ಮಾನವ ಹಕ್ಕುಗಳ ಸಂಘದ ಸದಸ್ಯ ಕಣಯ್ಯ"
ಆತ : "ವೆರಿಗುಡ್, ನೀನೇ ನನ್ನನ್ನು ಈಗ ಕಾಪಾಡಬಹುದು"
ಗೆಳೆಯ : "ಯಾರಿಂದ ಕಾಪಾಡಬೇಕಪ್ಪ?"
ಆತ : "ನನ್ನ ಹೆಂಡತಿಯಿಂದ!"

ಮೈಸೂರು ಮಿತ್ರ
ಶುಕ್ರವಾರ, 31 ಮಾರ್ಚ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ನಾವು ಎಷ್ಟು ಆತುರ ಪಡುತ್ತೇವೆಯೋ ಅಷ್ಟೇ ನಿಧಾನವಾಗಿ ಕೆಲಸವಾಗುತ್ತದೆ – ಜಾನ್ ಹೇವುಡ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಂದದ್ದು ಬಂದ ಹಾಗೆಯೇ ಹೋಯ್ತು

ನಿಮ್ಮ ಪತ್ರಗಳು

ತ್ರಿವಿಧ ದಾಸೋಹಿ ಡಾ. ಶ್ರೀ ಶಿವಕುಮಾರ ಸ್ವಾಮಿಗಳ 116ನೇ ಜನ್ಮ ದಿನಾಚರಣೆ !

ಮಾನ್ಯರೆ,



ತ್ರಿವಿಧ ದಾಸೋಹದಲ್ಲಿ ಹೊಸ ಬಾಷ್ಯವನ್ನೇ ಬರೆದ, ಇಡೀ ವಿಶ್ವವೇ ಸಿದ್ಧಗಂಗಾ ಮಠದತ್ತ ನಿಬ್ಬೆರಗಾಗಿ ತಿರುಗಿ ನೋಡುವಂತೆ ದೊಡ್ಡ ಮಟ್ಟಕ್ಕೆ ಸಾಧನೆಗೈದವರು. ದಣಿವರಿಯದ ಕಾಯಕಯೋಗಿ ಶತಾಯುಷಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿಗಳು. ಅಂದು ಸಿದ್ಧಗಂಗಾ ಮಠದಲ್ಲಿ 60 ಮಕ್ಕಳಿಂದ ಹಿಡಿದು, ಇಂದು 10,000 ವಿದ್ಯಾರ್ಥಿಗಳಿಗೆ ತ್ರಿವಿಧ' ದಾಸೋಹವನ್ನು ಒದಗಿಸುತ್ತಿರುವುದು ಸುಲಭದ ಮಾತಲ್ಲ. ಅಂದು ಜಂಗಮದ ಜೋಳಿಗೆ ಹಿಡಿದು ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಊರೂರು ಸುತ್ತಿ ಹಸಿವಿನ ದಾಸೋಹದ ಜೋಳಿಗೆಯನ್ನು ತುಂಬಿಸುತ್ತಿದ್ದರು. ಜಾತಿ, ಮತ, ಭೇದವನ್ನು ಮರೆತು ಆರ್ಥಿಕವಾಗಿ ಹಿಂದುಳಿದ, ನೊಂದ, ನಿರಾಶ್ರಿತರ ಮಕ್ಕಳಿಗೆ ತ್ರಿವಿಧ ದಾಸೋಹವನ್ನು ಕಲ್ಪವೃಕ್ಷದಂತೆ ಕಲ್ಪಿಸಿ ದೇವತಾ ಪುರುಷರಾದರು. ಒಂದು ಧಾರ್ಮಿಕ ಪೀಠಾಧ್ಯಕ್ಷರಾಗಿ ಅತೀ ಹೆಚ್ಚು ವರ್ಷಗಳ ಕಾಲ ಸನ್ಯಾಸಿ ದೀಕ್ಷೆ ಸ್ವೀಕರಿಸಿ 90 ದಶಕಗಳ ಕಾಲ ಸಮಾಜ ಸೇವೆ ಸಲ್ಲಿಸಿರುವುದು ಒಂದು ರೀತಿಯ ಇತಿಹಾಸ. "ಮಠದಿಂದ ಘಟ ಅಲ್ಲ, ಘಟದಿಂದ ಮಠ" ಎನ್ನುವ ಮಾತಿಗೆ ಅನ್ವರ್ಥ ದಂತೆ ಸಾರ್ಥಕ ಜೀವನ ನಡೆಸಿದವರು ಶ್ರೀಗಳು. ಉದ್ಧಾನ ಶಿವಯೋಗಿಗಳು ಕಟ್ಟಿದ ಮಹಾ ಮನೆಯಲ್ಲಿ ಬೆಳಕಿನ ದೀವಿಗೆ ಹಚ್ಚಿ ನಾಡಿನ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ಮಹಾಮಾನವತಾವಾದಿ. ಶ್ರೀಮಠದಲ್ಲಿ ವಿದ್ಯೆ ಕಲಿತು ಉಜ್ವಲ ಭವಿಷ್ಯವನ್ನು ಕಟ್ಟಿ ಕೊಂಡವರ ಸಂಖ್ಯೆಯು ಲೆಕ್ಕಕ್ಕಿಲ್ಲ. ಪ್ರಪಂಚದ ಮೂಲೆ ಮೂಲೆಯಲ್ಲೂ ಶ್ರೀ ಮಠದಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಬದುಕು ಕಟ್ಟಿಕೊಂಡಿದ್ದಾರೆ. ಅಕ್ಷರದ ಜೊತೆಗೆ ಮಠದ ಹೊಲ, ಗದ್ದೆ, ತೋಟದ ಜಮೀನುಗಳಲ್ಲಿ ಕೃಷಿ ಚಟುವಟಿಕೆಯಲ್ಲಿ ಮಕ್ಕಳನ್ನು ತೊಡಗಿಸುವ ಮೂಲಕ ಶ್ರಮ ಮತ್ತು ಕಾಯಕದ ಮಹತ್ವದ ಸಂಸ್ಕೃತಿಯ ಪಾಠವನ್ನು ಪ್ರಾಯೋಗಿಕವಾಗಿ ಕಲಿಸುತ್ತಿದ್ದರು. ತ್ರಿವಿಧ ದಾಸೋಹದ ಮಹತ್ವವನ್ನು ಇಡೀ ವಿಶ್ವಕ್ಕೆ ಪಸರಿಸಿದ ಕೀರ್ತಿ ನಡೆದಾಡುವ ದೇವರು, ಅಭಿನವ ಬಸವಣ್ಣ ಎಂದೇ ಜನಮಾನಸರಾಗಿದ್ದ ಮಹಾನ್ ಶರಣ ಸಂತ ಡಾ. ಶಿವಕುಮಾರ ಸ್ವಾಮಿಗಳು. ಶ್ರೀಗಳಿಗೆ ಶ್ರೀಮಠವೇ ಪ್ರಪಂಚವಾಗಿತ್ತು. ಪ್ರಚಾರವೆಂಬುದು ಇವರಿಗೆ ಇಷ್ಟವಿರಲಿಲ್ಲ. ಮಾಧ್ಯಮಗಳ ಮುಂದೆ ಕಾಣಿಸಿಕೊಂಡಿದ್ದು ತುಂಬಾ ವಿರಳ. ಕನ್ನಡ ನೆಲಕ್ಕೆ ಮತ್ತು ಕಾವಿ ಬಟ್ಟೆಗೆ ಘನತೆ ಹಾಗೂ ಗೌರವ ತಂದುಕೊಟ್ಟ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ. ಶ್ರೀಗಳ 116ನೇ ಜನ್ಮ ದಿನ. ಅವರಿಗೆ ಭಕ್ತಿಪೂರ್ವಕ ನಮನಗಳು.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಹೊಸ ಮೀಸಲಾತಿ ಗೋಜಲು ಗೊಂದಲದ ಗೂಡು

ಮಾನ್ಯರೆ,

ರಾಜ್ಯ ಸರ್ಕಾರದ ಹೊಸ 'ಮೀಸಲಾತಿ'ಯು ಅನೇಕ ಗೋಜಲು– ಗೊಂದಲಗಳಿಂದ ಕೂಡಿದ್ದು, ರಾಜ್ಯದ ನಿಖರ ಜನಸಂಖ್ಯೆಯ ಆಧಾರದ ಮೇಲೆ ಅವರ ಆರ್ಥಿಕ ಸ್ಥಿತಿ–ಗತಿ, ಸಾಮಾಜಿಕ ಮತ್ತು ಶೈಕ್ಷಣಿಕ ಮಾನದಂಡದ ಮೇಲೆ ಹೊಸ ಮೀಸಲಾತಿ ಹಂಚಿಕೆಯಾಗಿಲ್ಲ. ಒಕ್ಕಲಿಗರಿಗೆ ಶೇ.6ರಷ್ಟು (2ಸಿ, ಕೆಟಗರಿ) ಮೀಸಲಾತಿ ನೀಡಿ, ಒಕ್ಕಲಿಗ ಮತ್ತು ಉಪ ಜಾತಿ ಹಾಗೂ ಉಪ ಪಂಗಡಗಳ ಸುಮಾರು 39 ಉಪ ಜಾತಿ ಮತ್ತು ಪಂಗಡಗಳನ್ನು ಸೇರಿಸಿರುವುದರಿಂದ ಹೊಸ ಮೀಸಲಾತಿಯಿಂದ ಒಕ್ಕಲಿಗರಿಗೆ ಯಾವುದೇ ಪ್ರಯೋಜನವಾಗಿಲ್ಲ. ಇಡಬ್ಲೂಎಸ್‌ನ ಶೇ.10ರಲ್ಲಿ ಮುಸ್ಲಿಂ ಸಮುದಾಯವನ್ನು ಸೇರಿಸಿರುವುದರಿಂದ ಆರ್ಥಿಕವಾಗಿ ಹಿಂದುಳಿದ 'ಬ್ರಾಹ್ಮಣ' ವರ್ಗವು ಸೇರಿದಂತೆ ಎಲ್ಲಾ ಸಮುದಾಯದವರಿಗೂ ಅನ್ಯಾಯವಾದಂತೆ. ಸಂವಿಧಾನದ ಪ್ರಕಾರ ರಾಜ್ಯದ ಮೀಸಲಾತಿ ಶೇ.50 ಅನ್ನು ಮೀರಬಾರದು ಎಂದಿದ್ದರೂ ಹೊಸ ಮೀಸಲಾತಿ ಶೇ.56 ರಷ್ಟಿದೆ. ಇದು ಸಂವಿಧಾನದ ವಿರೋಧಿ ಕ್ರಮವಲ್ಲವೆ. ರಾಜ್ಯ ಸರ್ಕಾರದ ಹೊಸ ಮೀಸಲಾತಿ ಹೇಗಿದೆ ಎಂದರೆ ಬೀಸೋ ದೊಣ್ಣೆ ತಪ್ಪಿಸಿಕೊಂಡಂತಿದೆ.

–ಬೂಕನಕೆರೆ ವಿಜೇಂದ್ರ, ಮೈಸೂರು

ಆಧಾರ್–ಪಾನ್ ಜೋಡಣೆ ಮಾಡಿಸಿ

ಮಾನ್ಯರೆ,

ಕೇಂದ್ರ ಸರ್ಕಾರ ಆಧಾರ್–ಪಾನ್ ಜೋಡಣೆಗೆ ಮಾ. 31 ರವರೆಗೂ ಗಡುವು ನೀಡಿದ್ದು ಈಗ ಅದನ್ನು ಜೂ.30 ರವರೆಗೂ ವಿಸ್ತರಿಸಿದೆ. ಕೇಂದ್ರ ಸರ್ಕಾರದ ಈ ಕ್ರಮದ ಉದ್ದೇಶ ಏನಿದೆಯೋ ತಿಳಿದಿಲ್ಲ. ಆದರೆ ಈಗ ಆಧಾರ್–ಪಾನ್ ಲಿಂಕ್ ಮಾಡಲು ಒಂದು ಸಾವಿರ ದಂಡ ವಿಧಿಸಿರುವುದಕ್ಕೆ ನಮ್ಮ ಕೆಲವು ನಾಗರಿಕರು ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ. ಹಾಗೆಯೇ ಸರ್ಕಾರ ಉಚಿತವಾಗಿ ಈ ಪ್ರಕ್ರಿಯೆ ನಡೆಸಬೇಕೆಂದು ಆಗ್ರಹಿಸಿದ್ದಾರೆ. ನಾಗರಿಕರ ತಿಳಿವಳಿಕೆಗಾಗಿ ಹೇಳಬೇಕೆಂದರೆ, ದಿನಾಂಕ 29–06–2017ರ ಹಿಂದೆ ಪಾನ್ ಕಾರ್ಡ್ ಹೊಂದಿರುವವರು ಈ ಲಿಂಕ್ ಪ್ರಕ್ರಿಯೆ ಮಾಡಿಸಬೇಕು ಎಂದು ಮಾಧ್ಯಮಗಳ ಮೂಲಕ ನಾಗರಿಕರ ಗಮನಕ್ಕೆ ತಂದಿತ್ತು ಮತ್ತು ಅಂತಹವರು ಈ ಲಿಂಕ್ ಪ್ರಕ್ರಿಯೆ ಮಾಡಿಸಲು ದಿನಾಂಕ 30–06–2017 ರಿಂದ 31–03–2022 ರ ವರೆಗೆ ಉಚಿತವಾಗಿ ಮಾಡಲು ಸಮಯ ನಿಗದಿಪಡಿಸಿತ್ತು. ಈ ಅವಧಿಯಲ್ಲಿ ಲಿಂಕ್ ಮಾಡದಿರುವವರಿಗೆ ದಿನಾಂಕ 01–04–2022 ರಿಂದ 39–06–2022 ರವರೆಗೆ ಐನೂರು ರೂಪಾಯಿ ದಂಡದೊಂದಿಗೆ ಲಿಂಕ್ ಮಾಡಿಸಿಕೊಳ್ಳ ಬಹುದೆಂದು ಆದೇಶ ನೀಡಿತ್ತು. ಈ ಅವಧಿಯಲ್ಲೂ ಲಿಂಕ್ ಮಾಡದವರಿಗೆ ಒಂದು ಸಾವಿರ ರೂಪಾಯಿ ದಂಡದೊಂದಿಗೆ ಲಿಂಕ್ ಪಡೆದು ಕೊಳ್ಳಬಹುದೆಂದು ಆದೇಶವಾಗಿತ್ತು. ಈಗ ಅದನ್ನು ಮತ್ತೆ ಮೂರು ತಿಂಗಳ ಅವಧಿಗೆ ಮುಂದೂಡಿದ್ದಾರೆ. ಆಗಲೂ ಅದನ್ನು ಮಾಡಿಸಿಕೊಳ್ಳದಿದ್ದಲ್ಲಿ ಸರ್ಕಾರದ ಆದೇಶ ಏನಿರುವುದೋ ಕಾಯ್ದು ನೋಡಬೇಕು. ಸುಮಾರು ಐದು ವರ್ಷಗಳ ಕಾಲ ಸರ್ಕಾರ ಉಚಿತವಾಗಿ ನೀಡಿದ್ದ ಸಮಯದಲ್ಲಿ ಮತ್ತು ಮಾಧ್ಯಮಗಳ ಮೂಲಕ ನಾಗರಿಕರ ಗಮನಕ್ಕೆ ತರುತ್ತಿದ್ದರೂ, ನಮ್ಮ ಜವಾಬ್ದಾರಿ ಮರೆತು ಅಸಡ್ಡೆ ಮಾಡಿದರ ಫಲವಾಗಿ ಈಗ ದಂಡ ಕಟ್ಟಬೇಕಾದ ಪ್ರಮೇಯ ಬಂದಿರುತ್ತದೆ. ಈಗಲಾದರೂ ಎಚ್ಚೆತ್ತುಕೊಂಡು ಜವಾಬ್ದಾರಿಯಿಂದ ವರ್ತಿಸುವುದು ಒಳ್ಳೆಯದು. ಇಲ್ಲವೇ ಮುಂದೆ ಈ ಲಿಂಕ್ ತುಂಬಾ ಅವಶ್ಯಕ ಎಂದು ಕಂಡುಬಂದರೆ, ಸರ್ಕಾರ ಮುಂದೆ ನಿಗದಿಪಡಿಸುವ ಹಣ ತೆತ್ತು ಕೆಲಸ ಮಾಡಿಕೊಳ್ಳಬೇಕಾಗುತ್ತದೆ.

–ಬ್ಯಾಂಕ್ ಶಿವಕುಮಾರ್, ಜೆ.ಪಿ.ನಗರ, ಮೈಸೂರು.



ಪ್ರೊ. ಆರ್. ಇಂದಿರಾ
ಸಮಾಜಶಾಸ್ತ್ರಜ್ಞೆ
ramaraoindira@gmail.com

ಸಮಾಜಮುಖಿ

ಎಲ್ಲರಿಗೂ ಆರೋಗ್ಯ: ಬರೀ ಘೋಷಣೆ ಮೊಳಗುತ್ತಿದೆ!

ಈ ವರ್ಷದ ವಿಶ್ವ ಆರೋಗ್ಯ ದಿನಾಚರಣೆಗೆ ಎರಡು ಪ್ರಮುಖ ಗುರಿಗಳಿವೆ. ಮೊದಲನೆಯದು, ಕಳೆದ 75 ವರ್ಷಗಳಲ್ಲಿ ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ನಾವು ಸ್ಥಾಪಿಸಿರುವ ಮೈಲಿಗಲ್ಲುಗಳ ಬಗ್ಗೆ ಹೆಮ್ಮೆಪಡುವುದು, ಎರಡನೆಯದಾಗಿ ಇಂದಿಗೂ ಮುಂದುವರೆದುಕೊಂಡು ಬಂದಿರುವ ಸವಾಲುಗಳನ್ನು ಗುರುತಿಸಿ ಅವುಗಳನ್ನು ಎದುರಿಸಲು ಮಾರ್ಗಗಳನ್ನು ಹುಡುಕುವುದು. 2020 ಮತ್ತು 2021ರಲ್ಲಿ ಜಗತ್ತಿನ ಆರೋಗ್ಯ ರಕ್ಷಕ ವ್ಯವಸ್ಥೆಗೆ ತೀವ್ರ ಸವಾಲನ್ನೆಸೆದ ಕೋವಿಡ್‌ನ ಭಯ ಇಂದು ಬಹುಮಟ್ಟಿಗೆ ನಿಯಂತ್ರಣದಲ್ಲಿದ್ದರೂ, ಲಸಿಕೆ ನೀಡಿಕೆ ಬಹುಮಟ್ಟಿಗೆ ಯಶಸ್ವಿಯಾಗಿದ್ದರೂ, ಅದು ಆರೋಗ್ಯ ರಕ್ಷಕ ಸೇವೆಗಳು ಹಾಗೂ ಅದರಲ್ಲಿ ನಿರತರಾಗಿರುವ ಸಿಬ್ಬಂದಿಯ ಬದುಕಿನಲ್ಲಿ ತಂದಿಟ್ಟ ಗೊಂದಲಗಳನ್ನು ಸರಿಪಡಿಸಿ ತಮ್ಮ ಬದುಕಿನ ನೆಲೆಗಳನ್ನೇ ಕಳೆದು ಕೊಂಡಿರುವವರಿಗೆ ನ್ಯಾಯ ಒದಗಿಸುವುದು.

ಮುಂದಿನ ವಾರ, ಅಂದರೆ ಏಪ್ರಿಲ್ 7ರಂದು ವಿಶ್ವ ಆರೋಗ್ಯ ಸಂಸ್ಥೆ ಅಸ್ತಿತ್ವಕ್ಕೆ ಬಂದು 75 ವರ್ಷಗಳು ಕಳೆದ ಸಂದರ್ಭವನ್ನು ಸಂಭ್ರಮಿಸಲು 'ಎಲ್ಲರಿಗೂ ಆರೋಗ್ಯ' ಘೋಷವಾಕ್ಯವನ್ನು ಮುಂದಿಟ್ಟುಕೊಂಡು ವಿಶ್ವ ಆರೋಗ್ಯ ದಿನಾಚರಣೆ ಆಚರಿಸಲಾಗುತ್ತಿದೆ. ಸುರಕ್ಷಿತ ಆರೋಗ್ಯ ಸೇವೆಗಳನ್ನು ಎಲ್ಲರಿಗೂ ಒದಗಿಸಬೇಕೆನ್ನುವುದೇ ಈ ದಿನದ ಆಶಯ. ಆದರೆ ನನಗೇನೋ ಇದು ಇಂದು–ನೆನ್ನೆ ಬಂದಂಥ ಆಲೋಚನೆಯೆನಿಸುತ್ತಿಲ್ಲ, ಏಕೆಂದರೆ 1978 ರಲ್ಲಿಯೇ ಸೋವಿಯತ್ ಒಕ್ಕೂಟದ ಅಲ್ಮಾ ಮಾಟದಲ್ಲಿ ನಡೆದ ಅಂತಾರಾಷ್ಟ್ರೀಯ ಆರೋಗ್ಯ ಸಮ್ಮೇಳನದಲ್ಲೇ ವಿಶ್ವದ ಎಲ್ಲೆಡೆ ಎಲ್ಲರಿಗೂ ಆರೋಗ್ಯ ಸೇವೆಗಳನ್ನು ಒದಗಿಸಬೇಕೆಂಬ ನಿರ್ಧಾರವನ್ನು ತೆಗೆದು ಕೊಂಡು 'ಎಲ್ಲರಿಗೂ ಆರೋಗ್ಯ' ಎಂಬ ಉದ್ದೇಶವನ್ನು ಗುರುತಿಸಲಾಗಿತ್ತು

ಆಗಿನ ಕಾಲಕ್ಕೆ ದೇಶ–ದೇಶಗಳ ನಡುವೆ, ಉಳ್ಳವರ ಮತ್ತು ಸಮಾಜದ ಅಂಚಿನಲ್ಲಿರುವವರ ನಡುವೆ ಹಾಗೂ ಮೂಲಭೂತ ಸೌಕರ್ಯಗಳನ್ನು ಪಡೆದಿದ್ದ ಮತ್ತು ಅವುಗಳಿಂದ ವಂಚಿತವಾದ ಪ್ರದೇಶಗಳ ನಡುವೆ, ಆರೋಗ್ಯ ರಕ್ಷಕ ಸೇವೆಗಳನ್ನು ಪಡೆಯುವುದರಲ್ಲಿ ಇದ್ದ ತಾರತಮ್ಯವನ್ನು ಸರಿಪಡಿಸಿ ಸಾರ್ವಜನಿಕ ಆರೋಗ್ಯ ರಕ್ಷಕ ವ್ಯವಸ್ಥೆಯ ಪ್ರಯೋಜನವನ್ನಾದರೂ ಎಲ್ಲರಿಗೂ ಒದಗಿಸಬೇಕೆಂಬುದು 'ಎಲ್ಲರಿಗೂ ಆರೋಗ್ಯ' ಎಂಬ ಘೋಷವಾಕ್ಯದ ಆಶಯವಾಗಿತ್ತು. ಸುಮಾರು ಕಾಲು ಶತಮಾನದ ನಂತರವೂ ಇದೇ ಆಶಯಕ್ಕೆ ಒತ್ತನ್ನು ನೀಡುತ್ತಿರುವುದೇಕೆ? ಶತಮಾನದ ಆರಂಭದಲ್ಲಿ ಇದ್ದ ಪರಿಸ್ಥಿತಿಗಳೇ ಇಂದಿಗೂ ಇವೆಯೇ? ಆರೋಗ್ಯ ಕ್ಷೇತ್ರದಲ್ಲಿ ತಂದಿರುವ ವಿಸ್ಮಯಕಾರಿ ಆವಿಷ್ಕಾರಗಳ ಪ್ರಯೋಜನಗಳು ಕೆಲವು ವರ್ಗಗಳನ್ನು ಮಾತ್ರ ತಲುಪುತ್ತಿವೆಯೇ? ಇವೇ ಮುಂತಾದ ಪ್ರಶ್ನೆಗಳನ್ನು ಎತ್ತಿ ಅವುಗಳಿಗೆ ಉತ್ತರಗಳನ್ನು ಹುಡುಕುವುದಕ್ಕೆ ಇದು ಪ್ರಶಸ್ತ ಕಾಲ.

'ಎಲ್ಲರಿಗೂ ಆರೋಗ್ಯ' ಎಂಬ 2023ರ ವಿಶ್ವ ಆರೋಗ್ಯ ದಿನಾಚರಣೆಯ ಆಶಯ ವಾಕ್ಯವನ್ನು ಚರ್ಚೆಗೆ ಒಳಪಡಿಸುವ ಮುನ್ನ ಆರೋಗ್ಯ ಎಂಬ ಪರಿಕಲ್ಪನೆಯನ್ನು ನಾವು ಬಹುಮುಖಿ ದೃಷ್ಟಿಕೋನದಿಂದ ವಿಶ್ಲೇಷಣೆಗೆ ಒಳಪಡಿಸಬೇಕಾಗುತ್ತದೆ. ಸಾಮಾನ್ಯವಾಗಿ ಆರೋಗ್ಯ ಎಂದರೆ ರೋಗ–ಮುಕ್ತ ಸ್ಥಿತಿ ಎಂದು ಅರ್ಥೈಸಲಾಗುತ್ತದೆ. ಆದರೆ ರೋಗವಿಲ್ಲದಿದ್ದರೆ ವ್ಯಕ್ತಿಗಳು ಆರೋಗ್ಯವಂತರಾಗಿದ್ದಾರೆ ಎಂದು ಹೇಳಲಾಗುವುದಿಲ್ಲ. ನಮ್ಮ ದೈಹಿಕ–ಮಾನಸಿಕ ಸಾಮರ್ಥ್ಯವನ್ನು ಸಂಪೂರ್ಣ ಪ್ರಮಾಣದಲ್ಲಿ ಉಪಯೋಗಿಸುವ, ಪೌಷ್ಟಿಕ ಆಹಾರವನ್ನು ಸೇವಿಸುವ, ಪರಿಶುದ್ಧ ನೀರನ್ನು ಬಳಸುವ, ಗಾಳಿ–ಬೆಳಕು ಇರುವ ಸುರಕ್ಷಿತ ನೆಲೆಗಳಲ್ಲಿ ಬದುಕುವ ಹಾಗೂ ಕನಿಷ್ಠ ಮಟ್ಟದ ಆರೋಗ್ಯ ರಕ್ಷಕ ಸೇವೆಗಳಿಗಾದರೂ ಲಭ್ಯತೆಯನ್ನು ಪಡೆದಿರುವ ಸ್ಥಿತಿಯಲ್ಲಿ ನಾವಿದ್ದರೆ ಮಾತ್ರ ನಾವು ಆರೋಗ್ಯವಾಗಿದ್ದೇವೆ ಎಂದು ಹೇಳಿಕೊಳ್ಳಬಹುದು. ಒಂದು ದೇಶದ ಜನ ಸಂಖ್ಯೆ ಯಲ್ಲಿ ಎಷ್ಟು ಮಂದಿ ಈ ಸ್ಥಿತಿಯಲ್ಲಿ ಇದ್ದಾರೆ ಎಂಬ ಸ್ಪಷ್ಟ ಚಿತ್ರಣ ದೊರೆತರೆ ಮಾತ್ರ ಆರೋಗ್ಯದ ಬಗ್ಗೆ ಅರ್ಥ ಪೂರ್ಣ ಚರ್ಚೆಯಲ್ಲಿ ತೊಡಗುವುದು ಸಾಧ್ಯ.



ಈ ವರ್ಷದ ವಿಶ್ವ ಆರೋಗ್ಯ ದಿನಾಚರಣೆಗೆ ಎರಡು ಪ್ರಮುಖ ಗುರಿಗಳಿವೆ. ಮೊದಲನೆಯದು, ಕಳೆದ 75 ವರ್ಷಗಳಲ್ಲಿ ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ನಾವು ಸ್ಥಾಪಿಸಿರುವ ಮೈಲಿಗಲ್ಲುಗಳ ಬಗ್ಗೆ ಹೆಮ್ಮೆಪಡುವುದು, ಎರಡನೆಯದಾಗಿ ಇಂದಿಗೂ ಮುಂದುವರೆದುಕೊಂಡು ಬಂದಿರುವ ಸವಾಲುಗಳನ್ನು ಗುರುತಿಸಿ ಅವುಗಳನ್ನು ಎದುರಿಸಲು ಮಾರ್ಗಗಳನ್ನು ಹುಡುಕುವುದು. 2020 ಮತ್ತು 2021ರಲ್ಲಿ ಜಗತ್ತಿನ ಆರೋಗ್ಯ ರಕ್ಷಕ ವ್ಯವಸ್ಥೆಗೆ ತೀವ್ರ ಸವಾಲ ನ್ನೆಸೆದ ಕೋವಿಡ್‌ನ ಭಯ ಇಂದು ಬಹುಮಟ್ಟಿಗೆ ನಿಯಂತ್ರಣದಲ್ಲಿದ್ದರೂ, ಲಸಿಕೆ ನೀಡಿಕೆ ಬಹುಮಟ್ಟಿಗೆ ಯಶಸ್ವಿಯಾಗಿದ್ದರೂ, ಅದು ಆರೋಗ್ಯ ರಕ್ಷಕ ಸೇವೆಗಳು ಹಾಗೂ ಅದರಲ್ಲಿ ನಿರತರಾಗಿರುವ ಸಿಬ್ಬಂದಿಯ ಬದುಕಿನಲ್ಲಿ ತಂದಿಟ್ಟ ಗೊಂದಲಗಳನ್ನು ಸರಿಪಡಿಸಿ ತಮ್ಮ ಬದುಕಿನ ನೆಲೆಗಳನ್ನೇ ಕಳೆದು ಕೊಂಡಿರುವವರಿಗೆ ನ್ಯಾಯ ಒದಗಿಸುವುದು ಈ ಬಾರಿಯ ವಿಶ್ವ ಆರೋಗ್ಯ ದಿನಾಚರಣೆಯ ಸಂದರ್ಭದಲ್ಲಿ ಚರ್ಚೆಯಾಗುತ್ತಿರುವ ಒಂದು ಪ್ರಮುಖ ವಿಚಾರ.

ಎಲ್ಲರಿಗೂ ಆರೋಗ್ಯ ಎಂಬ ಗುರಿಯನ್ನು ಇಟ್ಟುಕೊಂಡಿರುವ ವಿಶ್ವ ಆರೋಗ್ಯ ದಿನಾಚರಣೆ 2023ಕ್ಕೆ ಇರುವ ಮತ್ತೊಂದು ಬದ್ಧತೆಯೆಂದರೆ ಜಾಗತಿಕ ಮಟ್ಟದಲ್ಲಿ ರೋಗಗಳ ಹರಡುವಿಕೆಯನ್ನು ತಡೆಗಟ್ಟುವ ಪ್ರತಿರೋಧಕ ಲಸಿಕೆಗಳ ಬಳಕೆಯನ್ನು ಹೆಚ್ಚಿಸುವುದು. ಭಾರತದಲ್ಲೇನೋ ಲಸಿಕೆ ನೀಡುವಿಕೆಯ ಪ್ರಮಾಣ ಶೇ.60ರಷ್ಟಿದೆ ಎಂದು ಹೇಳಲಾಗುತ್ತಿದ್ದರೂ ಆಫ್ರಿಕಾ ಮತ್ತು ಏಷ್ಯಾದ ಸುಮಾರು 30ಕ್ಕೂ ಹೆಚ್ಚು ದೇಶಗಳಲ್ಲಿ ಕೋವಿಡ್ ಸೇರಿದಂತೆ ಇನ್ನೂ ಅನೇಕ ರೋಗಗಳಿಗೆ ರೋಗ ಪ್ರತಿರೋಧಕ ಶಕ್ತಿಯನ್ನು ಬೆಳೆಸುವ ಲಸಿಕೆಗಳು ದೊರೆತಿಲ್ಲ ಅಥವಾ ಆ ದೇಶಗಳ ಅನೇಕ ಪ್ರದೇಶಗಳಲ್ಲಿ ಲಸಿಕೆಗಳನ್ನು ತೆಗೆದು ಕೊಳ್ಳಲು ಹಿಂಜರಿಕೆ ಕಂಡು ಬರುತ್ತಿದೆ. ಈ ಪರಿಸ್ಥಿತಿಯನ್ನು ಎದುರಿಸಿ, ಕನಿಷ್ಠ ಎಲ್ಲ ಮಕ್ಕಳಿಗೂ ರೋಗ ಪ್ರತಿರೋಧಕ ಲಸಿಕೆಗಳನ್ನೂ ನೀಡುವಂಥ ವ್ಯವಸ್ಥೆಯನ್ನು ಸೃಷ್ಟಿ ಮಾಡುವುದು ವಿಶ್ವ ಆರೋಗ್ಯ ಸಂಸ್ಥೆಯ ಪ್ರಧಾನ ಕಾರ್ಯಸೂಚಿಗಳಲ್ಲಿ ಒಂದಾಗಬೇಕು. ಸುಮಾರು 20 ದೇಶಗಳಲ್ಲಿ ಕಳೆದ ಒಂದು ದಶಕದಿಂದೀಚೆಗೆ ಐದು ಕೋಟಿ ಮಕ್ಕಳಿಗೆ ಲಸಿಕೆಗಳನ್ನು ನೀಡಲಾಗಿರುವುದಿಲ್ಲ, ಈ ದೇಶಗಳಿಗೆ ಒತ್ತನ್ನು ನೀಡುವುದರ ಮೂಲಕ 2030ರ ವೇಳೆಗಾದರೂ ಒಂದೇ ಒಂದು ಲಸಿಕೆಯನ್ನೂ ತೆಗೆದುಕೊಂಡಿರದ ಶೇ.80ರಷ್ಟು ಮಕ್ಕಳನ್ನಾದರೂ ಲಸಿಕೆ ನೀಡುವ ಕಾರ್ಯಕ್ರಮಗಳ ವ್ಯಾಪ್ತಿಯ ಒಳಗೆ ತರಬೇಕೆಂಬ ಆಶಯ ಈಗ ವ್ಯಕ್ತವಾಗುತ್ತಿದೆ.

ಎಲ್ಲರಿಗೂ ಆರೋಗ್ಯ ಎಂಬ ಗುರಿಯನ್ನು ತಲುಪಲು ಕೆಲ ಪ್ರಮುಖ ಅಂಶಗಳತ್ತ ಗಮನ ಹರಿಸುವುದು ಅತ್ಯಾವಶ್ಯ ಎಂದು ವಿಶ್ವ ಆರೋಗ್ಯ ಸಂಸ್ಥೆ ಸೂಚಿಸಿದೆ. ಅವುಗಳಲ್ಲಿ ಮೊದಲನೆಯದು ಪೌಷ್ಟಿಕ ಆಹಾರ ಸೇವನೆ ಮತ್ತು ಶರೀರದ ಸಕ್ರಿಯ ಬಳಕೆ. ಅನೇಕ ಬಗೆಯ ಕ್ಯಾನ್ಸರ್, ಹೃದ್ರೋಗ, ಮಾನಸಿಕ ಖಿನ್ನತೆ, ಮಧುಮೇಹ ಮುಂತಾದ ಆರೋಗ್ಯ ಸಮಸ್ಯೆಗಳಿಗೆ ನಿಷ್ಕ್ರಿಯ ಜೀವನ ಶೈಲಿ ಮತ್ತು ಪೋಷಕಾಂಶಗಳಿಲ್ಲದ ಆಹಾರದ ಬಳಕೆ ಕಾರಣವಾಗುವುದರಿಂದ, ಜನರ ಸಾಮಾಜಿಕ – ಆರ್ಥಿಕ ಪರಿಸ್ಥಿತಿಗಳ ಗುಣಮಟ್ಟವನ್ನು ಏರಿಸುವುದು ಆರೋಗ್ಯ ಪಾಲನೆಗೆ ಬಹು ಮುಖ್ಯವಾದ ಅಂಶ. ತಂಬಾಕು ಮತ್ತು ಮಾದಕ ವಸ್ತುಗಳ ಸೇವನೆ ಮಾರಣಾಂತಿಕ ಕಾಯಿಗಳಿಗೆ ಕಾರಣವಾಗುತ್ತಿದ್ದು ಇದನ್ನು ಕುರಿತ ಜಾಗೃತಿಯನ್ನು ಮೂಡಿಸುವುದರ ಜೊತೆ–ಜೊತೆಗೆ ಮಾದಕ ದ್ರವ್ಯಗಳ ತಯಾರಿ ಹಾಗೂ ಮಾರಾಟವನ್ನು ಸುತ್ತುವರೆದಿರುವ ಜಾಲವನ್ನು ಭೇದಿಸುವುದೂ ವಿಶ್ವ ಸಂಸ್ಥೆ ಹಾಗೂ ಅದರ ಅಂಗ ಸಂಸ್ಥೆಗಳಿಗಿರುವ ಸವಾಲು.

ಅದರ ಪ್ರಮಾಣ ನಿಧಾನ ಗತಿಯಲ್ಲಿ ಇಳಿಮುಖವಾಗುತ್ತಿದೆ ಎಂದು ಹೇಳಲಾಗುತ್ತಿದೆಯಾದರೂ ಇಂದಿಗೂ ಜಾಗತಿಕ ಆರೋಗ್ಯ ರಕ್ಷಣಾ ಕ್ಷೇತ್ರಕ್ಕೆ ಇರುವ ಸವಾಲುಗಳಲ್ಲಿ ಸುಮಾರು 4 ಕೋಟಿ ಜನ ಎಚ್.ಐ.ವಿ. / ಏಡ್ಸ್ ನೊಂದಿಗೆ ಬದುಕುತ್ತಿದ್ದಾರೆ, ಅವರಲ್ಲಿ ಶೇ.68.ರಷ್ಟು ಮಂದಿಗೆ ಚಿಕಿತ್ಸೆ ದೊರೆಯುತ್ತಿಲ್ಲ ಎನ್ನುವುದು. ಎಚ್.ಐ.ವಿ./ಏಡ್ಸ್ ಪೀಡಿತರಲ್ಲಿ ಶೇ.70ರಷ್ಟು ಉಪ–ಸಹಾರದ ಆಫ್ರಿಕಾ ಪ್ರದೇಶದಲ್ಲಿದ್ದಾರೆ ಎನ್ನುವುದು, ಜಾಗತಿಕ ಮಟ್ಟದಲ್ಲಿ ಸುಮಾರು 7 ಲಕ್ಷ ಎಚ್.ಐ.ವಿ. / ಏಡ್ಸ್ ಪೀಡಿತರು 2019ರಲ್ಲಿ ಸಾವನ್ನಪ್ಪಿದರು ಎಂಬ ಅಂಕಿ–ಅಂಶಗಳು ಈ ಸಮಸ್ಯೆಯತ್ತ ಗಮನಹರಿಸುವುದು ಎಷ್ಟು ಮುಖ್ಯ ಎಂಬುದನ್ನು ತೋರಿಸುತ್ತಿದೆ.

ಈ ಬಾರಿಯ ವಿಶ್ವ ಆರೋಗ್ಯ ದಿನಾಚರಣೆಯಂದು ವಿಶೇಷ ಗಮನವನ್ನು ಹರಿಸ ಬೇಕಾದ ಮತ್ತೊಂದು ಕ್ಷೇತ್ರವೆಂದರೆ ಮಾನಸಿಕ ಆರೋಗ್ಯ ರಕ್ಷಣೆ. ಕೋವಿಡ್ ನಂತರದ ದಿನಗಳಲ್ಲಿ ಮಾನಸಿಕ ತುಮುಲಗಳಿಗೆ ಬಲಿಯಾಗುತ್ತಿರುವವರ ಸಂಖ್ಯೆಯಲ್ಲಿ ಗಮನಾರ್ಹವಾದ ಹೆಚ್ಚಳ ಕಂಡು ಬಂದಿದೆ. ಮಾನಸಿಕ ಅಸ್ವಸ್ಥತೆಯನ್ನು ಸುತ್ತುವರೆದಿರುವ ಪೂರ್ವಾಗ್ರಹ ಒಂದೆಡೆ, ಮಾನಸಿಕ ಅನಾರೋಗ್ಯಕ್ಕೆ ತುತ್ತಾದವರಿಗೆ ಸಮರ್ಪಕ ಚಿಕಿತ್ಸೆಯನ್ನು ನೀಡ ಬಲ್ಲಂಥ ಸಂಸ್ಥೆಗಳ ಅಲಭ್ಯತೆ ಮತ್ತೊಂದೆಡೆ –ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳದಿದ್ದರೆ ಮುಂಬರುವ ದಿನಗಳಲ್ಲಿ ಮಾನಸಿಕ ಅನಾರೋಗ್ಯ ಸಮಕಾಲೀನ ಸಮಾಜದ ಬಹು ಗಂಭೀರವಾದ ಆರೋಗ್ಯ ಸಮಸ್ಯೆಯಾಗಿ ಪರಿಣಮಿಸುವುದರಲ್ಲಿ ಸಂದೇಹವಿಲ್ಲ.

ಆರೋಗ್ಯ ರಕ್ಷಣೆ ಮತ್ತು ನಿರ್ವಹಣೆಗೂ ಬದುಕಿನ ಗುಣಮಟ್ಟದ ಏರಿಕೆಗೂ ನಡುವೆ ನಿಕಟ ಸಂಬಂಧವಿದ್ದು, ಶುದ್ಧ ಪರಿಸರ, ಪೌಷ್ಟಿಕ ಆಹಾರ, ಪ್ರಾಥಮಿಕ ಆರೋಗ್ಯ ಸೇವೆಗಳು ಮತ್ತು ಕನಿಷ್ಠ ಜೀವನಾವಶ್ಯಕತೆಗಳನ್ನಾದರೂ ಪೂರೈಸುವಂಥ ಆರ್ಥಿಕ ಬೆಂಬಲ ವ್ಯವಸ್ಥೆ– ಇವುಗಳನ್ನು ಒದಗಿಸುವುದು ವಿಶ್ವ ಆರೋಗ್ಯ ಸಂಸ್ಥೆಯ ಹೊಣೆ ಮಾತ್ರವಲ್ಲ. ಸಂಬಂಧಿಸಿದ ಸರ್ಕಾರಿ ಇಲಾಖೆಗಳು, ನಾಗರಿಕ ಸಮಾಜ, ವೈದ್ಯಕೀಯ ವಲಯ–ಇವುಗಳೆಲ್ಲ ಈ ಪ್ರಯತ್ನದಲ್ಲಿ ಕೈ ಜೋಡಿಸಿದರೆ ಮಾತ್ರ, ಈ ಅಸಮಾನ ಸಮಾಜದಲ್ಲಿ 'ಎಲ್ಲರಿಗೂ ಆರೋಗ್ಯ' ಎಂಬ ಆಶಯಕ್ಕೆ ಅರ್ಥ ಬರುವುದು.

ಚುನಾವಣೆ ವೇಳೆ ಎಲ್ಲರ ಆಟಾಟೋಪಗಳಿಗೆ ಲಂಗು ಲಗಾಮೇ

ಮಾದರಿ ನೀತಿ ಸಂಹಿತೆ

ಭಾರತದ ಚುನಾವಣಾ ಆಯೋಗವು ಕರ್ನಾಟಕ ವಿಧಾನಸಭೆ ಚುನಾವಣೆ 2023ರ ದಿನಾಂಕವನ್ನು ಪ್ರಕಟಿಸಿದೆ. ಕರ್ನಾಟಕದಲ್ಲಿ **ಮೇ 10, 2023ರಂದು** ಒಂದೇ ಹಂತದಲ್ಲಿ ಮತದಾನ ನಡೆಯಲಿದೆ ಮತ್ತು ಮೇ 13ರಂದು ಮತ ಎಣಿಕೆ ನಡೆಯಲಿದೆ.

ಚುನಾವಣಾ ದಿನಾಂಕದ ಘೋಷಣೆಯೊಂದಿಗೆ, ಮಾದರಿ ನೀತಿ ಸಂಹಿತೆಯೂ ಜಾರಿಗೆ ಬಂದಿದೆ. ನಾಯಕರು, ರಾಜಕೀಯ ಪಕ್ಷಗಳು ಮತ್ತು ಚುನಾವಣಾ ಪ್ರಕ್ರಿಯೆಗೆ ಸಂಬಂಧಿಸಿದ ಎಲ್ಲರೂ ಇದಕ್ಕೆ ಬದ್ಧರಾಗಿರಬೇಕಾಗುತ್ತದೆ.

ಮಾದರಿ ನೀತಿ ಸಂಹಿತೆ ಎಂದರೆ ಮುಕ್ತ ಮತ್ತು ನ್ಯಾಯ ಸಮ್ಮತವಾದ ಚುನಾವಣಾ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಆಯೋಗವು ಸೂಚಿಸಿದ ನಿಯಮಗಳ ಪಟ್ಟಿ. ಇದನ್ನು ಉಲ್ಲಂಘನೆ ಮಾಡಿದಲ್ಲಿ ಮತದಾನ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುವ ಚುನಾವಣಾ ಆಯೋಗ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆ ಇರುತ್ತದೆ.

- ಯಾವುದೇ ಪಕ್ಷ ಅಥವಾ ಅಭ್ಯರ್ಥಿಯು ಇರುವ ಭಿನ್ನಾಭಿಪ್ರಾಯಗಳನ್ನು ಉಲ್ಬಣಗೊಳಿಸುವಂತಹ ಅಥವಾ ಪರಸ್ಪರ ದ್ವೇಷವನ್ನು ಉಂಟುಮಾಡುವ ಅಥವಾ ವಿವಿಧ ಜಾತಿಗಳು ಮತ್ತು ಸಮುದಾಯಗಳ ನಡುವೆ, ಧಾರ್ಮಿಕ ಅಥವಾ ಭಾಷಿಕರ ನಡುವೆ ಉದ್ವಿಗ್ನತೆಯನ್ನು ಉಂಟುಮಾಡುವ ಯಾವುದೇ ಚಟುವಟಿಕೆಯನ್ನು ಕೈಗೊಳ್ಳಬಾರದು.
- ರಾಜಕೀಯ ಪಕ್ಷಗಳು ಮತ್ತು ಅದರ ಅಭ್ಯರ್ಥಿಗಳು ತಮ್ಮ ಪ್ರತಿಸ್ಪರ್ಧಿಗಳ ಟೀಕೆಗಳನ್ನು ರಾಜಕೀಯ, ಕಾರ್ಯಕ್ರಮಗಳು, ಹಿಂದಿನ ದಾಖಲೆ ಮತ್ತು ಕೆಲಸಗಳಿಗೆ ಸೀಮಿತಗೊಳಿಸಬೇಕು. ಯಾವುದೇ ಅಭ್ಯರ್ಥಿ ಅಥವಾ ರಾಜಕೀಯ ಪಕ್ಷವು ವೈಯಕ್ತಿಕ ಟೀಕೆಗಳನ್ನು ಅಥವಾ ನಾಯಕರು ಇಲ್ಲವೆ ಕಾರ್ಯಕರ್ತರ, ಸಾರ್ವಜನಿಕ ಚಟುವಟಿಕೆಗಳಿಗೆ ಸಂಬಂಧಿಸದ ಹೇಳಿಕೆಗಳನ್ನು ನೀಡುವಂತಿಲ್ಲ.
- ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳು ಅಥವಾ ಇತರ ನಾಯಕರು ಜಾತಿ ಅಥವಾ ಕೋಮು ಆಧಾರದ ಮೇಲೆ ಮತ ಕೇಳುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಧಾರ್ಮಿಕ ಕ್ಷೇತ್ರಗಳನ್ನು ಚುನಾವಣಾ ಪ್ರಚಾರದ ವೇದಿಕೆಯಾಗಿ ಬಳಸಿಕೊಳ್ಳಬಾರದು.
- ಎಲ್ಲಾ ಪಕ್ಷಗಳು, ಅಭ್ಯರ್ಥಿಗಳು ಮತದಾರರಿಗೆ ಲಂಚ ನೀಡುವುದು, ಮತದಾರರಿಗೆ ಬೆದರಿಕೆ ಹಾಕುವುದು, ಮತಗಟ್ಟೆಗಳ 100 ಮೀಟರ್ ವ್ಯಾಪ್ತಿಯಲ್ಲಿ ಪ್ರಚಾರ ನಡೆಸುವುದು, 48 ಗಂಟೆಗಳ ಅವಧಿಯಲ್ಲಿ ಹಾಗೂ ಮತದಾನದ ಮುಕ್ತಾಯಕ್ಕೆ ನಿಗದಿತ ಸಮಯ ಇತ್ಯಾದಿ ಸಮಯಾವಧಿಯಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸುವಂತಿಲ್ಲ.
- ವ್ಯಕ್ತಿಗಳ ಅಭಿಪ್ರಾಯಗಳು ಅಥವಾ ಚಟುವಟಿಕೆಗಳ ವಿರುದ್ಧ ಪ್ರತಿಭಟಿಸುವ ಮೂಲಕ ಅವರ ಮನೆಗಳ ಮುಂದೆ ಪ್ರದರ್ಶನಗಳು ಅಥವಾ ಪಿಕೆಟಿಂಗ್ ಅನ್ನು ಚುನಾವಣಾ ಸಮಿತಿಯು ನಿಷೇಧಿಸುತ್ತದೆ. ಅಲ್ಲದೆ, ಯಾವುದೇ ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗಳು ಯಾವುದೇ ವ್ಯಕ್ತಿಯ ಜಮೀನು, ಕಟ್ಟಡವನ್ನು ಅನುಮತಿಯಿಲ್ಲದೆ ಧ್ವಜಗಳು, ಬ್ಯಾನರ್‌ಗಳು, ಸೂಚನೆಗಳು ಮತ್ತು ಘೋಷಣೆಗಳನ್ನು ಬರೆಯಲು, ಅಳವಡಿಸಲು ಅವರ ಅನುಯಾಯಿಗಳಿಗೆ ಅನುಮತಿ ಇರುವುದಿಲ್ಲ.



- ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಯು ಯಾವುದೇ ಸಭೆ ನಡೆಸುವುದಾಗಿದ್ದರೆ ಸಾಕಷ್ಟು ಮುಂಚೆಯೇ ಅದರ ಬಗ್ಗೆ ಮಾಹಿತಿ ನೀಡಿ ಚುನಾವಣಾ ಆಯೋಗದಿಂದ ಅನುಮತಿ ಪಡೆದುಕೊಳ್ಳಬೇಕಾಗುತ್ತದೆ. ಉದ್ದೇಶಿತ ಸಭೆಯ ಸ್ಥಳ ಮತ್ತು ಸಮಯವನ್ನು ಸಾಕಷ್ಟು ಮುಂಚಿತವಾಗಿ ಸ್ಥಳೀಯ ಪೊಲೀಸ್ ಅಧಿಕಾರಿಗಳಿಗೆ ತಿಳಿಸಬೇಕು. ಧ್ವನಿವರ್ಧಕ ಬಳಸಲು ಸ್ಥಳೀಯ ಪ್ರಾಧಿಕಾರವು ಸೂಚಿಸಿದಂತೆ ಸೂಕ್ತ ಅನುಮತಿಯನ್ನು ಪಡೆಯಬೇಕು.
- ಸಂಘಟಿತ ಮೆರವಣಿಗೆಯ ಬಗ್ಗೆ ಸ್ಥಳೀಯ ಪೊಲೀಸ್ ಅಧಿಕಾರಿಗಳಿಗೆ ಸಾಕಷ್ಟು ಮುಂಚಿತವಾಗಿ ಮಾಹಿತಿಯನ್ನು ನೀಡಬೇಕು, ಚುನಾವಣಾ ಆಯೋಗದ ಮಾದರಿ ನೀತಿ ಸಂಹಿತೆ ಅಂತಹ ಪ್ರಚಾರದ ಸಮಯದಲ್ಲಿ ಅನುಸರಿಸಲೇಬೇಕಾದ ನಿಯಮಗಳನ್ನು ರೂಪಿಸಿದೆ. ಸಂಚಾರಕ್ಕೆ ಯಾವುದೇ ಅಡಚಣೆಯಾಗದಂತೆ ಸಂಘಟಕರು ಮುಂಚಿತವಾಗಿಯೇ ಕ್ರಮಕೈಗೊಳ್ಳಬೇಕು. ರಾಜಕೀಯ ಪಕ್ಷಗಳು ಅಥವಾ ಅಭ್ಯರ್ಥಿಗಳು ಇಂಥ ಸಂದರ್ಭಗಳಲ್ಲಿ ಗರಿಷ್ಠ ಪ್ರಮಾಣದಲ್ಲಿ ಹಿಡಿತ ಸಾಧಿಸಬೇಕು. ದುರುಪಯೋಗವಾಗಬಹುದಾದ ಭಿತ್ತಿ ಪತ್ರಗಳನ್ನು ಕೊಂಡೊಯ್ಯುವುದು ಅಥವಾ ವಿರೋಧ ಪಕ್ಷಗಳು ಮತ್ತು ನಾಯಕರ ಪ್ರತಿಕೃತಿಗಳನ್ನು ಒಯ್ಯುವುದನ್ನು ಅನುಮತಿಸಲಾಗುವುದಿಲ್ಲ
- ಮತದಾನದ ದಿನದಂದು, ಎಲ್ಲಾ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳು ಶಾಂತಿಯುತ ಮತ್ತು ಕ್ರಮಬದ್ಧವಾದ ಮತದಾನವನ್ನು ಖಚಿತಪಡಿಸಿಕೊಳ್ಳಲು ಚುನಾವಣಾ ಕರ್ತವ್ಯದಲ್ಲಿರುವ ಅಧಿಕಾರಿಗಳಿಗೆ ಸಹಕರಿಸಬೇಕು. ಅವರು ಮತದಾನದ ದಿನದಂದು ಮತ್ತು ಅದಕ್ಕೂ ಮುನ್ನ 48 ಗಂಟೆಗಳ ಅವಧಿಯಲ್ಲಿ ಮದ್ಯ ಮಾರಾಟ ಅಥವಾ ವಿತರಿಸುವುದನ್ನು ತಡೆಯಬೇಕು.
- ಮತದಾರರನ್ನು ಹೊರತುಪಡಿಸಿ, ಚುನಾವಣಾ ಆಯೋಗದಿಂದ ಮಾನ್ಯವಾದ ಪಾಸ್ ಇಲ್ಲದ ಯಾರಿಗೂ ಮತಗಟ್ಟೆಗಳನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.
- ಕೇಂದ್ರ ಅಥವಾ ರಾಜ್ಯಗಳ ಆಡಳಿತ ಪಕ್ಷವು ಚುನಾವಣಾ ಪ್ರಚಾರದ ಉದ್ದೇಶಗಳಿಗಾಗಿ ಸರ್ಕಾರಿ ವ್ಯವಸ್ಥೆಯನ್ನು ಬಳಸುತ್ತಿಲ್ಲ ಎಂದು ಖಚಿತಪಡಿಸಿಕೊಳ್ಳಬೇಕು. ಮಂತ್ರಿಗಳು ತಮ್ಮ ಅಧಿಕೃತ ಭೇಟಿಯನ್ನು ಚುನಾವಣಾ ಪ್ರಚಾರಗಳೊಂದಿಗೆ ಸಂಯೋಜಿಸಬಾರದು ಮತ್ತು ಪ್ರಚಾರಕ್ಕಾಗಿ ಅಧಿಕೃತ ಸರ್ಕಾರಿ ವ್ಯವಸ್ಥೆಯನ್ನು ಅಥವಾ ಸಿಬ್ಬಂದಿಯನ್ನು ಬಳಸಬಾರದು.
- ಚುನಾವಣೆಗೆ ಸಂಬಂಧಿಸಿದಂತೆ ಮೈದಾನಗಳು, ಹೆಲಿಪ್ಯಾಡ್‌ಗಳಂತಹ ಸಾರ್ವಜನಿಕ ಸ್ಥಳಗಳು ಆಡಳಿತ ಪಕ್ಷದ ಏಕಸ್ವಾಮ್ಯಕ್ಕೆ ಒಳಗಾಗಬಾರದು. ಇತರ ಪಕ್ಷಗಳು ಮತ್ತು ಅಭ್ಯರ್ಥಿಗಳು ಅಂತಹ ಸ್ಥಳಗಳು ಮತ್ತು ಸೌಲಭ್ಯಗಳನ್ನು ಆಡಳಿತ ಪಕ್ಷವು ಬಳಸುವ ಅದೇ ಷರತ್ತುಗಳು ಮತ್ತು ನಿಯಮಗಳ ಮೇಲೆ ಬಳಸಲು ಅನುಮತಿಸಬೇಕು.
- ಚುನಾವಣೆಯ ಸಂದರ್ಭದಲ್ಲಿ ಸರ್ಕಾರಿ ವಾಹನ ಅಥವಾ ಸರ್ಕಾರಿ ವಿಮಾನವನ್ನು ಯಾವುದೇ ರೀತಿಯಲ್ಲಿ ಚುನಾವಣಾ ಪ್ರಚಾರಕ್ಕೆ ಬಳಸುವಂತಿಲ್ಲ. ನೀತಿ ಸಂಹಿತೆ ಜಾರಿ ಯಾದ ನಂತರ ಯಾವುದೇ ರೀತಿಯ ಸರ್ಕಾರಿ ಘೋಷಣೆಗಳು, ಉದ್ಘಾಟನೆ, ಶಂಕುಸ್ಥಾಪನೆ ಅಥವಾ ಭೂಮಿಪೂಜೆ ಕಾರ್ಯ ಕ್ರಮಗಳನ್ನು ನಿಷೇಧಿಸಲಾಗಿದೆ.
- ಪಕ್ಷಗಳು ಯಾವುದೇ ಸಭೆ ಅಥವಾ ಕೂಟವನ್ನು ನಡೆಸಬೇಕಾದರೆ, ಅದಕ್ಕಾಗಿ ಆ ಪ್ರದೇಶದ ಸ್ಥಳೀಯ ಪೊಲೀಸರಿಗೆ ಅದರ ಬಗ್ಗೆ ತಿಳಿಸಬೇಕಾಗುತ್ತದೆ ಮತ್ತು ಇದಕ್ಕಾಗಿ ಸಂಬಂಧಪಟ್ಟ ಅಧಿಕಾರಿಯ ಅನುಮತಿ ಕೂಡ ಅಗತ್ಯ.
- ಚುನಾವಣಾ ಆಯೋಗವು ಪ್ರತಿ ಮತಗಟ್ಟೆಯ ಹೊರಗೆ ನಿರೀಕ್ಷಕರನ್ನು ನಿಯೋಜಿಸುತ್ತದೆ. ಇದರಿಂದ ಯಾರಾದರೂ ನೀತಿ ಸಂಹಿತೆ ಉಲ್ಲಂಘಿಸಿದರೆ ಅವರಿಗೆ ದೂರು ನೀಡಬಹುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com



ವಜ್ರಮುನಿಯಾದ ಕೋಮಲ್



ನಟ ಕೋಮಲ್ ಕುಮಾರ್ ಮೊದಲ ಬಾರಿಗೆ ದ್ವಿಪಾತ್ರದಲ್ಲಿ ನಟಿಸುತ್ತಿರುವ 'ಯಲಾ ಕುನ್ನಿ' ಚಿತ್ರದ ಮುಹೂರ್ತ ಇತ್ತೀಚೆಗೆ ನೆರವೇರಿತು. ಹಿರಿಯ ನಟ ವಜ್ರಮುನಿ ಅವರ ಧರ್ಮಪತ್ನಿ ಲಕ್ಷ್ಮೀ ಅವರು ಕ್ಯಾಮರಾ ಚಾಲನೆ ಮಾಡಿದರೆ, ಹಿರಿಯ ಪುತ್ರ ವಿಶ್ವನಾಥ್ ಆರಂಭ ಫಲಕ ತೋರಿದರು.

ವಜ್ರಮುನಿ ಅವರು ತಮ್ಮ ಪಾತ್ರಕ್ಕೆ ಹೆಚ್ಚಾಗಿ ಬಳಸುತ್ತಿದ್ದ ಪದ ಯಲಾಕುನ್ನಿ. ಈಗ ಆ ಪದವನ್ನಿಟ್ಟುಕೊಂಡು ಪ್ರದೀಪ್ ಈ ಚಿತ್ರ ನಿರ್ದೇಶನ ಮಾಡುತ್ತಿದ್ದಾರೆ. 'ಮೇರಾ ನಾಮ್ ವಜ್ರಮುನಿ..!' ಎಂಬ ಅಡಿಬರಹ ಕೂಡ ಇದಕ್ಕಿದೆ.


ನಾಯಕ ಕೋಮಲ್ ಮಾತನಾಡುತ್ತಾ, ನಾನು ಮೊದಲ ಬಾರಿಗೆ ದ್ವಿಪಾತ್ರದಲ್ಲಿ ಅಭಿನಯಿಸುತ್ತಿದ್ದೇನೆ. ಚಿತ್ರದ ಮುಕ್ಕಾಲು ಭಾಗ 1981ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಶ್ರೀರಂಗಪಟ್ಟಣ, ಮೈಸೂರು ಸುತ್ತಮುತ್ತ ಅಲ್ಲದೆ ಗಂಜಾಂ ಬಳಿಯ ಪುರಾತನ ದೇವಾಲಯದಲ್ಲಿ ಹೆಚ್ಚಿನ ಭಾಗದ ಚಿತ್ರೀಕರಣ ನಡೆಸುತ್ತಿದ್ದೇವೆ. ಚಿತ್ರಕ್ಕಾಗಿ ವಿಶೇಷ ಸೆಟ್ ಸಹ ಹಾಕಲಾಗುವುದು ಎಂದು ಹೇಳಿದರು. ನಿರ್ದೇಶಕ ಪ್ರದೀಪ್ ಮಾತನಾಡಿ, ನನ್ನ ನಿರ್ದೇಶನದ ಮೊದಲ ಚಿತ್ರವಿದು. ಹಿಂದೆ 'ಸಡಗರ' ಚಿತ್ರ ನಿರ್ಮಿಸಿದ್ದ ಮಹೇಶ್ ಗೌಡ್ರು ನಿರ್ಮಾಣ ಮಾಡುತ್ತಿದ್ದಾರೆ. ವಜ್ರಮುನಿಯವರ ಮೊಮ್ಮಗ ಆಕರ್ಷ್ ಈ ಚಿತ್ರದ ಮೂಲಕ ಚಿತ್ರರಂಗಕ್ಕೆ ಕಾಲಿಡುತ್ತಿದ್ದಾರೆ. ನಾಯಕಿಯಾಗಿ ನಿಸರ್ಗ, ಯತಿರಾಜ್ ಜಗ್ಗೇಶ್, ಫ್ರೆಂಚ್ ಬಿರಿಯಾನಿ ಮಹಾಂತೇಶ್, ಜಯಸಿಂಹ ಮುಸುರಿ, ಅರವಿಂದ್ ರಾವ್, ಮಂಜು ಪಾವಗಡ, ರಾಜು ತಾಳಿಕೋಟೆ, ಶಿವರಾಜ್, ಬಿರಾದರ್, ವೆಂಕಟೇಶ್ ಪ್ರಸಾದ್, ಉಮೇಶ್ ಸಕ್ಕರೆನಾಡು, ಅನಿಲ್ ಯಾದವ್ ಇನ್ನು ಮುಂತಾದವರಿದ್ದಾರೆ. ಧರ್ಮವಿಶ್ ಅವರ ಸಂಗೀತ ನಿರ್ದೇಶನ ಹಾಗೂ ಉದಯ್ ಲೀಲಾ ಅವರ ಛಾಯಾಗ್ರಹಣ ಚಿತ್ರಕ್ಕಿದೆ. ಚಿತ್ರದಲ್ಲಿ ಕೋಮಲ್ ಕುಮಾರ್ ವಜ್ರಮುನಿಯಾದರೆ, ಅವರ ಬಲಗೈ ಬಂಟನಾಗಿ ಜಯಸಿಂಹ ಮುಸುರಿ 'ಕನೆಕ್ಷನ್ ಕಾಳಪ್ಪ'ನಾಗಿ ಕಾಣಿಸಿಕೊಳ್ಳಲಿದ್ದಾರೆ. ಚಿತ್ರದ ಹಿನ್ನಲೆ ಗೋವಿನ ಹಾಡಿನಲ್ಲಿ ಬರುವ ವ್ಯಾಘ್ರ ಹುಲಿ ಅರ್ಭುತ ಮತ್ತು ಸತ್ಯವೇ ಭಗವಂತನೆಂದ ಪುಣ್ಯಕೋಟಿಯ ಕಥೆಯಿಂದ ಪ್ರೇರಿತವಾಗಿದೆ. ಏಪ್ರಿಲ್‌ನಲ್ಲಿ ಚಿತ್ರೀಕರಣ ಆರಂಭವಾಗಲಿದೆ ಎಂದು ತಿಳಿಸಿದರು.

ನಿರ್ಮಾಪಕ ಮಹೇಶ್ ಗೌಡ್ರು ಮಾತನಾಡಿ ನಮ್ಮ ಬ್ಯಾನರ್‌ನಲ್ಲಿ ನಿರ್ಮಾಣವಾಗುತ್ತಿರುವ ಎರಡನೇ ಚಿತ್ರವಿದು ಎಂದರು. ನಾಯಕಿ ನಿಸರ್ಗ, ಯತಿರಾಜ್, ಮಹಂತೇಶ್, ಆಕರ್ಷ್, ಅರವಿಂದ್ ರಾವ್, ಮಂಜು ಪಾವಗಡ ತಮ್ಮ ಪಾತ್ರದ ಬಗ್ಗೆ ಮಾತನಾಡಿದರು. ಛಾಯಾಗ್ರಾಹಕ ಉದಯ್ ಲೀಲಾ ಪತ್ರಿಕಾ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

'ತಾಯ್ತಿ' ಚಿತ್ರದ ಟೀಸರ್ ಬಿಡುಗಡೆ

ಎಂ.ಎಸ್ ಪ್ರೊಡಕ್ಷನ್ಸ್ ಲಾಂಛನದಲ್ಲಿ ಶಾಹಿದ್ ಅವರು ನಿರ್ಮಿಸಿರುವ, ಲಯ ಕೋಕಿಲ ನಿರ್ದೇಶನದ 'ತಾಯ್ತಿ' ಚಿತ್ರದ ಟೀಸರ್ ಇತ್ತೀಚೆಗೆ ಜಂಕಾರ್ ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಭಾ.ಮ.ಹರೀಶ್, ಹಿರಿಯ ನಿರ್ದೇಶಕ ಸಾಯಿಪ್ರಕಾಶ್, ನಟ ಧರ್ಮ ಮುಖ್ಯ ಅತಿಥಿಗಳಾಗಿ ಆಗಮಿಸಿ ಟೀಸರ್ ಬಿಡುಗಡೆ ಮಾಡಿ ಶುಭ ಕೋರಿದರು. ನಿರ್ದೇಶಕ ಲಯಕೋಕಿಲ ಮಾತನಾಡಿ, ಯಾರಾದರೂ ತುಂಬಾ ಹೆದರಿಕೊಂಡಾಗ 'ತಾಯ್ತ' ಕಟ್ಟಿಸಿಕೊ ಎಂದು ಹೇಳುತ್ತಾರೆ. ನನ್ನ ಮೊದಲ ನಿರ್ದೇಶನದ ಚಿತ್ರಕ್ಕೆ 'ತಾಯ್ತಿ' ಎಂದು ಹೆಸರಿಟ್ಟಿದ್ದೀನಿ. ಇದು ಪ್ರೇಮಕಥೆಯಾದರೂ, ಇದರಲ್ಲಿ ಹಾರರ್, ಥ್ರಿಲ್ಲರ್, ಕಾಮಿಡಿ ಎಲ್ಲವೂ ಇದೆ. ಶಾಹಿದ್ ಈ ಚಿತ್ರದ ನಿರ್ಮಾಪಕರು. ರಿಯಾನ್ ಈ ಚಿತ್ರದ ನಾಯಕ. ಹರ್ಷಿಕಾ ಪೂಣಚ್ಚ ನಾಯಕಿ. ಸಾಧುಕೋಕಿಲ, ಪುಷ್ಪಸ್ವಾಮಿ, ಶಾಹಿದ್, ಶೋಭ್ ರಾಜ್ ಅವರ ಜೊತೆಗೆ ನಾನು ಸಹ ಈ ಚಿತ್ರದಲ್ಲಿ ಅಭಿನಯಿಸಿದ್ದೇನೆ. ಸಂಗೀತ ಕೂಡ ನೀಡಿದ್ದೇನೆ ಎಂದರು.

ಈ ಚಿತ್ರದಲ್ಲಿ ನಾನು ಖುಷಿ ಎಂಬ ಹೆಸರಿನ ಕಾಲೇಜು ವಿದ್ಯಾರ್ಥಿ ಪಾತ್ರದಲ್ಲಿ ನಟಿಸಿದ್ದೇನೆ. ಇದು ನಾನು ಅಭಿನಯಿಸಿರುವ ಮೊದಲ ಹಾರರ್ ಚಿತ್ರ. ಕಾಲೇಜ್ ವಿದ್ಯಾರ್ಥಿಗಳು ಪ್ರವಾಸಕ್ಕೆಂದು ಒಂದು ಸ್ಥಳಕ್ಕೆ ಹೋದಾಗ ಅಲ್ಲಿ ಏನೇನು ಆಗುತ್ತದೆ ಎಂಬುದನ್ನು ಚಿತ್ರದಲ್ಲೇ ನೋಡಬೇಕು ಎಂದು



ನಾಯಕಿ ಹರ್ಷಿಕಾ ಪೂಣಚ್ಚ ತಿಳಿಸಿದರು. ಕಥೆ ಇಷ್ಟವಾಗಿ, ನಿರ್ಮಾಣಕ್ಕೆ ಮುಂದಾದೆ. ಚಿಕ್ಕಮಗಳೂರು, ಬೇಲೂರು ಮುಂತಾದ ಕಡೆ ಚಿತ್ರೀಕರಣ ಮಾಡಿದ್ದೇವೆ. ನಾನು ಕೂಡ ನಟಿಸಿದ್ದೇನೆ. ಚಿತ್ರ ತೆರೆಗೆ ಬರಲು ಸಿದ್ಧವಾಗಿದೆ ಎಂದರು ನಿರ್ಮಾಪಕ ಶಾಹಿದ್.

ಯುದ್ಧದ ಭೀತಿಯ ಸುತ್ತ 'ಸಿಗ್ನಲ್ ಮ್ಯಾನ್ 1971'



ಹಿಂದೂಸ್ತಾನ್ ಮುಕ್ತ ಮೀಡಿಯಾ ಎಂಟರ್ ಟೇನರ್ಸ್ ಲಾಂಛನದಲ್ಲಿ ಗಣೇಶ್ ಪ್ರಭು ನಿರ್ಮಿಸಿರುವ, ಕೆ.ಶಿವರುದ್ರಯ್ಯ ನಿರ್ದೇಶಿಸಿರುವ, ಪ್ರಕಾಶ್ ಬೆಳವಾಡಿ ವಿಭಿನ್ನ ಪಾತ್ರದಲ್ಲಿ ನಟಿಸಿರುವ 'ಸಿಗ್ನಲ್ ಮ್ಯಾನ್ 1971' ಚಿತ್ರ ತೆರೆಗೆ ಬರಲು ಸಿದ್ಧವಾಗಿದೆ. ಚಿತ್ರದ ಕೆಲವು ವಿಷಯಗಳನ್ನು ಚಿತ್ರತಂಡ ಪತ್ರಿಕಾಗೋಷ್ಠಿಯಲ್ಲಿ ಹಂಚಿಕೊಂಡಿದೆ. ನಿರ್ದೇಶಕ ಕೆ.ಶಿವರುದ್ರಯ್ಯ ಮಾತನಾಡಿ, ಲೇಖಕ ಚಾರ್ಲ್ಸ್ ಡಿಕನ್ಸ್ ಅವರ 'ಸಿಗ್ನಲ್ ಮ್ಯಾನ್' ಕಥೆಯಿಂದ ಸ್ಫೂರ್ತಿ ಪಡೆದ ನಾನು ಈ ಚಿತ್ರ ಮಾಡಬೇಕೆಂದುಕೊಂಡೆ. ಈ ವಿಷಯವನ್ನು ಪ್ರಕಾಶ್ ಬೆಳವಾಡಿ ಅವರ ಹತ್ತಿರ ಹೇಳಿದಾಗ, ಈ ಕಥೆಯನ್ನು ಭಾರತ ದೇಶಕ್ಕೆ ತಕ್ಕ ಹಾಗೆ ಅವರು ಕಥೆ ಹೆಣೆದು ಕೊಟ್ಟರು. 1971ರ ಕಾಲಘಟ್ಟದಲ್ಲಿ ನಡೆಯುವ ಕಥೆಯಿದು. ಆಗಷ್ಟೇ ಭಾರತ–ಪಾಕ್ ಯುದ್ಧದ ಭೀತಿ ದೇಶದೆಲ್ಲೆಡೆ ಇರುತ್ತದೆ. ಅಂತಹ ಸಮಯದಲ್ಲಿ ನಡೆಯುವ ಕಥೆ 'ಸಿಗ್ನಲ್ ಮ್ಯಾನ್ 1971'. ಅದೊಂದು ಪಶ್ಚಿಮ ಘಟ್ಟದ ರೈಲ್ವೆ ನಿಲ್ದಾಣ. ಆದರೆ ಅಲ್ಲಿ ರೈಲು ನಿಲುವುದಿಲ್ಲ ಆ ನಿಲ್ದಾಣದಲ್ಲೊಬ್ಬ ಬಾಲು ಎಂಬ 'ಸಿಗ್ನಲ್ ಮ್ಯಾನ್'. ಅಲ್ಲಿಗೆ ಆತನೇ ಎಲ್ಲಾ. ಅಂತಹ ಸುಂದರ ಪರಿ ಸರದಲ್ಲಿರುವ ನಿಲ್ದಾಣಕ್ಕೆ ಅನಿರೀಕ್ಷಿತವಾಗಿ ಫೋಟೋಗ್ರಾಫರ್ ರಾಜಶೇಖರ್ ಆಗಮನವಾಗುತ್ತದೆ. ಬಾಲುವಿನ ಒಂಟಿ ತನ, ತಳಮಳ, ಹಿಂದಿನ ನೆನಪುಗಳು, ಯುದ್ಧದ ಭೀತಿ. ಸೈನಿಕರನ್ನು ಹೊತ್ತೊಯ್ಯುವ ರೈಲುಗಳು. ಇವೆಲ್ಲವೂ ಐದು ದಿನಗಳಲ್ಲಿ ತೆರೆದುಕೊಳ್ಳುತ್ತಾ ಹೋಗುತ್ತದೆ. ಈ ಬಾರಿಯ ಬೆಂಗಳೂರು ಅಂತರ ರಾಷ್ಟ್ರೀಯ ಚಲನಚಿತ್ರೋತ್ಸವದಲ್ಲೂ ನಮ್ಮ ಚಿತ್ರ ಪ್ರದರ್ಶನವಾಗುತ್ತಿದೆ. ಉತ್ತಮ ತಂತ್ರಜ್ಞರ ಹಾಗೂ ಕಲಾವಿದರ ಸಹಕಾರದಿಂದ ಚಿತ್ರ ಅದ್ದೂರಿಯಾಗಿ ಬಂದಿದೆ. ಇದು ನನ್ನ 11ನೇ ನಿರ್ದೇಶನದ ಚಿತ್ರ ಎಂದರು. ನನಗೆ ಶಿವರುದ್ರಯ್ಯ ಅವರು ಈ ಕಾನ್ಸೆಪ್ಟ್ ಬಗ್ಗೆ ಹೇಳಿ, ನೀವು ಅಭಿನಯಿಸಬೇಕು ಎಂದರು. ಆನಂತರ ಕಥೆಯನ್ನು ನೀವೇ ಬರೆಯಿರಿ ಎಂದು ಹೇಳಿದರು. ನಾನು ಈ ಕಥೆಯನ್ನು ಭಾರತದ ಸೊಗಡಿಗೆ ತಕ್ಕ ಹಾಗೆ ಬರೆದಿದ್ದೇನೆ. ಊಟಿಯ ಬಳಿ ಹೆಚ್ಚು ಚಿತ್ರೀಕರಣ ನಡೆದಿದೆ. ಕೊಟ್ಟಿಗೆಹಾರ, ಚಿಕ್ಕಮಗಳೂರು, ಬೆಂಗಳೂರಿನಲ್ಲೂ ಚಿತ್ರೀಕರಣವಾಗಿದೆ. ಈ ಚಿತ್ರಕ್ಕಾಗಿ ಅದ್ದೂರಿ ಸೆಟ್ ನಿರ್ಮಿಸ ಲಾಗಿತ್ತು. ರೈಲು ಈ ಚಿತ್ರದ ಒಂದು ಭಾಗ ವಾಗಿತ್ತು. ಸಹ ಕಲಾವಿದರ ಅಭಿನಯ ಹಾಗೂ ತಂತ್ರಜ್ಞರ ಕಾರ್ಯವೈಖರಿ ಸೊಗಸಾಗಿತ್ತು ಎಂದು ನಟ ಹಾಗೂ ಕಥೆಗಾರ ಪ್ರಕಾಶ್ ಬೆಳವಾಡಿ ತಿಳಿಸಿದರು. ನಾನು ಉದ್ಯಮಿ. ಈ ಚಿತ್ರದ ಕಥೆ ಇಷ್ಟವಾಯಿತು ನಿರ್ಮಾಣಕ್ಕೆ ಮುಂದಾದೆ. ಮುಂದೆ ಸದಭಿರುಚಿ ಚಿತ್ರಗಳನ್ನು ನಿರ್ಮಿಸುವ ಆಸೆ ಇದೆ ಎಂದರು ನಿರ್ಮಾಪಕ ಗಣೇಶ್ ಪ್ರಭು.

ಹೇಮಂತ್ ಹೆಗಡೆ ನಿರ್ದೇಶನದ 'ನೆಟ್ ವರ್ಕ್' ಚಿತ್ರಕ್ಕೆ ಚಾಲನೆ




ಪ್ರಭಂಜನ ಅವರು ನಿರ್ಮಿಸುತ್ತಿ ರುವ, ಹೇಮಂತ್ ಹೆಗಡೆ ನಿರ್ದೇ ಶನದ 'ನೆಟ್ ವರ್ಕ್' ಚಿತ್ರದ ಮುಹೂರ್ತ ಇತ್ತೀಚೆಗೆ ನಡೆಯಿತು. ನೆಟ್‌ವರ್ಕ್ ಸಾಕಷ್ಟು ಜನರು ಎದುರಿಸುತ್ತಿರುವ ಸಮಸ್ಯೆ. ಮೊಬೈಲ್‌ನಿಂದ ಉಪ ಯೋಗ ಇರುವ ಹಾಗೆ, ದುಷ್ಪರಿಣಾಮಗಳು ಹೆಚ್ಚಿದೆ. ಮೊಬೈಲ್ ಬಂದ ಮೇಲೆ ಮಕ್ಕಳು ಆಟವಾಡುವುದನ್ನು ಮರೆತಿದ್ದಾರೆ. ಮನೆಯಲ್ಲೂ ಅಷ್ಟೇ. ಮೂರು ಜನ ಇದ್ದರೆ, ಮೂರು ಕಡೆ ಮೊಬೈಲ್ ನೋಡುವುದರಲ್ಲಿ ತಲೀನರಾಗಿರುತ್ತಾರೆ. ಹೀಗೆ ಈ ಸಮಸ್ಯೆಗಳ ಸುತ್ತ 'ನೆಟ್‌ವರ್ಕ್' ಚಿತ್ರದ ಕಥೆ ಸಾಗುತ್ತದೆ. 30 ವರ್ಷಗಳ ಹಿಂದೆ ಗೆಳೆಯರೆಲ್ಲ ಸೇರಿ "ದೃಷ್ಟಿ" ಎಂಬ ಸಂಸ್ಥೆ ಕಟ್ಟಿದ್ದೆವು. ಆ ತಂಡದಲ್ಲಿದ್ದ ಬಹುತೇಕರು ಈ ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಸಾಫ್ಟ್‌ವೇರ್ ಕಂಪನಿ ನಡೆಸುತ್ತಿರುವ ಪ್ರಭಂಜನ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಮೇ 15 ರಿಂದ ಬೆಂಗಳೂರಿನಲ್ಲೇ ಚಿತ್ರೀಕರಣ ಆರಂಭವಾಗಲಿದೆ ಎಂದು ನಟ ಹಾಗೂ ನಿರ್ದೇಶಕ ಹೇಮಂತ್ ಹೆಗಡೆ ಹೇಳಿದರು. ಹೇಮಂತ್ ಹೆಗಡೆ ಅವರು ಹೇಳಿದ ಕಥೆ ಇಷ್ಟವಾಗಿ ನಿರ್ಮಾಣಕ್ಕೆ ಮುಂದಾದೆ ಎಂದರು ನಿರ್ಮಾಪಕ ಪ್ರಭಂಜನ. ಚಿತ್ರದಲ್ಲಿ ನಟಿಸುತ್ತಿರುವ ರಾಜೇಶ್ ನಟರಂಗ, ಸುಚೇಂದ್ರ ಪ್ರಸಾದ್, ಕೆ.ಎಂ.ಚೈತನ್ಯ, ಸಾಕ್ಷಿ ಮೇಘನ, ರಕ್ಷಿಕಾ ಮುಂತಾದವರು ತಮ್ಮ ಪಾತ್ರದ ಕುರಿತು ಮಾತನಾಡಿದರು.

ಶರಣ್ ಕಂಠಸಿರಿಯಲ್ಲಿ 'ಜಸ್ಟ್ ಪಾಸ್' ಚಿತ್ರದ ಹಾಡು

ನಾಯಕರಾಗಿ ಪ್ರಸಿದ್ಧರಾಗಿರುವ ಶರಣ್, ಗಾಯಕರಾಗೂ ಅಷ್ಟೇ ಪ್ರಸಿದ್ಧಿ. ಸದ್ಯ ಕೆ.ಎಂ.ರಘು ನಿರ್ದೇಶನದ 'ಜಸ್ಟ್ ಪಾಸ್' ಚಿತ್ರಕ್ಕಾಗಿ ಡಾ.ವಿ.ನಾಗೇಂದ್ರ ಪ್ರಸಾದ್ ಬರೆದಿರುವ "ಎಕ್ಸ್ ಕ್ಯೂಸ್ ಮಿ ಕೇಳಿ ನನ್ನ ಲೆಕ್ಚರು. ಜಸ್ಟ್ ಪಾಸ್ ಆಗೋದಿಲ್ಲ ನಿಮ್ಮ ಫ್ಯೂಚರು" ಎಂಬ ಹಾಡನ್ನು ನಟ–ಗಾಯಕ ಶರಣ್ ಹಾಡಿದ್ದಾರೆ. ಹರ್ಷವರ್ಧನ್ ರಾಜ್ ಸಂಗೀತ ನೀಡಿದ್ದಾರೆ. ಈ ಹಾಡಿನಲ್ಲಿ ಸಾಧುಕೋಕಿಲ ಅಭಿನಯಿಸಿದ್ದಾರೆ. ರಾಯ್ಸ್ ಎಂಟರ್‌ಟೈನ್‌ಮೆಂಟ್ ಲಾಂಛನದಲ್ಲಿ ಕೆ.ವಿ.ಶಶಿಧರ್ ನಿರ್ಮಿಸುತ್ತಿರುವ ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ನಿರ್ದೇಶಕ ಕೆ.ಎಂ.ರಘು ಅವರೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಶ್ರೀ 'ಜಸ್ಟ್ ಪಾಸ್" ಚಿತ್ರದ ನಾಯಕನಾಗಿ ಅಭಿನಯಿಸಿದ್ದಾರೆ. ಪ್ರಣತಿ ಈ ಚಿತ್ರದ ನಾಯಕಿ. ಸಾಧುಕೋಕಿಲ, ರಂಗಾಯಣ ರಘು, ಸುಚೇಂದ್ರ ಪ್ರಸಾದ್, ದೀಪಕ್ ರೈ(ಕಾಂತಾರ), ಪ್ರಕಾಶ್ ತುಮ್ಮಿನಾಡು, ಗೋವಿಂದೇಗೌಡ ಮತ್ತಿತರರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ. ಸುಜಯ್ ಕುಮಾರ್ ಈ ಚಿತ್ರದ ಛಾಯಾಗ್ರಾಹಕರು.

ಸಿನಿಪದಬಂಧ–467
ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ____________
ವಿಳಾಸ ____________
ದೂರವಾಣಿ ಸಂಖ್ಯೆ ____________

ಎಡದಿಂದ ಬಲಕ್ಕೆ
1.ಉಪೇಂದ್ರನಿಗೆ ಸರಿಯಾಗಿ ಬಂದಾಕೆ ದೀಪಿಕಾ ಪಡುಕೋಣೆ ! 3
2.ಚಲನ ಚಿತ್ರಕ್ಕೆ ಸಂಬಂಧಿಸಿದ ಪದಗಳ ಜೋಡಣೆಗೆ ಹೀಗೆನ್ನಿ 7
7.ಮಾರುತ ಬೀಸಿದ ಪ್ರದೇಶ ಇಲ್ಲಿ ಅಸ್ತವ್ಯಸ್ತ 3
8." _ _ _ _ _ _ _ _ _ ರಾಮ್ ಪತಿತ ಪಾವನ ಸೀತಾರಾಮ್......", 9
9.ಸಾಧಾರಣ ಮೈಕಟ್ಟಿನವನ ಬಣ್ಣ 2
10.ಇಲ್ಲಿ ತಿರುಗಿರುವ ಹ್ಯಾಟ್ರಿಕ್ ಹೀರೋ ಅನ್ನು ಪ್ರೀತಿಯಿಂದ ಕರೆಯಿರಿ 3
12.ಶಿವಣ್ಣ– ಕೃತಿ ಕರಬಂಧ ಅಭಿನಯದ ಚಿತ್ರ 2
15.ಹಿಮಪಾತ ಚಿತ್ರದ ಹಾಡಿನಲ್ಲಿ ಹಿಮದ ಮುಸುಕನ್ನು ಮುಕ್ತವಾಗಿರಿಸಿ 9
16.ಯಮರಾಜನ ಊರು 3
18.ಹಿಮಾಲಯದ ಶ್ರೇಷ್ಠ ಕೊಳ 7
19.ಪ್ರಜ್ವಲ್ ದೇವರಾಜನ ಒಂದೇ ಹೊಡೆತಕ್ಕೆ ಬೌಂಡರಿ ದಾಟಿದೆ 3

ವಿಜೇತರು: ವಿ.ಲೇಪಾಕ್ಷಿ, D/O ಲೇಟ್ ಪಿ. ವೆಂಕಟರಮಣಯ್ಯ, #300, ಶಿವಾಜಿ ರಸ್ತೆ, ಹೆಚ್.ಡಿ.ಕೋಟೆ.

'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಸಿನಿ ಪದಬಂಧ 466ರ ಸರಿ ಉತ್ತರ

ಅ	ಬ	ಲೆ		ತ	ವ	ರಿ	ಗೆ	ಬಾ	ತಂ	ಗಿ
ಮ್ಮಾ				ನ		ಷಿ		ಗಿ		ರಿ
ವ್ರ		ಮು		ನಂ				ರ	ಸಿ	ಕ
ಗಂ	ಡ	ನಿ	ಗೆ	ತ	ಕ್ಕ	ಹೆಂ	ಡ	ತಿ		ನೈ
ಡ		ತಾ		ನ						
	ತಾ	ಯಿ		ನಂ	ದ	ನ		ಅ	ಕ್ಕ	
						ಮ್ಮೊ		ಮಾ		ಮ
ಮೊ		ಅ	ತಿ	ಮ	ಧು	ರ	ಅ	ನು	ರಾ	ಗ
ನಾ	@	ಪ				ಹ		ಷ		ಮೊ
ಲಿ		ಸ್ವ		ದ್ರ		ಮ್ಮೀ				ಮ್ಮ
ಸಾ	ಗ	ರ	ಕೆ	ಚಂ	ದಿ	ರ		ಕ	ರ	ಗ

ಮೇಲಿನಿಂದ ಕೆಳಕ್ಕೆ
1.ಹಿರಿದು, ತೋರು, ಮಧ್ಯ, ಉಂಗುರ ಮತ್ತು ಕಿರು 5
2.ರಾಜ್‌ಕುಮಾರ್ ಅಪರಾಧ ವಿಭಾಗದ ಅಧಿಕಾರಿ 6
3.ವರ್ಷ ಚಿತ್ರದ ನಾಯಕಿ 2
4.ಸನಾದಿ ಅಪ್ಪಣ್ಣ ಚಿತ್ರದ ನಾಯಕಿ ಇಲ್ಲಿ ತಲೆಕೆಳಗು 4
5.ಶ್ರೀನಾಥ್ – ಮಂಜುಳಾ ಅಭಿನಯದ ಹಣದೊಡತಿ 4
6.ದೇವರಾಜ್ ನಿರಪರಾಧಿಯಲ್ಲ 4
11.ಗಾಂಧಿನಗರ, ಮೆಜೆಸ್ಟಿಕ್, ಕಲಾಸಿ ಪಾಳ್ಯವಲ್ಲ ದುನಿಯಾ ವಿಜಯ್ ಚಿತ್ರ 6
12.ರಜತ ಪರದೆ 4
13.ಇದು ಬಾಣ _ _ _ _ _ ಬಿಟ್ರೆ ಹುಷಾರ್...ಹುಷಾರ್...ಹುಷಾರ್ 5
14.ಕಾಡಿನ ಪುಷ್ಪ ಕೊನೆಯಲ್ಲಿ ದೀರ್ಘಗೊಂಡಿದೆ 5
15.ಇಲ್ಲಿ ತಲೆಕೆಳಗಾಗಿರುವ ಸ್ಟೋರಿ ದೊಡ್ಡದಲ್ಲ 4
17. ಅಂಗ್ಲದ ನಾಯಕ 2

ಮತದಾನ ಬಹಿಷ್ಕಾರ ಎಚ್ಚರಿಕೆ ಹಿನ್ನೆಲೆ

ತಮಿಳು ಕಾಲೋನಿಗೆ ಡಿಸಿ, ತಹಸೀಲ್ದಾರ್ ಭೇಟಿ



ಮದ್ದೂರು, ಮಾ.30– ಮತದಾನ ಬಹಿಷ್ಕರಿಸುವುದಾಗಿ ಎಚ್ಚರಿಕೆ ನೀಡಿದ್ದ ಪಟ್ಟಣದ ಕೆಇಬಿ ಕಚೇರಿಯ ತಮಿಳು ಕಾಲೋನಿಗೆ ಜಿಲ್ಲಾಧಿಕಾರಿ ಹೆಚ್.ಎನ್. ಗೋಪಾಲಕೃಷ್ಣ, ತಹಸೀಲ್ದಾರ್ ಟಿ.ಎನ್.ನರಸಿಂಹಮೂರ್ತಿ ಭೇಟಿ ನೀಡಿ ಸ್ಥಳೀಯ ನಿವಾಸಿಗಳೊಂದಿಗೆ ಚರ್ಚೆ ನಡೆಸಿದರು.

ಕಳೆದ 6 ದಶಕಗಳಿಗೂ ಹೆಚ್ಚು ಕಾಲದಿಂದ ತಮಿಳು ಕಾಲೋನಿಯಲ್ಲಿ ವಾಸಿಸುತ್ತಿರುವ ತಮಗೆ ಹಕ್ಕುಪತ್ರ ಸೇರಿದಂತೆ ಇತರೆ ಮೂಲ ಸೌಲಭ್ಯ ಕಲ್ಪಿಸದ ತಾಲೂಕು ಆಡಳಿತ ಮತ್ತು ಪುರಸಭೆ ವಿರುದ್ಧ ಹರಿಹಾಯ್ದರಲ್ಲದೇ ನಿರ್ಲಕ್ಷ್ಯ ಖಂಡಿಸಿ ಕಳೆದ ಎರಡು ದಿನಗಳ ಹಿಂದೆಯಷ್ಟೇ ಇಲ್ಲಿನ ನಿವಾಸಿಗಳು ತಾಲೂಕು ಕಚೇರಿ ಹಾಗೂ ಪುರಸಭೆ ಕಚೇರಿ ಬಳಿ ಪ್ರತಿಭಟನೆ ನಡೆಸಿದ್ದರು.

ಇದರೊಟ್ಟಿಗೆ ಮುಂಬರುವ ಚುನಾವಣೆ ವೇಳೆ ಮತದಾನದಿಂದ ಹೊರಗುಳಿಯುವ ಎಚ್ಚರಿಕೆ ನೀಡಿದ್ದ ತಮಿಳು ಕಾಲೋನಿ 114 ಮನೆಗಳ 650ಕ್ಕೂ ಹೆಚ್ಚು ನಿವಾಸಿಗಳು ತಮ್ಮ ಬಡಾವಣೆ ಪ್ರವೇಶ ದ್ವಾರದಲ್ಲಿ ಚುನಾವಣೆ ಬಹಿಷ್ಕಾರ ಸಂಬಂಧ ಬ್ಯಾನರ್ ಅಳವಡಿಸಿ ಜಿಲ್ಲಾ ಹಾಗೂ ತಾಲೂಕು ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಗಮನ ಸೆಳೆದಿದ್ದರು.

ಮೇಲಿನ ಎಲ್ಲಾ ಘಟನಾವಳಿಗಳ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್, ಜಿಪಂ ಸಿಇಓ ಶಾಂತ ಹುಲ್ಮನಿ, ತಹಸೀಲ್ದಾರ್ ಟಿ.ಎನ್.ನರಸಿಂಹ ಮೂರ್ತಿ, ಪುರಸಭೆ ಮುಖ್ಯಾಧಿಕಾರಿ ಅಶೋಕ್ ಅವರೊಟ್ಟಿಗೆ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಸ್ಥಳೀಯ ಅಧಿಕಾರಿಗಳೊಡನೆ ಚರ್ಚಿಸಿ ಮಾಹಿತಿ ಪಡೆದರು.

ಕಾಲೋನಿ ಬಳಿ ಅಧಿಕಾರಿಗಳ ತಂಡ ಭೇಟಿ ನೀಡಿದ ವೇಳೆ ಆರೋಪಗಳ ಸುರಿಮಳೆಗೈದ ತಮಿಳು ಕಾಲೋನಿ ನಿವಾಸಿಗಳು ಶೌಚಾಲಯ, ಕುಡಿಯುವ ನೀರು, ಬೀದಿ ದೀಪ, ರಸ್ತೆ ಇಲ್ಲಿನ ನಿವಾಸಿಗಳಿಗೆ ಮರೀಚಿಕೆಯಾಗಿದ್ದು 6 ದಶಕಗಳ 114 ನಿವಾಸಿಗಳಿಗೆ ಹಕ್ಕು ಪತ್ರ ನೀಡದ ತಾಲೂಕು ಆಡಳಿತದ ನಿರ್ಲಕ್ಷ್ಯ ಖಂಡಿಸಿದರು.

ಭರವಸೆ: ಸ್ಥಳೀಯರ ಮನವಿ ಆಲಿಸಿದ ಜಿಲ್ಲಾಧಿಕಾರಿ ಎಚ್.ಎನ್. ಗೋಪಾಲಕೃಷ್ಣ 1.20 ಎಕರೆ ಪ್ರದೇಶದಲ್ಲಿ ಹಿಂದಿನಿಂದಲೂ ವಾಸವಿರುವ ತಮಿಳು ಕಾಲೋನಿ ನಿವಾಸಿಗಳಿಗೆ ಹಕ್ಕು ಪತ್ರ ವಿತರಣೆ ಸೇರಿದಂತೆ ಮೂಲ ಸೌಲಭ್ಯ ಕಲ್ಪಿಸುವ ಸಂಬಂಧ ಅಗತ್ಯ ಕ್ರಮಕ್ಕೆ ತಹಸೀಲ್ದಾರ್ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರಲ್ಲದೇ ಮತದಾನ ಬಹಿಷ್ಕಾರದಿಂದ ಹೊರಬರುವಂತೆ ಸ್ಥಳೀಯರಿಗೆ ಕಿವಿಮಾತು ಹೇಳಿ ಸೌಲಭ್ಯ ಭರವಸೆ ನೀಡಿದರು.

ತಮಿಳು ಕಾಲೋನಿ ನಿವಾಸಿಗಳಿಗೆ ಹಕ್ಕುಪತ್ರ ವಿತರಿಸಲು ನಾಳೆಯಿಂದಲೇ ಸರ್ವೇ ಕಾರ್ಯ ಕೈಗೊಂಡು ಅಗತ್ಯ ಮಾಹಿತಿಯನ್ನು ಕೊಳಚೆ ನಿರ್ಮೂಲನಾ ಮಂಡಳಿಗೆ ಒದಗಿಸುವಂತೆ ಮತ್ತು ಕೂಡಲೇ ಕುಡಿಯುವ ನೀರು ಇನ್ನಿತರೆ ಸೌಲಭ್ಯಗಳನ್ನು ತ್ವರಿತಗತಿಯಲ್ಲಿ ಪೂರೈಸುವಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಮುಸ್ಲಿಂ ಮೀಸಲಾತಿ ರದ್ದು ಖಂಡಿಸಿ ಪ್ರತಿಭಟನೆ



ಕೆ.ಆರ್.ಪೇಟೆ, ಮಾ.30– ರಾಜ್ಯ ಬಿಜೆಪಿ ಸರ್ಕಾರ ಮುಸ್ಲಿಂ ಮೀಸಲಾತಿ ರದ್ದು ಮಾಡಿರುವುದನ್ನು ಖಂಡಿಸಿ ಪಟ್ಟಣದಲ್ಲಿ ತಾಲೂಕು ಸೌಹಾರ್ದ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯದ ಬಿಜೆಪಿ ಸರ್ಕಾರ ಮುಸ್ಲಿಮರಿಗೆ 2ಬಿ ವರ್ಗದಲ್ಲಿದ್ದ ಶೇ.4 ರಷ್ಟು ಮೀಸಲಾತಿ ರದ್ದು ಮಾಡಿ ಇಡಬ್ಲ್ಯೂಎಸ್ ವರ್ಗಕ್ಕೆ ಸೇರಿಸುವ ಮೂಲಕ ಬಡ ಮುಸ್ಲಿಮರಿಗೆ ಅನ್ಯಾಯ ಮಾಡಿದೆ. ಹಾಗಾಗಿ 2ಬಿ ಮೀಸಲಾತಿಯನ್ನು ಯಥಾವತ್ ಉಳಿಸಬೇಕು. ಆ ಮೂಲಕ ಸಮುದಾಯದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಒತ್ತಾಯಿಸಿ ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಮುಖಂಡ ಸೌದಿ ಫಯಾಜ್ ಮಾತನಾಡಿ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ರಾಜ್ಯ ಸರ್ಕಾರ ಮುಸ್ಲಿಂ ಸಮುದಾಯದ 2ಬಿ ಮೀಸಲಾತಿ ರದ್ದುಗೊಳಿಸಿರುವುದನ್ನು ಖಂಡಿಸುತ್ತೇವೆ. ಹಿಜಾಬ್, ಹಲಾಲ್, ತಲಾಕ್ ಇನ್ನಿತರ ವಿಷಯ ಮುಂದಿಟ್ಟುಕೊಂಡು ಸಮಾಜದ ಸ್ವಾಸ್ಥ್ಯ ಕೆಡಿಸಲು ಪ್ರಯತ್ನಿಸುತ್ತಿರುವ ಬಿಜೆಪಿ ಸರ್ಕಾರ ಮುಸ್ಲಿಂ ಸಮುದಾಯಕ್ಕಿರುವ ಶೇ.4ರಷ್ಟು ಮೀಸಲಾತಿ ರದ್ದುಗೊಳಿಸಿದೆ. ಆ ಮೂಲಕ ಸಮಾಜವನ್ನು ಮತ್ತಷ್ಟು ಬಡತನಕ್ಕೆ ದೂಡುವ ಹುನ್ನಾರವಾಗಿದೆ. ಬಿಜೆಪಿ ತನ್ನ ಮುಚ್ಚಿಟ್ಟ ಅಜೆಂಡಾ ಜಾರಿಗೊಳಿಸುತ್ತಿದ್ದು, ಸಂವಿಧಾನದಲ್ಲಿ ಧರ್ಮಾಧಾರಿತ ಮೀಸಲಾತಿ ಇಲ್ಲದಿರುವುದರಿಂದ 2(ಬಿ) ಪ್ರವರ್ಗದಡಿ ಮುಸ್ಲಿಮರು ಪಡೆಯುತ್ತಿರುವ ಮೀಸಲಾತಿ ರದ್ದುಗೊಳಿಸಿ ಇಡಬ್ಲೂಎಸ್ (ಆರ್ಥಿಕವಾಗಿ ಹಿಂದುಳಿದವರ ಪಟ್ಟಿಗೆ) ಸೇರಿಸಲಾಗಿದೆ. ಇದರಿಂದ ಮುಸ್ಲಿಮರು ಶೇ.4 ಕ್ಕಿಂತಲೂ ಹೆಚ್ಚು ಮೀಸಲಾತಿ ಪಡೆಯಲಿದ್ದಾರೆ ಎಂದು ಮುಖ್ಯಮಂತ್ರಿಗಳು ಹೇಳಿರುವುದು ಶುದ್ಧ ಸುಳ್ಳಿನ ಕಂತೆ ಎಂದು ಆರೋಪಿಸಿದರು.

ಬಳಿಕ ತಾಲೂಕು ಗ್ರೇಡ್–2 ತಹಸೀಲ್ದಾರ್ ವಿಖಾರ್ ಅಹಮದ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ಈ ವೇಳೆ ಸೌಹಾರ್ದ ವೇದಿಕೆ ಮುಖಂಡರಾದ ಸೌದಿ ಫಯಾಜ್, ಗಂಗಾಧರ್, ನುಜ್, ಮಹಮದ್, ಫಯಾಜ್, ಶಾಫಿ, ಅಬ್ದುಲ್, ಸಾದಿಕ್, ಹಾಫೀಜುಲ್ಲಾ ಷರೀಫ್ ಸಲ್ಲು ನಿಸಾದ್, ಸೌದಿಕ್, ಪುರಸಭೆ ಮಾಜಿ ಸದಸ್ಯ ನವೀದ್ ಅಹಮದ್, ಗ್ರಾಪಂ ಸದಸ್ಯ ಫಯಾಜ್ ಅಹಮದ್, ಆಟೋ ಜಾವಿದ್ ಮತ್ತಿತರರಿದ್ದರು.

ರಮೇಶ್‌ಬಾಬುಗೆ ಕಾಂಗ್ರೆಸ್ ಟಿಕೆಟ್: ಭುಗಿಲೆದ್ದ ಭಿನ್ನಮತ



ಶ್ರೀರಂಗಪಟ್ಟಣ, ಮಾ.30– ಮಾಜಿ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡರಿಗೆ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಘೋಷಣೆಯಾದ ಬೆನ್ನಲ್ಲೇ ಶ್ರೀರಂಗಪಟ್ಟಣ ವಿಧಾನ ಸಭಾ ಕ್ಷೇತ್ರದಲ್ಲಿ ಭಿನ್ನಮತ ಭುಗಿಲೆದ್ದಿದೆ.

ಪಟ್ಟಣದ ಖಾಸಗಿ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದ ಪಾಲಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ನಡೆದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಭಿನ್ನಮತ ಭುಗಿಲೆದ್ದಿದ್ದು, ಕಳೆದ 30 ವರ್ಷದಿಂದ ಪಕ್ಷಕ್ಕಾಗಿ ದುಡಿದವರಿಗೆ ಮಣೆ ಹಾಕಿಲ್ಲ. ಬದಲಿಗೆ ಮೂಲ ಕಾಂಗ್ರೆಸ್ಸಿಗರನ್ನು ಕಡೆಗಣಿಸಿ ಜೆಡಿಎಸ್‌ನಿಂದ ಬಂದವರಿಗೆ ಮಣೆ ಹಾಕಿರುವುದು ಮುಖಂಡರ ಅಸಮಾಧಾನಕ್ಕೆ ಕಾರಣವಾಗಿದೆ.

ಕಾಂಗ್ರೆಸ್ ಪಕ್ಷಕ್ಕೆ ವಲಸೆ ಬಂದಿರುವ ಮಾಜಿ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡರು, ಇಲ್ಲಿವರೆಗೆ ಅಸಮಾಧಾನಿತ ಮುಖಂಡರನ್ನು ಭೇಟಿ ಮಾಡದೆ ನಿರ್ಲಕ್ಷ್ಯ ವಹಿಸಿದ್ದು, ಪಕ್ಷದ ಯಾವುದೇ ಸಭೆ, ಸಮಾರಂಭಗಳಿಗೆ ಮೂಲ ಕಾಂಗ್ರೆಸಿಗರನ್ನು ಆಹ್ವಾನಿಸದೇ ಕಡೆಗಣಿಸಿದ್ದಾರೆ ಎಂದು ಆರೋಪಿಸಿದ ಮುಖಂಡರು, ಮಾಜಿ ಶಾಸಕರ ವರ್ತನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮಂಗಳವಾರ ನಡೆದ ಪ್ರಜಾಧ್ವನಿ ಯಾತ್ರೆಗೆ ನಮ್ಮನ್ನು ಕರೆದಿಲ್ಲ. ಪಾಲಹಳ್ಳಿ ಚಂದ್ರಶೇಖರ್ ಕ್ಷೇತ್ರದ ಟಿಕೆಟ್ ಆಕಾಂಕ್ಷಿ ಎಂದು ತಿಳಿದಿದ್ದರೂ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಈ ವಿಚಾರವಾಗಿ ಚರ್ಚೆ ಮಾಡದಿರುವುದು ಬೇಸರ ತಂದಿದೆ ಎಂದ ಸಭೆಯಲ್ಲಿದ್ದ ಮುಖಂಡರು ಚುನಾವಣೆಯಲ್ಲಿ ಪಕ್ಷೇತರವಾಗಿ ಸ್ಪರ್ಧಿಸುವಂತೆ ಚಂದ್ರಶೇಖರ್ ಅವರನ್ನು ಒತ್ತಾಯಿಸಿದರು.

ಪಾಲಹಳ್ಳಿ ಚಂದ್ರಶೇಖರ್ ಮಾತನಾಡಿ, ರಾಜ್ಯದಲ್ಲಿ ನಡೆಯುತ್ತಿರುವ ಕೆಲವು ಕಾರ್ಯಕ್ರಮಗಳಲ್ಲಿ ನಾನು ಕೂಡ ಭಾಗಿಯಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ನನ್ನ ಆಕಾಂಕ್ಷೆ ತಿಳಿಸಿದ್ದೆ. ಈ ಸಂಬಂಧ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ ಟಿಕೆಟ್ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ ಕ್ಷೇತ್ರಕ್ಕೆ ಅವರು ಬಂದು ಹೋಗುವವರೆಗೂ ನಮ್ಮ ಬಗ್ಗೆ ಗಮನ ಹರಿಸದಿರುವುದು ಬೇಸರ ತಂದಿದೆ. ಪಕ್ಷೇತರವಾಗಿ ಸ್ಪರ್ಧಿಸುವ ಕುರಿತು ಇನ್ನೆರಡು ದಿನಗಳಲ್ಲಿ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದರು.

ಈ ವೇಳೆ ಮುಖಂಡರಾದ ಸಂಜಯ್, ತಮ್ಮಣ್ಣ, ಸಿದ್ದಲಿಂಗಣ್ಣ, ವಿಜಯ್ ಕುಮಾರ್, ಗೋಪಾಲ್, ಸಿದ್ದೇಗೌಡ ಸೇರಿದಂತೆ ಇತರರಿದ್ದರು. ಅಲ್ಲದೆ ಚಿಕ್ಕಂಕನಹಳ್ಳಿ ಗ್ರಾಮದ ಯುವಕರು ಪಾಲಹಳ್ಳಿ ಚಂದ್ರಶೇಖರ್ ಅವರನ್ನು ಅಭಿನಂದಿಸಿ ಪಕ್ಷೇತರವಾಗಿ ಸ್ಪರ್ಧಿಸಿದರೆ ಬೆಂಬಲ ನೀಡುವುದಾಗಿ ಭರವಸೆ ನೀಡಿದರು.

ಕೆ.ಎನ್.ಗಂಗೇಗೌಡ ನಿಧನ



ಕೆ.ಆರ್.ಪೇಟೆ, ಮಾ.30– ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್ ಸಹೋದರ, ಸಮಾಜ ಸೇವಕ ಕೆ.ಎನ್.ಗಂಗೇಗೌಡ ಅಲಿಯಾಸ್ ಗಂಗಣ್ಣ(65) ಗುರುವಾರ ಬೆಳಗ್ಗೆ ನಿಧನರಾದರು.

ಮೃತರು ಪತ್ನಿ, ಪುರಸಭೆ ಮಾಜಿ ಸದಸ್ಯೆ ಚಂದ್ರಕಲಾ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರು ರಸ್ತೆಯ ಹಾಲು ಶಿಥಲೀಕರಣ ಕೇಂದ್ರದ ಹಿಂಭಾಗದಲ್ಲಿರುವ ಮೃತರ ಜಮೀನಿನಲ್ಲಿ ಮಧ್ಯಾಹ್ನ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನರೇಂದ್ರಸ್ವಾಮಿ ಹೇಳಿಕೆಗೆ ಡಾ.ಮೂರ್ತಿ ಅಸಮಾಧಾನ

ಮಳವಳ್ಳಿ, ಮಾ.30– ಇತ್ತೀಚೆಗೆ ನಡೆದ ಕಾರ್ಯಕ್ರಮವೊಂದರಲ್ಲಿ ಮಾಜಿ



ಸಚಿವ ಪಿ.ಎಂ.ನರೇಂದ್ರಸ್ವಾಮಿ ದಲಿತ ಸಮಾಜದಲ್ಲಿ ಸಮಯೋಚಿತ ದಕ್ಷ ನಾಯಕರು ಬಾಬು ಜಗಜೀವನ್ ರಾಮ್, ಎನ್.ರಾಚಯ್ಯ, ಬಸವಲಿಂಗಪ್ಪ ಮಾತ್ರ ಎಂದಿದ್ದಾರೆ. ಆದರೆ ಇವರಂತೆ ಸಮುದಾಯದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಹ ಸಮಯೋಚಿತ ದಕ್ಷ ನಾಯಕರೆಂಬುದರಲ್ಲಿ ಯಾವುದೇ ಅನುಮಾನವಿಲ್ಲ. ಇದನ್ನು ನರೇಂದ್ರಸ್ವಾಮಿ ಅರಿಯಬೇಕೆಂದು ಕಾಂಗ್ರೆಸ್ ಮುಖಂಡ ಡಾ.ಮೂರ್ತಿ ಹೇಳಿದರು.

ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸಂಸದ ಸ್ಥಾನದಿಂದ ರಾಹುಲ್‌ಗಾಂಧಿ ಅವರನ್ನು ಅನರ್ಹಗೊಳಿಸಿರುವುದನ್ನು ಖಂಡಿಸಿ ಪ್ರತಿಭಟನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದೊಂದು ಕಾಲಘಟ್ಟದಲ್ಲಿ ಎಲ್ಲಾ ಸಮುದಾಯದಲ್ಲೂ ಸಮಯೋಚಿತ ದಕ್ಷ ನಾಯಕರಿರುತ್ತಾರೆ. ಆದರೆ ದಲಿತ ಸಮುದಾಯದಲ್ಲಿ ಅಂದು ಬಾಬು ಜಗಜೀವನ್ ರಾಮ್, ಎನ್.ರಾಚಯ್ಯ, ಬಸವಲಿಂಗಪ್ಪ ದಲಿತ ಸಮುದಾಯದ ಸಮರ್ಥ ನಾಯಕರಾಗಿದ್ದರು. ಈಗಲೂ ಅವರನ್ನು ಜನ ಸ್ಮರಿಸಿಕೊಳ್ಳುತ್ತಾರೆ. ಹಾಗೆಯೇ ಅಂತಹ ನಾಯಕರ ಪೈಕಿ ಡಾ.ಮಲ್ಲಿಕಾರ್ಜುನ ಖರ್ಗೆ ಸಹ ಒಬ್ಬರು ಎಂದರು.

ಇವತ್ತಿನ ಕಾಲಘಟ್ಟದಲ್ಲಿ ಮಲ್ಲಿಕಾರ್ಜುನ ಖರ್ಗೆ ಲೋಕಸಭೆ, ರಾಜ್ಯಸಭೆಯಲ್ಲಿ ಪ್ರಜಾಪ್ರಭುತ್ವ ಉಳಿವಿಕೆ ಹಾಗೂ ಸಂವಿಧಾನದ ರಕ್ಷಣೆ, ದೇಶದ ಮೂಲ ನಿವಾಸಿಗಳಿಗಾಗಿ ಹೋರಾಟ ಮಾಡಿದ್ದು, ಅದು ಅವರ ಸಮಯೋಚಿತ, ದಕ್ಷ ನಾಯಕತ್ವಕ್ಕೆ ಸಾಕ್ಷಿಯಾಗಿದೆ. ಇದನ್ನು ಗಮನಿಸಿಯೇ ಸೋನಿಯಾಗಾಂಧಿ, ರಾಹುಲ್ ಗಾಂಧಿ ಎಐಸಿಸಿ ಅಧ್ಯಕ್ಷರನ್ನಾಗಿ ಖರ್ಗೆ ಅವರನ್ನು ಮಾಡಿದ್ದಾರೆ ಎಂದರು.

ಅಲ್ಲದೇ ಕಾಂಗ್ರೆಸ್ ಅಧಿನಾಯಕ ರಾಹುಲ್‌ಗಾಂಧಿ ವಿರುದ್ಧ ಬಿಜೆಪಿ ದ್ವೇಷದ ರಾಜಕಾರಣ ಮಾಡುತ್ತಿದೆ. ಅಸಂವಿಧಾನಿಕವಾಗಿ ಅವರ ಸಂಸದ ಸ್ಥಾನ ಅನರ್ಹ ಮಾಡಿದ್ದಾರೆ. ಅನೇಕ ರಾಜಕೀಯ ಮುಖಂಡರು ಮನಬಂದಂತೆ ಟೀಕಿಸಿದಾಗ ಅವರ ಮೇಲೆ ಜಾರಿಯಾಗದ ಕಾನೂನು ಇದೀಗ ರಾಹುಲ್ ಗಾಂಧಿ ಅವರ ಮೇಲೆ ಜಾರಿ ಮಾಡಿರುವುದು ಏಕೆ ಎಂದು ಅವರು ಪ್ರಶ್ನಿಸಿದರು. ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್, ಮುಖಂಡರಾದ ಪುಟ್ಟರಾಮು, ಜಯಮ್ಮ, ಚೌಡೇಶ್ ಇತರರಿದ್ದರು.

'ಕೈ' ಹಿಡಿದ ಕೃಷ್ಣ ಬೆಂಬಲಿಗ ಸತ್ಯಾನಂದ



ಮಂಡ್ಯ, ಮಾ.30– ವಕೀಲ ಮತ್ತು ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಬೆಂಬಲಿಗ ಟಿ.ಎಸ್.ಸತ್ಯಾನಂದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು.

ಈ ಹಿಂದೆ 8 ವರ್ಷಗಳ ಕಾಲ ಮಂಡ್ಯ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ, ಕೆಪಿಸಿಸಿ ಸದಸ್ಯರಾಗಿ ಜಿಲ್ಲಾ ಕಾಂಗ್ರೆಸ್ ಮುಂಚೂಣಿ ನಾಯಕರಾಗಿದ್ದ ಸತ್ಯಾನಂದ ಎಸ್.ಎಂ.ಕೃಷ್ಣ ಅವರು ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದಾಗ ರಾಜಕೀಯ ಗುರುವಿನ ದಾರಿಯಲ್ಲೇ ಕಾಂಗ್ರೆಸ್ ಪಕ್ಷಕ್ಕೆ ರಾಜಿನಾಮೆ ನೀಡಿದ್ದರು. ಆದರೆ ಇಂದು ಮರಳಿ ಕಾಂಗ್ರೆಸ್ ಸೇರುವ ಮೂಲಕ ಮಂಡ್ಯ ಜಿಲ್ಲಾ ಕಾಂಗ್ರೆಸ್‌ನಲ್ಲಿ ಮತ್ತೆ ಮುಂಚೂಣಿಗೆ ಬಂದಿದ್ದಾರೆ.

ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಸತ್ಯಾನಂದ ಅವರ ಸೇರ್ಪಡೆಯಿಂದ ಪಕ್ಷಕ್ಕೆ ಬಲ ಬಂದಿದ್ದು ಅವರೊಂದಿಗೆ ಇನ್ನೂ ಹಲವರು ಪಕ್ಷಕ್ಕೆ ಸೇರ್ಪಡೆಯಾಗಲಿದ್ದಾರೆ. ಎಸ್.ಎಂ. ಕೃಷ್ಣ ಬೆಂಬಲಕ್ಕೆ ನಿಂತಿದ್ದ ಹಲವಾರು ಜನ ಮರಳಿ ಕಾಂಗ್ರೆಸ್ ಸೇರಲಿದ್ದಾರೆ ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಸತ್ಯಾನಂದ ನನಗೆ ಹಳೆ ಪರಿಚಯ. ಯುವ ಕಾಂಗ್ರೆಸ್ ಸಂಘಟನೆಯಲ್ಲಿ ಸಾಕಷ್ಟು ಕೆಲಸ ಮಾಡಿದ್ದು, ಅನಿವಾರ್ಯ ಸಂದರ್ಭ ಪಕ್ಷ ತೊರೆದಿದ್ದರು. ಅವರು ಮರಳಿ ಪಕ್ಷಕ್ಕೆ ಬಂದಿರುವುದರಿಂದ ಪಕ್ಷಕ್ಕೆ ಶಕ್ತಿ ಬಂದಿದ್ದು ಅವರ ರಾಜಕೀಯ ಭವಿಷ್ಯ ಉಜ್ವಲವಾಗಲಿ ಎಂದರು.

ಮೈಸೂರಿನ ಎಲ್ಲೆಡೆ ಶ್ರದ್ಧಾಭಕ್ತಿಯಿಂದ ಶ್ರೀರಾಮನ ಸ್ಮರಣೆ



ಮೈಸೂರು ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ರಾಮನವಮಿ ಪ್ರಯುಕ್ತ ಶ್ರೀರಾಮ ತಾರಕ ಹೋಮ, ನವಗ್ರಹ ಪೂರ್ವಕ ಶನಿ ಶಾಂತಿ ಹೋಮವನ್ನು ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ವಾನ್ ಕೃಷ್ಣಮೂರ್ತಿ ನೇತೃತ್ವದಲ್ಲಿ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಮೈಸೂರು ನಗರ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಹೇಮಾ ನಂದೀಶ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಭಕ್ತ ವೃಂದ ಹಾಜರಿದ್ದರು.



ಮೈಸೂರಿನ ವಾರ್ಡ್ ನಂ.23ರ ಸ್ನೇಹ ಬಳಗದಿಂದ ಸದ್ವಿದ್ಯಾ ವೃತ್ತದಲ್ಲಿರುವ ವೀರಾಂಜ ನೇಯಸ್ವಾಮಿ ದೇವಸ್ಥಾನದಲ್ಲಿ ಶ್ರೀ ರಾಮನವಮಿ ಹಬ್ಬದ ಪ್ರಯುಕ್ತ ಪಾನಕ, ಮಜ್ಜಿಗೆ ಹಾಗೂ ಪ್ರಸಾದ ವಿತರಿಸಲಾಯಿತು. ಈ ವೇಳೆ ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನರಹರಿಬಾಬು, ಸಹ ಕಾರ್ಯದರ್ಶಿ, ಪ್ರೊ.ಹಿರಿಯಣ್ಣ, ಶಾಸಕ ಎಲ್.ನಾಗೇಂದ್ರ, ಬಿಜೆಪಿ ನಗರಾಧ್ಯಕ್ಷ ಟಿ.ಎಸ್.ಶ್ರೀವತ್ಸ, ಮೈ.ವಿ.ರವಿಶಂಕರ್, ಮೋಹನ್, ಪರಮೇಶ, ಸುರೇಂದ್ರ, ಕಿರಣ್, ಸಂಜಯ್, ಸಂದೀಪ್, ಶ್ರೀನಿವಾಸ್, ನಾಗರಾಜ್, ಪ್ರಮೋದ್, ಪ್ರವೀಣ್, ಆನಂದ, ವಿಘ್ನೇಶ್ವರ ಭಟ್, ವಿನೋದ್, ಶ್ರವಣ್, ಶರ್ಮ, ಶ್ರೀಲಕ್ಷ್ಮಿ, ಪಿಂಕಿ, ಪದ್ಮ, ಚಂದ್ರಕಲಾ, ಸುಕನ್ಯಾ, ಸುದರ್ಶನ್, ನವೀನ್, ರವಿ, ಪಾಪಣ್ಣ ಇನ್ನಿತರರಿದ್ದಾರೆ.



ಮೈಸೂರು ಜಿಲ್ಲಾ ಪೆಂಡಾಲ್ ಮಾಲೀಕರ ಸಂಘದ ವತಿಯಿಂದ ಆಯೋಜಿಸಿದ್ದ ರಾಮ ನವಮಿಯಲ್ಲಿ ಹಿಂದೂ–ಮುಸಲ್ಮಾನ ಬಂಧುಗಳು ಭಾವೈಕ್ಯತೆಯಿಂದ ರಾಮಚಂದ್ರನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭಕ್ತಾದಿಗಳಿಗೆ ಪಾನಕ, ಮಜ್ಜಿಗೆ, ಕೋಸಂಬರಿ ವಿತರಿಸಿದರು.



ಪಡುವಾರಹಳ್ಳಿ ಜನಪರ ವೇದಿಕೆ ವತಿಯಿಂದ ಸಾರ್ವಜನಿಕರಿಗೆ ಪಾನಕ, ಮಜ್ಜಿಗೆಯನ್ನು ವಿತರಿಸಲಾಯಿತು. ಈ ವೇಳೆ ಜನಪರ ವೇದಿಕೆ ಪದಾಧಿಕಾರಿಗಳು ಇನ್ನಿತರರಿದ್ದರು.



ವೀರಾಂಜನೇಯಸ್ವಾಮಿ ದೇವಸ್ಥಾನದಲ್ಲಿ ಕಾಂಗ್ರೆಸ್ ಮುಖಂಡ ಕೆ.ಹರೀಶ್‌ಗೌಡ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ದೇವ ಸ್ಥಾನದ ವತಿಯಿಂದ ರಾಮಾಂಜನೇಯ ವಿರುವ ಭಾವಚಿತ್ರ ನೀಡಿ ಶುಭ ಕೋರಿದರು. ಸುದರ್ಶನ್, ವಿಘ್ನೇಶ್ವರಭಟ್, ಕುಮಾರ್, ಪ್ರಮೋದ್, ಕಿರಣ್, ಸುರೇಂದ್ರ, ನವೀನ್, ವಿನೋದ್ ಇದ್ದರು.



ಕೆಆರ್‌ಎಸ್ ರಸ್ತೆಯಲ್ಲಿರುವ ಶ್ರೀ ಉತ್ತರಾದಿ ಮಠ, ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ವತಿಯಿಂದ ಶ್ರೀ ರಾಮನವಮಿ ಮಹೋತ್ಸವದ ಅಂಗವಾಗಿ ಶ್ರೀ ಸತ್ಯಾತ್ಮ ತೀರ್ಥ ಶ್ರೀಪಾದಂಗಳವರ ಅನುಗ್ರಹದಿಂದ ಲೋಕ ಕಲ್ಯಾಣಕ್ಕಾಗಿ ಪಂಡಿತ್ ಶ್ರೀ ಆದ್ಯ ಗೋವಿಂದಾಚಾರ್ಯರ ನೇತೃತ್ವದಲ್ಲಿ ರಾಮತಾರಕ ಹೋಮ, ಭಕ್ತಾದಿಗಳಿಗೆ ಪಾನಕ, ಮಜ್ಜಿಗೆ ವಿತರಿಸಲಾಯಿತು. ಪಂಡಿತ್ ಅನಿರುದ್ಧಾಚಾರ್ಯ ಪಾಂಡುರಂಗಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಶ್ರೀ ರಾಘವೇಂದ್ರ ಸೇವಾ ಟ್ರಸ್ಟ್ ಅಧ್ಯಕ್ಷ ಎಸ್.ಬಿ.ವಾಸುದೇವಮೂರ್ತಿ ಇನ್ನಿತರರಿದ್ದಾರೆ.



ಮೈಸೂರಿನ 44ನೇ ವಾರ್ಡಿನಲ್ಲಿ ಪೈಲ್ವಾನ್ ಬೀರೇಶ್ ನೇತೃತ್ವದಲ್ಲಿ ಪಾನಕ, ಮಜ್ಜಿಗೆ, ಕೋಸಂಬರಿ ವಿತರಿಸಲಾಯಿತು. ಈ ವೇಳೆ ಕೆಪಿಸಿಸಿ ಸದಸ್ಯ ಸಿ.ಎಸ್.ರಘು ಗೌಡ, ರಾಜ್ಯ ಕುರುಬರ ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ, ಕಾಂಗ್ರೆಸ್ ಮುಖಂಡ ಚಿಕ್ಕಣ್ಣ ಇದ್ದಾರೆ.

ಮೈಸೂರು,ಮಾ.30(ಎಂಟಿವೈ)– ಮೈಸೂರಲ್ಲಿ ಗುರುವಾರ ಎಲ್ಲೆಡೆ ಶ್ರೀರಾಮನಸ್ಮರಣೆ ಶ್ರದ್ಧಾ ಭಕ್ತಿಯಿಂದ ನಡೆಯಿತು. ಆಂಜನೇಯಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯ ಜರುಗಿದವು. ಭಕ್ತರಿಗೆ ಪಾನಕ, ಮಜ್ಜಿಗೆ ವಿತರಿಸಿ ಶ್ರೀರಾಮನನ್ನು ಆರಾಧಿಸಿದರು.

ಕೋವಿಡ್ ಹಿನ್ನೆಲೆಯಲ್ಲಿ ಎರಡು ವರ್ಷದಿಂದ ಸರಳವಾಗಿ ಶ್ರೀರಾಮ ನವಮಿಯನ್ನು ಆಚರಿಸಲಾಗಿತ್ತು. ಆದರೆ, ಈ ಬಾರಿ ಎಲ್ಲೆಡೆ ವೈಭವ ಹಾಗೂ ವಿಜೃಂಭಣೆಯಿಂದ ಜರುಗಿತು. ಮೈಸೂರಿನ ಬಹುತೇಕ ಎಲ್ಲಾ ಬಡಾವಣೆಗಳಲ್ಲೂ ಶ್ರೀರಾಮನ ಭಾವಚಿತ್ರ, ಮೂರ್ತಿ, ವಿಗ್ರಹವನ್ನು ಪೂಜಿಸಲಾಯಿತು. ಸೂರ್ಯದೇವರ ವರ ಪ್ರಸಾದದಿಂದ ದಶರಥನಿಗೆ ಶ್ರೀರಾಮ ಮಗನಾಗಿ ಹುಟ್ಟಿದ ದಿನವನ್ನು ರಾಮನವಮಿಯಾಗಿ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಗರದ ಶ್ರೀರಾಮ, ಆಂಜನೇಯ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಹೋಮ, ವಿವಿಧ ಅಭಿಷೇಕಗಳು ನಡೆದವು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು, ಪ್ರಸಾದ ಸ್ವೀಕರಿಸಿದರು.

ಕೆಲವರು ಉಪವಾಸ ವ್ರತ ಆಚರಿಸಿದರು. ಶ್ರೀರಾಮನಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಪಾನಕ, ಕೋಸಂಬರಿ, ಪ್ರಸಾದ ವಿತರಿಸಲಾಯಿತು. ವಿವಿಧ ಬಡಾವಣೆಗಳಲ್ಲಿ ಕೂಡ ರಾಮನವಮಿ ಆಚರಿಸಿದರು. ಹೂವಿನ ಮಾರುಕಟ್ಟೆಯಲ್ಲಿ ವ್ಯಾಪಾರಿಗಳು ಮತ್ತು ಸಾರ್ವಜನಿಕರು ಸೇರಿ ಪಾನಕ ವಿತರಿಸಿದರು.

ರಾಮಭಕ್ತರು, ಸಮಾಜ ಸೇವಕರು ಹಾಗೂ ಸಂಘ–ಸಂಸ್ಥೆಗಳ ಮುಖಂಡರು, ಅಂಗಡಿ ಮಾಲೀಕರು, ಸಾರ್ವಜನಿಕ ಸ್ಥಳಗಳಲ್ಲಿ ಪಾನಕ, ಮಜ್ಜಿಗೆ, ಕೋಸಂಬರಿ ವಿತರಿಸಿದರು. ಕೆಲವೆಡೆ ರಾಮ–ಲಕ್ಷ್ಮಣ–ಆಂಜನೇಯ ವೇಷಧಾರಿಗಳು ಪಾನಕ, ಮಜ್ಜಿಗೆ ನೀಡುತ್ತ ಮಕ್ಕಳು ಮತ್ತು ಹಿರಿಯರ ಗಮನ ಸೆಳೆದಿದ್ದು ವಿಶೇಷವಾಗಿತ್ತು. ಮನೆ ಮನೆಗಳಲ್ಲಿ ಮಕ್ಕಳಿಂದ ವಯೋವೃದ್ಧರವರೆಗೂ ಎಲ್ಲರೂ ಪಾನಕ, ಮಜ್ಜಿಗೆ, ಕೋಸಂಬರಿ ಸವಿದು ಶ್ರೀರಾಮ ಸ್ಮರಣೆ ಮಾಡಿದರು. ಜೆ.ಪಿ.ನಗರದ ರಾಮಮಂದಿರದಲ್ಲಿ ಶ್ರೀ ರಾಮನವಮಿ ಸಂಭ್ರಮದಿಂದ ಜರುಗಿತು.

ಹಿಂದು–ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿ: ಹಿಂದು, ಮುಸ್ಲಿಂ ಬಾಂಧವರು ಒಟ್ಟಾಗಿ ಅನ್ಯೋನ್ಯತೆಯಿಂದ ಪಾನಕ, ಮಜ್ಜಿಗೆ–ಕೋಸಂಬರಿ ಹಂಚಿ ಭಾವೈಕ್ಯತೆ ಮೆರೆದರು

ಈ ಸಲದ ರಾಮನವಮಿ ನಗರದ ಹಿಂದು–ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾಯಿತು. ನಗರದ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಮೈಸೂರು ಜಿಲ್ಲಾ ಪೆಂಡಾಲ್ ಮಾಲೀಕರ ಸಂಘದ ವತಿಯಿಂದ ಹಿಂದು ಮುಸಲ್ಮಾನ್ ಭಾವೈಕ್ಯತೆಯಿಂದ ಶ್ರೀ ರಾಮಚಂದ್ರನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ನಂತರ ಭಕ್ತಾದಿಗಳಿಗೆ ಪಾನಕ ಮಜ್ಜಿಗೆ ಹಂಚುವ ಮೂಲಕ ಉಭಯ ಧರ್ಮಿಯರು ರಾಮನವಮಿ ಆಚರಿಸಿದರು. ಮುಸ್ಲಿಮರು ಭಾಗವಹಿಸಿದ್ದಕ್ಕೆ ಹಿಂದು ಯುವಕರು ಸಂತಸ ವ್ಯಕ್ತಪಡಿಸಿದರು. ವಿಶೇಷವಾಗಿ ಶ್ರೀ ರಾಮನ ವೇಷ ಧರಿಸಿ ಬಂದ ಸಿದ್ಧಾರ್ಥ ಬಡಾವಣೆಯ ನಿವಾಸಿ ಜೀವನ್ ವಿಶೇಷ ಗಮನ ಸೆಳೆದರು. ಮೈಸೂರು ಜಿಲ್ಲಾ ಪೆಂಡಾಲ್ ಮಾಲೀಕರ ಸಂಘ ಅಧ್ಯಕ್ಷ ಶಿವಕುಮಾರ್, ಮುಖಂಡರಾದ ತಾಜ್ ಮಹಮ್ಮದ್, ಲಿಂಗಪ್ಪ, ಅಬ್ದುಲ್ ರೆಹಮಾನ್, ವಾಸಿಂ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಲೋಹಿತ್ ಇನ್ನಿತರರು ಉಪಸ್ಥಿತರಿದ್ದರು.

ಉದಯಗಿರಿಯಲ್ಲೂ ಶ್ರೀರಾಮನವಮಿ: ಮೈಸೂರಿನ ಉದಯಗಿರಿಯಲ್ಲಿರುವ ಶ್ರೀರಾಮಧಾಮದಲ್ಲಿ ಶ್ರದ್ಧಾ ಭಕ್ತಿಯಿಂದ ಶ್ರೀರಾಮನವಮಿ ಆಚರಿಸಲಾಯಿತು. ದೇವಾಲಯದಲ್ಲಿ ಬೆಳಗಿನಿಂದ ವಿಶೇಷ ಪೂಜಾ ಮಹೋತ್ಸವ ಜರುಗಿತು. ನವಗ್ರಹ ಹೋಮ, ರಾಮತಾರಕ ಯಾಗ, ಅಭಿಷೇಕ, ವಿಷ್ಣು ಸಹಸ್ರನಾಮ, ಪಟ್ಟಾಭಿರಾಮ ದೇವರಿಗೆ ಲಕ್ಷ ತುಳಸಿ ಅರ್ಚನೆ ನೆರವೇರಿಸಲಾಯಿತು. ಇದೇ ವೇಳೆ 80ಕ್ಕೂ ಹೆಚ್ಚು ಮಹಿಳೆಯರು ಸಾಮೂಹಿಕವಾಗಿ ರಾಮ ನಾಮ ಸ್ಮರಣೆ ಪಠಿಸಿದರು.

ಅರಮನೆ ದೇವಾಲಯಗಳಲ್ಲೂ ಪೂಜೆ: ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯ, ಶ್ರೀರಾಮ ದೇವಾಲಯ, ಇರ್ವಿನ್ ರಸ್ತೆಯ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಾಲಯದಲ್ಲಿ ವಿವಿಧ ಧಾರ್ಮಿಕ ಕಾರ್ಯ ಜರುಗಿದವು. ಶ್ರೀರಾಮ ಭಕ್ತವೃಂದ ಸೇವಾ ಟ್ರಸ್ಟ್ ವತಿಯಿಂದ ಜೆಪಿ ನಗರದ ಶ್ರೀರಾಮಮಂದಿರ, ಶ್ರೀರಾಮ ಪೇಟೆಯ ಶ್ರೀರಾಮಮಂದಿರದಲ್ಲಿ ವಿವಿಧ ದೇವತಾ ಕಾರ್ಯ, ಯಾದವಗಿರಿಯ ಶ್ರೀ ಉತ್ತರಾದಿ ಮಠದ ಶ್ರೀ ಆಂಜನೇಯ ಸ್ವಾಮಿ ದೇವಾಲಯ, ಗಣಪತಿ ಸೇವಾ ಮಂಡಳಿ ಟ್ರಸ್ಟ್ ವತಿಯಿಂದ ರಾಮಕೃಷ್ಣ ನಗರದ ಐ ಬ್ಲಾಕ್‌ನ ಗಣಪತಿ ದೇವಸ್ಥಾನದಲ್ಲಿ ವಿವಿಧ ಪೂಜಾ ಕಾರ್ಯ ನಡೆಯಿತು.

ಶ್ರೀರಾಮಪೇಟೆಯ ವಿನೋಬಾ ರಸ್ತೆಯ ಶ್ರೀ ರಾಮಾಭ್ಯುದಯ ಸಭಾದಲ್ಲಿ ಶ್ರೀ ರಾಮನವಮಿ ಪ್ರಯುಕ್ತ ಸಂಗೀತ ಕಾರ್ಯಕ್ರಮ ಜರುಗಿತು. ಶ್ರೀರಾಮ ಸೇವಾ ಮಂಡಲಿ ವತಿಯಿಂದ ಚಾಮುಂಡಿಪುರಂನ ಶ್ರೀ ಶಂಕರನಾರಾಯಣ ಸ್ವಾಮಿ ದೇವಸ್ಥಾನದಲ್ಲಿ ವಿದ್ವಾನ್ ಸುರೇಶ್‌ರಿಂದ ಗಾಯನ, ಶ್ರೀ ರಾಮಸೇವಾ ಮಂಡಳಿ ಚಾರಿಟಬಲ್ ಟ್ರಸ್ಟ್‌ನಿಂದ ವಿವಿ ಮೊಹಲ್ಲಾದ ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪದಲ್ಲಿ ಸುಜಾತಾ ಗುರುವರಿಂದ ಹಿಂದೂಸ್ತಾನಿ ಗಾಯನ ನಡೆಯಿತು. ವಾರ್ಡ್ ಸಂಖ್ಯೆ 23ರ ಸ್ನೇಹಿತರ ಬಳಗದ ವತಿಯಿಂದ ಸದ್ವಿದ್ಯಾ ವೃತ್ತದಲ್ಲಿರುವ ವೀರಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಶ್ರೀರಾಮನವಮಿ ಹಬ್ಬದ ಪ್ರಯುಕ್ತ ಪಾನಕ ಮಜ್ಜಿಗೆ, ಪ್ರಸಾದ ವಿತರಿಸಲಾಯಿತು. ಪಡುವಾರಹಳ್ಳಿ ಜನಪರ ವೇದಿಕೆ ವತಿಯಿಂದ ರಾಮನವಮಿ ಪ್ರಯುಕ್ತ ಸಾರ್ವಜನಿಕರಿಗೆ ಪಾನಕ ಹಾಗೂ ಮಜ್ಜಿಗೆ ವಿತರಿಸಲಾಯಿತು. ವೇದಿಕೆಯ ಪದಾಧಿಕಾರಿಗಳಾದ ನಟರಾಜ್, ಎನ್.ಬೆಟ್ಟೇಗೌಡ, ಸೋಮು, ದೇವರಾಜ್, ಗಿರೀಶ್, ದೇವೇಂದ್ರ ದಿನೇಶ್, ಮಾಯಣ್ಣ ಮುಂತಾದವರು ಇದ್ದರು. ಶಾಸಕ ಎಲ್. ನಾಗೇಂದ್ರ, ಸದ್ವಿದ್ಯಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ನರಹರಿಬಾಬು, ಸಹ ಕಾರ್ಯದರ್ಶಿ ಪ್ರೊ.ಹಿರಿಯಣ್ಣ, ಬಿಜೆಪಿ ನಗರಾಧ್ಯಕ್ಷ ಟಿ.ಎಸ್. ಶ್ರೀವತ್ಸ ಮುಖಂಡರಾದ ಮೈ.ವಿ.ರವಿಶಂಕರ್, ಮೋಹನ್, ಪರಮೇಶ್, ಸುರೇಂದ್ರ, ಕಿರಣ್, ಸಂಜಯ್, ಸಂದೀಪ್, ಶ್ರೀನಿವಾಸ್, ನಾಗರಾಜ್, ಪ್ರಮೋದ್, ಪ್ರವೀಣ್, ಆನಂದ, ವಿಘ್ನೇಶ್ವರ ಭಟ್, ವಿನೋದ್, ಶ್ರವಣ್, ಶರ್ಮ, ಶ್ರೀಲಕ್ಷ್ಮೀ, ಪಿಂಕಿ, ಪದ್ಮ, ಚಂದ್ರಕಲಾ, ಸುಕನ್ಯಾ, ಸುದರ್ಶನ್, ನವೀನ್, ರವಿ, ಪಾಪಣ್ಣ ಇತರರು ಭಾಗವಹಿಸಿದ್ದರು.

ವಿಧಾನಸಭಾ ಚುನಾವಣೆ: ನೀತಿ ಸಂಹಿತೆ ಜಾರಿ ಹಿನ್ನೆಲೆ

ಕೊಡಗು ಜಿಲ್ಲೆಯಾದ್ಯಂತ 14 ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ

ಬಿಗಿ ಪೊಲೀಸ್ ಬಂದೋಬಸ್ತ್, 24 ಗಂಟೆಗಳ ಕಾಲ ಕಾರ್ಯ ನಿರ್ವಹಣೆ



ಮಡಿಕೇರಿ, ಮಾ.30– ವಿಧಾನ ಸಭಾ ಚುನಾವಣೆ ಹಿನ್ನೆಲೆಯಲ್ಲಿ ಕೊಡಗು ಜಿಲ್ಲೆಯಾದ್ಯಂತ ನೀತಿ ಸಂಹಿತೆ ಜಾರಿಯಾಗಿದ್ದು, ಚೆಕ್ ಪೋಸ್ಟ್‌ಗಳಲ್ಲಿ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ತಪಾಸಣೆ ನಡೆಸುತ್ತಿದೆ. ಜಿಲ್ಲೆಯಲ್ಲಿ ಒಟ್ಟು 14 ಚೆಕ್ ಪೋಸ್ಟ್‌ಗಳನ್ನು ಚುನಾವಣೆ ಹಿನ್ನೆಲೆಯಲ್ಲಿ ತೆರೆಯಲಾಗಿದ್ದು, ಜಿಲ್ಲೆಯಿಂದ ಹೊರ ಹೋಗುವ ಮತ್ತು ಒಳ ಬರುವ ಎಲ್ಲಾ ವಾಹನಗಳ ತಪಾಸಣೆ ನಡೆಸಲಾಗುತ್ತಿದೆ. ಎಲ್ಲಾ ಚೆಕ್ ಪೋಸ್ಟ್‌ಗಳು ದಿನದ 24 ಗಂಟೆಗಳ ಕಾಲ ಕಾರ್ಯ ನಿರ್ವಹಿಸುತ್ತಿದ್ದು, ಹೆಚ್ಚುವರಿ ಪೊಲೀಸ್ ಸಿಬ್ಬಂದಿಗಳನ್ನು ಸ್ಥಳದಲ್ಲಿ ನಿಯೋಜಿಸಲಾಗಿದೆ.

ಚೆಕ್ ಪೋಸ್ಟ್‌ಗಳು: ಕೊಡಗು ಜಿಲ್ಲೆ ಕೇರಳ ರಾಜ್ಯದೊಂದಿಗೆ ಗಡಿ ಹಂಚಿಕೊಂಡಿರುವ ಹಿನ್ನೆಲೆಯಲ್ಲಿ 3 ಅಂತರ್ ರಾಜ್ಯ ಚೆಕ್‌ಪೋಸ್ಟ್ ತೆರೆಯಲಾಗಿದೆ. ಕೇರಳ ಗಡಿಯ ಕರಿಕೆ, ಮಾಕುಟ್ಟ ಹಾಗೂ ಪೆರುಂಬಾಡಿ ಅಂತರ್ ರಾಜ್ಯ ಚೆಕ್‌ಪೋಸ್ಟ್‌ಗಳಾಗಿದ್ದು, 11 ಅಂತರ್ ಜಿಲ್ಲಾ ಚೆಕ್‌ಪೋಸ್ಟ್‌ಗಳು ಕಾರ್ಯಾಚರಿಸುತ್ತಿವೆ. ಮೈಸೂರು, ಹಾಸನ, ಸುಳ್ಯ ಸಂಪರ್ಕಿಸುವ ಪ್ರದೇಶಗಳಲ್ಲಿ 100 ಮೀಟರ್ ಅಂತರದಲ್ಲಿ ತಲಾ 2 ಚೆಕ್‌ಪೋಸ್ಟ್ ತೆರೆಯಲಾಗಿದೆ.

ಸಾರ್ವಜನಿಕರ ಅನುಕೂಲಕ್ಕಾಗಿ ಕೊಡಗಿನಿಂದ ಹೊರ ಹೋಗುವ ವಾಹನಗಳನ್ನು ಕೊಡಗು ಗಡಿಯಲ್ಲಿ ತಪಾಸಣೆ ನಡೆಸಲಾಗುತ್ತಿದ್ದು, ಕೊಡಗು ಪ್ರವೇಶಿಸುವ ವಾಹನಗಳನ್ನು ಅಂತರ್ ಜಿಲ್ಲಾ ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ನಡೆಸಲಾಗುತ್ತಿದೆ. ಅರಣ್ಯ ಇಲಾಖೆ, ಕಂದಾಯ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಜಂಟಿಯಾಗಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಅಬಕಾರಿ ಇಲಾಖೆ ಅಕ್ರಮ ಮದ್ಯ ಮಾರಾಟ, ಕಳ್ಳಭಟ್ಟಿ ತಯಾರಿಕೆ ಮತ್ತಿತ್ತರ ಅಕ್ರಮ ಚಟುವಟಿಕೆಗಳ ಮೇಲೆ ಕಣ್ಣಿಟ್ಟಿದ್ದು, ಪೊಲೀಸ್ ಇಲಾಖೆ ಅಕ್ರಮ ಹಣ ಸಾಗಾಟ, ಆಮಿಷ ಒಡ್ಡುವ ವಸ್ತುಗಳು, ಗಾಂಜಾ ಮಾರಾಟ ಮತ್ತಿತ್ತರ ಕಾನೂನು ಬಾಹಿರ ಚಟುವಟಿಕೆಗಳ ಮೇಲೆ ಕಣ್ಣಿಟ್ಟಿದೆ.

ಹೆಚ್ಚುವರಿ ಭದ್ರತಾ ಸಿಬ್ಬಂದಿ: ಈಗಾಗಲೇ ಸೂಕ್ಷ್ಮ, ಅತೀ ಸೂಕ್ಷ್ಮ ಮತಗಟ್ಟೆಗಳು ಹಾಗೂ ಸೂಕ್ಷ್ಮ ಪ್ರದೇಶಗಳನ್ನು ಪೊಲೀಸ್ ಇಲಾಖೆ ಗುರುತು ಮಾಡಿದೆ. ಚುನಾವಣಾ ಸಂದರ್ಭ ಈ ಮತಗಟ್ಟೆಗಳಿಗೆ ಹೆಚ್ಚುವರಿ ಭದ್ರತಾ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗುತ್ತಿದೆ. ಇದಕ್ಕಾಗಿ ಹೊರ ರಾಜ್ಯಗಳಿಂದ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯ ಶಸ್ತ್ರಸಜ್ಜಿತ ಯೋಧರನ್ನು ಕೊಡಗು ಜಿಲ್ಲೆಗೆ ಕರೆಸಲಾಗುತ್ತಿದೆ. ಮುಂದಿನ ವಾರ ಈ ಯೋಧರ ತಂಡ ಕೊಡಗು ಜಿಲ್ಲೆಗೆ ಆಗಮಿಸಲಿರುವುದಾಗಿ ಮೂಲಗಳಿಂದ ತಿಳಿದು ಬಂದಿದ್ದು, ಕೆಲವು ಚೆಕ್‌ಪೋಸ್ಟ್‌ಗಳಲ್ಲಿಯೂ ಕರ್ತವ್ಯಕ್ಕಾಗಿ ನಿಯೋಜಿಸಲಾಗುತ್ತದೆ. ಎರಡು ವಿಧಾನಸಭಾ ಕ್ಷೇತ್ರಗಳಲ್ಲಿಯೂ ಈ ಯೋಧರು ಕರ್ತವ್ಯ ನಿರ್ವಹಿಸಲಿದ್ದಾರೆ.

6 ಚುನಾವಣಾ ಆಯೋಗದ ನಿರ್ದೇಶನದಂತೆ ಈಗಾಗಲೇ ಸೋಮವಾರಪೇಟೆ ಹಾಗೂ ಕುಶಾಲನಗರದ ತಲಾ ಓರ್ವ ವ್ಯಕ್ತಿ ಸೇರಿದಂತೆ ಒಟ್ಟು ಇಬ್ಬರನ್ನು ಜಿಲ್ಲೆಯಿಂದ ಗಡಿಪಾರು ಮಾಡಲಾಗಿದ್ದು, ಗೂಂಡಾ ಕಾಯಿದೆ ಅಡಿ ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ. ಭಯಮುಕ್ತ, ಪಾರದರ್ಶಕ ಚುನಾವಣೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಇತರ 6 ಮಂದಿಯ ಗಡಿಪಾರಿಗೆ ಶಿಫಾರಸು ಮಾಡಲಾಗಿದೆ. ಒಟ್ಟು 600 ಮಂದಿಯ ಚಲನ ವಲನಗಳ ಬಗ್ಗೆ ಕಣ್ಣಿಡಲಾಗಿದ್ದು, ಜಿಲ್ಲೆಯಾದ್ಯಂತ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.



–ಕೆ.ರಾಮರಾಜನ್, ಕೊಡಗು ಎಸ್.ಪಿ.

ನೀತಿ ಸಂಹಿತೆ ಉಲ್ಲಂಘನೆ: ಇಬ್ಬರು ಕಾಂಗ್ರೆಸ್ ಮುಖಂಡರಿಗೆ ನೋಟೀಸ್

ಮಡಿಕೇರಿ, ಮಾ.30– ಚುನಾವಣಾ ನೀತಿ ಸಂಹಿತೆಯನ್ನು ಉಲ್ಲಂಘಿಸಿದ ಆರೋಪದ ಮೇಲೆ ಕಾಂಗ್ರೆಸ್ ಪಕ್ಷದ ಇಬ್ಬರು ಮುಖಂಡರಿಗೆ ಕೊಡಗು ಚುನಾವಣಾಧಿಕಾರಿ ನೋಟೀಸ್ ಜಾರಿ ಮಾಡಿದ್ದಾರೆ.

ಮಡಿಕೇರಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಮಂಥರ್‌ಗೌಡ ಮತ್ತು ಕುಶಾಲನಗರದ ವಿ.ಪಿ. ಶಶಿಧರ್ ಎಂಬುವರಿಗೆ ಈ ನೋಟೀಸ್ ಜಾರಿ ಮಾಡಲಾಗಿದೆ. ಮಂಥರ್‌ಗೌಡ ಪಕ್ಷದ ಚಿಹ್ನೆ ಬಳಸಿ ರಾಮನವಮಿ ಶುಭಾಶಯ ಕೋರುವ ವೀಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿತ್ತು. ಇದೇ ರೀತಿ ವಿ.ಪಿ. ಶಶಿಧರ್ ಕೂಡ ರಾಜಕೀಯ ಪ್ರೇರಿತ ವೀಡಿಯೋವೊಂದನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಟ್ಟಿದ್ದರಿಂದ ವಿವರಣೆ ಕೇಳಿ ಈ ನೋಟೀಸ್ ಜಾರಿ ಮಾಡಲಾಗಿದೆ ಎಂದು ಖಾಸಗಿ ಸುದ್ದಿವಾಹಿನಿ ಪ್ರಸಾರ ಮಾಡಿದೆ.

ಕೊಡವ ಕುಟುಂಬಗಳ ಅಪ್ಪಚೆಟ್ಟೋಳಂಡ ಹಾಕಿ ಉತ್ಸವ

ಮಾತಂಡ, ಮಂಡೆಪಂಡ, ಕುಪ್ಪಂಡ, ಪಟ್ಟಚಂಡ ಸೇರಿ ಹಲವು ತಂಡಗಳು ಮುಂದಿನ ಸುತ್ತಿಗೆ ಪ್ರವೇಶ



ನಾಪೋಕ್ಲು/ಗೋಣಿಕೊಪ್ಪ, ಮಾ.30– ಕೊಡವ ಕುಟುಂಬಗಳ ನಡುವಿನ 23ನೇ ವರ್ಷದ ಅಪ್ಪಚೆಟ್ಟೋಳಂಡ ಹಾಕಿ ಪಂದ್ಯಾವಳಿ ನಾಪೋಕ್ಲುವಿನಲ್ಲಿ ನಡೆಯುತ್ತಿದ್ದು, ಗುರುವಾರ ನಡೆದ ಪಂದ್ಯಾವಳಿಯಲ್ಲಿ ಬಲಿಷ್ಠ ತಂಡಗಳಾದ ಮಾತಂಡ, ಮಂಡೇಪಂಡ, ಕುಪ್ಪಂಡ (ಕೈಕೇರಿ), ಮುಟ್ಟಿಚಂಡ, ಪಟ್ಟಡ, ನಾಪಂಡ, ಮುಳ್ಳಂಗಡ, ಕಂಬೀರಂಡ, ಕಳ್ಳಿಚಂಡ, ಕರಿನೆರವಂಡ, ಬೊಳ್ಳಂಡ, ಚೀಯಕ್ಪೂವಂಡ, ಬೊಟ್ಟೋಳಂಡ, ಬಿದ್ದಂಡ, ಮಣವಟ್ಟೀರ, ಕೊಂಗೆಟ್ಟೀರ, ಮೇರಿಯಂಡ, ವಾಟೇರಿರ, ಆಳ್ತಂಡ, ಬೊಳಕಾರಂಡ, ಅಚ್ಚಪಂಡ ತಂಡಗಳು ಜಯಭೇರಿ ಬಾರಿಸಿ ಮುಂದಿನ ಹಂತ ಪ್ರವೇಶಿಸಿದವು.

ವಿವರ: ಮಾತಂಡ ತಂಡವು ಚೇನಂಡ ತಂಡದ ವಿರುದ್ಧ 5–4 ಗೋಲುಗಳ ಅಂತರದಲ್ಲಿ ಗೆಲುವು ಪಡೆಯಿತು, ಮಂಡೇಪಂಡವು ಕಡೇಮಾಡ ವಿರುದ್ಧ 2–0 ಗೋಲು, ಕುಪ್ಪಂಡ (ಕೈಕೇರಿ) ತಂಡ ಬಿದ್ದಾಟಂಡ ವಿರುದ್ಧ 3–0 ಗೋಲುಗಳ ಅಂತರದಲ್ಲಿ ಗೆಲುವು ಸಾಧಿಸಿತು. ಮುಟ್ಟಿಚಂಡ ಕಾವಾಡಿಚಂಡ ವಿರುದ್ಧ 3–1 ದಾಖಲಿಸಿತು. ಪಟ್ಟಡ ಬಲ್ಲಚಂಡ ವಿರುದ್ಧ 5–4 ಅಂತರದಲ್ಲಿ, ನಾಪಂಡ ತಂಡವು ಚೇಂದಂಡ ವಿರುದ್ಧ 2–0 ಗೋಲುಗಳಲ್ಲಿ ಗೆಲುವು ಪಡೆದುಕೊಂಡಿತು. ಮುಳ್ಳಂಗಡ ತಂಡ ಆದೇಂಗಡವನ್ನು 4–0 ಗೋಲುಗಳ ಅಂತರದಲ್ಲಿ ಸೋಲಿಸಿತು. ಕಂಬೀರಂಡ ಮಚ್ಚಾರಂಡ ತಂಡವನ್ನು 1–0 ಗೋಲುಗಳಲ್ಲಿ ಸೋಲಿಸಿತು. ಕಳ್ಳಿಚಂಡ ಕಂಗಂಡ ವಿರುದ್ಧ 2–0 ಅಂತರದಲ್ಲಿ ಗೆಲುವು ಸಾಧಿಸಿತು.

ಕರಿನೆರವಂಡ ಕರವಂಡ ವಿರುದ್ಧ 2–0 ಗೋಲು ಹೊಡೆಯಿತು. ಬೊಳ್ಳಂಡ ಅಪ್ಪಂಡೇರಂಡ 3–0 ಗೋಲುಗಳನ್ನು ಹೊಡೆಯುವುದರ ಮೂಲಕ ಗೆಲುವು ಪಡೆದುಕೊಂಡಿತ್ತು. ಚೀಯಕ್ಪೂವಂಡ ಮನೆಯಪಂಡ 2–1 ಗೋಲು, ಬೊಟ್ಟೋಳಂಡ ಕುಳ್ಳಚಂಡ ವಿರುದ್ಧ 1–0 ಗೋಲುಗಳ ಮೂಲಕ ಗೆಲುವು ಪಡೆಯಿತು.

ಬಿದ್ದಂಡ ತಂಡವು ಅರೆಯಡ ತಂಡದ ವಿರುದ್ಧ 7–6 ಗೋಲುಗಳ ಅಂತರದಲ್ಲಿ ರೋಚಕ ಗೆಲುವು ಸಾಧಿಸಿತು.

ಮಣವಟ್ಟೀರ ತಂಡವು ಪುಟ್ಟಮಾಡ ವಿರುದ್ಧ 2–0 ಗೋಲುಗಳ, ಕೊಂಗೆಟ್ಟೀರ ಬೇರೇರ ತಂಡದ ವಿರುದ್ಧ 2–0 ಗೋಲು ಹೊಡೆದು ಗೆಲುವು ಸಾಧಿಸಿತು. ಮೇರಿಯಂಡ ತಂಡ ಕುಮ್ಮಂಡ ವಿರುದ್ಧ 2–1 ಗೋಲುಗಳಲ್ಲಿ ಜಯಿಸಿತು, ವಾಟೇರಿರ ತಂಡ ಕೊಂಡೀರ ತಂಡದ ವಿರುದ್ಧ 1–0, ಆಳ್ತಂಡ ತಂಡ ಮುಂಡಚಾಡಿರ ತಂಡದ ವಿರುದ್ಧ 4–2, ಬೊಳಕಾರಂಡ ತಂಡ ಕೇಲೆಟಿರ ತಂಡವನ್ನು 4–3 ಅಂತರದಲ್ಲಿ ಸೋಲಿಸಿತು, ಅಚ್ಚಪಂಡ ತಂಡ ಅಲ್ಲುಮಾಡ ವಿರುದ್ಧ 1–0 ಗೋಲುಗಳಲಿ ಗೆಲುವು ಸಾಧಿಸಿತು.

ಕುಶಾಲನಗರ ಬಳಿ ಅಕ್ರಮವಾಗಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಮೂವರ ಬಂಧನ







ಕುಶಾಲನಗರ, ಮಾ.30– ತಾಲೂಕು ವ್ಯಾಪ್ತಿಯ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಾನೂನು ಬಾಹಿರವಾಗಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ ಮೂವರನ್ನು ಜಿಲ್ಲಾ ಪೊಲೀಸರು ಬಂಧಿಸಿದ್ದಾರೆ.

ಕೊಡಗು ಜಿಲ್ಲೆಯ ವಿವಿಧೆಡೆ ಮಾದಕ ವಸ್ತು, ಗಾಂಜಾ ಮಾರಾಟ ನಿರಂತರವಾಗಿ ನಡೆಯುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಮಾದಕ ವಸ್ತುಗಳ ಮಾರಾಟವನ್ನು ತಡೆಗಟ್ಟಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ.

ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೆ.ಎಸ್. ಸುಂದರರಾಜ್ ಹಾಗೂ ಸೋಮವಾರಪೇಟೆ ವಿಭಾಗದ ಪೊಲೀಸ್ ಉಪ ಅಧೀಕ್ಷಕ ಗಂಗಾಧರಪ್ಪ ಅವರ ಮಾರ್ಗದರ್ಶನದಲ್ಲಿ ಕುಶಾಲನಗರ ವೃತ್ತ ನಿರೀಕ್ಷಕ ಬಿ.ಜಿ.ಮಹೇಶ್ ನೇತೃತ್ವದಲ್ಲಿ ತಂಡ ರಚನೆ ಮಾಡಿ ಖಚಿತ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿದ ಪರಿಣಾಮ ಕೂಡಿಗೆ ಸೇತುವೆ ಬಳಿ ಬುಧವಾರ ಮಾದಕ ವಸ್ತು ಮಾರಾಟ ಮಾಡುತ್ತಿದ್ದ ಮೂವರನ್ನು ಮಾಲು ಸಮೇತ ಬಂಧಿಸಿದರು.

ಕುಶಾಲನಗರದ ನಿವಾಸಿ ಕೇರಳ ಮೂಲದ ಹೆಚ್.ಅಕ್ಬರ್ (29), ಮಹಮ್ಮದ್ ರಫಿ(28) ಹಾಗೂ ಟಿ.ಕೆ.ರಿಷಿಕುಮಾರ್ (34) ಬಂಧಿತರಾಗಿದ್ದು, ಇವರಿಂದ 13 ಗ್ರಾಂ ಗಾಂಜಾ ಹಾಗೂ 41 ಗ್ರಾಂ MDMA ನಿಷೇಧಿತ ಮಾದಕ ವಸ್ತುವನ್ನು ದಸ್ತಗಿರಿ ಮಾಡಲಾಗಿದೆ.

ಕಾರ್ಯಾಚರಣೆಯಲ್ಲಿ ಪಿಎಸ್‌ಐ ಡಿ.ಎಸ್.ಪುನೀತ್, ಎಂ.ದಿನೇಶ್‌ಕುಮಾರ್ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಪ್ರಕರಣ ಪತ್ತೆ ಹಚ್ಚಿದ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ಎಸ್ಪಿ ಕೆ.ರಾಮರಾಜನ್ ಶ್ಲಾಘಿಸಿದ್ದಾರೆ.

ಸೂಚನೆ: ಯುವಕ–ಯುವತಿಯರು ಮಾದಕ ವ್ಯಸನಿಗಳಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುವುದನ್ನು ತಡೆಗಟ್ಟಲು ಮಾದಕ ವಸ್ತು ಬಳಸುವ ಹಾಗೂ ಮಾರಾಟ ಮಾಡುವ ವ್ಯಕ್ತಿಗಳು ಕಂಡು ಬಂದಲ್ಲಿ ಸ್ಥಳೀಯ ಪೊಲೀಸ್ ಠಾಣೆ ಹಾಗೂ ಕೆಎಸ್ಪಿ ತಂತ್ರಾಂಶದ ಮೂಲಕ ಮಾಹಿತಿ ನೀಡುವಂತೆ ಸಾರ್ವಜನಿಕರನ್ನು ಕೋರಲಾಗಿದೆ. ಅಕ್ರಮ ಚಟುವಟಿಕೆಗಳ ಕುರಿತು ಮಾಹಿತಿ ಒದಗಿಸಿದವರ ವಿವರವನ್ನು ಗೌಪ್ಯವಾಗಿಡಲಾಗುವುದು ಎಂದು ಪೊಲೀಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆಯಿಂದ ಕೆದಮುಳ್ಳೂರಲ್ಲಿ ಶ್ರೀ ಚಾಮುಂಡಿದೇವಿ ತೆರೆ

ವಿರಾಜಪೇಟೆ, ಮಾ.30– ವಿರಾಜಪೇಟೆ ಸಮೀಪದ ಕೆದಮುಳ್ಳೂರು ಗ್ರಾಮದ ಶ್ರೀ ಚಾಮುಂಡಿ ದೇವಿಯ ತೆರೆ ಮಹೋತ್ಸವವು ಏ.1 ರಿಂದ 3 ರವರೆಗೆ ನಡೆಯಲಿದ್ದು, ಏ.1 ರಂದು ಕೊಟ್ಟಿಪಾಡುವುದರೊಂದಿಗೆ ಹಬ್ಬಕ್ಕೆ ಚಾಲನೆ ನೀಡಲಾಗುವುದು, ಏ.2ರಂದು ರಾತ್ರಿ 8 ಗಂಟೆಗೆ ತಕ್ಕರ ಮನೆಯಿಂದ ಬಂಢಾರ ತರುವುದು, ಮೇಲೇರಿ ಹಾಕುವುದು, ಬಳಿಕ ತೆರೆ (ಕೋಲ)ಗಳು ನಡೆಯಲಿದೆ.

ಏ.3ರಂದು ದೊಡ್ಡಹಬ್ಬ ಬೆಳಗ್ಗೆ 7.30ಕ್ಕೆ ಪ್ರಮುಖವಾದ ವಿಷ್ಣುಮೂರ್ತಿ ಕೋಲ ದೇವಾಲಯದ ಮುಂದೆ ಸಿದ್ಧಪಡಿಸಲಾಗಿರುವ ಮೇಲೇರಿ ಗುಡ್ಡೆ (ಬೆಂಕಿ ಕೊಂಡದ) ಮೇಲೆ 101 ಬಾರಿ ಬೀಳಲಿದ್ದು, ಬಳಿಕ ಮಧ್ಯಾಹ್ನ 12 ಗಂಟೆಗೆ ಚಾಮುಂಡಿ (ಚೌಂಡಿ) ದೇವಿಯ ತೆರೆ ನಡೆಯಲಿದೆ. ಮಧ್ಯಾಹ್ನ 3 ಗಂಟೆಗೆ ಶ್ರೀ ಚಾಮುಂಡಿ ದೇವರು ಬನಕ್ಕೆ ತೆರಳಲಿದೆ. ಉತ್ಸವದ ಕೊನೆಯ ತೆರೆ ಕೆಂಪು ವಸ್ತ್ರದಲ್ಲಿ ಆಕರ್ಷಕವಾಗಿರುತ್ತದೆ, ಉದ್ದನೆಯ ಬಿದಿರಿನಿಂದ ತಯಾರಿಸಿದ, ಶೃಂಗಾರಗೊಳಿಸಿದ ಮುಡಿಯನ್ನು ಏರಿಸಲಾಗುತ್ತದೆ. ಸಂಜೆ ವೇಳೆ ದೇವರು ಬನಕ್ಕೆ ತೆರಳಿ ಅಲ್ಲಿ ವಿಧಿ ವಿಧಾನಗಳನ್ನು ಪೂರೈಸಿದ ಬಳಿಕ ವಾರ್ಷಿಕ (ಕೋಲ) ಮಹೋತ್ಸವಕ್ಕೆ ತೆರೆ ಎಳೆಯಲಾಗುತ್ತದೆ ಎಂದು ಚಾಮುಂಡಿ ದೇವಸ್ಥಾನದ ಪ್ರಕಟಣೆ ತಿಳಿಸಿದೆ.

ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

ಮಡಿಕೇರಿ, ಮಾ.30– ಎಸ್ಸೆಸ್ಸೆಲ್ಸಿ ಪರೀಕ್ಷೆಯು ಮಾ.31 ರಿಂದ ಆರಂಭವಾಗಲಿದ್ದು, ಜಿಲ್ಲೆಯಲ್ಲಿ 170 ಶಾಲೆಗಳ 6,587 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಸಿ.ರಂಗಧಾಮಯ್ಯ ತಿಳಿಸಿದ್ದಾರೆ.

ಮಡಿಕೇರಿ ತಾಲೂಕಿನ 43 ಶಾಲೆಗಳ 1,886, ಸೋಮವಾರಪೇಟೆ ತಾಲೂಕಿನ 70 ಶಾಲೆಗಳ 2,611 ವಿದ್ಯಾರ್ಥಿಗಳು, ವಿರಾಜಪೇಟೆ ತಾಲೂಕಿನ 57 ಶಾಲೆಯ 2,090 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಯ ದಿನಗಳಂದು ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ತಲುಪಲು ಅನುಕೂಲವಾಗುವಂತೆ ಸಾಕಷ್ಟು ಬಸ್ ಸೌಲಭ್ಯ ಒದಗಿಸಲಾಗಿದ್ದು, ವಿದ್ಯಾರ್ಥಿಗಳು ತಮ್ಮ ಪರೀಕ್ಷಾ ಪ್ರವೇಶ ಪತ್ರಗಳನ್ನು ತೋರಿಸಿ ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡಬಹುದಾಗಿದೆ.

ಬಾಲಕಿ ಮೇಲೆ ಅತ್ಯಾಚಾರ: ಕಾಮುಕನಿಗೆ 20 ವರ್ಷ ಜೈಲು ಶಿಕ್ಷೆ, 25 ಸಾವಿರ ದಂಡ



ಚಾಮರಾಜನಗರ, ಮಾ.30– ಏಳು ವರ್ಷದ ಬಾಲಕಿ ಮೇಲೆ ಅತ್ಯಾಚಾರವೆಸಗಿದ್ದ ಕಾಮುಕನಿಗೆ ನಗರದ ಮಕ್ಕಳ ಸ್ನೇಹಿ ಹಾಗೂ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷೆನ್ಸ್ ನ್ಯಾಯಾಲಯ 20 ವರ್ಷಗಳ ಜೈಲು ಶಿಕ್ಷೆ ಮತ್ತು 25 ಸಾವಿರ ರೂ. ದಂಡ ವಿಧಿಸಿ ಗುರುವಾರ ತೀರ್ಪು ನೀಡಿದೆ.

ಕೊಳ್ಳೇಗಾಲ ತಾಲೂಕಿನ ದೊಡ್ಡಿಂದುವಾಡಿ ಗ್ರಾಮದ ನಿವಾಸಿ 24 ವರ್ಷದ ಸತೀಶ (ಕ್ವಾಟ್ಲೆ ಸತೀಶ) ಶಿಕ್ಷೆಗೆ ಗುರಿಯಾದ ಕಾಮುಕ. 2021ರ ಜುಲೈ 25ರಂದು ಈ ಘಟನೆ ನಡೆದಿತ್ತು. ಪ್ರಕರಣದ ಆರೋಪಿ ಸತೀಶ ರಾತ್ರಿ 8.30ರ ಸಮಯದಲ್ಲಿ 7 ವರ್ಷದ ಅಪ್ರಾಪ್ತ ಬಾಲಕಿ ಅಂಗಡಿಗೆ ಹೋಗಿ ವಾಪಸಾಗುತ್ತಿದ್ದಾಗ, ನಿರ್ಜನ ಪ್ರದೇಶಕ್ಕೆ ಎತ್ತಿಕೊಂಡು ಹೋಗಿ ಅತ್ಯಾಚಾರವೆಸಗಿದ್ದ. ಈ ವೇಳೆ ಕಿರುಚಿಕೊಂಡ ಬಾಲಕಿಗೆ ನೀನು ಕೂಗಾಡಿದರೆ ಕೊಲೆ ಮಾಡುವುದಾಗಿ ಬೆದರಿಕೆಯೊಡ್ಡಿದ್ದ. ಈ ವಿಷಯವನ್ನು ಮನೆಗೆ ಹಿಂತಿರುಗಿದ ಬಾಲಕಿ ಕುಟುಂಬದವರಿಗೆ ತಿಳಿಸಿದ್ದಳು.

ತಕ್ಷಣ ಮನೆಯವರು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ಸಂಬಂಧ ಕೊಳ್ಳೇಗಾಲ ಗ್ರಾಮಾಂತರ ಠಾಣೆಯ ಅಂದಿನ ಸರ್ಕಲ್ ಇನ್‌ಸ್ಪೆಕ್ಟರ್ ಶಿವರಾಜ್ ಆರ್.ಮುಧೋಳ್ ಪ್ರಕರಣದ ದಾಖಲಿಸಿಕೊಂಡು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಮಕ್ಕಳ ಸ್ನೇಹಿ ಹಾಗೂ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಎ.ಸಿ. ನಿಶಾರಾಣಿ ಅವರು ಅಪರಾಧ ಸಾಬೀತಾದ ಹಿನ್ನೆಲೆಯಲ್ಲಿ ಕೃತ್ಯವೆಸಗಿದ ಸತೀಶನಿಗೆ ಪೋಕ್ಸೋ ಕಾಯ್ದೆ ಮತ್ತು ಭಾರತೀಯ ದಂಡ ಸಂಹಿತೆ ಕಲಂ ಅಡಿಯಲ್ಲಿ 20 ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸಿದ್ದಾರೆ. ಅಲ್ಲದೇ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ನೊಂದ ಬಾಲಕಿಗೆ 2 ಲಕ್ಷ ರೂ. ಪರಿಹಾರ ಧನ ನೀಡಬೇಕೆಂದು ಆದೇಶಿಸಿದ್ದಾರೆ. ಪ್ರಾಸಿಕ್ಯೂಷನ್ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಕೆ. ಯೋಗೇಶ್ ವಾದ ಮಂಡಿಸಿದ್ದರು.

ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸಿ

ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಸೂಚನೆ



ಚಾಮರಾಜನಗರ, ಮಾ.30– ವಿಧಾನಸಭಾ ಚುನಾವಣೆ ಸಂಬಂಧ ಮಾದರಿ ನೀತಿ ಸಂಹಿತೆ ಪಾಲನೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಜೊತೆಗೆ ಚುನಾವಣಾ ಸಂಬಂಧ ಎಲ್ಲ ಕಾರ್ಯಗಳ ಸಮರ್ಪಕ ನಿರ್ವಹಣೆಗೆ ಮುಂದಾಗುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ವಿಧಾನಸಭಾ ಕ್ಷೇತ್ರವಾರು ಚುನಾವಣಾ ಅಧಿಕಾರಿಗಳು, ಸಹಾಯಕ ಚುನಾವಣಾ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಎಲ್ಲಿಯೇ ಕಂಡುಬಂದರೂ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಬೇಕು. ನಿಷ್ಪಕ್ಷಪಾತ, ಪಾರದರ್ಶಕ ಹಾಗೂ ಮುಕ್ತ ಚುನಾವಣೆಗೆ ಕಟ್ಟುನಿಟ್ಟಿನ ಬಿಗಿ ಕ್ರಮಗಳನ್ನು ಅನುಸರಿಸಬೇಕು. ಎಲ್ಲಿಯೂ ಲೋಪಕ್ಕೆ ಆಸ್ಪದ ನೀಡಬಾರದು ಎಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು.

ವಿಧಾನಸಭಾ ಕ್ಷೇತ್ರವಾರು ಚುನಾವಣಾ ಅಧಿಕಾರಿಗಳ ಕಚೇರಿ ಸಕ್ರಿಯವಾಗಬೇಕು. ಆಯಾ ಕ್ಷೇತ್ರದಲ್ಲಿ ಕಂಟ್ರೋಲ್ ರೂಂ, ಸಿವಿಜಿಲ್ ಕೂಡ ಸಕ್ರಿಯವಾಗಬೇಕು. ಚುನಾವಣೆ ಕುರಿತು ಪಕ್ಷಗಳಿಗೆ ಹಾಗೂ ಅಭ್ಯರ್ಥಿಗಳಿಗೆ ಪರವಾನಗಿ, ಸಭೆ ಸಮಾರಂಭ ಆಯೋಜನೆಗೆ ಅನುಮತಿ ನೀಡುವ ಸಿಂಗಲ್ ವಿಂಡೋ ವ್ಯವಸ್ಥೆ ಲಭ್ಯವಾಗಬೇಕು ಎಂದರು.

ಚೆಕ್‌ಪೋಸ್ಟ್‌ಗಳ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸಬೇಕು. ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ವೀಡಿಯೋ ವೀವಿಂಗ್ ಸೇರಿದಂತೆ ಮಾದರಿ ನೀತಿ ಸಂಹಿತೆ ಪಾಲನೆಗೆ ನಿಯೋಜಿತರಾಗಿರುವ ಎಲ್ಲಾ ತಂಡಗಳ ಕಾರ್ಯನಿರ್ವಹಣೆ ಉಸ್ತುವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ವಿಧಾನಸಭಾ ಕ್ಷೇತ್ರವಾರು ನಿಯೋಜಿತರಾಗಿರುವ ಅಧಿಕಾರಿಗಳು, ಸಿಬ್ಬಂದಿ ತಂಡಕ್ಕೆ ಉಳಿದ ಹಂತದಲ್ಲಿ ನೀಡಬೇಕಿರುವ ತರಬೇತಿ, ಚುನಾವಣಾ ಆಯೋಗದ ಅನುಸಾರ ವಹಿಸಬೇಕಿರುವ ಇನ್ನಿತರ ಅಗತ್ಯ ಕ್ರಮಗಳಿಗೆ ಕಾರ್ಯೋನ್ಮುಖರಾಗುವಂತೆ ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಎಸ್. ಕಾತ್ಯಾಯಿನಿದೇವಿ, ಉಪವಿಭಾಗಾಧಿಕಾರಿ ಗೀತಾ ಹುಡೇದ, ವಿಧಾನಸಭಾ ಕ್ಷೇತ್ರವಾರು ಚುನಾವಣಾಧಿಕಾರಿಗಳಾಗಿರುವ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಲ್ಲಿಕಾರ್ಜುನ್, ಜಂಟಿ ಕೃಷಿ ನಿರ್ದೇಶಕರಾದ ಮಧುಸೂಧನ್, ಆಹಾರ ಇಲಾಖೆ ಉಪನಿರ್ದೇಶಕರಾದ ಯೋಗಾನಂದ್, ಸಹಾಯಕ ಚುನಾವಣಾಧಿಕಾರಿಗಳಾಗಿರುವ ತಹಶೀಲ್ದಾರರಾದ ಬಸವರಾಜು, ಮಂಜುಳಾ, ಮಲ್ಲಿಕಾರ್ಜುನ್, ಶ್ರೀಶೈಲ್ ತಳವಾರ್, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಅಕ್ರಮ ಮದ್ಯ ವಶ



ಗುಂಡ್ಲುಪೇಟೆ, ಮಾ.30– ಅಬಕಾರಿ ಅಧಿಕಾರಿಗಳು ಅಕ್ರಮವಾಗಿ ಪಟ್ಟಣದ ಸಮೀಪ ಅಕ್ರಮವಾಗಿ ಸಾಗಣೆ ಮಾಡುತ್ತಿದ್ದ ಮದ್ಯವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಬುಧವಾರ ಸಂಜೆ ಪ್ಲಾಸ್ಟಿಕ್ ಚೀಲದಲ್ಲಿ ಮದ್ಯ ಸಾಗಿಸುತ್ತಿದ್ದ ವ್ಯಕ್ತಿ ಅಬ್ಕಾರಿ ಸಿಬ್ಬಂದಿಯನ್ನು ನೋಡಿ ಟಿವಿಎಸ್ ಮೊಪೆಡ್ ಬಿಟ್ಟು ಪರಾರಿಯಾಗಿದ್ದಾನೆ. ವಾಹನ ವನ್ನು ವಶಕ್ಕೆ ಪಡೆದು ಪರಿಶೀಲಿಸಿದಾಗ 9.27 ಲೀಟರ್ ಮದ್ಯ ಪತ್ತೆಯಾಗಿದೆ. ಈ ಬಗ್ಗೆ ಪ್ರಕರಣ ದಾಖಲಿಸಿ ವಾಹನದ ಮಾಲೀಕ ನನ್ನು ಪತ್ತೆಮಾಡಲಾಗುವುದು ಎಂದು ಅಬ್ಕಾರಿ ಇನ್ಸ್‌ಪೆಕ್ಟರ್ ತನ್ವೀರ್ ತಿಳಿಸಿದ್ದಾರೆ.

ರಾಮನ ಆದರ್ಶಗಳು ಎಲ್ಲಾ ಕಾಲಕ್ಕೂ ಅನ್ವಯ



ಚಾಮರಾಜನಗರ, ಮಾ.30– ಮರ್ಯಾದಾ ಪುರುಷೋತ್ತಮ ಶ್ರೀರಾಮನ ಆದರ್ಶಗಳು ಎಲ್ಲಾ ಕಾಲಕ್ಕೂ ಅನ್ವಯವಾಗುವಂತಹವು, ಆದ್ದರಿಂದಲೇ ರಾಮರಾಜ್ಯದ ಪರಿಕಲ್ಪನೆಯನ್ನು ಪ್ರತಿಯೊಬ್ಬರು ಹೇಳುತ್ತಾರೆ ಎಂದು ಜಿಲ್ಲಾ ಸಿವಿಲ್ ನ್ಯಾಯಾಧೀಶ ಶ್ರೀಧರ್ ಹೇಳಿದರು.

ನಗರದ ಮಾರಿಗುಡಿ ಬಳಿ ಇರುವ ಕಾರ್ಯಸಿದ್ಧಿ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ ಶ್ರೀರಾಮ ನವಮಿಗೆ ಚಾಲನೆ ನೀಡಿ ಮಾತನಾಡಿದ ಅವರು, ಶ್ರೀರಾಮನ ಕೆಲ ಆದರ್ಶ ಗುಣಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಸುಖೀ ಸಮಾಜವನ್ನು ಕಾಣಬಹುದು ಎಂದರು.

ತಂದೆ ತಾಯಿಗಳಿಗೆ ತಕ್ಕ ಮಗನಾಗಿ, ಆದರ್ಶ ಪತಿಯಾಗಿ, ಸಮಾಜ ಸುಧಾರಕನಾಗಿ ರಾಜ್ಯಭಾರ ಮಾಡಿದ ಶ್ರೀರಾಮ ಪ್ರತಿಯೊಬ್ಬನಿಗೂ ಆದರ್ಶ ಪುರುಷನಾಗಿದ್ದಾನೆ. ಶ್ರೀರಾಮನು ಧರ್ಮ ಮಾರ್ಗವನ್ನು ಅರ್ಧಕ್ಕೆ ಬಿಡದೆ ಸಮಾಜದ ಮುಂದೆ ತಾನೊಬ್ಬ ಪರಿಪೂರ್ಣ ವ್ಯಕ್ತಿ ಎಂದು ಸಾಬೀತುಪಡಿಸಿದನು. ರಾಮ ಉಳಿದವರಿಗಿಂತ ದುರಾಸೆ, ದ್ವೇಷ ಮತ್ತು ದುಶ್ಚಟಗಳಿಲ್ಲದ ಆದರ್ಶ ಮಾನವನ ಪ್ರತಿರೂಪ ಎಂದೇ ಹೇಳಲಾಗುತ್ತದೆ ಎಂದರು.

ಪ್ರಜಾಪಿತ ಬ್ರಹ್ಮಾಕುಮಾರೀಯ ದಾನೇಶ್ವರಿ ಅಕ್ಕ ಮಾತನಾಡಿ, ಧರ್ಮವನ್ನು ರಕ್ಷಿಸಲು ಮತ್ತು ಉತ್ತಮ ನಡತೆಯ ಮಾದರಿಯನ್ನು ಹೊಂದಿಸಲು ಅವರು ತಮ್ಮ ಇಡೀ ಜೀವನವನ್ನು ಪಣಕ್ಕಿಟ್ಟರು, ಈ ಕಾರಣದಿಂದ ಅವನನ್ನು ಮರ್ಯಾದಾ ಪುರುಷೋತ್ತಮ ಶ್ರೀರಾಮ ಎಂದು ಕರೆಯುತ್ತಾರೆ ಎಂದರು

ಶ್ರೀರಾಮನು ಎಲ್ಲರೂ ಸಂತೋಷ ಪಡುವ ಮತ್ತು ಸಂತೃಪ್ತರಾಗಿರುವ ರಾಜ್ಯವನ್ನು ಸ್ಥಾಪಿಸುವಲ್ಲಿ ಯಶಸ್ವಿಯಾದರು. ತ್ರೇತಾಯುಗದಲ್ಲಿ ಭೂಮಿಯ ಮೇಲೆ ರಾಕ್ಷಸ ಶಕ್ತಿಗಳ ಮತ್ತು ದುಷ್ಟ ಜನಗಳ ಅಟ್ಟಹಾಸವು ಮಿತಿಮೀರಿದಾಗ ಮಹಾಪುರುಷರು ಜನಿಸುತ್ತಾರೆ ಎಂದರು.

ಈ ಸಂದರ್ಭದಲ್ಲಿ ಸಾರ್ವಜನಿಕರಿಗೆ ಪಾನಕ, ಮಜ್ಜಿಗೆ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ನ್ಯಾಯಾಧೀಶರಾದ ಚಂಪಕ, ರಾಮಕೃಷ್ಣ ಭಾರದ್ವಾಜ್, ಅನಂತ ಪ್ರಸಾದ್, ವೆಂಕಟನಾಗಪ್ಪ ಶೆಟ್ಟಿ, ಬಾಲಸುಬ್ರಹ್ಮಣ್ಯಂ, ಅನಿಲ್ ದೀಕ್ಷಿತ್, ಶಂಕರ ರುದ್ರಭೂಮಿಯ ಸತೀಶ್, ಚಿಕ್ಕಣ್ಣ, ರಘುನಾಥ್, ಪವನ್ ಇತರರು ಇದ್ದರು.

ಹನೂರು ದೇವರಾಜ ನಾಯ್ಡುಗೆ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ



ಚಾಮರಾಜನಗರ, ಮಾ.30– ಕೋಮು ಸಂಘರ್ಷ ಹಾಗೂ ಸೂಕ್ಷ್ಮ ಘಟನೆಗಳ ಬಗ್ಗೆ ವರದಿ ಮಾಡುವಾಗ ಪತ್ರಕರ್ತರು ಅದರ ಸೂಕ್ಷ್ಮತೆಯನ್ನು ಅರಿಯಬೇಕಾಗಿದ್ದು, ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು. ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳನ್ನು ಎಚ್ಚರಿಸುವ ಕೆಲಸವನ್ನು ಮಾಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡುತ್ತಿದ್ದು ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ಮಾಧ್ಯಮವು ನಾಲ್ಕನೇ ಅಂಗವಾಗಿ ಸರ್ಕಾರ ಹಾಗೂ ಜನರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮೈಸೂರು ಜೆಎಸ್‌ಎಸ್ ಮಹಾವಿದ್ಯಾಪೀಠ ಲೆಕ್ಕ ಪರಿಶೋಧನ ವಿಭಾಗದ ನಿರ್ದೇಶಕ ಕೆ.ಎಸ್ ಸಂತನಾಂ ಬಣ್ಣಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಗುರುವಾರ ಆಯೋಜಿಸಲಾಗಿದ್ದ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಕತ್ತಿಗಿಂತ ಲೇಖನಿಯ ಸಾಮರ್ಥ್ಯ ಹೆಚ್ಚಿದ್ದು ಅಂಜಿಕೆ ಇಲ್ಲದೆ ಪ್ರಶ್ನಿಸುವ ಎದೆಗಾರಿಕೆಯನ್ನು ಪತ್ರಕರ್ತರು ಹೊಂದಿದ್ದಾರೆ. ಹೀಗಾಗಿಯೇ ವರದಿಗಳ ಮೂಲಕ ಸಮಾಜದಲ್ಲಿರುವ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಿ ಅದನ್ನು ಪರಿಹರಿಸುವ ನಿಟ್ಟಿನಲ್ಲಿ ಪತ್ರಕರ್ತರು ಕೆಲಸ ಮಾಡಲಾಗುತ್ತಿದ್ದು ಮಹತ್ವವನ್ನು ಪಡೆದುಕೊಂಡಿದೆ. ಗ್ರಾಮೀಣ ಭಾಗಕ್ಕೆ ಉತ್ತಮ ಯೋಜನೆಗಳನ್ನು ತರುವ ಕೆಲಸ ಆಗಬೇಕು. ಇದರ ಕಡೆ ಪತ್ರಕರ್ತರ ಗಮನ ಹರಿಸಿ ಸಹಕಾರಿಯಾಗಬೇಕು ಎಂದು ಸಲಹೆ ನೀಡಿದರು.

ಮೈಸೂರು ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ಗೌರವ ಸಂಪಾದಕ ಆರ್. ಎಸ್. ಪೂರ್ಣನಂದ, ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ದೇವರಾಜು ಕಪ್ಪಸೋಗೆ ಮಾತನಾಡಿದರು. ಜೆಎಸ್‌ಎಸ್ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲ ಜಿ. ಸಿದ್ದರಾಜು ಮಾತನಾಡಿ, ಪ್ರತಿಯೊಂದು ವೃತ್ತಿಯಲ್ಲೂ ಭದ್ರತೆ ಇರುತ್ತದೆ. ಆದರೆ, ಪತ್ರಕರ್ತರಿಗೆ ಯಾವುದೇ ವೃತ್ತಿ ಭದ್ರತೆ ಇರುವುದಿಲ್ಲ. ಜೊತೆಗೆ ಹೆಚ್ಚಿನ ಸಮಯ ದುಡಿಯಬೇಕು. ಇಂತಹ ಕ್ಷೇತ್ರದಲ್ಲಿ ದುಡಿಯುತ್ತಿರುವ ಪತ್ರಕರ್ತರನ್ನು ಸಮಾಜ ಗುರುತಿಸಿ, ಗೌರವಿಸುವ ಕೆಲಸ ಮಾಡಬೇಕಿದೆ ಎಂದರು.

ಇದೇ ವೇಳೆ ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪುರಸ್ಕೃತರಾದ ಹನೂರು ತಾಲೂಕಿನ ಕನ್ನಡಪ್ರಭ ವರದಿಗಾರ ಜಿ. ದೇವರಾಜ ನಾಯ್ಡು ಅವರನ್ನು ಸನ್ಮಾನಿಸಿ, ಗೌರವಿಸಿದರು. ಪತ್ರಕರ್ತ ನಿಂಪುರಾಜೇಶ್ ನಿರೂಪಿಸಿದರು. ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಗೌಡಹಳ್ಳಿ ಮಹೇಶ್ ಸ್ವಾಗತಿಸಿದರು.

ಚಾ.ನಗರ ವಿವಿಗೆ ಡಾ.ಬಿ.ಆರ್. ಅಂಬೇಡ್ಕರ್ ಹೆಸರಿಡಲು ಒತ್ತಾಯ

ಚಾಮರಾಜನಗರ, ಮಾ.30– ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ವಿಶ್ವವಿದ್ಯಾಲಯ ಎಂದು ಮರು ನಾಮಕರಣ ಮಾಡಬೇಕು ಎಂದು ಸಾಹಿತಿ ಸೋಮಶೇಖರ ಬಿಸಲ್ವಾಡಿ ಒತ್ತಾಯಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಮಾತನಾಡಿ, ಜಿಲ್ಲಾ ಕೇಂದ್ರದಲ್ಲಿ 2010–11ನೇ ಶೈಕ್ಷಣಿಕ ವರ್ಷದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಉಪಕೇಂದ್ರವನ್ನು ತೆರೆದು ಸ್ನಾತಕೋತ್ತರದಲ್ಲಿ ಮೂರು ವಿಷಯಗಳಲ್ಲಿ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗಿತ್ತು. 2015ರಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯಲ್ಲಿ ತೀರ್ಮಾನಿಸಿದಂತೆ ಡಾ. ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ ಎಂದು ಮರುನಾಮಕರಣ ಮಾಡಲಾಗಿತ್ತು ಎಂದು ಹೇಳಿದರು.

ಪ್ರಸ್ತುತ ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರವನ್ನು ವಿಶ್ವವಿದ್ಯಾನಿಲಯವನ್ನಾಗಿ ಪರಿವರ್ತಿಸಿದ್ದು, ಚಾಮರಾಜನಗರ ವಿಶ್ವವಿದ್ಯಾನಿಲಯ ಎಂದು ಸರ್ಕಾರ ಘೋಷಿಸಿದೆ. ಮಾ.28ರಂದು ಉದ್ಘಾಟನೆಗೊಳಿಸಿದ ಶಿಲಾನ್ಯಾಸದಲ್ಲೂ ಚಾಮರಾಜನಗರ ವಿಶ್ವವಿದ್ಯಾನಿಲಯ ಎಂದು ಹೆಸರಿಡಲಾಗಿದೆ. ಡಾ.ಬಿ.ಆರ್.ಅಂಬೇಡ್ಕರ್ ಹೆಸರನ್ನು ಎಲ್ಲಿಯೂ ಕೂಡ ಪ್ರಸ್ತಾಪಿಸಿಲ್ಲ ಎಂದು ದೂರಿದರು. ಈಗಾಗಲೇ ಬಹಳಷ್ಟು ವಿಶ್ವವಿದ್ಯಾನಿಲಯಗಳು ಮಹಾನ್ ವ್ಯಕ್ತಿಗಳು ಮತ್ತು ಸಾಧಕರ ಹೆಸರಿನಲ್ಲಿ ಸ್ಥಾಪನೆಯಾಗಿವೆ. ಅದರಂತೆ ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ವಿಶ್ವವಿದ್ಯಾನಿಲಯ ಎಂದು ಮರು ನಾಮಕರಣ ಮಾಡಬೇಕು. ಉನ್ನತ ಶಿಕ್ಷಣ ಇಲಾಖೆ ಮತ್ತು ಮುಖ್ಯಮಂತ್ರಿಗಳು ಈ ಬಗ್ಗೆ ಗಮನಹರಿಸಬೇಕು ಎಂದು ಒತ್ತಾಯಿಸಿದರು.

ನಂತರ ದಸಂಸ ಜಿಲ್ಲಾ ಸಂಚಾಲಕ ಯರಿಯೂರು ರಾಜಣ್ಣ ಮಾತನಾಡಿ, ಚುನಾವಣೆ ವೇಳೆಯಲ್ಲಿ ಶಿಕ್ಷಣ ವ್ಯವಸ್ಥೆಯಲ್ಲಿ ರಾಜಕೀಯ ಮಾಡುವುದು ಬೇಡ. ನಾವು ನ್ಯಾಯಯುತವಾಗಿ ಸರ್ಕಾರದಲ್ಲಿ ಮನವಿ ಮಾಡುತ್ತೇವೆ. ನೂತನ ವಿವಿಗೆ ಅಂಬೇಡ್ಕರ್ ಅವರ ಹೆಸರನ್ನು ಇಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಬೀದಿಗಿಳಿದು ಹೋರಾಟ ಮಾಡುತ್ತೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜನ ಹಿತಾಸಕ್ತಿ ಹೋರಾಟ ವೇದಿಕೆಯ ಜಿಲ್ಲಾಧ್ಯಕ್ಷ ರಾಮಸಮುದ್ರ ಸುರೇಶ್, ಜನತಾ ಶಕ್ತಿ ಹೋರಾಟ ವೇದಿಕೆಯ ಜಿಲ್ಲಾ ಗೌರವಾಧ್ಯಕ್ಷ ಈಶ್ವರ, ದಲಿತ ಮುಖಂಡರಾದ ಕುದೇರು ರೇವಣ್ಣ, ಬಂಗಾರಸ್ವಾಮಿ ಇದ್ದರು.

ಪೂರ್ವಭಾವಿ ಸಭೆ ಮುಂದೂಡಿಕೆ

ಚಾಮರಾಜನಗರ, ಮಾ.30– ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 132ನೇ ಜನ್ಮದಿನಾಚರಣೆ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ಅವರ 116ನೇ ಜನ್ಮದಿನಾಚರಣೆಯನ್ನು ಆಚರಿಸುವ ಸಂಬಂಧ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಮಾ.31ರಂದು ನಿಗದಿಯಾಗಿದ್ದ ಪೂರ್ವಭಾವಿ ಸಭೆಯನ್ನು ರದ್ದುಪಡಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಇವೇ ಎ ಟೀಮ್... ಬಿ ಟೀಮ್...!

ಯೋಗ್ಯತೆ ಅರ್ಥ ಆಗಿದೆ. ಸತ್ಯ ಗೊತ್ತಿದ್ದೇ ಅವರು ಸುಳ್ಳಿನ ಕಥೆ ಕಟ್ಟುತ್ತಿದ್ದಾರೆ. ಹದಿನೈದು ವರ್ಷದಿಂದ ಇವರ ಹಣೆ ಬರಹ ನೋಡಿ ಸಾಕಾಗಿದೆ ಎಂದರು.

ಮುಂದೆ ಬಿಜೆಪಿ, ಕಾಂಗ್ರೆಸ್ ಮೈತ್ರಿ ಆದರೂ ಅಚ್ಚರಿ ಇಲ್ಲ. ಈ ಬಗ್ಗೆ ಯಾವುದೇ ಸಂಶಯವೇ ಬೇಡ. ನನ್ನ ಮೈತ್ರಿ ಸರ್ಕಾರ ತೆಗೆಯಲು ಕ್ರಿಕೆಟ್ ಬೆಟ್ಟಿಂಗ್ ದಂಧೆ ನಡೆಸುವ ಹಣ ಕೊಟ್ಟ ವ್ಯಕ್ತಿಗೆ ಮದ್ದೂರಿನಲ್ಲಿ ಕಾಂಗ್ರೆಸ್ ಪಕ್ಷ ಟಿಕೆಟ್ ಕೊಡಲು ಮುಂದಾಗಿದೆ. ಅದೇ ವ್ಯಕ್ತಿಯ ಬಿಜೆಪಿ ಜತೆಗಿನ ಸಂಬಂಧ ಎಂತದ್ದು ಆತ ಶ್ರೀಲಂಕಾಕ್ಕೆ ಏಕೆ ಡಿಕೆ ಹೋಗಿದ್ದ ಎಂದು ಕುಟುಕಿದರು. ಸಚಿವ ನಾರಾಯಣಗೌಡರನ್ನು ಕಾಂಗ್ರೆಸ್‌ಗೆ ಸೇರಿಸಿಕೊಳ್ಳಲು ಹೊರಟಿರುವುದು ಏಕೆ. ಅದರ ಹಿಂದಿನ ಹಕೀಕತ್ತು ಏನು. ಎಲ್ಲವೂ ಜನರಿಗೆ ಗೊತ್ತಿದೆ. ಹೀಗಾಗಿ ಯಾವುದೇ ಅನುಮಾನ ಬೇಡ, ಕಾಂಗ್ರೆಸ್ – ಬಿಜೆಪಿ ಮೈತ್ರಿ ಒಳ ಒಪ್ಪಂದ ಅದೆಷ್ಟು ಆಳವಾಗಿದೆ ಎಂಬುದನ್ನು ಇದರಿಂದ ತಿಳಿಯಬಹುದು ಎಂದು ಅವರು ಹೇಳಿದರು. ಜೆಡಿಎಸ್‌ನಲ್ಲಿ ಅಪ್ಪ ಮಕ್ಕಳ ಮಾತನ್ನು ಕೇಳದಿದ್ದರೆ ಪಕ್ಷದಿಂದ ಹೊರ ಹಾಕುತ್ತಾರೆ ಎಂಬ ಸಿದ್ದರಾಮಯ್ಯ ಹೇಳಿಕೆ ಬಗ್ಗೆ ಮಾಧ್ಯಮಗಳು ಕೇಳಿದಾಗ; ಸಿದ್ದರಾಮಯ್ಯ ಅವರ ಇವತ್ತಿನ ಹೇಳಿಕೆ ವಿಶ್ವದ ಎಂಟನೇ ಅದ್ಭುತ. ಅವರು ನಮ್ಮ ಪಕ್ಷದಲ್ಲಿ ಇದ್ದಾಗ ನಾವು ಸ್ಟೇಜ್ ಹಾಕಬೇಕಿತ್ತು, ಜನ ಸೇರಿಸಬೇಕಿತ್ತು. ಇವರು ಬಂದು ಕಾಲುಮೇಲೆ ಕಾಲು ಹಾಕಿಕೊಂಡು, ಚಪ್ಪಲಿ ಕಾಲು ದೇವೇಗೌಡರಿಗೆ ತಾಗಿಸಿಕೊಂಡು ಕೂರುತ್ತಿದ್ದರು ಎಂದು ಆಕ್ರೋಶ ವ್ಯಕ್ತಪಡಿಸಿದರು. ಯಾವತ್ತು ದೇವೇ ಗೌಡರು ತಮ್ಮ ಮಕ್ಕಳನ್ನು ಮುಂದೆ ನಿಲ್ಲಿಸಿಕೊಂಡಿದ್ದರು. ಸಿದ್ದರಾಮಯ್ಯ ಈ ಪಕ್ಷದಲ್ಲಿ ಪಾಳೆಗಾರಿಕೆ ಮಾಡ್ತಾ ದೇವೇಗೌಡರನ್ನು ಹೆದರಿಸಿಟ್ಟುಕೊಂಡಿದ್ದರು. ಹಿಂದೆ ಬ್ಯಾನರ್‌ನಲ್ಲಿ ಭಾವಚಿತ್ರ ಇಲ್ಲ ಅಂತ ಕಾರ್ಯಕ್ರಮಕ್ಕೆ ಬಂದಿರಲಿಲ್ಲ ಈ ಮಹಾಶಯ. ಕಾಂಗ್ರೆಸ್ ಬಿಟ್ಟು ಬೇರೆ ಪಕ್ಷ ಕಟ್ಟಿ ಎರಡು ಸೀಟು ತರಲಿ ನೋಡೋಣ ಎಂದು ಸಿದ್ದರಾಮಯ್ಯ ಅವರಿಗೆ ಕುಮಾರಸ್ವಾಮಿ ಅವರು ಸವಾಲು ಹಾಕಿದರು. ಜೆಡಿಎಸ್ ಬೆಳೆಸಿದ್ದಾರೆ ನಿಮ್ಮನ್ನು ಕಾಂಗ್ರೆಸ್‌ನವರು ಎಲ್ಲಿ ಕರೆಯುತ್ತಿದ್ದರು. ಮೂಸಿಯೂ ನೋಡುತ್ತಿರಲಿಲ್ಲ. ಮೈಸೂರಲ್ಲಿ ಎಂಟು ಜನ ಶಾಸಕರನ್ನು ಕರೆದುಕೊಂಡು ಹೋಗಿ ಮತ್ತೆ ಎಷ್ಟು ಗೆಲ್ಲಿಸಿಕೊಂಡರು. ಹೋಗಲಿ ಅವರೇ ಗೆದ್ದಿದ್ದು ಎಷ್ಟು ವೋಟಿನಿಂದ; ಕೇವಲ 200 ವೋಟಿನಿಂದ ಗೆದ್ದು ಮುಖ ಉಳಿಸಿಕೊಂಡರು. ಅವರಿಗೆ ಜನತೆಯ ಮೂಲಕ ಉತ್ತರ ಕೊಡಿಸುತ್ತೇನೆ ಎಂದು ಕಿಡಿಕಾರಿದರು. ಇದೇ ಸಿದ್ದರಾಮಯ್ಯ ಹಿಂದೆ ಇಕ್ಬಾಲ್ ಅನ್ಸಾರಿ ಅವರನ್ನು ಮಂತ್ರಿ ಮಾಡಬೇಡಿ ಅಂತ ಗಲಾಟೆ ಮಾಡಿದ್ದರು. ಸಭೆಯಿಂದ ಟವೆಲ್ ಕೊಡವಿಕೊಂಡು ಎದ್ದು ಹೋಗಿದ್ದರು. ಎಎಲ್‌ಸಿ ಮಾಡಿದ್ದೆ ಹೆಚ್ಚು, ಯಾಕೆ ಮಂತ್ರಿ ಮಾಡ್ತೀರಾ ಅಂತ ರಚ್ಚೆ ಮಾಡಿದ್ದರು. ಅಂಥ ವ್ಯಕ್ತಿ ಈಗ ನಮ್ಮ ಪಕ್ಷದ ಬಗ್ಗೆ ಮಾತನಾಡುತ್ತಾರೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು.

ಸಿಎಂ ಪರಿಹಾರ ನಿಧಿಗೆ ನಿರ್ಬಂಧ ಬೇಡ: ಚುನಾವಣಾ ನೀತಿ ಸಂಹಿತೆಯನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಯ ಮೇಲೆ ಹೇರಬೇಡಿ ಎಂದು ಕುಮಾರಸ್ವಾಮಿ ಅವರು ಚುನಾವಣೆ ಆಯೋಗಕ್ಕೆ ಸಲಹೆ ಮಾಡಿದರು. ಬಡವರ ಚಿಕಿತ್ಸೆಗೆ ನೆರವಾಗಲು ಸಿಎಂ ಪರಿಹಾರ ನಿಧಿ ಬಳಕೆಗೆ ಅವಕಾಶ ನೀಡಿ. ನೀತಿ ಸಂಹಿತೆ ಹೆಸರಲ್ಲಿ ಬಡವರ ಜೀವ ತೆಗೆಯೋದು ಬೇಡ. ಇವತ್ತು ಹತ್ತು ಇಪ್ಪತ್ತು ಲಕ್ಷ ಹಣ ಕಟ್ಟಲು ಸಾಧ್ಯವಾಗದೆ ನಿತ್ಯ ಜನ ಮನೆ ಮುಂದೆ ಬರ್ತಾರೆ. ಅವರಿಗೆ ನೆರವಾಗಲು ಅವಕಾಶ ಮಾಡಿಕೊಡಿ ಎಂದು ಕುಮಾರಸ್ವಾಮಿ ಅವರು ಮನವಿ ಮಾಡಿದರು.

ಮೊದಲ ಪಟ್ಟಿ ಪ್ರಕಟ

ಅಮಿತ್ ಶಾ ಮತ್ತು ಸಂತೋಷ್ ಅಭ್ಯರ್ಥಿಗಳ ಆಯ್ಕೆಯಲ್ಲಿ ಪ್ರಮುಖ ಪಾತ್ರಧಾರಿಗಳಾಗಿರುವುದರಿಂದ ಒಂದಷ್ಟು ಹಳೇ ಮುಖಗಳಿಗೆ ಕೊಕ್ ಸಿಗಲಿದೆ. ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಲೇಬೇಕು ಎಂದು ಪಣತೊಟ್ಟಿರುವ ಶಾ, ರಾಜ್ಯ ನಾಯಕರ ಯಾವುದೇ ಮುಲಾಜಿಗೆ ಒಳಗಾಗದೇ ಅಭ್ಯರ್ಥಿಗಳ ಆಯ್ಕೆಯಾಗಲಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಅವರ ಸಂಪುಟದಲ್ಲಿದ್ದ ಪ್ರಭಾವಿ ಸಚಿವರ ಕ್ಷೇತ್ರಗಳು ಅದಲು ಬದಲಾದರೂ ಆಶ್ಚರ್ಯವಿಲ್ಲ. ಈಗಾಗಲೇ ವಸತಿ ಸಚಿವ ವಿ.ಸೋಮಣ್ಣ ಅವರಿಗೆ ಚಾಮರಾಜನಗರ ಜಿಲ್ಲಾ ಚುನಾವಣಾ ಹೊಣೆಗಾರಿಕೆ ನೀಡಿದ್ದು, ಅವರನ್ನು ಚಾಮರಾಜನಗರ ಕ್ಷೇತ್ರದಿಂದ ಸ್ಪರ್ಧಿಸಲು ಪಕ್ಷ ನಿರ್ದೇಶಿಸಿದೆ.

ಅವರು ತಮ್ಮ ಸ್ವಕ್ಷೇತ್ರ ಗೋವಿಂದರಾಜನಗರವನ್ನು ಪಕ್ಷದ ಕಾರ್ಯಕರ್ತರಿಗೆ ಬಿಟ್ಟುಕೊಟ್ಟು ಚಾಮರಾಜನಗರ ಚುನಾವಣಾ ಉಸ್ತುವಾರಿ ಜತೆಗೆ ಮೈಸೂರಲ್ಲೂ ಪಕ್ಷದ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡಬೇಕಾಗಿದೆ. ಇದೊಂದು ಉದಾಹರಣೆ ಅಷ್ಟೇ. ಹಲವು ಕ್ಷೇತ್ರಗಳಲ್ಲಿ ಅದಲು ಬದಲು ಮಾಡಿ, ಕಾಂಗ್ರೆಸ್‌ನ ಪಾರಂಪರಿಕ ಕ್ಷೇತ್ರಗಳನ್ನು ಕಸಿಯಲು ಶಾ, ತಂತ್ರಗಾರಿಕೆ ರೂಪಿಸಿದ್ದಾರೆ.

ಬಿಜೆಪಿಗೆ ಸ್ಪಷ್ಟ ಬಹುಮತ ಖಚಿತ

ಬರಲಿದ್ದಾರೆ. ಸಿಎಂ ಬೊಮ್ಮಾಯಿ ಎಲ್ಲಾ ವರ್ಗದವರಿಗೂ ನ್ಯಾಯ ಒದಗಿಸಿದ್ದಾರೆ. ರಾಜ್ಯದ ಜನರಿಗಾಗಿ ನಾನು ಹಲವು ಕಾರ್ಯಕ್ರಮ ಜಾರಿಗೆ ತಂದಿದ್ದೇನೆ. ಎರಡು–ಮೂರು ದಿನಗಳಲ್ಲಿ ರಾಜ್ಯದಲ್ಲಿ ಪ್ರವಾಸ ಆರಂಭವಾಗುತ್ತೆ. ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷ ಸಂಘಟನೆ ನಡೆಸುವೆ. ರಾಜ್ಯದಲ್ಲಿ 130 ಕ್ಷೇತ್ರಗಳಲ್ಲಿ ಪಕ್ಷ ಗೆಲುವು ಸಾಧಿಸಲಿದೆ ಎಂದರು. ಮೀಸಲಾತಿ ವಿಚಾರದಲ್ಲಿ ಕಾಂಗ್ರೆಸ್ ಇಲ್ಲಸಲ್ಲದ ಆರೋಪ ಮಾಡುತ್ತಿದೆ. ಕಾಂಗ್ರೆಸ್ ಆರೋಪಗಳನ್ನು ರಾಜ್ಯದ ಜನ ನಂಬುವುದಿಲ್ಲ. ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುವ ತಿರುಕನ ಕನಸು ಕಂಡಿದೆ. ಯಾವುದೇ ಕಾರಣಕ್ಕೂ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ. ಸಿದ್ದರಾಮಯ್ಯ, ಡಿಕೆಶಿ ಮತ್ತೆ ವಿಪಕ್ಷ ಸ್ಥಾನದಲ್ಲೇ ಇರುತ್ತಾರೆ ಎಂದರು.

ಅಶ್ಲೀಲ ಚಿತ್ರ ವೀಕ್ಷಿಸಿದ ಬಿಜೆಪಿ ಶಾಸಕ

ಜದಾಬ್‌ಲಾಲ್ ನಾಥ್ ವಿಡಿಯೋದಲ್ಲಿ ಕಾಣಿಸಿಕೊಂಡಿದ್ದಾರೆ. ಇವರು ತಮ್ಮ ಆಸನದಲ್ಲಿ ಕುಳಿತು ಮೊಬೈಲ್ ಫೋನ್‌ನಲ್ಲಿ ವೀಡಿಯೊ ವೀಕ್ಷಿಸುತ್ತಿರುವುದು ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸಿಪಿಎಂನ ಬಲಿಷ್ಠ ಕೋಟೆಗಳಲ್ಲಿ ಕಣಕ್ಕಿಳಿದಿರುವ ಬಗ್ಬಾಸಾ ವಿಧಾನಸಭಾ ಕ್ಷೇತ್ರದಲ್ಲಿ ಜದಬ್‌ಲಾಲ್‌ನಾಥ್ ಬಿಜೆಪಿ ಗೆಲುವಿನ ಪತಾಕೆ ಹಾರಿಸಿದ್ದರು. ಜದಬ್‌ಲಾಲ್ ನಾಥ್ ಅವರು ಸಿಪಿಎಂನ ಹಾಲಿ ಶಾಸಕ ಬಿಜಿತಾ ನಾಥ್ ಅವರನ್ನು 1400 ಕ್ಕೂ ಹೆಚ್ಚು ಮತಗಳ ಅಂತರದಿಂದ ಸೋಲಿಸಿದ್ದಾರೆ. ತೃಣಮೂಲ ಕಾಂಗ್ರೆಸ್‌ನ ಬಿಮಲ್‌ನಾಥ್ ತೃತೀಯ ಹಾಗೂ ತಿಪ್ರಾ ಮೋಥಾದ ಕಲ್ಪನಾ ಸಿನ್ಹಾ ನಾಲ್ಕನೇ ಸ್ಥಾನ ಪಡೆದಿದ್ದರು.

ಇಂದಿನಿಂದ ಐಪಿಎಲ್ ಆರಂಭ

ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿದಂತೆ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಮುಖ್ಯ ಆಕರ್ಷಣೆ ಆಗಲಿದ್ದು, ಇನ್ನಿತರ ತಾರೆಯರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಸಿಸಿಐ ತಿಳಿಸಿದೆ. ಪುಲ್ವಾಮಾ ದಾಳಿ ಹಾಗೂ ಕೊರೊನಾ ಹಿನ್ನೆಲೆಯಲ್ಲಿ ಕಳೆದ 4 ವರ್ಷ ಐಪಿಎಲ್‌ನ ಜೋಶ್ ದೊಡ್ಡ ಮಟ್ಟದಲ್ಲಿ ಕಂಡು ಬಂದಿರಲಿಲ್ಲ. ಈ ಬಾರಿ ಮತ್ತೆ ಹಿಂದಿನ ವೈಭವದ ಸ್ಪಷ್ಟ ಸೂಚನೆ ಲಭಿಸಿದೆ. ಇದಕ್ಕೆ ಕಾರಣ, ಉದ್ಘಾಟನಾ ಸಮಾರಂಭ. 2018ರ ಬಳಿಕ ಐಪಿಎಲ್ ಮೊದಲ ಬಾರಿಗೆ ಐಪಿಎಲ್ ಓಪನಿಂಗ್ ಸೆರಮನಿ ನಡೆಯುತ್ತಿರುವುದು ವಿಶೇಷ.

ಸಿಎಸ್‌ಕೆ, ಗುಜರಾತ್ ನಡುವೆ ಉದ್ಘಾಟನಾ ಪಂದ್ಯ: ಹಾಲಿ ಚಾಂಪಿಯನ್ ಗುಜರಾತ್ ಟೈಟನ್ಸ್ ಹಾಗೂ ನಾಲ್ಕು ಬಾರಿಯ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ಶುಕ್ರವಾರ ಉದ್ಘಾಟನಾ ಪಂದ್ಯದಲ್ಲಿ ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಮುಖಾಮುಖಿಯಾಗಲಿವೆ.

ಮತ್ತೊಂದೆಡೆ ಮಹೇಂದ್ರ ಸಿಂಗ್ ಧೋನಿ ನಾಯಕತ್ವದ ಚೆನ್ನೈ ಸೂಪರ್ ಕಿಂಗ್ಸ್ ಆರಂಭಿಕ ಪಂದ್ಯದಲ್ಲಿ ಹಾಲಿ ಚಾಂಪಿಯನ್ನರಿಗೆ ಸೋಲಿನ ರುಚಿ ತೋರಿಸಲು ಸನ್ನದ್ಧವಾಗಿದ್ದು, ಈ ಮೂಲಕ ಟೂರ್ನಿಯಲ್ಲಿ ಶುಭಾರಂಭ ಮಾಡುವ ತವಕದಲ್ಲಿದೆ. ಡೆವೊನ್ ಕಾನ್ವೆ, ಋತುರಾಜ್ ಗಾಯಕ್ವಾಡ್, ಮೊಯೀನ್ ಅಲಿ, ಶಿವಂ ದುಬೆ, ಅಂಬಾಟಿ ರಾಯುಡು, ಬೆನ್ ಸ್ಟೋಕ್ಸ್, ರವೀಂದ್ರ ಜಡೇಜಾರಂತಹ ಘಟಾನುಘಟಿಗಳಿದ್ದು, ಯಾವುದೇ ಹಂತದಲ್ಲೂ ಪಂದ್ಯವನ್ನು ಗೆಲ್ಲಿಸಿಕೊಡುವ ಸಾಮರ್ಥ್ಯ ಹೊಂದಿದ್ದಾರೆ. ಒಟ್ಟಾರೆ ನಾಳಿನ ಪಂದ್ಯ ರೋಚಕತೆಯಿಂದ ಕೂಡಿರಲಿದೆ.

ಹಾರ್ದಿಕ್ ಪಾಂಡ್ಯ ನಾಯಕತ್ವದ ಹಾಲಿ ಚಾಂಪಿಯನ್ಸ್ ಗುಜರಾತ್ ಟೈಟನ್ಸ್ ಕಳೆದ ವರ್ಷ ತೋರಿದ್ದ ಪ್ರದರ್ಶನವನ್ನು ಈ ಬಾರಿಯೂ ಮುಂದುವರಿಸುವ ತವಕದಲ್ಲಿದೆ. ಆ ಮೂಲಕ ಪ್ರಶಸ್ತಿಯನ್ನು ತನ್ನಲ್ಲಿಯೇ ಉಳಿಸಿಕೊಳ್ಳುವ ಯೋಜನೆ ಹಾಕಿಕೊಂಡಿದೆ. ಡೇವಿಡ್ ಮಿಲ್ಲರ್, ಕೇನ್ ವಿಲಿಯಮ್ಸನ್, ಶುಭಮನ್ ಗಿಲ್, ಹಾರ್ದಿಕ್ ಪಾಂಡ್ಯ ಸೇರಿದಂತೆ ಬಲಿಷ್ಠ ಬ್ಯಾಟಿಂಗ್ ಲೈನ್ ಅಪ್ ಅನ್ನು ಗುಜರಾತ್ ಹೊಂದಿದೆ.

ಗುಜರಾತ್ ಟೈಟನ್ಸ್: ಶುಭಮನ್ ಗಿಲ್, ವೃದ್ಧಿಮಾನ್ ಸಹಾ, ಕೇನ್ ವಿಲಿಯಮ್ಸನ್, ಹಾರ್ದಿಕ್ ಪಾಂಡ್ಯ, ವಿಜಯ್ ಶಂಕರ್, ಮ್ಯಾಥ್ಯೂ ವೇಡ್, ರಾಹುಲ್ ತೆವಾಟಿಯಾ, ರಶೀದ್ ಖಾನ್, ಶಿವಂ ಮಾವಿ, ಮೊಹಮ್ಮದ್ ಶಮಿ, ಜಾಶ್ ಲಿಟಲ್

ಚೆನ್ನೈ ಸೂಪರ್ ಕಿಂಗ್ಸ್: ಡೆವೊನ್ ಕಾನ್ವೆ, ಋತುರಾಜ್ ಗಾಯಕ್ವಾಡ್, ಮೊಯೀನ್ ಅಲಿ, ಶಿವಂ ದುಬೆ, ಅಂಬಾಟಿ ರಾಯುಡು, ಬೆನ್ ಸ್ಟೋಕ್ಸ್, ರವೀಂದ್ರ ಜಡೇಜಾ, ಎಂಎಸ್ ಧೋನಿ(ನಾಯಕ), ದೀಪಕ್ ಚಹರ್, ಮುಕೇಶ್ ಚೌಧರಿ, ಮತೀಶ ಪತಿರಾನ.

ಇಂದಿನಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

ಪರೀಕ್ಷೆಯು ಏ.15 ರಂದು ಅಂತ್ಯಗೊಳ್ಳಲಿದೆ. ಯಾವುದೇ ಎಲೆಕ್ಟ್ರಾನಿಕ್ ಡಿವೈಸರ್‌ಗಳನ್ನು ಪರೀಕ್ಷಾ ಕೇಂದ್ರಗಳ ಸುತ್ತ ಸೆಕ್ಷನ್ 144 ರೀತ್ಯಾ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಜೆರಾಕ್ಸ್ ಅಂಗಡಿಗಳನ್ನು ಬಂದ್ ಮಾಡುವಂತೆ ಆದೇಶಿಸಲಾಗಿದೆ ಎಂದು ರಾಮಚಂದ್ರ ರಾಜೇ ಅರಸ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಕುಡಿಯುವ ನೀರು, ಕೊಠಡಿಗಳ ಸಂಖ್ಯೆ, ವಿದ್ಯಾರ್ಥಿಗಳ ನೋಂದಣಿ ಸಂಖ್ಯೆ ಮಾಹಿತಿಗಳನ್ನು ಎಲ್ಲಾ ಕೇಂದ್ರಗಳಲ್ಲಿ ಒದಗಿಸಿ ಅಗತ್ಯ ಮೂಲಸೌಲಭ್ಯ ಕಲ್ಪಿಸಲಾಗಿದೆ. ಪರೀಕ್ಷಾ ಅಕ್ರಮ ತಡೆಗೆ ಫ್ಲೈಯಿಂಗ್ ಸ್ಕ್ವಾಡ್ ರಚಿಸಲಾಗಿದೆ ಎಂದು ತಿಳಿಸಿದರು.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿ

ಚೆಕ್‌ಪೋಸ್ಟ್‌ಗಳಲ್ಲಿ ವಾಹನ ತಪಾಸಣೆ ತೀವ್ರ

ಕಂದಾಯ, ಅರಣ್ಯ, ಅಬಕಾರಿ ಇಲಾಖೆ ಅಧಿಕಾರಿಗಳು, ಎಕ್ಸಿಕ್ಯೂಟಿವ್ ಮ್ಯಾಜಿಸ್ಟ್ರೇಟ್‌ಗಳು ಸಾಥ್

ಮೈಸೂರು, ಮಾ.30(ಆರ್‌ಕೆ)–ಕರ್ನಾಟಕ ವಿಧಾನಸಭೆ ಚುನಾವಣಾ ವೇಳಾಪಟ್ಟಿ ಪ್ರಕಟವಾಗುವುದರೊಂದಿಗೆ ಜಾರಿಗೆ ಬಂದಿರುವ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಜಿಲ್ಲಾಡಳಿತ ಅಗತ್ಯ ಕ್ರಮಕ್ಕೆ ಮುಂದಾಗಿದೆ.

ಚುನಾವಣಾ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿ ಮುಕ್ತ ಹಾಗೂ ನ್ಯಾಯಸಮ್ಮತ ಮತದಾನಕ್ಕೆ ಅನುವು ಮಾಡಿಕೊಡಬೇಕೆಂದು ಭಾರತ ಚುನಾವಣಾ ಆಯೋಗವು ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಚುನಾವಣಾ ಅಕ್ರಮ ತಡೆಗೆ ಮೈಸೂರು ನಗರ ಮತ್ತು ಜಿಲ್ಲಾ ಪೊಲೀಸರು ಜಿಲ್ಲೆಯಾದ್ಯಂತ ಎಲ್ಲಾ ರಸ್ತೆಗಳ ಚೆಕ್‌ಪೋಸ್ಟ್‌ಗಳಲ್ಲಿ ವಾಹನ ತಪಾಸಣಾ ಕಾರ್ಯಾಚರಣೆಯನ್ನು ತೀವ್ರಗೊಳಿಸಿದ್ದಾರೆ.

ಈವರೆಗೆ ಕೇವಲ ಸಿವಿಲ್ ಮತ್ತು ಸಂಚಾರ ಪೊಲೀಸರು ಮಾತ್ರ ವಾಹನಗಳ ತಪಾಸಣೆ ನಡೆಸುತ್ತಿದ್ದರು. ಆದರೆ ನೀತಿ ಸಂಹಿತೆ ಜಾರಿಗೆ ಬರುತ್ತಿದ್ದಂತೆಯೇ ಕಂದಾಯ, ಅರಣ್ಯ, ಅಬಕಾರಿ ಇಲಾಖೆ ಅಧಿಕಾರಿಗಳು ಹಾಗೂ ಎಕ್ಸಿಕ್ಯೂಟಿವ್ ಮ್ಯಾಜಿಸ್ಟ್ರೇಟ್‌ಗಳು ಸಾಥ್ ನೀಡಲಾರಂಭಿಸಿದ್ದಾರೆ.

ಮೈಸೂರು–ಬೆಂಗಳೂರು ರಸ್ತೆ, ಕೆ.ಆರ್.ಎಸ್. ರಸ್ತೆ, ಹುಣಸೂರು ರಸ್ತೆ, ಬೋಗಾದಿ ರಸ್ತೆ, ಹೆಚ್.ಡಿ. ಕೋಟೆ ರಸ್ತೆ, ನಂಜನಗೂಡು ರಸ್ತೆ ತಿ. ನರಸೀಪುರ ರಸ್ತೆ



ಬನ್ನೂರು ರಸ್ತೆ, ಮಹದೇವಪುರ ರಸ್ತೆ ಸೇರಿದಂತೆ ಮೈಸೂರು ನಗರ ಹಾಗೂ ಸುತ್ತಲಿನ ರಸ್ತೆಗಳಲ್ಲಿ ಸ್ಥಾಪಿಸಿರುವ ಚೆಕ್‌ಪೋಸ್ಟ್‌ಗಳಲ್ಲಿ ದಿನದ 24 ಗಂಟೆಯೂ 3 ಪಾಳಿಯಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ವಾಹನಗಳ ತಪಾಸಣೆ ನಡೆಸುತ್ತಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ರಸ್ತೆಗಳಲ್ಲಿ ಸಂಚರಿಸುವ ಪ್ರತಿಯೊಂದು ವಾಹನಗಳನ್ನೂ ತಡೆದು ನಿಲ್ಲಿಸಿ ಹಣ, ಚಿನ್ನ, ಬೆಳ್ಳಿ ಆಭರಣ, ಉಡುಗೊರೆ, ಗೃಹೋಪಯೋಗಿ ವಸ್ತುಗಳು, ಇತರ ಸ್ಥಿರಾಸ್ತಿಗಳ ದಾಖಲಾತಿಗಳನ್ನು ಸಾಗಿಸುತ್ತಿದ್ದರೆ ಅವುಗಳಿಗೆ ಪೂರಕ ದಾಖಲೆಗಳಿಲ್ಲದಿದ್ದರೆ ಪ್ರಕರಣ ದಾಖಲಿಸಿ ವಶಪಡಿಸಿಕೊಳ್ಳಲಾಗುತ್ತಿದೆ. ಅದೇ ರೀತಿ ಮಾರಕಾಸ್ತ್ರ ಕೊಂಡೊಯ್ಯುವವರ ವಿರುದ್ಧ ಪ್ರಕರಣ ದಾಖಲಿಸುವಂತೆಯೂ ಸೂಚನೆ ನೀಡಲಾಗಿದೆ ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಒಬ್ಬ ವ್ಯಕ್ತಿ 50,000 ರೂ.ಗಳಿಗಿಂತ ಹೆಚ್ಚಿನ ಮೊತ್ತದ ಹಣವನ್ನು ಸಾಗಿಸುವಂತಿಲ್ಲ. ಅಪರಾಧ ಪ್ರಕರಣ ಹಿನ್ನೆಲೆ ಇರುವ ಸಮಾಜಘಾತುಕ ವ್ಯಕ್ತಿಗಳು, ರೌಡಿಶೀಟರ್‌ಗಳ ಮೇಲೂ ನಿಗಾ ವಹಿಸಲಾಗಿದ್ದು, ಒಂದು ವೇಳೆ ಚುನಾವಣಾ ಅಕ್ರಮಗಳು ಕಂಡು ಬಂದಲ್ಲಿ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸುವಂತೆ ತಾಕೀತು ಮಾಡಿದ್ದೇನೆ ಎಂದು ಅವರು ತಿಳಿಸಿದರು.

ಒಟ್ಟಾರೆ ಚುನಾವಣಾ ಅಕ್ರಮಗಳನ್ನು ತಡೆಗಟ್ಟಲು ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾ ಚುನಾವಣಾಧಿಕಾರಿಗಳ ಸೂಚನೆಗಳನ್ನು ಪೊಲೀಸರು ನೀಡಿದ್ದಾರೆ. ಬುಧವಾರ ರಾತ್ರಿ ಪೊಲೀಸ್ ಆಯುಕ್ತ ಬಿ. ರಮೇಶ್ ಅವರು ತಮ್ಮ ಅಧೀನಾಧಿಕಾರಿಗಳೊಂದಿಗೆ ಸಭೆ ನಡೆಸಿ ಚುನಾವಣೆ ನೀತಿ ಸಂಹಿತೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಸೂಚನೆ ನೀಡಿದ್ದಾರೆ.

ಬಾಕಿ ವೇತನವೂ ಸೇರಿದಂತೆ ನಾನಾ ಬೇಡಿಕೆ ಈಡೇರಿಸಲು ಆಗ್ರಹಿಸಿ ಪ್ರತಿಭಟನೆ



ಮೈಸೂರು, ಮಾ.30(ಎಂಟಿವೈ)– ವಿವಿಧಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ವಿದ್ಯಾರ್ಥಿನಿಲಯಗಳ ಸಿಬ್ಬಂದಿ ಪ್ರತಿಭಟನೆ ನಡೆಸಿದರು.

ಮೈಸೂರು ಜಿಪಂ ಕಚೇರಿ ಮುಂದೆ ಗುರುವಾರ ಪ್ರತಿಭಟನೆ ನಡೆಸಿದ ಜಿಲ್ಲೆಯ ವಿವಿಧ ವಿದ್ಯಾರ್ಥಿನಿಲಯಗಳ ಅಡುಗೆಯವರು, ಅಡುಗೆ ಸಹಾಯಕರು ಮತ್ತು ಕಾವಲುಗಾರ ಹುದ್ದೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಈ ಸಿಬ್ಬಂದಿ ತಮ್ಮ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಘೋಷಣೆ ಕೂಗಿದರು.

2022ರ ಡಿಸೆಂಬರ್ ತಿಂಗಳಲ್ಲಿ ರಾಜ್ಯ ಸರ್ಕಾರವು ಪರಿಷ್ಕರಿಸಿರುವ ಕನಿಷ್ಠ ವೇತನದ ಅರಿಯರ್ಸ್ ನೀಡಬೇಕು. ಕಳೆದ 2–3 ತಿಂಗಳವರೆಗೆ ಬಾಕಿ ಉಳಿಸಿಕೊಂಡಿರುವ ವೇತನವನ್ನು ತಕ್ಷಣವೇ ಪಾವತಿ ಮಾಡಬೇಕು. ಕಟ್ಟದೇ ಬಾಕಿ ಉಳಿಸಿಕೊಂಡಿರುವ ಪಿಎಫ್ ವಂತಿಗೆಯನ್ನು ತಕ್ಷಣವೇ ಪಾವತಿಸಬೇಕು. ಇಲ್ಲವಾದಲ್ಲಿ ಸಂಬಂಧಪಟ್ಟ ಏಜೆನ್ಸಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು. ರಾಷ್ಟ್ರೀಯ ಹಬ್ಬಗಳು ಹಾಗೂ ನಿರ್ಬಂಧಿತ ರಜಾ ದಿನಗಳು ಮತ್ತು ವಾರದ ರಜಾ ದಿನಗಳಂದು ಕೆಲಸ ಮಾಡುವ ಕಾರ್ಮಿಕರಿಗೆ ಓಟಿ ಹಣವನ್ನು ಪಾವತಿಸಬೇಕು. ಸಮಾಜ ಕಲ್ಯಾಣ ಇಲಾಖೆ ತಿ.ನರಸೀಪುರ ತಾಲೂಕಿನಲ್ಲಿ ರಮೇಶ್, ಹುಣಸೂರು ತಾಲೂಕಿನಲ್ಲಿ ರಾಜೇಶ್ ಕುಮಾರ್ ಅವರನ್ನು ಕೆಲಸದಿಂದ ತೆಗೆದುಹಾಕಿದ್ದು, ಅವರನ್ನು ಮತ್ತೆ ಕೆಲಸಕ್ಕೆ ಸೇರಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಕಾಯ್ದೆಯನ್ವಯ ನೇಮಕಾತಿ ಪತ್ರ, ಇಎಸ್‌ಐ ಕಾರ್ಡ್ ಮತ್ತು ವೇತನ ಪಾವತಿ ಚೀಟಿಯನ್ನು ಗುತ್ತಿಗೆದಾರನಿಂದ ಎಲ್ಲಾ ಕಾರ್ಮಿಕರಿಗೆ ಕೊಡಿಸಬೇಕು. ಯೂನಿಫಾರ್ಮ್ ಅನ್ನು ಕಾರ್ಮಿಕರ ಸ್ವಂತ ಹಣದಿಂದ ಖರೀದಿಸಿ ಧರಿಸುವಂತೆ ಒತ್ತಡ ನೀಡಲಾಗುತ್ತಿದ್ದು, ಕಾನೂನಿನನ್ವಯ ಕಾರ್ಮಿಕರಿಗೆ ಉಚಿತವಾಗಿ ಯೂನಿಫಾರ್ಮ್ ನೀಡಬೇಕು ಇಲ್ಲವೇ ಯೂನಿಫಾರ್ಮ್ ಧರಿಸುವಂತೆ ಕಾರ್ಮಿಕರಿಗೆ ಕಿರುಕುಳ ನೀಡಬಾರದು. ಹಾಸ್ಟೆಲ್‌ಗಳಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ಕಾರ್ಮಿಕರಿಗೆ ವಾರದ ರಜೆ ಮತ್ತು ರಾಷ್ಟ್ರೀಯ ಹಬ್ಬಗಳು ಹಾಗೂ ನಿರ್ಬಂಧಿತ ರಜಾ ದಿನಗಳ ಪಟ್ಟಿಯನ್ನು ಪ್ರತಿ ಹಾಸ್ಟೆಲ್‌ನ ನೋಟೀಸ್ ಬೋರ್ಡ್‌ನಲ್ಲಿ ಕಾಣುವಂತೆ ಹಾಕಬೇಕು. ಹಾಸ್ಟೆಲ್‌ಗಳಲ್ಲಿ ಹೊರಗುತ್ತಿಗೆ ಕಾರ್ಮಿಕರಿಗೆ ಹಾಜರಾತಿ ಪುಸ್ತಕವನ್ನು ಇಟ್ಟು ಪ್ರತಿದಿನ ಕಾರ್ಮಿಕರಿಂದ ಹಾಜರಾತಿ ನಮೂದಿಸಬೇಕು. ಪ್ರತಿ ತಿಂಗಳು 5ನೇ ತಾರೀಖಿನೊಳಗೆ ವೇತನ ಪಾವತಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ್ ಮೇಟಿ, ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘ ಜಿಲ್ಲಾಧ್ಯಕ್ಷ ಮುದ್ದುಕೃಷ್ಣ, ಕಾರ್ಯದರ್ಶಿ ಚಂದ್ರು, ಕಾರ್ಮಿಕ ಮುಖಂಡರಾದ ಮಹದೇವಮ್ಮ ಎಂ.ವಿ.ಲೋಕೇಶ್, ಶಿವಣ್ಣ, ರಾಜೇಶ್ ಕುಮಾರ್ ಎ, ಸಂಧ್ಯಾರಾಣಿ, ಧನಲಕ್ಷ್ಮಿ, ಭೀಮನಾಯಕ, ಪಿ.ಟಿ.ಶ್ರೀನಿವಾಸ್, ಚಂದ್ರಯ್ಯ, ರಾಜು, ಬಸವ, ಬಸವರಾಜು, ಮಹದೇವ, ಸಿದ್ದರಾಜು, ಶಿವಮೂರ್ತಿ, ವಿಜಯ ಕುಮಾರ್, ರಕ್ಷಿತ್ ಕುಮಾರ್ ಇನ್ನಿತರರು ಭಾಗವಹಿಸಿದ್ದರು.

ಪೊಲೀಸ್ ಠಾಣೆಗಳಿಗೆ ಶಸ್ತ್ರಾಸ್ತ್ರ ಒಪ್ಪಿಸಲು ಸೂಚನೆ

ಮೈಸೂರು, ಮಾ.30(ಆರ್‌ಕೆ)– ಚುನಾವಣಾ ನೀತಿ ಸಂಹಿತೆ ಮುಗಿಯುವವರೆಗೆ ಶಸ್ತ್ರಾಸ್ತ್ರಗಳನ್ನು ಸರಹದ್ದಿನ ಪೊಲೀಸ್ ಠಾಣೆಗಳಿಗೆ ಒಪ್ಪಿಸುವಂತೆ ಮೈಸೂರು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಸೂಚಿಸಿದ್ದಾರೆ.

ಈ ಸಂಬಂಧ ಇಂದು ಆದೇಶ ಹೊರಡಿಸಿರುವ ಅವರು, ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಮಾರ್ಚ್ 29 ರಿಂದ ಮೇ 13ರವರೆಗೆ ಪರವಾನಗಿ ಪಡೆದು ಹೊಂದಿರುವ ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗಳಿಗೆ ಠೇವಣಿ ಇರಿಸುವಂತೆ ಸೂಚಿಸಿದ್ದಾರೆ. ಅದೇ ರೀತಿ ಯಾವುದೇ ವ್ಯಕ್ತಿಗಳು ಶಸ್ತ್ರಾಸ್ತ್ರಗಳು, ಸ್ಫೋಟಕ ವಸ್ತುಗಳು ಹಾಗೂ ಮಾರಕಾಸ್ತ್ರಗಳನ್ನು ಒಯ್ಯುವ ಅಥವಾ ಹಿಡಿದುಕೊಂಡು ಓಡಾಡುವುದನ್ನು ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೆ ಯಾವುದೇ ಶಸ್ತ್ರಾಸ್ತ್ರಗಳನ್ನು ಯಾವುದೇ ಉದ್ದೇಶಕ್ಕೆ ಬಳಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನು ರೀತಿಯ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ರಾಜ್ಯದಲ್ಲಿ ಆಮ್ ಆದ್ಮಿಗೆ ಒಂದು ಅವಕಾಶ ನೀಡುವಂತೆ ದೆಹಲಿ 'ಆದ್ಮಿ' ಸಂಸದರ ಮನವಿ

ಆಮ್ ಸರ್ಕಾರದಲ್ಲಿ ಜನರ ಹಣ ಜನರಿಗಾಗಿ ವಿನಿಯೋಗ



ಮೈಸೂರು,ಮಾ.30(ಎಂಟಿವೈ)– ರಾಜ್ಯದಲ್ಲಿ ಅತೀ ಕಡು ಭ್ರಷ್ಟ ಸರ್ಕಾರವಿದ್ದು, ರಾಜ್ಯದ ಜನತೆ ಬದಲಾವಣೆ ಬಯಸಿದ್ದು, ಈ ಬಾರಿ ಆಮ್ ಆದ್ಮಿ ಪಕ್ಷಕ್ಕೆ ಬೆಂಬಲ ನೀಡುವಂತೆ ದೆಹಲಿ ಸಂಸದ ಸಂಜಯ್‌ಸಿಂಗ್ ಮನವಿ ಮಾಡಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿರುವ ಬಿಜೆಪಿ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದರಿಂದ ರಾಜ್ಯದ ಜನರು ಹಿತ ಬಲಿ ಕೊಡುತ್ತಿದೆ ಅಭಿವೃದ್ಧಿ ಕಾರ್ಯಕ್ಕೆ ತಿಲಾಂಜಲಿ ಹಾಡಿದೆ. ಸಂಪತ್ತನ್ನು ದೋಚುವುದಕ್ಕೆ ನೀಡುತ್ತಿರುವ ಆದ್ಯತೆಯನ್ನು ರಾಜ್ಯದ ಅಭಿವೃದ್ಧಿಗೆ ನೀಡುತ್ತಿಲ್ಲ. ಈ ಹಿನ್ನೆಲೆಯಲ್ಲಿ ರಾಜ್ಯದ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿರುವ ಆಮ್ ಆದ್ಮಿ ಪಕ್ಷಕ್ಕೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಆಮ್ ಆದ್ಮಿ ಪಕ್ಷ ನೀಡಿದ ಕಾರ್ಯಕ್ರಮ, ಭ್ರಷ್ಟಾಚಾರ ರಹಿತ ಹಾಗೂ ಪಾರದರ್ಶಕ ಆಡಳಿತ ಮತ್ತು ಸರ್ಕಾರದ ಸಾಧನೆ ಗಮನಿಸಿ ದೆಹಲಿಯಲ್ಲಿ ಮತದಾರರು ಮೂರನೇ ಬಾರಿಯೂ ಆಮ್ ಆದ್ಮಿ ಸರ್ಕಾರ ಆಯ್ಕೆ ಮಾಡಿದ್ದಾರೆ. ಪಕ್ಷದ ಮೇಲೆ ನಂಬಿಕೆ ಇಟ್ಟು ಪಂಜಾಬ್ ಜನರೂ ನಮ್ಮ ಪಕ್ಷದ ಸರ್ಕಾರವನ್ನು ಅಧಿಕಾರಕ್ಕೆ ತಂದಿದ್ದಾರೆ. ಭರವಸೆ ನೀಡುವುದಕ್ಕಿಂತ ಕೆಲಸ ಮಾಡುವುದೇ ನಮ್ಮ ಪಕ್ಷದ ವೈಶಿಷ್ಟ್ಯವಾಗಿದೆ. ನಮಗೆ ಬೆಂಬಲ ನೀಡಿದ ಮತದಾರರ ವಿಶ್ವಾಸ ಉಳಿಸಿಕೊಂಡಿದ್ದೇವೆ ಎಂದರು.

ಆಮ್ ಆದ್ಮಿ ಪಕ್ಷ ಜನತೆಯ ಹಣವನ್ನು ಜನರಿಗಾಗಿಯೇ ಖರ್ಚು ಮಾಡುತ್ತಿದೆ. ಹೀಗಾಗಿ ದೆಹಲಿ, ಪಂಜಾಬ್‌ನಲ್ಲಿ ಉಚಿತ ವಿದ್ಯುತ್, ಶಿಕ್ಷಣ ನೀಡುತ್ತಿದೆ. ಆದರೆ ಇಲ್ಲಿನ ಬಿಜೆಪಿ ಸರ್ಕಾರ ಶೇ.40ರಷ್ಟು ಕಮಿಷನ್ ಪಡೆದು, ಪರ್ಸೆಂಟೇಜ್ ಸರ್ಕಾರ ಎಂಬ ಕೀರ್ತಿಗಳಿಸಿಕೊಂಡಿದೆ. ಲೋಕಾಯುಕ್ತ ದಾಳಿ ವೇಳೆ ಮನೆಯಲ್ಲಿ ಎಂಟು ಕೋಟಿ ಸಿಕ್ಕರೂ ಶಾಸಕರೊಬ್ಬರ ವಿರುದ್ಧ ಕಠಿಣ ಕ್ರಮ ಕೈಗೊಳ್ಳದೇ, ರಕ್ಷಣೆ ಮಾಡುವ ತಂತ್ರಗಾರಿಕೆ ನಡೆಸಲಾಗುತ್ತಿದೆ. ಇದುವರೆಗೆ ಕಾಂಗ್ರೆಸ್, ಬಿಜೆಪಿಗೆ ಅವಕಾಶ ನೀಡಿದ್ದ ಜನತೆ ಈ ಬಾರಿ ಆಮ್ ಆದ್ಮಿ ಪಕ್ಷಕ್ಕೆ ಮತ ನೀಡಬೇಕೆಂದು ಮನವಿ ಮಾಡಿದರು.

ಇದೇ ವೇಳೆ ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಪೃಥ್ವಿ ರೆಡ್ಡಿ ಮಾತನಾಡಿ, ರಾಜ್ಯದ ಜನರಿಗೆ ಮೂರೂ ಪ್ರಮುಖ ಪಕ್ಷಗಳ ವಿರುದ್ಧವೂ ಬೇಸರವುಂಟಾಗಿದೆ. ರಾಜ್ಯದ ಹಲವು ಕ್ಷೇತ್ರಗಳಲ್ಲಿ ಎಎಪಿ ನಡೆಸಿದ ಸಮೀಕ್ಷೆ ವೇಳೆ ಜನರು ಮೂರು ಪಕ್ಷಗಳ ವಿರುದ್ಧ ಭ್ರಮನಿರಸನಗೊಂಡಿರುವುದು ತಿಳಿದು ಬಂದಿದೆ ಹೀಗಾಗಿ ಆಮ್ ಆದ್ಮಿ ಪಕ್ಷದ ಬಗ್ಗೆ ಒಲವು ಹೆಚ್ಚುತ್ತಿದೆ. ಜನತೆಯೊಡನೆ ಸಮಾಲೋಚನೆ ನಡೆಸಿ ಪ್ರಣಾಳಿಕೆ ಸಿದ್ಧಪಡಿಸಲಾಗಿದೆ. ಪ್ರತಿ ಜಿಲ್ಲೆಗೂ ಪ್ರತ್ಯೇಕ ಪ್ರಣಾಳಿಕೆ ನೀಡಲಾಗಿದೆ. ಜೊತೆಗೆ ಈ ಕುರಿತ ಗ್ಯಾರಂಟಿ ಕಾರ್ಡ್ ಸಹ ನೀಡುತ್ತಿದ್ದು, ಅಧಿಕಾರಕ್ಕೆ ಬಂದ ಬಳಿಕ ಈಡೇರಿಸದಿದ್ದರೆ ಜನತೆ ನ್ಯಾಯಾಲಯದ ಮೊರೆ ಹೋಗಬಹುದಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಚಾಮರಾಜ ಕ್ಷೇತ್ರದ ಎಎಪಿ ಅಭ್ಯರ್ಥಿ ಮಾಲವಿಕ ಗುಬ್ಬಿವಾಣಿ ಎನ್.ಆರ್.ಕ್ಷೇತ್ರದ ಅಭ್ಯರ್ಥಿ ಧರ್ಮಶ್ರೀ, ಮುಖಂಡರಾದ ವಿಜಯ್‌ಶರ್ಮ, ರಂಗಯ್ಯ, ಇದ್ದರು.


ಅನಧಿಕೃತ ಕಟ್ಟಡ ನಿರ್ಮಾಣಕ್ಕೆ ತಡೆ

ಮೈಸೂರು, ಮಾ.30– ನಿಯಮಬಾಹಿರವಾಗಿ ಕಟ್ಟಡ ನಿರ್ಮಿಸುವುದನ್ನು ಮೈಸೂರು ನಗರ ಪಾಲಿಕೆ ಅಧಿಕಾರಿಗಳು ತಡೆದಿರುವ ಘಟನೆ ಗುರುವಾರ ನಡೆದಿದೆ.

ನಗರದ ಬೋಗಾದಿ 2ನೇ ಹಂತ, ಶ್ರೀದೇವಿ ನರ್ಸಿಂಗ್ ಹೋಂ ಹಿಂಭಾಗದಲ್ಲಿ ಕಟ್ಟಡ ನಿರ್ಮಾಣಕ್ಕೆ ಮುಂದಾಗಿದ್ದರು. ಅಡಿಪಾಯ ಹಾಕಲು ಸಿದ್ಧತೆ ನಡೆದಿತ್ತು. ಅಷ್ಟರಲ್ಲಿ ಸ್ಥಳೀಯರ ದೂರು ಹಾಗೂ ಸಿಬ್ಬಂದಿ ಪರಿವೀಕ್ಷಣೆ ಮೂಲಕ ವಿಷಯ ತಿಳಿದ ಪಾಲಿಕೆ ವಲಯ ಕಚೇರಿ 3ರ ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ ಇನ್ನಿತರ ಅಧಿಕಾರಿಗಳ ತಂಡ ಸ್ಥಳಕ್ಕೆ ಭೇಟಿ ನೀಡಿ ಪಾಲಿಕೆಯಿಂದ ಪರವಾನಗಿ ಪಡೆದು ನಂತರ ನಿರ್ಮಾಣ ಮುಂದುವರೆಸುವಂತೆ ತಡೆದರು. ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಭದ್ರತೆ ಪಡೆದಿದ್ದರು.

ಈ ಬಗ್ಗೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಪಾಲಿಕೆ ಪರವಾನಗಿ ಇಲ್ಲದೆ ಯಾವುದೇ ನಿರ್ಮಾಣ ಮಾಡಿದರೂ ಅದು ಅನಧಿಕೃತವಾಗುತ್ತದೆ. ಹಾಗಾಗಿ ಪರವಾನಗಿ ಪಡೆಯುವಂತೆ ಸೂಚಿಸಿ, ನಿರ್ಮಾಣ ಕಾಮಗಾರಿ ನಿಲ್ಲಿಸಿದ್ದೇವೆ. ಸರ್ಕಾರಿ ಜಾಗದಲ್ಲಿ ನಿರ್ಮಾಣ ಮಾಡುತ್ತಿದ್ದಾರೆ ಎನ್ನುವುದು ಸ್ಥಳೀಯರ ಆರೋಪ. ಈ ಬಗ್ಗೆ ಅವರು ತಹಸೀಲ್ದಾರ್ ಅವರಿಗೂ ದೂರು ನೀಡಿದ್ದು, ಕಟ್ಟಡ ನಿರ್ಮಾಣ ಮಾಡುತ್ತಿರುವವರಿಗೆ ನೋಟಿಸ್ ನೀಡಿದ್ದಾರೆ ಎನ್ನಲಾಗಿದೆ. ನಿರ್ಮಾಣ ಮಾಡುತ್ತಿರುವವರು ತಮ್ಮದೇ ಜಾಗ ಎನ್ನುತ್ತಾರೆ. ಹಾಗಾಗಿ ಮೊದಲು ಇದನ್ನು ಇತ್ಯರ್ಥಪಡಿಸಿಕೊಂಡು ನಂತರ ಪಾಲಿಕೆ ಪರವಾನಗಿ ಪಡೆದು ಮುಂದುವರೆಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಚುನಾವಣಾ ಜಾಗೃತಿ: ಜಾವಗಲ್ ಶ್ರೀನಾಥ್ ಜಿಲ್ಲಾ ಐಕಾನ್



ಮೈಸೂರು, ಮಾ.30– ಕರ್ನಾಟಕ ವಿಧಾನಸಭಾ ಚುನಾವಣೆ 2023 ರ ಹಿನ್ನೆಲೆಯಲ್ಲಿ ಜಿಲ್ಲೆಯ ಮತದಾರರಲ್ಲಿ ಮತದಾನ ಮಾಡುವ ಕುರಿತು ಅರಿವು ಮೂಡಿಸುವ ಸಲುವಾಗಿ ಅಂತರರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ಷೇತ್ರದಲ್ಲಿ ಖ್ಯಾತಿ ಹೊಂದಿರುವ ಜಾವಗಲ್ ಶ್ರೀನಾಥ್ ಅವರನ್ನು ಜಿಲ್ಲೆಯ ಐಕಾನ್ ಆಗಿ ನೇಮಕ ಮಾಡಿಕೊಂಡಿರುವುದಾಗಿ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಬಿಪಿ ಸಮೀಕ್ಷೆಯಲ್ಲಿ ಕಾಂಗ್ರೆಸ್, ಝೀ ನ್ಯೂಸ್‌ನಲ್ಲಿ ಬಿಜೆಪಿ ಮೇಲುಗೈ

ಮೈಸೂರು, ಮಾ.30–ರಾಜ್ಯ ವಿಧಾನಸಭೆ ಚುನಾವಣೆ ದಿನಾಂಕ ಘೋಷಣೆಯಾದ ಬೆನ್ನಲ್ಲೇ ಚುನಾವಣಾ ಪೂರ್ವ ಸಮೀಕ್ಷೆಗಳು ಹೊರ ಬಿದ್ದಿದ್ದು, ಎಬಿಪಿ ಸಿ–ವೋಟರ್ ಸಮೀಕ್ಷೆಯಂತೆ ರಾಜ್ಯದಲ್ಲಿ ಕಾಂಗ್ರೆಸ್‌ಗೆ ಬಹುಮತ ಬಂದರೆ, ಜಿ–ನ್ಯೂಸ್ ಸಮೀಕ್ಷೆಪ್ರಕಾರ ಅತಂತ್ರ ಫಲಿತಾಂಶ ಬರಲಿದೆ ಈ ಸಮೀಕ್ಷಾ ವರದಿಗಳು ರಾಜ್ಯ ಮಟ್ಟದ ಪತ್ರಿಕೆಗಳು ಹಾಗೂ ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗಿದೆ.



ಒಟ್ಟು 224 ಸ್ಥಾನಗಳ ಪೈಕಿ ಎಬಿಪಿ ಸಿ–ವೋಟರ್ ಸಮೀಕ್ಷೆಯಲ್ಲಿ ಕಾಂಗ್ರೆಸ್‌ಗೆ 115 ರಿಂದ 127, ಬಿಜೆಪಿಗೆ 68 ರಿಂದ 80, ಜೆಡಿಎಸ್‌ಗೆ 23 ರಿಂದ 35 ಸ್ಥಾನ ದೊರೆತರೆ, ಜಿ–ನ್ಯೂಸ್ ಸಮೀಕ್ಷೆ ಪ್ರಕಾರ ಕಾಂಗ್ರೆಸ್‌ಗೆ 88 ರಿಂದ 98, ಬಿಜೆಪಿಗೆ 96 ರಿಂದ 106, ಜೆಡಿಎಸ್‌ಗೆ 23 ರಿಂದ 33 ಸ್ಥಾನ ದೊರೆಯಲಿದೆಯಂತೆ.

ಸಿ–ವೋಟರ್ ಸಮೀಕ್ಷೆಯಲ್ಲಿ ಶೇ.50ರಷ್ಟು ಜನರು ಬಿಜೆಪಿ ಸರ್ಕಾರ ಕಳಪೆ ಸಾಧನೆ ಮಾಡಿದೆ ಎಂದು ಹೇಳಿದ್ದರಂತೆ. ಶೇ.47ರಷ್ಟು ಮಂದಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಳಪೆ ಸಾಧನೆ ಮಾಡಿದ್ದಾರೆ ಎಂದು ಹೇಳಿದ್ದಾರಂತೆ. ಪ್ರಧಾನಿ ನರೇಂದ್ರ ಮೋದಿಯವರು ಉತ್ತಮ ಆಡಳಿತ ನಡೆಸುತ್ತಿದ್ದಾರೆ ಎಂದು ಶೇ.47ರಷ್ಟು ಮಂದಿ ಅಭಿಪ್ರಾಯ ಪಟ್ಟಿದ್ದಾರೆ.

ಬೃಹತ್ ಬೆಂಗಳೂರು ಪ್ರದೇಶದಲ್ಲಿ ಈ ಬಾರಿ ಕಾಂಗ್ರೆಸ್ ಒಟ್ಟು 32 ಸ್ಥಾನಗಳ ಪೈಕಿ 15 ರಿಂದ 19 ತನ್ನದಾಗಿಸಿಕೊಳ್ಳಲಿದೆಯಂತೆ. ಬಿಜೆಪಿ 11 ರಿಂದ 15, ಜೆಡಿಎಸ್ 1 ರಿಂದ 3, ಇತರರಿಗೆ 1 ಸ್ಥಾನ. ಹಳೇ ಮೈಸೂರು ಭಾಗದಲ್ಲಿ ಕೂಡ ಕಾಂಗ್ರೆಸ್ ಉತ್ತಮ ಸಾಧನೆ ತೋರಲಿದ್ದು, ಈ ಭಾಗದಲ್ಲಿ ಬಿಜೆಪಿ 3ನೇ ಸ್ಥಾನಕ್ಕೆ ತಳ್ಳಲ್ಪಡಲಿದೆ ಎಂದು ವರದಿ ಹೇಳಿದೆಯಂತೆ.

ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್‌ಗೆ ಶೇ.44, ಬಿಜೆಪಿಗೆ 37ರಷ್ಟು ಮತಗಳು ಬರಲಿದ್ದು, ಕಾಂಗ್ರೆಸ್ 19 ರಿಂದ 23 ಹಾಗೂ ಬಿಜೆಪಿ 8 ರಿಂದ 12 ಸ್ಥಾನ ಗೆಲ್ಲಲಿದೆ ಮುಂಬೈ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ತಲಾ ಶೇ.43ರಷ್ಟು ಮತಗಳನ್ನು ಪಡೆದರೂ, ಕಾಂಗ್ರೆಸ್ 25 ರಿಂದ 29 ಮತ್ತು ಬಿಜೆಪಿ 21 ರಿಂದ 25 ಸ್ಥಾನ ಗೆಲ್ಲಲಿದೆ ಎಂದು ವರದಿ ತಿಳಿಸಿದೆಯಂತೆ.

ಬಿಜೆಪಿ ಭದ್ರಕೋಟೆ ಎಂದು ಹೇಳಲಾಗುತ್ತಿರುವ ಮಧ್ಯ ಕರ್ನಾಟಕದಲ್ಲಿ ಕೂಡ ಕಾಂಗ್ರೆಸ್ ಹೆಚ್ಚಿನ ಸ್ಥಾನ ಪಡೆಯಲಿದ್ದು, ಇಲ್ಲಿ ಕಾಂಗ್ರೆಸ್‌ಗೆ ಶೇ.41 ಮತ್ತು ಬಿಜೆಪಿಗೆ ಶೇ.38ರಷ್ಟು ಮತಗಳು ಬರಲಿದ್ದು, ಇಲ್ಲಿನ 35 ಸ್ಥಾನಗಳ ಪೈಕಿ ಬಿಜೆಪಿ 12 ರಿಂದ 16, ಕಾಂಗ್ರೆಸ್ 18 ರಿಂದ 22 ಸ್ಥಾನ ಪಡೆದರೆ, ಜೆಡಿಎಸ್ 2ಕ್ಕಿಂತ ಹೆಚ್ಚು ಸ್ಥಾನ ಪಡೆಯಲು ಸಾಧ್ಯವಿಲ್ಲ. ಬಿಜೆಪಿಯ ಮತ್ತೊಂದು ಭದ್ರಕೋಟೆ ಕರಾವಳಿ ಕರ್ನಾಟಕದಲ್ಲಿ ಈ ಬಾರಿಯೂ ಬಿಜೆಪಿಗೆ ಬಹುಮತ ಬರಲಿದ್ದು, ಆ ಪಕ್ಷಕ್ಕೆ ಶೇ.46 ಹಾಗೂ ಕಾಂಗ್ರೆಸ್‌ಗೆ ಶೇ.41ರಷ್ಟು ಮತ ಬಂದರೆ ಜೆಡಿಎಸ್ ಒಟ್ಟು ಮತಗಳ ಸಂಖ್ಯೆ ಶೇ.6ಕ್ಕಿಂತ ಕಡಿಮೆ ಇರಲಿದೆ. ಕೇವಲ 21 ಸ್ಥಾನ ಹೊಂದಿರುವ ಕರಾವಳಿ ಕರ್ನಾಟಕದಲ್ಲಿ ಬಿಜೆಪಿ 9 ರಿಂದ 13 ಹಾಗೂ ಕಾಂಗ್ರೆಸ್ 8 ರಿಂದ 12 ಸ್ಥಾನ ಪಡೆಯಲಿದ್ದು, ಈ ಭಾಗದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ಪ್ರಬಲ ಪೈಪೋಟಿ ನಡೆಯಲಿದೆ ಎಂದು ಸಿ–ವೋಟರ್ ಸಮೀಕ್ಷೆ ತಿಳಿಸಿದೆಯಂತೆ.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಈ ಬಾರಿ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ತೀವ್ರ ಪೈಪೋಟಿ ಎದುರಾಗಲಿದ್ದು, ಕಾಂಗ್ರೆಸ್ ಶೇ.44, ಬಿಜೆಪಿ ಶೇ.37ರಷ್ಟು ಮತ ಪಡೆದು ಕಾಂಗ್ರೆಸ್ 19 ರಿಂದ 23 ಹಾಗೂ ಬಿಜೆಪಿ 8 ರಿಂದ 12 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆಯಂತೆ.

ಜಿ–ನ್ಯೂಸ್ ಸಮೀಕ್ಷೆ ಪ್ರಕಾರ ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ, ಬಸವರಾಜ ಬೊಮ್ಮಾಯಿ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿದ್ದು ಬಿಜೆಪಿಗೆ ಅನುಕೂಲವಾಗುತ್ತದೆಯೇ ಎಂಬ ಪ್ರಶ್ನೆಗೆ ಶೇ.31ರಷ್ಟು ಮಂದಿ ಹೌದು ಎಂದರೆ, ಶೇ.21ರಷ್ಟು ಮಂದಿ ಅನಾನುಕೂಲವಾಗಲಿದೆ ಎಂದಿದ್ದಾರಂತೆ. ಪ್ರಧಾನಿ ಮೋದಿ ಈ ಚುನಾವಣೆಯಲ್ಲಿ ಗೇಮ್ ಚೇಂಜರ್ ಆಗುವರೇ ಎಂಬ ಪ್ರಶ್ನೆಗೆ ಶೇ.31ರಷ್ಟು ಮಂದಿ ಹೌದು ಎಂದರೆ, ಶೇ.32ರಷ್ಟು ಮಂದಿ ಗೇಮ್ ಚೇಂಜರ್ ಆಗುವುದಿಲ್ಲ ಎಂದಿದ್ದಾರಂತೆ. ಹೆಚ್.ಡಿ.ಕುಮಾರಸ್ವಾಮಿ ಕಿಂಗ್ ಮೇಕರ್ ಆಗುವರೇ ಎಂಬ ಪ್ರಶ್ನೆಗೆ ಶೇ.30ರಷ್ಟು ಹೌದು ಎಂದರೆ ಶೇ.26ರಷ್ಟು ಮಂದಿ ಇಲ್ಲ ಎಂದಿದ್ದಾರಂತೆ.

ಕೇಂದ್ರದ ಯೋಜನೆಗಳು ತೃಪ್ತಿ ತಂದಿವೆ ಎಂದು ಶೇ.37ರಷ್ಟು ಮಂದಿ ಹೇಳಿದ್ದರೆ, ತೃಪ್ತಿ ತಂದಿಲ್ಲ ಎಂದು ಶೇ.24ರಷ್ಟು ಮಂದಿ ತಿಳಿಸಿದ್ದಾರೆ. ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆ ಚುನಾವಣೆ ವೇಳೆ ಕಾಂಗ್ರೆಸ್‌ಗೆ ನೆರವಾಗಲಿದೆಯೇ ಎಂಬ ಪ್ರಶ್ನೆಗೆ ಹೌದು ಎಂದು ಶೇ.22ರಷ್ಟು ಮಂದಿ ಹೇಳಿದ್ದರೆ, ನೆರವಾಗುವುದಿಲ್ಲ ಎಂದು ಶೇ.41ರಷ್ಟು ಮಂದಿ ಹೇಳಿದ್ದಾರಂತೆ.

ಯಾರು ಮುಖ್ಯಮಂತ್ರಿಯಾಗಬೇಕು ಎಂಬ ಪ್ರಶ್ನೆಗೆ ಶೇ.39ರಷ್ಟು ಮಂದಿ ಸಿದ್ದರಾಮಯ್ಯ, ಶೇ.31ರಷ್ಟು ಮಂದಿ ಬಸವರಾಜ ಬೊಮ್ಮಾಯಿ, ಶೇ.21ರಷ್ಟು ಮಂದಿ ಹೆಚ್.ಡಿ.ಕುಮಾರಸ್ವಾಮಿ, ಶೇ.3ರಷ್ಟು ಮಂದಿ ಡಿ.ಕೆ.ಶಿವಕುಮಾರ್ ಹೆಸರನ್ನು ಸೂಚಿಸಿದ್ದಾರಂತೆ.

ದಲಿತರಿಗೆ ಸಿಎಂ ಪದವಿ ಸಿಗದಿರುವುದು ದುರದೃಷ್ಟಕರ

ದಲಿತ ಸಂಘಟನೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಸೋಸಲೆ ಶಶಿಕಾಂತ್



ತಿ.ನರಸೀಪುರ, ಮಾ.30– ಹಲವು ಸಮುದಾಯಗಳ ನಾಯಕರು ರಾಜ್ಯದ ಮುಖ್ಯಮಂತ್ರಿಯಾಗಿದ್ದರೂ, ದಲಿತ ಸಮುದಾಯಕ್ಕೆ ಸಿಎಂ ಪದವಿ ಸಿಗದಿರುವುದು ದುರದೃಷ್ಟಕರ. ಮುಂದಿನ ಚುನಾವಣೆಯಲ್ಲಿ ದಲಿತ ಸಿಎಂ ಅಭ್ಯರ್ಥಿ ಘೋಷಿಸುವ ಪಕ್ಷಕ್ಕೆ ದಲಿತ ಸಂಘಟನೆಗಳು ಬೆಂಬಲ ನೀಡಲಿವೆ ಎಂದು ದಲಿತ ಸಂಘಟನೆಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಸೋಸಲೆ ಶಶಿಕಾಂತ್ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ರಾಜ್ಯ ಐಕ್ಯತಾ ಸಮಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುವುದಾಗಿ ಹೇಳಿಕೆ ನೀಡಿರುವುದು ಆ ಸಂಘಟನೆ ವೈಯಕ್ತಿಕ ಹೇಳಿಕೆಯಾಗಿದೆ. ಚುನಾವಣೆಯಲ್ಲಿ ಯಾವ ಪಕ್ಷ ದಲಿತ ಸಿಎಂ ಅಭ್ಯರ್ಥಿ ಘೋಷಣೆ ಮಾಡುತ್ತದೋ ಆ ಪಕ್ಷಕ್ಕೆ ದಲಿತ ಸಂಘಟನೆಗಳು ಸಂಪೂರ್ಣ ಬೆಂಬಲ ನೀಡಲಿವೆ ಎಂದರು.

ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಪಕ್ಷಗಳಲ್ಲಿ ದಲಿತ ಸಮುದಾಯದ ಹಿರಿಯ ನಾಯಕರಿದ್ದರೂ, ಅನ್ಯ ಸಮುದಾಯದ ನಾಯಕರಿಗೆ ಮುಖ್ಯಮಂತ್ರಿ ಹುದ್ದೆ ನೀಡುತ್ತಿವೆ. ಇದು ರಾಜಕೀಯದಲ್ಲಿ ಅಸ್ಪೃಶ್ಯತೆ ಆಚರಣೆಯಾಗಿದೆ. ಹಲವು ದಶಕಗಳಿಂದ ದಲಿತ ಸಿಎಂ ಕೂಗು ಮುನ್ನೆಲೆಗೆ ಬಂದರೂ ದಲಿತರಿಗೆ ಆಯಕಟ್ಟಿನ ಸ್ಥಾನಮಾನ ಅಥವಾ ಮುಖ್ಯಮಂತ್ರಿ ಗಾದಿ ತಪ್ಪಿಸುವ ಜಾತಿವಾದಿ ಷಡ್ಯಂತ್ರ ನಡೆಯುತ್ತಿದೆ ಎಂಬುದು ನಿಚ್ಚಳವಾಗಿದೆ. ದಲಿತ ರಾಜಕೀಯ ಮುತ್ಸದ್ದಿಗಳಾದ ಕೆ.ಎಚ್. ರಂಗನಾಥ್, ಬಿ.ರಾಚಯ್ಯ, ಎನ್. ರಾಚಯ್ಯ, ಮಲ್ಲಿಕಾರ್ಜುನ ಖರ್ಗೆ, ಮುನಿಯಪ್ಪ ಜಿ.ಪರಮೇಶ್ವರ್ ಅವರಿಗೆ ಮುಖ್ಯಮಂತ್ರಿ ಪದವಿ ನೀಡದೆ ರಾಜಕೀಯ ಪಕ್ಷಗಳು ವಂಚಿಸಿವೆ ಎಂದರು.

ದಲಿತ ಮತಗಳು ಕಾಂಗ್ರೆಸ್‌ನ ಸಂಪ್ರದಾಯ ಮತ ಎಂದು ಬಿಂಬಿತವಾಗಿತ್ತು. ಆದರೆ, ಸದ್ಯದ ಪರಿಸ್ಥಿತಿಯಲ್ಲಿ ದಲಿತ ಸಿಎಂ ಘೋಷಣೆ ಮಾಡಿದ ಪಕ್ಷಕ್ಕೆ ರಾಜ್ಯದ ಎಲ್ಲಾ ದಲಿತ ಸಂಘಟನೆಗಳು ಬೆಂಬಲ ಸೂಚಿಸಲಿವೆ ಎಂದರು.

ಸಾಮಾಜಿಕ ಸಮಿತಿ ಅಧ್ಯಕ್ಷ ಕರೋಹಟ್ಟಿ ಪ್ರಭುಸ್ವಾಮಿ ಮಾತನಾಡಿ, ದಲಿತರಿಗೆ ಸಿಎಂ ಆಗುವ ಅರ್ಹತೆ ಇದ್ದರೂ, ಜೆಡಿಎಸ್, ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳಲ್ಲಿ ಮುಖ್ಯಮಂತ್ರಿ ಸ್ಥಾನ ನೀಡಿಲ್ಲ. ಹಾಗಾಗಿ ದಲಿತ ಸಿಎಂ ಅಭ್ಯರ್ಥಿ ಘೋಷಿಸಿದ ಪಕ್ಷಕ್ಕೆ ದಲಿತ ಸಂಘಟನೆಗಳು ಬೆಂಬಲಿಸಲಿವೆ ಎಂದರು.

ಈ ವೇಳೆ ದಸಂಸ ಜಿಲ್ಲಾ ಸಂಚಾಲಕ ಸೋಸಲೆ ರಾಜಶೇಖರ್, ಬನ್ನಹಳ್ಳಿ ಸೋಮಣ್ಣ, ದಲಿತ ಜಾಗೃತಿ ಸಮಿತಿ ಅಧ್ಯಕ್ಷ ತುಂಬಲ ಮಂಜುನಾಥ್, ವಿಚಾರವಾದಿ ಕರೋಹಟ್ಟಿ ಪ್ರಭುಸ್ವಾಮಿ, ಯಡದೊರೆ ಮಹದೇವಯ್ಯ, ಅಲಗೂಡು ಶಿವಣ್ಣ, ಚೌಹಳ್ಳಿ ಜಯರಾಮು, ನಿಂಗರಾಜು ಇತರರಿದ್ದರು.

ಬಿಜೆಪಿ, ಜೆಡಿಎಸ್ ತೊರೆದು ಕೈ ಹಿಡಿದ ಮುಖಂಡರು



ಸರಗೂರು, ಮಾ.30– ಪಟ್ಟಣದಲ್ಲಿ ಸರಗೂರು ಟೌನ್ ಅಧ್ಯಕ್ಷ ಎಸ್.ಎನ್.ನಾಗರಾಜು ನೇತೃತ್ವದಲ್ಲಿ ಬಿಜೆಪಿ, ಜೆಡಿಎಸ್‌ನ ಹಲವು ಮುಖಂಡರು ಕಾಂಗ್ರೆಸ್ ಸೇರ್ಪಡೆಗೊಂಡರು.

ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ನಾಯಕತ್ವ ಮೆಚ್ಚಿ, ಕಾಂಗ್ರೆಸ್ ತತ್ವ ಸಿದ್ಧಾಂತ ಒಪ್ಪಿ ಶಾಸಕ ಅನಿಲ್ ಚಿಕ್ಕಮಾದು ಅವರ ಕೈ ಬೆಂಬಲಿಸುವ ನಿಟ್ಟಿನಲ್ಲಿ ಹಲವರು ಜೆಡಿಎಸ್, ಬಿಜೆಪಿ ಪಕ್ಷಗಳನ್ನು ತೊರೆದು ಕಾಂಗ್ರೆಸ್ ಸೇರ್ಪಡೆಗೊಂಡರು.

ಪಕ್ಷಕ್ಕೆ ಆಗಮಿಸಿದ ಮುಖಂಡರನ್ನು ಬರಮಾಡಿಕೊಂಡು ಮಾತನಾಡಿದ ಕಾಂಗ್ರೆಸ್‌ನ ಟೌನ್ ಅಧ್ಯಕ್ಷ ಎಸ್.ಎನ್. ನಾಗರಾಜು, ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅಧಿಕಾರದಲ್ಲಿದ್ದಾಗ ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿತ್ತು. ಇದೀಗ ಬಿಜೆಪಿ ಸರ್ಕಾರ ದಿನಬಳಕೆಯ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದೆ. ಅಲ್ಲದೇ ಅಭಿವೃದ್ಧಿ ಮಾಡದೇ ಭ್ರಷ್ಟಾಚಾರದಲ್ಲಿ ನಿರತವಾಗಿದೆ ಎಂದು ಆರೋಪಿಸಿದರು.

ಇದೀಗ ಜೆಡಿಎಸ್, ಬಿಜೆಪಿ ತೊರೆದ ಮುಖಂಡರು ಕಾಂಗ್ರೆಸ್ ಸೇರ್ಪಡೆಗೊಳ್ಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಮಂದಿ ಪಕ್ಷಕ್ಕೆ ಸೇರ್ಪಡೆಗೊಳ್ಳಲಿದ್ದಾರೆ. ಈ ಬಾರಿ ಕೋಟೆಯಲ್ಲಿ ಮತ್ತೆ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದರು.

ಈ ವೇಳೆ ಎಪಿಎಂಸಿ ಮಾಜಿ ಅಧ್ಯಕ್ಷ ಡಿ.ಪಿ.ನಟರಾಜು, ಪಪಂ ಮಾಜಿ ಸದಸ್ಯ ಎಸ್.ಎನ್.ನಾಗಯ್ಯ, ಬಿಲ್ಲಯ್ಯ, ಕಾಳಿಪ್ರಸಾದ್, ಮುರುಳಿ, ಶಿವರಾಜು, ವೆಂಕಟಪ್ಪ, ಗೋಪಿದಾಸಿ, ಮಹೇಶ್, ಮೂರ್ತಿ, ಮಂಜುನಾಥ್ ಸೇರಿದಂತೆ ಇತರರಿದ್ದರು.

ನಂ.ಗೂಡಲ್ಲಿ ಶಾಂತಿಯುತ ಮತದಾನಕ್ಕೆ ಕೈ ಜೋಡಿಸಿ

ಚುನಾವಣಾಧಿಕಾರಿ ಕೃಷ್ಣಮೂರ್ತಿ



ನಂಜನಗೂಡು, ಮಾ.30– ತಾಲೂಕಿನಲ್ಲಿ ಶಾಂತಿಯುತ ಚುನಾವಣೆಗೆ ಎಲ್ಲರೂ ಕೈ ಜೋಡಿಸಬೇಕು ಎಂದು ಚುನಾವಣಾಧಿಕಾರಿ ಕೃಷ್ಣಮೂರ್ತಿ ತಿಳಿಸಿದರು.

ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ಚುನಾವಣೆ ಮತ್ತು ನೀತಿ ಸಂಹಿತೆ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಖಾಸಗಿ ಕಲ್ಯಾಣ ಮಂಟಪದ ಮಾಲೀಕರು ರಾಜಕೀಯ ಪಕ್ಷಗಳ ಸಭೆ ಸಮಾರಂಭದ ಬಗ್ಗೆ ಮಾಹಿತಿ ನೀಡಬೇಕು. ಚುನಾವಣಾ ಆಯೋಗ ಪ್ರತಿಯೊಬ್ಬರ ಬ್ಯಾಂಕ್ ವಹಿವಾಟಿನ ಮೇಲೆ ಹದ್ದಿನ ಕಣ್ಣಿಟ್ಟಿದೆ ಎಂದ ಅವರು ವಾಟ್ಸಪ್, ಫೇಸ್‌ಬುಕ್ ಮೂಲಕ ಪ್ರಚಾರ ನಡೆಸುವುದು, ಫೋನ್ ಪೇ, ಗೂಗಲ್ ಪೇ ಮೂಲಕ ಹಣ ಕಳುಹಿಸಿದರೇ, ಮದ್ಯ, ಪೆಟ್ರೋಲ್ ಉಚಿತವಾಗಿ ನೀಡುವುದು ನೀತಿ ಸಂಹಿತೆ ಉಲ್ಲಂಘನೆಗೆ ಕಾರಣವಾಗುತ್ತದೆ. ಚುನಾವಣಾ ಆಯೋಗ ಪ್ರತಿ ಬಾರ್‌ಗಳ ದಾಸ್ತಾನು ಪರಿಶೀಲಿಸುತ್ತದೆ. ಒಂದು ವೇಳೆ ಚುನಾವಣೆ ವೇಳೆ ಅಧಿಕವಾಗಿ ಮದ್ಯ ಹಾಗೂ ಪೆಟ್ರೋಲ್ ಮಾರಾಟವಾಗಿರುವುದು ಕಂಡು ಬಂದರೆ ಅಂತಹ ಬಾರ್ ಮತ್ತು ಪೆಟ್ರೋಲ್ ಬಂಕ್‌ಗಳ ಪರವಾನಗಿಯನ್ನು ನಿಷೇಧಿಸಲಾಗುವುದು. ಸಾರ್ವಜನಿಕರು ಕಲ್ಯಾಣ ಮಂಟಪದಲ್ಲಿ ಶುಭ ಸಮಾರಂಭ ನಡೆಸಲು ಚುನಾವಣಾ ಆಯೋಗದಿಂದ ಅನುಮತಿ ಪಡೆಯಬೇಕು. ಸುವಿಧ ಆ್ಯಪ್ ಮೂಲಕವೂ ಕಾರ್ಯಕ್ರಮಕ್ಕೆ ಅನುಮತಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ತಾಲೂಕಿನಲ್ಲಿ ನ್ಯಾಯಯುತ, ಶಾಂತಿಯುತ ಚುನಾವಣೆ ನಡೆಸಲು ಕೈ ಜೋಡಿಸುವ ಮೂಲಕ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ವರುಣಾ ಕ್ಷೇತ್ರದ ಚುನಾವಣಾಧಿಕಾರಿ ಗೌರವ್, ಉಪ ಚುನಾವಣಾಧಿಕಾರಿ ಆದ ತಹಸೀಲ್ದಾರ್ ಶಿವಕುಮಾರ್, ಉಪ ತಹಸೀಲ್ದಾರ್ ಭೈರಯ್ಯ, ಕಂದಾಯ ಅಧಿಕಾರಿಗಳಾದ ಪ್ರಕಾಶ್ ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರಿದ್ದರು.

ಚುನಾವಣೆಯಲ್ಲಿ ಬಿಎಸ್ಪಿ ಸ್ಪರ್ಧೆ: ಜೆಡಿಎಸ್, ಕಾಂಗ್ರೆಸ್‌ಗೆ ನಡುಕ



ತಿ.ನರಸೀಪುರ, ಮಾ.30– ಈ ಬಾರಿಯ ಚುನಾವಣೆಯಲ್ಲಿ ತಿ.ನರಸೀಪುರ ಕ್ಷೇತ್ರದಲ್ಲಿ ಬಹುಜನ ಸಮಾಜವಾದಿ ಪಕ್ಷ ಸ್ಪರ್ಧಿಸುತ್ತಿರುವುದರಿಂದ ಕಾಂಗ್ರೆಸ್, ಜೆಡಿಎಸ್ ಅಭ್ಯರ್ಥಿಗಳಲ್ಲಿ ನಡುಕ ಉಂಟಾಗಿದ್ದು, ಈ ಬಾರಿ ಪಕ್ಷದ ಅಭ್ಯರ್ಥಿಯಾಗಿ ನಾನೇ ಕ್ಷೇತ್ರದಿಂದ ಕಣಕ್ಕಿಳಿಯುತ್ತೇನೆ ಎಂದು ಬಿಎಸ್ಪಿ ಜಿಲ್ಲಾಧ್ಯಕ್ಷ ಬಿ.ಆರ್.ಪುಟ್ಟಸ್ವಾಮಿ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ರಾಜ್ಯ ಸಮಿತಿ ಮೊದಲ ಹಂತದಲ್ಲಿ 53 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಪ್ರಕಟಿಸಿದ್ದು, ನರಸೀಪುರ ಕ್ಷೇತ್ರದ ಅಭ್ಯರ್ಥಿಯನ್ನಾಗಿ ನನಗೆ ಟಿಕೆಟ್ ಘೋಷಣೆ ಮಾಡಿದ್ದಾರೆ ಎಂದರು.

ಕಳೆದ ಚುನಾವಣೆಯಲ್ಲಿ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿದ್ದರಿಂದ ಪಕ್ಷದ 15 ಸಾವಿರಕ್ಕೂ ಅಧಿಕ ಮತಗಳು ಅಶ್ವಿನ್ ಕುಮಾರ್ ಗೆಲುವಿಗೆ ಸಹಕಾರಿಯಾಯಿತು. ಆದ್ದರಿಂದ ಆಡಳಿತರೂಢ ಪಕ್ಷವಿದ್ದರೂ ಸಚಿವರಾಗಿದ್ದ ಡಾ.ಹೆಚ್.ಸಿ.ಮಹದೇವಪ್ಪ ಪರಾಭವಗೊಂಡಿದ್ದರು. ಹೀಗಾಗಿ ಬಿಎಸ್ಪಿ ಸ್ಪರ್ಧೆಯಿಂದ ಎರಡೂ ಪಕ್ಷಗಳ ಭೀತಿಗೆ ಕಾರಣವಾಗಿದೆ. ಬಿಜೆಪಿ ಅಭ್ಯರ್ಥಿ ಇನ್ನೂ ಘೋಷಣೆ ಆಗಿಲ್ಲ. ಅವರಿಂದ ಯಾವುದೇ ಪರಿಣಾಮ ಇಲ್ಲ. 1994ರ ಚುನಾವಣೆಯಿಂದಲೂ ನರಸೀಪುರ ಕ್ಷೇತ್ರದ ಜನರು ಹಣ ಮತ್ತು ಆಮಿಷಗಳಿಗೆ ಒಳಗಾಗದೆ ಹಲವರನ್ನು ಶಾಸಕರಾಗಿ ಆಯ್ಕೆ ಮಾಡಿರುವುದರಿಂದ ಈ ಬಾರಿ ಬಿಎಸ್ಪಿ ಬೆಂಬಲಿಸುವರೆಂಬ ವಿಶ್ವಾಸವಿದೆ ಎಂದರು.

ಸಾಮಾಜಿಕ ಚಳವಳಿ ಮೂಲಕ ರಾಜಕೀಯ ಪಕ್ಷವಾಗಿ ಹೊರಹೊಮ್ಮಿರುವ ಬಹುಜನ ಸಮಾಜ ಪಕ್ಷ ಸಂಘಟನೆಯನ್ನು ಯಾವುದೇ ಅಧಿಕಾರವಿಲ್ಲದಿದ್ದರೂ ನರಸೀಪುರದಲ್ಲಿ ಬಲವಾಗಿ ಕಟ್ಟಿದ್ದೇವೆ. ಸಂವಿಧಾನ ರಕ್ಷಣೆ ಜಾಗೃತಿ ಅಂಗವಾಗಿ ಈಗಾಗಲೇ ಕ್ಷೇತ್ರದಾದ್ಯಂತ ಸಂಚರಿಸಿ ಜನರಿಗೆ ಅರಿವು ಮೂಡಿಸಿದ್ದೇವೆ. ಜಾತಿವಾರು 10ಕ್ಕೂ ಹೆಚ್ಚು ಸಮುದಾಯಗಳ ಮುಖಂಡರ ತಂಡವನ್ನು ಕಟ್ಟಿಕೊಂಡು ಚುನಾವಣೆಯನ್ನು ಸಮರ್ಥವಾಗಿ ಎದುರಿಸಿ ಗೆಲ್ಲುತ್ತೇವೆ ಎಂದು ಭವಿಷ್ಯ ನುಡಿದರು.

ಸುದ್ದಿಗೋಷ್ಠಿಯಲ್ಲಿ ಬಿಎಸ್ಪಿ ಜಿಲ್ಲಾ ಖಜಾಂಚಿ ಬಿ.ಮಹದೇವಸ್ವಾಮಿ, ಕಾರ್ಯದರ್ಶಿ ಅಂಕನಹಳ್ಳಿ ಪುಟ್ಟರಾಜು, ಕ್ಷೇತ್ರಾಧ್ಯಕ್ಷ ಗೋವಿಂದ ಕೃಷ್ಣಾಪುರ, ಸಂಯೋಜಕ ಆದಿಬೆಟ್ಟಳ್ಳಿ ಕುಮಾರ್, ಪ್ರಧಾನ ಕಾರ್ಯದರ್ಶಿ ಪುಟ್ಟಮರುಡಯ್ಯ, ಖಜಾಂಚಿ ಹೊಸಪುರ ನಿಂಗರಾಜು, ಟೌನ್ ಅಧ್ಯಕ್ಷ ಭಾಸ್ಕರ್, ಪ್ರಧಾನ ಕಾರ್ಯದರ್ಶಿ ರಿಯಾಜ್ ಇನ್ನಿತರರಿದ್ದರು.

ಸರಗೂರು ವಿವಿಧೆಡೆ ಶ್ರೀರಾಮನವಮಿ



ಸರಗೂರು, ಮಾ.30– ಪಟ್ಟಣದ ವಿವಿಧೆಡೆ ಗುರುವಾರ ಶ್ರೀರಾಮನವಮಿ ವಿಜೃಂಭಣೆಯಿಂದ ನಡೆಯಿತು. ತೊಗಟವೀರ ಸಮಾಜದ ರಾಮಮಂದಿರ, ನಾಯಕ ಸಮಾಜದ ರಾಮಮಂದಿರ, ಬ್ರಾಹ್ಮಣ ಸಮಾಜದ ರಾಮಮಂದಿರ, ಆರ್ಯ ಈಡಿಗ ಸಮಾಜದ ಕೋದಂಡ ರಾಮಸ್ವಾಮಿ ದೇವಸ್ಥಾನ, ಬಾಬು ಜಗಜೀವನ ರಾಂ ಬೀದಿ ರಾಮ ಮಂದಿರ, ಅಂಬೇಡ್ಕರ್ ಬೀದಿ ರಾಮ ಮಂದಿರದಲ್ಲಿ ರಾಮನವಮಿ ಆಚರಿಸಲಾಯಿತು. ದೇವಸ್ಥಾನಗಳಲ್ಲಿ ಅಭಿಷೇಕ, ಕುಂಕುಮಾರ್ಚನೆ ನಂತರ ಮಹಾಮಂಗಳಾರತಿ ಬಳಿಕ ಎಲ್ಲೆಡೆ ಕೋಸಂಬರಿ, ಪಾನಕ, ಮಜ್ಜಿಗೆ ವಿತರಿಸಲಾಯಿತು.

ಕೋಟೆ ಸುತ್ತಮುತ್ತ ಗುಡುಗು ಸಹಿತ ಭಾರೀ ಮಳೆ

ಸಿಡಿಲು ಬಡಿದು 2 ತೆಂಗಿನಮರ ಭಸ್ಮ: ಅಪಾರ ನಷ್ಟ

ಹೆಚ್.ಡಿ.ಕೋಟೆ, ಮಾ.30– ಪಟ್ಟಣ ಸೇರಿದಂತೆ ತಾಲೂಕಿನ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗಿದ್ದು, ಸಿಡಿಲು ಬಡಿದು 2 ತೆಂಗಿನಮರಗಳು ಸಂಪೂರ್ಣ ಭಸ್ಮವಾಗಿರುವ ಘಟನೆ ತಾಲೂಕಿನ ಚಿಕ್ಕಕೆರೆಯೂರು, ನೇರಳೆ ಗ್ರಾಮದ ಸಮೀಪ ಬುಧವಾರ ರಾತ್ರಿ ನಡೆದಿದೆ.



ರಾತ್ರಿ 7 ಗಂಟೆಗೆ ಆರಂಭವಾದ ಗುಡುಗು ಸಿಡಿಲು ಸಮೇತ ಭಾರೀ ಮಳೆಗೆ ಚಿಕ್ಕಕೆರೆಯೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ತೆಂಗಿನಮರ ಹಾಗೂ ನೇರಳೆ ಗ್ರಾಮದ ನಿವಾಸಿ ವೆಂಕಟನಾಯಕ ಅವರಿಗೆ ಸೇರಿದ ಜಮೀನಿನಲ್ಲಿದ್ದ ತೆಂಗಿನಮರಕ್ಕೆ ಸಿಡಿಲು ಬಡಿದು ಸಂಪೂರ್ಣ ಭಸ್ಮವಾಗಿದೆ. ಗ್ರಾಮಸ್ಥರು ಈ ಘಟನೆಯಿಂದ ಆತಂಕಕ್ಕೆ ಒಳಗಾಗಿದ್ದರು. ಆದರೆ ಯಾವುದೇ ಅಪಾಯ ಸಂಭವಿಸಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಅಪಾರ ನಷ್ಟ: ಭಾರೀ ಮಳೆಯಿಂದ ತಾಲೂಕಿನಲ್ಲಿ ಭಾರೀ ಗಾತ್ರದ ಮರಗಳು ಧರೆಗುರುಳಿದ್ದು, ಸಾವಿರಾರು ಎಕರೆ ಜಮೀನಿನಲ್ಲಿ ಬೆಳೆಯಲಾಗಿದ್ದ ಬಾಳೆ ಸೇರಿದಂತೆ ಇನ್ನಿತರ ಫಸಲು ನಾಶವಾಗಿದೆ. ಅಲ್ಲದೇ ಹಲವು ಮನೆಗಳ ಶೀಟ್‌ಗಳು ಗಾಳಿಯ ರಭಸಕ್ಕೆ ಹಾರಿಹೋಗಿದೆ. ಚಿಕ್ಕಕೆರೆಯೂರು ಗ್ರಾಮದ ವೀರಾಂಜನೇಯ ದೇವಾಲಯದ ಮೇಲ್ಛಾವಣಿ, ದೇವಸ್ಥಾನದ ಅರ್ಚಕ ಗಿರಿವರ್ಧನ್ ಅವರ ಮನೆ ಮೇಲ್ಛಾವಣಿ ಬಿರುಗಾಳಿ ಮಳೆಗೆ ಕಿತ್ತು ಹೋಗಿ ಮನೆಯಲ್ಲಿದ್ದ ದಿನಬಳಕೆಯ ವಸ್ತುಗಳು ನಾಶವಾಗಿದೆ ಎಂದು ತಿಳಿದು ಬಂದಿದೆ.

ತರಕಾರಿ, ದನದ ಸಂತೆ ಸ್ಥಳಾಂತರಕ್ಕೆ ಆಗ್ರಹ



ನಂಜನಗೂಡು, ಮಾ.30– ನಗರದ ಎಪಿಎಂಸಿ ಮುಂಭಾಗ ಪ್ರತಿಭಟನೆ ನಡೆಸಿದ ರೈತ ಸಂಘದ ಕಾರ್ಯಕರ್ತರು, ಚಾಮರಾಜನಗರ ಬೈಪಾಸ್ ರಸ್ತೆಯ ತರಕಾರಿ ಸಗಟು ಮಾರುಕಟ್ಟೆ ಹಾಗೂ ದನದ ಸಂತೆಯನ್ನು ಎಪಿಎಂಸಿ ಆವರಣದ ನೂತನ ಮಾರುಕಟ್ಟೆಗೆ ಸ್ಥಳಾಂತರಿಸುವಂತೆ ಆಗ್ರಹಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ವಿದ್ಯಾಸಾಗರ್ ಮಾತನಾಡಿ, ನಗರದ ಎಪಿಎಂಸಿ ಆವರಣದಲ್ಲಿ ಕಳೆದ 2 ವರ್ಷಗಳ ಹಿಂದೆ ರೈತ ಸಂಘದ ಕೋರಿಕೆಯಂತೆ ಶಾಸಕ ಹರ್ಷವರ್ಧನ್ ಸುಸಜ್ಜಿತ ಮಾರುಕಟ್ಟೆ ನಿರ್ಮಿಸಿದ್ದಾರೆ. ಹಳ್ಳಿಗಳಿಂದ ತರಕಾರಿ ತರುವ ರೈತರಿಗೆ ತಂಗುವ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ ಮುಂತಾದ ಮೂಲ ಸೌಲಭ್ಯ ಒದಗಿಸಲಾಗಿದೆ. ಹೀಗಿದ್ದರೂ ಕೆಲವು ದಲ್ಲಾಳಿಗಳ ಕುಮ್ಮಕ್ಕಿನಿಂದ ಯಾವುದೇ ಸೌಲಭ್ಯವಿಲ್ಲದ ಚಾಮರಾಜನಗರ ಬೈಪಾಸ್ ರಸ್ತೆ ಮಾರುಕಟ್ಟೆಯನ್ನು ಹೊಸ ಮಾರುಕಟ್ಟೆಗೆ ಸ್ಥಳಾಂತರಿಸಲು ಎಪಿಎಂಸಿ ಕಾರ್ಯದರ್ಶಿ ಮಹೇಶ್ ಮೀನಾಮೇಷ ಎಣಿಸುತ್ತಿದ್ದಾರೆ. ರೈತರು ಮೂಲ ಸೌಲಭ್ಯವಿಲ್ಲದ ಹಳೇ ಮಾರುಕಟ್ಟೆಯಲ್ಲಿ ದಿನದೂಡುತ್ತಿದ್ದಾರೆ. ತರಕಾರಿ ಸಗಟು ಮಾರುಕಟ್ಟೆ ಹಾಗೂ ದನದ ಸಂತೆಯನ್ನು ತಕ್ಷಣ ಹೊಸ ಮಾರುಕಟ್ಟೆಗೆ ಸ್ಥಳಾಂತರಿಸಬೇಕು, ಇಲ್ಲದಿದ್ದರೆ ಎಪಿಎಂಸಿಗೆ ಬೀಗ ಜಡಿದು ಪ್ರತಿಭಟನೆ ತೀವ್ರಗೊಳಿಸಲಾಗುವುದು ಎಂದು ಹೇಳಿದರು.

ತಹಸೀಲ್ದಾರ್ ಶಿವಕುಮಾರ್ ಕಾಕನೂರ ಮಾತನಾಡಿ, ರೈತರ ಬೇಡಿಕೆಯಂತೆ ಇನ್ನೆರಡು ದಿನದಲ್ಲಿ ನೋಂದಾಯಿಸಿಕೊಂಡಿರುವ 135 ಮಂದಿ ವ್ಯಾಪಾರಿಗಳನ್ನು ಲಾಟರಿ ಎತ್ತುವ ಮೂಲಕ ಆಯ್ಕೆ ಮಾಡಿ, ಮಳಿಗೆಗಳನ್ನು ಗುರ್ತಿಸಿಕೊಡಲಾಗುವುದು. ಇನ್ನು ಒಂದು ವಾರದಲ್ಲಿ ಎಪಿಎಂಸಿ ಆವರಣದ ಹೊಸ ಮಾರುಕಟ್ಟೆಯಲ್ಲಿ ವಹಿವಾಟು ನಡೆಸಲು ಕ್ರಮ ವಹಿಸಲಾಗುವುದು ಎಂದರು.

ಪ್ರತಿಭಟನೆಯಲ್ಲಿ ತಾಲೂಕು ರೈತ ಸಂಘದ ಅಧ್ಯಕ್ಷ ಸತೀಶ್‌ರಾವ್, ರಘು, ಪೈ.ವೇಣುಗೋಪಾಲ್, ಮಂಜುನಾಥ್, ಶ್ರೀಧರ್, ಬಸವರಾಜು, ರಾಮೇಗೌಡ, ಶಿವಣ್ಣ ನಾಗರಾಜು, ದೊಡ್ಡಯ್ಯ ಉಪಸ್ಥಿತರಿದ್ದರು.

ಚುನಾವಣೆ ಯಶಸ್ವಿಗೆ ಸಕಲ ಸಿದ್ಧತೆ: ಚುನಾವಣಾಧಿಕಾರಿ ರುಚಿ ಬಿಂದಾಲ್



ಹುಣಸೂರು, ಮಾ.30– ಈ ಬಾರಿಯ ಸಾರ್ವತ್ರಿಕ ವಿಧಾನಸಭಾ ಚುನಾವಣೆ ಯಶಸ್ವಿಗೆ ಚುನಾವಣಾ ಆಯೋಗದ ನಿರ್ದೇಶನದಂತೆ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಚುನಾವಣಾಧಿಕಾರಿಯೂ ಆದ ಉಪವಿಭಾಗಾಧಿಕಾರಿ ರುಚಿ ಬಿಂದಾಲ್ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ 273 ಮತಕೇಂದ್ರಗಳಿದ್ದು, 55 ಸೂಕ್ಷ್ಮ, 3 ಅತೀಸೂಕ್ಷ್ಮ ಮತಕೇಂದ್ರಗಳಿವೆ ಐದು ಫ್ಲೈಯಿಂಗ್ ಸ್ಕ್ವಾಡ್, ಐದು ಚೆಕ್ಕಿಂಗ್ ಸ್ಕ್ವಾಡ್ 3 ಪಾಳಿಯಲ್ಲಿ ಕಾರ್ಯ ನಿರ್ವಹಿಸಲಿದೆ. 3 ವಿಡಿಯೋ ಚಿತ್ರೀಕರಣ ತಂಡ ತಾಲೂಕಿನಾದ್ಯಂತ ಪಕ್ಷಗಳು ನಡೆಸುವ ಕಾರ್ಯಕ್ರಮಗಳ ಚಿತ್ರೀಕರಣಗೊಳಿಸಲಿದೆ.

5 ಕಡೆ ಚೆಕ್‌ಪೋಸ್ಟ್: ತಾಲೂಕು ಪ್ರವೇಶಿಸುವ ಮನುಗನಹಳ್ಳಿ, ವೀರನಹೊಸಹಳ್ಳಿ, ಚಿಲ್ಕುಂದ, ಗಾವಡಗೆರೆ, ಮುತ್ತುರಾಯನಹೊಸಹಳ್ಳಿಗಳಲ್ಲಿ ಒಟ್ಟು 5 ಚೆಕ್‌ಪೋಸ್ಟ್ ನಿರ್ಮಿಸಲಾಗಿದ್ದು, ತಪಾಸಣೆ ನಡೆಯಲಿದೆ.

ಏಕಗವಾಕ್ಷಿ ಅನುಮತಿ: ತಾಲೂಕಿನಲ್ಲಿ ಯಾವುದೇ ಹಬ್ಬ, ಸಭೆ, ಸಮಾರಂಭ, ಮದುವೆ ಸೇರಿದಂತೆ ಸಾರ್ವಜನಿಕರು ಸೇರುವ ಯಾವುದೇ ಸಮಾರಂಭ ಹಾಗೂ ಪಕ್ಷಗಳು ನಡೆಸುವ ಸಭೆ, ಸಮಾವೇಶಕ್ಕೆ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಇದಕ್ಕಾಗಿ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಕಂದಾಯ, ಪೊಲೀಸ್, ಫೈರ್, ತಾಪಂ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳ ತಂಡ ಇದ್ದು, ಒಂದೇ ಕಡೆ ಅರ್ಜಿ ಸಲ್ಲಿಸಿ ಅನುಮತಿ ಪಡೆಯುವ ವ್ಯವಸ್ಥೆ ಕಲ್ಪಿಸಲಾಗಿದೆ.

ಕಂಟ್ರೋಲ್ ರೂಂ ಆರಂಭ

ಚುನಾವಣಾ ಕಾರ್ಯಕ್ಕಾಗಿ ತಾಲೂಕು ಕಚೇರಿಯಲ್ಲಿ ಕಂಟ್ರೋಲ್ ರೂಂ ಆರಂಭಿಸಲಾಗಿದ್ದು, 24X7 ಅಧಿಕಾರಿಗಳು ಸರದಿಯಲ್ಲಿ ಕಾರ್ಯ ನಿರ್ವಹಿಸುವರು. ಚುನಾವಣೆಗೆ ಸಂಬಂಧಿಸಿದ ಯಾವುದೇ ದೂರುಗಳಿದ್ದಲ್ಲಿ ದೂ.ಸಂ.08222–251550ಗೆ ಕರೆ ಮಾಡಿ ದೂರು ನೀಡಬಹುದು. ಸಾರ್ವಜನಿಕರು ಅಕ್ರಮ ಕಂಡು ಬಂದಲ್ಲಿ ದೂರು ಸಲ್ಲಿಸುವಂತೆ ಚುನಾವಣಾಧಿಕಾರಿ ಮನವಿ ಮಾಡಿದರು.

ಯಾವುದೇ ಫ್ಲೆಕ್ಸ್ ಅಳವಡಿಕೆಗೆ ಅನುಮತಿ ಕಡ್ಡಾಯ. ನಿಗದಿತ ಸ್ಥಳ ಹೊರತುಪಡಿಸಿ ಬೇರೆಡೆ ಅಳವಡಿಸುವಂತಿಲ್ಲ.

ಸಾಮಾಜಿಕ ಜಾಲತಾಣಗಳ ಬಗ್ಗೆ ಎಚ್ಚರವಿರಲಿ: ಸೋಷಿಯಲ್ ಮೀಡಿಯಾಗಳಲ್ಲಿ ರಾಜಕಾರಣ, ರಾಜಕೀಯ ಪಕ್ಷಗಳಿಗೆ ಸಂಬಂಧಿಸಿದ ಯಾವುದೇ ಪೋಸ್ಟ್, ಆರೋಪ–ಪ್ರತ್ಯಾರೋಪ ಮಾಡುವಂತಿಲ್ಲ. ಇದನ್ನು ಗಮನಿಸಲು ಪ್ರತ್ಯೇಕ ತಂಡವಿದ್ದು, ಕಂಡು ಬಂದಲ್ಲಿ ಪ್ರಕರಣ ದಾಖಲಿಸಲಾಗುವುದೆಂದು ಎಚ್ಚರಿಸಿದರು.

5,500 ಪ್ರಥಮ ಮತದಾರರು: ಈ ಬಾರಿ ಹುಣಸೂರು ತಾಲೂಕಿನಲ್ಲಿ ಜಿಲ್ಲೆಯಲ್ಲೇ ಅತೀ ಹೆಚ್ಚು 5,500 ಮಂದಿ ಪ್ರಥಮ ಮತ ಚಲಾಯಿಸುವ ಯುವ ಜನರಿರುವುದು ವಿಶೇಷ ಎಂದರು.

ಗೋಷ್ಠಿಯಲ್ಲಿ ಸಹಾಯಕ ಚುನಾವಣಾಧಿಕಾರಿ ಡಾ.ಅಶೋಕ್, ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ತಾಪಂ ಇಓ ಮನು ಬಿ.ಕೆ, ಪ್ರೊಬೇಷನರಿ ತಹಸೀಲ್ದಾರ್ ನೂರಲ್‌ಹುದಾ, ಉಪತಹಸೀಲ್ದಾರ್ ಶಕೀಲಾ ಬಾನು ಇದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕಬ್ಜ (ಕ): ಮ.1.45ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 2	ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.10.25ಕ್ಕೆ, ಮ.1.30ಕ್ಕೆ, ದಾಸ್ ಕಾ ಧಮ್ಕಿ (ತೆ): ಸಂ.4.30ಕ್ಕೆ, ರಾ.7.25ಕ್ಕೆ, ಶಾಜಮ್ ದಿ ಫ್ಯೂರಿ ಆಫ್ ದಿ ಗಾಡ್ಸ್ (ಇಂ): ರಾ.10.20ಕ್ಕೆ.
ಸ್ಕ್ರೀನ್ 3	ಶಾಜಮ್ ದಿ ಫ್ಯೂರಿ ಆಫ್ ದಿ ಗಾಡ್ಸ್ (ಇಂ): ಬೆ.11.10ಕ್ಕೆ, ಮ.1.50ಕ್ಕೆ, ಮಿಸ್ ಚಟರ್ಜಿ Vs ನಾರ್ವೆ (ಹಿಂ): ಸಂ.4.30ಕ್ಕೆ, ರಾ.7.10ಕ್ಕೆ, ರಾ.9.50ಕ್ಕೆ
ಸ್ಕ್ರೀನ್ 4	ಕಬ್ಜ (ಕ): ಬೆ.10.35ಕ್ಕೆ, ಮ.1.20ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ರಾ.9.45ಕ್ಕೆ.

ಐನಾಕ್ಸ್ ಮೂವೀಸ್

LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಕಬ್ಜ (ಕ): ಬೆ.9.10ಕ್ಕೆ, ಮ.12ಕ್ಕೆ, ಮ.2.50ಕ್ಕೆ, ಸಂ.5.40ಕ್ಕೆ, ರಾ.8.30ಕ್ಕೆ.
ಸ್ಕ್ರೀನ್ 2	ಕಬ್ಜ (ಕ): ಬೆ.10.10ಕ್ಕೆ, ಮ.1ಕ್ಕೆ, ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಕಬ್ಜ (ಕ): ಬೆ.7.50ಕ್ಕೆ, ಬೆ.10.40ಕ್ಕೆ, ಮ.1.30ಕ್ಕೆ, ಸಂ.4.20ಕ್ಕೆ, ರಾ.7.10ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ರಾ.10ಕ್ಕೆ.
ಸ್ಕ್ರೀನ್ 4	ಶಾಜಮ್ ದಿ ಫ್ಯೂರಿ ಆಫ್ ದಿ ಗಾಡ್ಸ್ (ಇಂ): ಬೆ.10.10ಕ್ಕೆ, ಮ.12.55ಕ್ಕೆ, ಸಂ.6.25ಕ್ಕೆ, ರಾ.9.10ಕ್ಕೆ, ಫಲನ ಅಬ್ಬೈ ಫಲನ ಅಮ್ಮೈ (ತೆ): ಸಂ.5.05ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ವಿಡುದಲೈ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಹೊಯ್ಸಳ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ತು ತೋತಿ ಮೆ ಮಕ್ಕರ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಹೊಯ್ಸಳ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಬ್ಜ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ದಸರಾ (ತೆ)	4 ಪ್ರದರ್ಶನಗಳು
ಸಂಗಂ	
ಭೋಲಾ (ಹಿ)	4 ಪ್ರದರ್ಶನಗಳು
ಲಿಡೋ	
ಕ್ರಾಂತಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಭೋಲಾ (ಹಿ)	4 ಪ್ರದರ್ಶನಗಳು
ಪ್ರಭಾ	
ಪತು ತಲಾ (ತ)	4 ಪ್ರದರ್ಶನಗಳು

ಚುಂಚನಕಟ್ಟೆಯಲ್ಲಿ ಶ್ರದ್ಧಾಭಕ್ತಿಯ ರಾಮನವಮಿ

ಚುಂಚನಕಟ್ಟೆ, ಮಾ.30– ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆ ಶ್ರೀಕೋದಂಡ ರಾಮ ದೇವಾಲಯದಲ್ಲಿ ಗುರುವಾರ ಶ್ರೀರಾಮನವಮಿ ಶ್ರದ್ಧಾಭಕ್ತಿಯಿಂದ ನಡೆಯಿತು.



ಈ ವೇಳೆ ದೇವರಿಗೆ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿತ್ತು. ರಾಮನವಮಿ ಅಂಗವಾಗಿ ಮುಂಜಾನೆಯೇ ಸೀತಾ ಸಮೇತ ಶ್ರೀರಾಮ ಮತ್ತು ಲಕ್ಷ್ಮಣ ಮೂರ್ತಿಗಳಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತಲ್ಲದೆ ವಿಶೇಷ ಪೂಜೆ ನೆರವೇರಿಸಿ, ಮಹಾ ಮಂಗಳಾರತಿ ಮಾಡಲಾಯಿತು. ಬಳಿಕ ಸೀತಾ ಸಮೇತ ಶ್ರೀರಾಮದೇವರ ಉತ್ಸವ ಮೂರ್ತಿಯನ್ನು ದೇವಾಲಯದಿಂದ ಗ್ರಾಮದ ಬಸವನ ವೃತ್ತದವರೆಗೆ ಮಂಗಳವಾದ್ಯಗಳೊಂದಿಗೆ ಮೆರವಣಿಗೆ ಮಾಡಲಾಯಿತು.

ಕೆ.ಆರ್.ನಗರ. ಮತ್ತು ಸಾಲಿಗ್ರಾಮ ಸೇರಿದಂತೆ ಸುತ್ತಮುತ್ತಲ ಸಾವಿರಾರು ಭಕ್ತರು ದೇವಾಲಯಕ್ಕೆ ಭೇಟಿ ನೀಡಿ ಸರತಿ ಸಾಲಿನಲ್ಲಿ ನಿಂತು ಶ್ರೀರಾಮದೇವರ ದರ್ಶನ ಪಡೆದರು. ದೇವಾಲಯಕ್ಕೆ ಆಗಮಿಸಿದ ಭಕ್ತರಿಗೆ ಮುಜರಾಯಿ ಇಲಾಖೆಯಿಂದ ಪ್ರಸಾದ, ಪಾನಕ ಮತ್ತು ಮಜ್ಜಿಗೆ ವಿತರಿಸಲಾಯಿತು. ಜೊತೆಗೆ ಹಲವು ಭಕ್ತರು ಪಾನಕ, ಮಜ್ಜಿಗೆ ವಿತರಿಸಿ ಹರಕೆ ತೀರಿಸಿದರು. ದೇವಾಲಯದ ಇಓ ರಘು, ಪಾರುಪತ್ತೇಗಾರ ಪವನ್, ಅರ್ಚಕರಾದ ವಾಸುದೇವನ್, ನಾರಾಯಣ ಅಯ್ಯಂಗಾರ್, ಪೊಲೀಸ್ ಸಿಬ್ಬಂದಿ ಪ್ರವೀಣ್, ಗ್ರಾಪಂ ಅಧಿಕಾರಿ, ಸುನೀಲ್, ದೇವಾಲಯದ ಸಿಬ್ಬಂದಿಗಳಾದ ಅನಂತು, ಮಣಿ, ಚಂದ್ರನಾಯಕ, ತಿಮ್ಮಣ್ಣ, ಹರೀಶ, ಗ್ರಾಪಂ ಮಾಜಿ ಸದಸ್ಯ ಸಿ.ಜಿ. ಮಧುಸೂದನ, ತಿಲಕ್‌ಕುಮಾರ್, ಲಕ್ಷ್ಮಣ, ಮುಖಂಡರಾದ ಸಿ.ಕೆ.ಕೃಷ್ಣ, ಸಿ.ವಿ.ಮಂಜು ಮತ್ತಿತರರಿದ್ದರು.

ಬುದ್ಧಿಮಾಂದ್ಯ ಯುವತಿ ಮೇಲೆ ಅತ್ಯಾಚಾರಕ್ಕೆ ಯತ್ನ

ವ್ಯಕ್ತಿಗೆ ಗ್ರಾಮಸ್ಥರಿಂದ ಧರ್ಮದೇಟು

ಹುಣಸೂರು, ಮಾ.30– ಬುದ್ಧಿಮಾಂದ್ಯ ಯುವತಿ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ ವ್ಯಕ್ತಿಯೋರ್ವನಿಗೆ ಗ್ರಾಮಸ್ಥರೇ ಸೇರಿಕೊಂಡು ಧರ್ಮದೇಟು ನೀಡಿ ಪೊಲೀಸರಿಗೊಪ್ಪಿಸಿದ್ದಾರೆ.

ಉಯಿಗೊಂಡನಹಳ್ಳಿ ಮಹದೇವ(57) ಬಂಧಿತ ಆರೋಪಿ. ಈತ ಬುದ್ಧಿಮಾಂದ್ಯ ಯುವತಿಯನ್ನು ಪುಸಲಾಯಿಸಿ, ಬಲವಂತವಾಗಿ ಅತ್ಯಾಚಾರ ನಡೆಸಲೆತ್ನಿಸಿದ ವೇಳೆ ಬಾಲಕಿ ಕೂಗಿಕೊಂಡಿದ್ದಾಳೆ. ಕೂಗಾಟ ಕೇಳಿದ ಗ್ರಾಮಸ್ಥರು ಡೌಡಾಯಿಸಿದ್ದಾರೆ.

ಬಾಲಕಿ ಜೊತೆಗಿದ್ದ ಆರೋಪಿಯನ್ನು ಗ್ರಾಮಸ್ಥರು ಹಿಡಿದು ಧರ್ಮದೇಟು ನೀಡಿ, ಹುಣಸೂರು ಗ್ರಾಮಾಂತರ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಗ್ರಾಮಸ್ಥರು ನೀಡಿದ ಧರ್ಮದೇಟಿನಿಂದ ಅಸ್ವಸ್ಥನಾಗಿದ್ದ ಮಹದೇವನನ್ನು ಹುಣಸೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ. ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದಾರೆ. ಆರೋಪಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಹೆಚ್.ಕೆ. ಪ್ರಾಣೇಶ್ ಶೆಟ್ಟಿ ನಿಧನ



ಹುಣಸೂರು, ಮಾ.30– ತಾಲೂಕಿನ ಹನಗೋಡು ಗ್ರಾಮದ ಮಂಡಲ ಪಂಚಾಯತಿ ಮಾಜಿ ಪ್ರಧಾನ ಹಾಗೂ ಡಿ.ದೇವರಾಜ ಅರಸರ ಒಡನಾಡಿ ಹೆಚ್.ಕೆ.ಪ್ರಾಣೇಶ್ ಶೆಟ್ಟಿ (80) ಬುಧವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ ಗ್ರಾಮದ ರುದ್ರಭೂಮಿಯಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹಿಂದುಳಿದ ವರ್ಗಗಳಿಗೆ ಮೀಸಲಾತಿ ಪುನರ್ ವರ್ಗೀಕರಿಸಿ ರಾಜ್ಯ ಸರ್ಕಾರದ ಆದೇಶ

ಹಿಂದುಳಿದ ಒಬಿಸಿ ಪ್ರವರ್ಗ–1ಕ್ಕೆ ಶೇ.4, ಪ್ರವರ್ಗ–2ಎಗೆ ಶೇ.15, ಪ್ರವರ್ಗ–2ಬಿ ಶೇ.0, ಅತೀ ಹಿಂದುಳಿದ ಪ್ರವರ್ಗ 2ಸಿಗೆ ಶೇ.6, ಪ್ರವರ್ಗ–2ಡಿಗೆ ಶೇ.7 ಸೇರಿ ಒಟ್ಟು ಶೇ.32 ಮೀಸಲಾತಿ

ಬೆಂಗಳೂರು, ಮಾ.30(ಕೆಎಂಶಿ)–ರಾಜ್ಯದಲ್ಲಿ ಒಕ್ಕಲಿಗ ಮತ್ತು ವೀರಶೈವ ಪಂಚಮಸಾಲಿ ಮೀಸಲಾತಿ ಪ್ರಮಾಣವನ್ನು ತಲಾ ಶೇ.2ರಷ್ಟು ಹೆಚ್ಚಿಸಲು ಸಚಿವ ಸಂಪುಟ ನಿರ್ಧಾರ ಕೈಗೊಂಡ ಬೆನ್ನಲ್ಲೇ ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ಪುನರ್ ವರ್ಗೀಕರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.



ಅತ್ಯಂತ ಹಿಂದುಳಿದ ಒಬಿಸಿ ಪ್ರವರ್ಗ–1ಕ್ಕೆ ಶೇ.4, ಪ್ರವರ್ಗ–2ಎ ಶೇ.15, ಪ್ರವರ್ಗ 2ಬಿ ಶೇ.0, ಅತೀ ಹಿಂದುಳಿದ ಪ್ರವರ್ಗ 2ಸಿಗೆ ಶೇ.6 ಹಾಗೂ ಪ್ರವರ್ಗ 2ಡಿಗೆ ಶೇ.7 ಮೀಸಲಾತಿ ಸೇರಿ ಒಟ್ಟು ಶೇ.32ರಷ್ಟು ಮೀಸಲಾತಿ ನೀಡಿ ಆದೇಶ ಹೊರಡಿಸಲಾಗಿದೆ. ರಾಜ್ಯದ ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸುವ ದೃಷ್ಟಿಯಿಂದ ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ಪುನರ್ ವರ್ಗೀಕರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಇಲಾಖೆ ತಿಳಿಸಿದೆ.

ಈ ಹಿಂದೆ ಒಕ್ಕಲಿಗರು ಮತ್ತು ಪಂಚಮಸಾಲಿಗಳಿಗೆ 2ಸಿ ಮತ್ತು 2ಡಿ ಎಂಬ ಎರಡು ಹೊಸ ಪ್ರವರ್ಗಗಳನ್ನು ಸೃಷ್ಟಿಸಲಾಗಿತ್ತು. ಇವರಿಗೆ ಕೇಂದ್ರ ಸರ್ಕಾರ ಮೇಲ್ವರ್ಗದ ಬಡವರಿಗೆ ನಿಗದಿಪಡಿಸಿದ ಇಡಬ್ಲ್ಯುಎಸ್ ಶೇ.10 ಮೀಸಲಾತಿಯಲ್ಲಿ ಅವಕಾಶ ನೀಡಲು ನಿರ್ಧರಿಸಲಾಗಿತ್ತು. ಆದರೆ, ಮಾ.24ರಂದು ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಒಕ್ಕಲಿಗರಿಗೆ ಮತ್ತು ವೀರಶೈವ ಪಂಚಮಸಾಲಿಗಳಿಗೆ ಮೀಸಲಾತಿಯನ್ನು ತಲಾ ಶೇ.2ರಷ್ಟು ಹೆಚ್ಚಿಸಲು ತೀರ್ಮಾನಿಸಲಾಗಿತ್ತು. ಇದರೊಂದಿಗೆ ಇತರ ಹಿಂದುಳಿದ ವರ್ಗದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರಿಗೆ ಮೀಸ ಲಾತಿ ನೀಡುತ್ತಿದ್ದ 2ಬಿ ಪ್ರವರ್ಗ ರದ್ದು ಮಾಡಲಾಗಿದೆ.

ಹೊಸ ಮಾದರಿಯಲ್ಲಿ ಒಬಿಸಿಯಲ್ಲಿ 4 ಪ್ರವರ್ಗಗಳನ್ನು ಮಾಡಲಾಗಿದೆ. ಧಾರ್ಮಿಕ ಅಲ್ಪಸಂಖ್ಯಾತರಿಗೆ ಇದ್ದ ಮೀಸಲಾತಿಯನ್ನು ರದ್ದು ಮಾಡಿ ಅವರಿಗಿದ್ದ ಶೇ.4ರಷ್ಟು ಮೀಸಲಾತಿಯನ್ನು ಒಕ್ಕಲಿಗ ಮತ್ತು ಲಿಂಗಾಯತರಿಗೆ ಹಂಚಲಾಗಿದೆ. ಧಾರ್ಮಿಕ ಅಲ್ಪಸಂಖ್ಯಾತರು ಇನ್ನು ಮುಂದೆ ಮೇಲ್ವರ್ಗದ ಬಡವರಿಗೆ ಮೀಸಲಿಟ್ಟ ಆರ್ಥಿಕವಾಗಿ ಹಿಂದುಳಿದ ವರ್ಗಗಳ (ಇಡಬ್ಲ್ಯುಎಸ್) ಶೇ.10 ಮೀಸಲಾತಿಯಲ್ಲಿ ಅವಕಾಶಗಳನ್ನು ಪಡೆಯಬೇಕಾಗಿದೆ. ಮೂರು ದಶಕಗಳ ಪಂಚಮಸಾಲಿ ಸಮುದಾಯದ ಹೋರಾಟಕ್ಕೆ ಮತ್ತೊಂದು ಸ್ಪಷ್ಟತೆ ದೊರೆತಿದೆ. 2ಡಿ ಪ್ರವರ್ಗಕ್ಕೆ ಶೇ.7ರಷ್ಟು ಮೀಸಲಾತಿಯನ್ನು ನೀಡುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಿದ್ದು ಒಂದು ಹಂತವಾದರೆ, ಮೀಸಲಾತಿಯನ್ನು ಪುನರ್ ವರ್ಗೀಕರಿಸಿ ಮೀಸಲಾತಿ ಪ್ರಮಾಣದ ಬಗ್ಗೆ ಅಧಿಕೃತ ಆದೇಶವನ್ನು ಸರ್ಕಾರ ಹೊರಡಿಸಿದೆ ಎಂದು ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠಾಧ್ಯಕ್ಷರಾದ ಶ್ರೀ ವಚನಾನಂದ ಸ್ವಾಮೀಜಿ ತಿಳಿಸಿದ್ದಾರೆ.

ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಜಗದ್ಗುರು ಪೀಠದ ನೇತೃತ್ವದ ಹೋರಾಟಕ್ಕೆ ಮತ್ತೊಂದು ಯಶಸ್ಸು ದೊರೆತಿರುವುದು ಸಂತಸದ ವಿಷಯ. ಹರಿಹರ ಪೀಠ ಇದನ್ನು ತುಂಬು ಹೃದಯದಿಂದ ಸ್ವಾಗತಿಸುತ್ತದೆ. ಹಾಗೆಯೇ, ಕೇಂದ್ರ ಓಬಿಸಿ ಪಟ್ಟಿಯಲ್ಲಿ ಸ್ಥಾನ ದೊರಕಿಸಿ ಕೊಡುವ ನಿಟ್ಟಿನಲ್ಲಿ ಪ್ರಯತ್ನ ಮುಂದುವರೆಯಲಿದೆ ಎಂದು ಹೇಳಿದ್ದಾರೆ.

ಕಥುವಾದಲ್ಲಿ ಪ್ರಬಲ ಸ್ಫೋಟ

ಕಥುವಾ (ಜಮ್ಮು–ಕಾಶ್ಮೀರ): ಜಮ್ಮು ಮತ್ತು ಕಾಶ್ಮೀರದ ಹೀರಾನಗರದಲ್ಲಿ ಬುಧವಾರ ರಾತ್ರಿ ಪ್ರಬಲ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಸ್ಥಳೀಯ ಜನತೆ ಬೆಚ್ಚಿ ಬಿದ್ದಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಹಿರಾನಗರದ (ಕತುವಾ) ಸನ್ಯಾಲ್‌ನಲ್ಲಿರುವ ಭಾರತ–ಪಾಕ್ ಗಡಿಗಿಂತ 4 ಕಿ.ಮೀ. ಮೊದಲು ಗಡಿ ಪೊಲೀಸ್ ಪೋಸ್ಟ್ ಬಳಿಯ ಅರಣ್ಯ ಪ್ರದೇಶದಲ್ಲಿ ಸ್ಫೋಟ ಸಂಭವಿಸಿದೆ. ಎಸ್‌ಎಸ್‌ಪಿ ಶಿವದೀಪ್ ಸಿಂಗ್ ಜಮ್ವಾಲ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದು, ತಪಾಸಣೆ ನಡೆಸುತ್ತಿದ್ದಾರೆ. ಸ್ಫೋಟ ಯಾವ ರೀತಿ ಸಂಭವಿಸಿದೆ ಎಂಬುದಕ್ಕೆ ಸ್ಪಷ್ಟ ಮಾಹಿತಿಗಳು ಲಭ್ಯವಾಗಿಲ್ಲ. ತನಿಖೆ ಮುಂದುವರೆದಿದೆ. ಸ್ಫೋಟ ಸಂಭವಿಸಿದ ಸ್ಥಳದಲ್ಲಿ ದೊಡ್ಡ ಗುಂಡಿ ನಿರ್ಮಾಣವಾಗಿದೆ. ಸಮೀಪದಲ್ಲೇ ಸೇತುವೆಯೂ ಇದ್ದು, ಸುತ್ತಮುತ್ತಲಿನ ಹೊಲಗಳಲ್ಲಿ ಬೆಳೆ ಬೆಳೆಯಲಾಗಿದೆ. ಮೂಲಗಳ ಪ್ರಕಾರ, ಇದು ಐಇಡಿಯಂತೆ ಸ್ಫೋಟವೆಂದು ಹೇಳಲಾಗುತ್ತಿದ್ದು, ಅಧಿಕಾರಿಗಳು ಸ್ಪಷ್ಟನೆ ನೀಡಿಲ್ಲ. ಸ್ಫೋಟ ಸಂಭವಿಸಿದ ಸ್ಥಳಕ್ಕೆ ಭಾರತೀಯ ಸೇನಾಪಡೆ ಭೇಟಿ ನೀಡಿದ್ದು, ಲೈವ್ ಗ್ರೆನೇಡ್‌ವೊಂದನ್ನು ವಶಪಡಿಸಿಕೊಂಡಿದೆ.

ಮೈಸೂರಲ್ಲಿ ರಾವಣ ಪ್ರತಿಕೃತಿ ದಹಿಸಿ ರಾಮನ ಆದರ್ಶ ಸ್ಮರಣೆ



ಮೈಸೂರು, ಮಾ.30(ಎಸ್‌ಬಿಡಿ)– ಶ್ರೀ ರಾಮನವಮಿ ಅಂಗವಾಗಿ ಮೈಸೂರಿನಲ್ಲಿ ರಾವಣ ಪ್ರತಿಕೃತಿ ದಹಿಸಲಾಯಿತು. ವಿಶ್ವ ಹಿಂದೂ ಪರಿಷತ್ ರಾಷ್ಟ್ರೀಯ ಹಿಂದೂ ಸಮಿತಿ ಹಾಗೂ ಹಿಂದೂ ರಾಷ್ಟ್ರ ಸೇವಾ ಸಮಿತಿ ಸಹಯೋಗದಲ್ಲಿ ವಿದ್ಯಾರಣ್ಯಪುರಂನ ಭೂತಾಳೆ ಮೈದಾನದಲ್ಲಿ ಶ್ರೀರಾಮನವಮಿ ಆಚರಿಸಿ ಬಳಿಕ ರಾವಣನ ಬೃಹತ್ ಪ್ರತಿಕೃತಿಯನ್ನು ದಹನ ಮಾಡಲಾಯಿತು.

ಈ ವೇಳೆ ರಾಷ್ಟ್ರೀಯ ಹಿಂದೂ ಸಮಿತಿ ಅಧ್ಯಕ್ಷ ವಿಕಾಸ್ ಶಾಸ್ತ್ರಿ ಮಾತನಾಡಿ, ಶ್ರೀರಾಮ ಒಂದು ಧರ್ಮಕ್ಕೆ ಸೀಮಿತವಲ್ಲ. ಅವರು ಇಡೀ ಮನುಕುಲದ ವಿಶ್ವ ನಾಯಕ. ಆದರ್ಶ ಎಂಬ ಪದಕ್ಕೆ ಅನ್ವರ್ಥ. ಅವರು ವಿಜಯಕ್ಕೋಸ್ಕರವೇ ಹುಟ್ಟಿದ್ದವರು. ರಾಮನವಮಿ ಹಿಂದೂಗಳ ಪಾಲಿನ ಪವಿತ್ರ ಹಬ್ಬ. ರಾವಣ ಒಬ್ಬ ಪ್ರಖರ ಹಿಂದುತ್ವವಾದಿ, ಮಹಾನ್ ಶಿವ ಭಕ್ತ. ಆದರೂ ಇಡೀ ಹಿಂದೂ ಸಮಾಜ ಆತನನ್ನು ವಿರೋಧಿಸುತ್ತದೆ. ಕಾರಣ ಯಾರೇ ಆದರೂ ತಪ್ಪನ್ನು ನಿಷ್ಠೂರವಾಗಿ ಖಂಡಿಸುವುದು ಹಿಂದೂ ಸಮಾಜದ ಗುಣ ಎಂದು ಹೇಳಿದರು.

ವಿಶ್ವ ಹಿಂದೂ ಪರಿಷತ್‌ನ ಪ್ರಜೇಶ್ ಮಾತನಾಡಿ, ಮೈಸೂರಿನಲ್ಲಿ ರಾವಣ ದಹನ ನಡೆಯುತ್ತಿರುವುದು ನಿಜಕ್ಕೂ ಸಂತೋಷದ ವಿಚಾರ. ಇದು ನಮ್ಮಲ್ಲಿರುವ ಅಹಂನ ದಹನಕ್ಕೆ ಪ್ರೋತ್ಸಾಹಿಸುತ್ತದೆ. ಪ್ರತಿಯೊಬ್ಬ ಮನುಷ್ಯನ ಮನಸ್ಸಿನಲ್ಲೂ ಒಂದಲ್ಲ ಒಂದು ರೀತಿಯಲ್ಲಿ ಅಹಂ ಭಾವ ಇದ್ದೇ ಇರುತ್ತದೆ. ಅದು ಸಂಹಾರವಾದರೆ ಜೀವನ ಸುಭಿಕ್ಷವಾಗಿರುತ್ತದೆ ಎಂದು ಅಭಿಪ್ರಾಯಿಸಿದರು. ಈ ವೇಳೆ ಗುರುದೇವ ಆಶ್ರಮದ ಜಟಪ್ಪ, ಸೆಂದಿಲ್ ತೇಜಸ್, ಗಗನ್, ಶ್ರೀಧರ್, ವರುಣ್, ವಿನಯ್ ಮತ್ತಿತರರು ಉಪಸ್ಥಿತರಿದ್ದರು.

ದೈವ ನರ್ತನದ ವೇಳೆ ಕುಸಿದು ಬಿದ್ದು ದೈವ ನರ್ತಕ ಸಾವು!

ಕಡಬ, ಮಾ.30– ದೈವಾರಾಧನೆ ನಡೆಯುತ್ತಿದ್ದ ಸ್ಥಳದಲ್ಲಿ ದಾರುಣ ಘಟನೆಯೊಂದು ನಡೆದಿದ್ದು, ದೈವ ನರ್ತನ ನಡೆಯುತ್ತಿರುವಾಗಲೇ ದೈವ ನರ್ತಕ ಕುಸಿದು ಬಿದ್ದು ಮೃತಪಟ್ಟಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲೂಕಿನ ಎಡಮಂಗಲದ ಮೂಲಂಗೀರಿ ನಿವಾಸಿ ಕಾಂತು ಅಜಿಲ (ಬಾಬು) ಎಂಬವರೇ ಮೃತಪಟ್ಟ ವ್ಯಕ್ತಿ. ಹಲವಾರು ವರ್ಷಗಳಿಂದ ಎಡಮಂಗಲ ಗ್ರಾಮದ ಕೂಡುಕಟ್ಟಿಗೆ ಸಂಬಂಧಿಸಿದಂತೆ ದೈವಾರಾಧಕರಾಗಿ ಗ್ರಾಮ ದೈವಗಳ ಪರಿಚಾರಕರಾಗಿ ಸೇವೆ ಸಲ್ಲಿಸುತ್ತಿದ್ದರು.

ಮಾ.30ರಂದು ದೋಳ್ಪಾಡಿ ಗ್ರಾಮದ ಇಡ್ಯಡ್ಕದಲ್ಲಿ ಗ್ರಾಮಕ್ಕೆ ಸಂಬಂಧಿಸಿದ ನೇಮೋತ್ಸವ ನಡೆಯುತ್ತಿತ್ತು. ದೈವ ನರ್ತನ ನಡೆಯುತ್ತಿದ್ದಾಗಲೇ ಕಾಂತು ಅಜಿಲ ಅವರು ಕುಸಿದು ಬಿದ್ದಿದ್ದಾರೆ. ಕೆಲವೇ ಹೊತ್ತಿನಲ್ಲಿ ಕೊನೆಯುಸಿರೆಳೆದಿದ್ದಾರೆ. ದೈವ ನರ್ತನದ ಸನ್ನಿವೇಶ ಮತ್ತು ನರ್ತಕ ಕುಸಿದು ಬೀಳುವ ದೃಶ್ಯ ಅಲ್ಲಿದ್ದವರು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ.

ಎರಡು ದೈವಗಳ ನರ್ತನ ಸೇವೆ ಏಕಕಾಲದಲ್ಲಿ ನಡೆಯುತ್ತಿತ್ತು. ಭಕ್ತರು ಸುತ್ತಲೂ ಕುಳಿತು ನೋಡುತ್ತಿದ್ದರು. ಆಗ ಇದ್ದಕ್ಕಿದ್ದಂತೆ ಕಾಂತು ಅಜಿಲ ನರ್ತನ ಸೇವೆಯಲ್ಲಿ ತಲ್ಲೀನರಾಗಿದ್ದಾಗಲೇ ಕುಸಿದು ಬಿದ್ದರು. ತಕ್ಷಣ ನೆರೆದ ಭಕ್ತರು ಧಾವಿಸಿ ಎಬ್ಬಿಸಿದರು. ಆದರೆ, ಕೆಲವೇ ಹೊತ್ತಿನಲ್ಲಿ ಕಾಂತು ಅಜಿಲ ಮೃತಪಟ್ಟಿದ್ದಾರೆ. ತಕ್ಷಣ ಸ್ಥಳೀಯ ಆಸ್ಪತ್ರೆಗೆ ಕೊಂಡೊಯ್ದರೂ ಫಲ ನೀಡಲಿಲ್ಲ ಎಂಬ ಮಾಹಿತಿ ಲಭ್ಯವಾಗಿದೆ. ಹೃದಯಾಘಾತಕ್ಕೆ ಒಳಗಾಗಿರಬಹುದೆಂದು ಅಂದಾಜಿಸಲಾಗಿದೆ.

ಬೇಸಿಗೆಯಲ್ಲಿ ತೆಂಗಿನ ಚಿಪ್ಪಲ್ಲಿ ಪ್ರಾಣಿ–ಪಕ್ಷಿಗೆ ನೀರುಣಿಸುವ ಸತ್ಕಾರ್ಯ


ಮೈಸೂರು, ಮಾ.30(ಎಸ್‌ಬಿಡಿ)– ನೈಸರ್ಗಿಕ ತೆಂಗಿನಕಾಯಿ ಚಿಪ್ಪನ್ನು ಮರಗಳಿಗೆ ನೇತು ಹಾಕುವ ಮೂಲಕ ಪ್ರಾಣಿ–ಪಕ್ಷಿಗಳಿಗೆ ನೀರೊದಗಿಸುವ ಸತ್ಕಾರ್ಯವನ್ನು ಸಹೃದಯಿಗಳು ಆರಂಭಿಸಿದ್ದಾರೆ.



ರೋಟರ್‍ಯಾಕ್ಟ್ ಮೈಸೂರು ಮತ್ತು ಅಂಬಾರಿ ಸಂಸ್ಥೆಯ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು, ವಾರ್ಡ್ ನಂ.51ರ ವ್ಯಾಪ್ತಿಯ ಉದ್ಯಾನವನದ ಮರಗಳಿಗೆ ತೆಂಗಿನಕಾಯಿ ಚಿಪ್ಪು ಕಟ್ಟುವ ಮೂಲಕ ಕಾರ್ಪೊರೇಟರ್ ಬಿ.ವಿ.ಮಂಜುನಾಥ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ರೋಟರ್‍ಯಾಕ್ಟ್ ಅಧ್ಯಕ್ಷ ರಜತ್, ಕಾರ್ಯದರ್ಶಿ ಮಂಜುನಾಥ, ಖಜಾಂಚಿ ಸುಭಾಷ್, ರೋಟೇರಿಯನ್ ವರುಣ್ ಬಜಾಜ್, ಕಿರಣ್ ಕುಮಾರ್, ಸುಮುಖ್, ಜೆಸ್ವಂತ್‌ರ್ ಮತ್ತಿತರರು ಹಾಜರಿದ್ದರು. ಪ್ಲಾಸ್ಟಿಕ್ ಬಟ್ಟಲು ಅಥವಾ ಇನ್ನಿತರ ವಸ್ತುಗಳನ್ನು ಮರಗಳಿಗೆ ಕಟ್ಟಿ ನೀರು–ಆಹಾರ ಹಾಕುವುದು ಸಹಜ. ಆದರೆ ತೆಂಗಿನಕಾಯಿ ಬಳಸಿದ ಬಳಿಕ ಬಿಸಾಡುವ ಚಿಪ್ಪನ್ನು ಈ ರೀತಿ ಬಳಸಿಕೊಳ್ಳುವುದು ವಿಶೇಷ. ನೈಸರ್ಗಿಕ ತ್ಯಾಜ್ಯವಾದ ಕಾರಣ ಅಳಿಲು ಇನ್ನಿತರ ಪ್ರಾಣಿ ಹಾಗೂ ಪಕ್ಷಿಗಳು ನಿರ್ಭಯವಾಗಿ ನೀರು–ಆಹಾರ ಸೇವಿಸಬಹುದು ಎಂಬ ಉದ್ದೇಶವೂ ಇದರಲ್ಲಿದೆ.

ಅದೇನೇ ಇರಲಿ ಮನುಷ್ಯರಾದ ನಾವು ತಾವಿರುವಲ್ಲಿಗೇ ನೀರು ತಲುಪುವಂತೆ ವ್ಯವಸ್ಥೆ ಮಾಡಿಕೊಂಡಿದ್ದೇವೆ. ಆದರೆ ಬಿರು ಬೇಸಿಗೆಯಲ್ಲಿ ಒಂದು ಹನಿಗೂ ಪರದಾಡುವ ಸಣ್ಣಪುಟ್ಟ ಪ್ರಾಣಿಗಳಿಗೆ ನೀರೊದಗಿಸುವುದು ಪುಣ್ಯದ ಕೆಲಸ. ಆದರೆ ಮನೆಗಳ ಪಕ್ಕದಲ್ಲಿರುವ ಗಿಡಮರಗಳಿಗೆ ಕಟ್ಟುವ ಚಿಪ್ಪಿನಲ್ಲಿ ಹೆಚ್ಚು ಕಾಲ ನೀರು ನಿಲ್ಲದಂತೆ ಎಚ್ಚರ ವಹಿಸುವುದು ಒಳ್ಳೆಯದು. ಇಲ್ಲವಾದರೆ ಸೊಳ್ಳೆ ಸಂತತಿ ಹೆಚ್ಚಿ ರೋಗ ಹರಡಬಹುದು.







ಚುನಾವಣಾ ನೀತಿ ಸಂಹಿತೆ ಜಾರಿ ಹಿನ್ನೆಲೆ ಮೈಸೂರಿನ ಆಗ್ರೋ ಕೇಂದ್ರಗಳ ಮುಂದೆ ಅಳವಡಿಸಲಾಗಿದ್ದ ಪ್ರಧಾನಿ ಮೋದಿ ಭಾವಚಿತ್ರ ಸಹಿತ 'ಪ್ರಧಾನಮಂತ್ರಿ ಕಿಸಾನ್ ಸಮೃದ್ಧಿ ಕೇಂದ್ರ' ಫಲಕವನ್ನು ಮರೆಮಾಚಿ ಟೇಪ್‌ನಿಂದ ಭದ್ರಗೊಳಿಸಲಾಯಿತು.

ನಂದಿನಿ ಉತ್ಪನ್ನದ ಮೇಲೆ ಹಿಂದಿ; ನಂದಿನಿ ಕನ್ನಡಿಗರ ಸ್ವಾಭಿಮಾನವೇ ಹೊರತು ಅಮುಲ್ ಅಡಿಯಾಳಲ್ಲ

ಹೆಚ್.ಡಿ.ಕುಮಾರಸ್ವಾಮಿ ಕಿಡಿ

ಬೆಂಗಳೂರು, ಮಾ.30– ಹಿಂದಿ ಹೇರಿಕೆಗೆ ಕನ್ನಡಿಗರ ವಿರೋಧವಿದೆ ಎಂದು ಗೊತ್ತಿದ್ದರೂ ನಂದಿನಿ ಪ್ರೋಬಯೋಟಿಕ್ ಮೊಸರು ಪಾಕೆಟ್ ಮೇಲೆ ಹಿಂದಿಯ



'ದಹಿ' ಎಂದು ಮುದ್ರಿಸಿದ್ದಾರೆ. ಅದನ್ನು ಕಡ್ಡಾಯವಾಗಿ ಮುದ್ರಿಸುವಂತೆ ಭಾರತೀಯ ಆಹಾರ ಸುರಕ್ಷತೆ, ಗುಣಮಟ್ಟ ಪ್ರಾಧಿಕಾರವು ಕೆಎಂಎಫ್‌ಗೆ ಆದೇಶ ನೀಡಿರುವುದು ತಪ್ಪು. ಇದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, ನಂದಿನಿ ಕನ್ನಡಿಗರ ಆಸ್ತಿ, ಕನ್ನಡಿಗರ ಅಸ್ಮಿತೆ ಹಾಗೂ ಕನ್ನಡಿಗರ ಜೀವನಾಡಿ. ಇದು ಗೊತ್ತಿದ್ದರೂ ಹಿಂದಿ ಹೇರಿಕೆಯ ಅಹಂ ತೋರಲಾಗಿದೆ. ಈ ಹಿಂದೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಂಡ್ಯದ ಸಭೆಯೊಂದರಲ್ಲಿ, ಗುಜರಾತಿನ ಅಮುಲ್ ಜತೆ ನಂದಿನಿಯನ್ನು ವಿಲೀನ ಮಾಡುವುದಾಗಿ ಹೇಳಿದ್ದರು. ಇದೀಗ ಹಿಂದಿ ಪದ ಮುದ್ರಣ ನಂದಿನಿ ಹೈಜಾಕಿನ



ಆರಂಭವಾ? ಎಂದು ಕೇಳಿದ್ದಾರೆ.

ಶಾ ಅವರ ಹೇಳಿಕೆಯನ್ನು ಕನ್ನಡಿಗರು ಖಂಡಿಸಿದ್ದರು. ನಾನೂ ವಿರೋಧಿಸಿದ್ದೆ. ಆಮೇಲೆ ಸುಮ್ಮನಾಗಿದ್ದ ಬಿಜೆಪಿ ಸರ್ಕಾರ, ಈಗ ಆಹಾರ ಸುರಕ್ಷತಾ ಪ್ರಾಧಿಕಾರದ ಮೂಲಕ ಹಿಂಬಾಗಿಲಿನಿಂದ ಮೊಸರಿನ ಪಕ್ಕ ದಹಿ ಸೇರಿಸಿ ಕನ್ನಡಿಗರ ಸ್ವಾಭಿಮಾನಕ್ಕೆ ಸೆಡ್ಡು ಹೊಡೆದಿದೆ. ಇದು ಕನ್ನಡಿಗರ ಮೇಲೆ ಬಿಜೆಪಿಯ ದಮ್ಮು ತಾಕತ್ತಿನ ಪ್ರದರ್ಶನವೇ? ಎಂದು ಪ್ರಶ್ನಿಸಿದ್ದಾರೆ.

ಕನ್ನಡಕ್ಕೆ ಕೊಕ್ಕೆ ಹಾಕಿ ಹಿಂದಿಯನ್ನು ಮೆಲ್ಲಗೆ ಹೇರಿ ಇಡೀ ನಂದಿನಿ ಪದಾರ್ಥಗಳನ್ನು ಹಳ್ಳ ಹಿಡಿಸುವುದು ಇದರ ಹಿಂದಿರುವ ಘೋರ ಷಡ್ಯಂತ್ರ ಆಮೇಲೆ, ನಂದಿನಿ ಉತ್ಪನ್ನಗಳು ಮಾರಾಟವಾಗುತ್ತಿಲ್ಲ ಎಂದು ಕಥೆ ಕಟ್ಟಿ, ಅದನ್ನು ಉಳಿಸುವ ನಾಟಕವಾಡಿ ನಂದಿನಿಯನ್ನು ಸಲೀಸಾಗಿ ಅಮುಲ್ ಜತೆಗೆ ವಿಲೀನ ಮಾಡುವ ಹುನ್ನಾರವಷ್ಟೇ ಇದು ಎಂದು ದೂರಿದ್ದಾರೆ.

ಆರೂವರೆ ಕೋಟಿ ಕನ್ನಡಿಗರ ಮನೋಭಾವಕ್ಕೆ ವಿರುದ್ಧವಾಗಿ ದಹಿ ಎನ್ನುವ ಪದವನ್ನು ಮುದ್ರಿಸಿದ್ದೇ ಕೆಎಂಎಫ್ ಮಾಡಿರುವ ದೊಡ್ಡ ತಪ್ಪು. ಇದು ರಾಜ್ಯ ಬಿಜೆಪಿ ಸರ್ಕಾರದ ಗಮನಕ್ಕೆ ಬಾರದೆ ಆಗಿರುವ ಕೃತ್ಯವಲ್ಲ. ಕಾಣದ ಕೈಗಳ ಕಳ್ಳಾಟ ಇಲ್ಲಿ ಸ್ಪಷ್ಟ. ಇಲ್ಲಿ ಹಿಂಬಾಗಿಲಿನಿಂದ ಅಲ್ಲ, ನೇರವಾಗಿಯೇ ಹಿಂದಿ ಹೇರಿಕೆ ಆಗಿದೆ. ಅದನ್ನು ಡಬಲ್ ಎಂಜಿನ್ ಬಿಜೆಪಿ ಸರ್ಕಾರ ಹಾಗೂ ಅದರ ಕೀಲುಗೊಂಬೆ ಕೆಎಂಎಫ್ ಸದ್ದಿಲ್ಲದೆ ಒಪ್ಪಿಕೊಂಡಿವೆ. ಇದು ಕನ್ನಡ ವಿರೋಧಿ ಕೆಲಸ. ತಕ್ಷಣವೇ ದಹಿ ಪದ ಮುದ್ರಿಸುವುದನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ. ಯಶವಂತಪುರದಲ್ಲಿ ಪಂಚರತ್ನ ರಥಯಾತ್ರೆ ನಡೆಯುವ ವೇಳೆ ಅಭಿಮಾನಿಗಳು, ಜೆಡಿಎಸ್ ಕಾರ್ಯಕರ್ತರು 'ನಂದಿನಿ ಉಳಿಸಿ' ಎಂದು ಮೊಸರು, ಹಾಲಿನ ಹಾರ ಹಾಕಿ ನನ್ನ ಗಮನ ಸೆಳೆದಿದ್ದರು. ನಂದಿನಿಗೆ ಕುಣಿಕೆ ಬಿಗಿಯುವ ಯಾವುದೇ ದುಷ್ಕೃತ್ಯ ಸಹಿಸುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ.